## ಸನ್ಮಾನ್ಯ ಸಭಾಧ್ಯಕ್ಷರೆ,

1. ನಾನು 2024–25ನೇ ಸಾಲಿನ ಆಯವ್ಯಯವನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

2. ಭಾರತ ದೇಶ ಗಣರಾಜ್ಯವಾಗಿ 75ನೇ ವರ್ಷಕ್ಕೆ ಕಾಲಿಟ್ಟಿದೆ. ಈ ಸುಸಂದರ್ಭದಲ್ಲಿ ನನ್ನ 15ನೇ ಆಯವ್ಯಯವನ್ನು ಮಂಡಿಸಲು ಹರ್ಷಿಸುತ್ತೇನೆ.

3. ಡಾ॥ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರೂಪಿಸಿದ ಸಂವಿಧಾನದ ಆಶಯದಂತೆ ನ್ಯಾಯ, ಸಮಾನತೆ ಹಾಗೂ ಭ್ರಾತೃತ್ವದ ತಳಹದಿಯ ಮೇಲೆ **ಕರ್ನಾಟಕ ಮಾದರಿ ಅಭಿವೃದ್ಧಿಯ** ಹೊಸ ದೃಷ್ಟಾಂತವನ್ನು ರೂಪಿಸಲು ನಾವು ಹೆಜ್ಜೆಯಿಟ್ಟಿದ್ದೇವೆ.

4. ಸಾಮಾಜಿಕ ನ್ಯಾಯ ಎನ್ನುವುದು ನಮ್ಮ ನಂಬಿಕೆ ಮಾತ್ರವಲ್ಲ; ಅದು ಉದಾತ್ತ ಜೀವನ ದೃಷ್ಟಿಕೋನ. ಸಮ ಸಮಾಜ ನಿರ್ಮಾಣದಲ್ಲಿ ಬಸವಾದಿ ಶರಣರ ಕಾಯಕ ಮತ್ತು ದಾಸೋಹ ತತ್ವಗಳು ನಮಗೆ ಪ್ರೇರಣೆಯಾಗಿದೆ. ದುಡಿಮೆಯ ಒಂದು ಭಾಗವನ್ನು ದಾಸೋಹಕ್ಕೆ ಬಳಸಬೇಕೆಂಬ ಶರಣರ ಚಿಂತನೆ, ಸಮಾಜದಲ್ಲಿ ಸಂಪತ್ತಿನ ನ್ಯಾಯಯುತ ಹಂಚಿಕೆ ಮಾಡುವ ನಮ್ಮ ಆಶಯಕ್ಕೆ ಆಧಾರವಾಗಿದೆ.

**ಆಗದು ಎಂದು; ಕೈಲಾಗದು ಎಂದು**

**ಕೈಕಟ್ಟಿ ಕುಳಿತರೆ**

**ಸಾಗದು ಕೆಲಸವು ಮುಂದೆ**

**ಮನಸೊಂದಿದ್ದರೆ ಮಾರ್ಗವು ಉಂಟು**

**ಕೆಚ್ಚೆದೆ ಇರಬೇಕೆಂದು**

5. ವರನಟ ಡಾ॥ ರಾಜ್‌ಕುಮಾರ್ ಅಭಿನಯದ ಹಾಗೂ ಆರ್.ಎನ್.ಜಯಗೋಪಾಲ್ ರಚಿಸಿದ ಬಂಗಾರದ ಮನುಷ್ಯ ಚಿತ್ರದ ಈ ಹಾಡಿನಂತೆ ದೇಶದ ಯಾವುದೇ ಸರ್ಕಾರ ಜಾರಿಗೊಳಿಸದ ಅತ್ಯಂತ ಬೃಹತ್ ಪ್ರಮಾಣದ ನೇರ ನೆರವು ನೀಡುವ ಗ್ಯಾರಂಟಿ ಯೋಜನೆಗಳನ್ನು ಅತ್ಯಂತ ಕಡಿಮೆ ಅವಧಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದ ಶ್ರೇಯ ನಮ್ಮದಾಗಿದೆ. ನಮ್ಮ ಮಹತ್ವಾಕಾಂಕ್ಷೆಯ ಗ್ಯಾರಂಟಿಗಳು ಜನರ ಆಶೋತ್ತರಗಳನ್ನು ಆಧರಿಸಿವೆ.

6. ಕೇಂದ್ರದಲ್ಲಿ ಅಧಿಕಾರದಲ್ಲಿದ್ದ ನಮ್ಮ ಯುಪಿಎ ಸರ್ಕಾರವು ಜನರ ಆಹಾರ, ಆರೋಗ್ಯ, ಶಿಕ್ಷಣ, ಉದ್ಯೋಗ ಮತ್ತು ವಾಸದ ಭದ್ರತೆಗಾಗಿ ವಿವಿಧ ಜನಕೇಂದ್ರಿತ ಯೋಜನೆಗಳು ಹಾಗೂ ಕಾನೂನುಗಳನ್ನು ರೂಪಿಸಿ ಬಡಜನರಿಗೆ ನ್ಯಾಯ ಒದಗಿಸುವ ಕಾರ್ಯಗಳನ್ನು ಕೈಗೊಂಡಿತ್ತು. ಆದರೆ, ಹಿಂದಿನ 10 ವರ್ಷಗಳ ಅವಧಿಯಲ್ಲಿನ ಕೇಂದ್ರ ಸರ್ಕಾರದ ಜನವಿರೋಧಿ ನಿಲುವುಗಳಿಂದಾಗಿ ಅಸಮಾನತೆ ಹೆಚ್ಚಳ, ಕೆಲವೇ ಜನರ ಬಳಿ ಸಂಪತ್ತಿನ ಶೇಖರಣೆ ಹಾಗೂ ಪಟ್ಟಭದ್ರ

ಹಿತಾಸಕ್ತಿಗಳ ಹೆಚ್ಚುತ್ತಿರುವ ಪ್ರಭಾವ ಮುಂತಾದ ಅನಪೇಕ್ಷಿತ ಬೆಳವಣಿಗೆಗಳಿಗೆ ಎಡೆ ಮಾಡಿದೆ.

7. ಅದಕ್ಕಾಗಿಯೇ ತನ್ನ ಹೊಣೆಗಾರಿಕೆಯಿಂದ ನುಣುಚಿಕೊಂಡ ಕೇಂದ್ರ ಸರ್ಕಾರ ಮಾಡದ ಕೆಲಸವನ್ನು ರಾಜ್ಯ ಸರ್ಕಾರ ಕೈಗೆತ್ತಿಕೊಂಡಿದೆ. ನಾವು ರೂಪಿಸಿದ ಗ್ಯಾರಂಟಿ ಯೋಜನೆಗಳು ಕೇವಲ ಚುನಾವಣಾ ಗಿಮಿಕ್ ಅಲ್ಲ. ಭಾರತ್ ಜೋಡೋ ಯಾತ್ರೆಯ ಸಂದರ್ಭದಲ್ಲಿ ನಮ್ಮ ಪಕ್ಷದ ಕಾರ್ಯಕರ್ತರು ಸಂಗ್ರಹಿಸಿದ ಜನಾಭಿಪ್ರಾಯದ ಫಲವಾಗಿದೆ. ಇದು ಉದ್ಯೋಗ ಸೃಜಿಸಿ, ಜನರ ಕೊಳ್ಳುವ ಸಾಮರ್ಥ್ಯ ಹೆಚ್ಚಿಸುವ ಪ್ರಯತ್ನವಾಗಿದೆ. ನಿಷ್ಪಕ್ಷಪಾತ ಮತ್ತು ನ್ಯಾಯಯುತ ಸಮಾಜ ನಿರ್ಮಾಣಕ್ಕಾಗಿ ಸಂಪತ್ತಿನ ಮರುಹಂಚಿಕೆ ಮಾಡುವ ಕಾರ್ಯಕ್ರಮಗಳು ಇವಾಗಿವೆ.

**ಸರ್ವೋದಯ ದೃಷ್ಟಿ ಮತ್ತು ಸಮನ್ವಯ ದೃಷ್ಟಿ ಎಲ್ಲೆಲ್ಲೂ ತಾಂಡವವಾಡಬೇಕು. ಮತ ಮತಗಳಲ್ಲಿ, ಸಾಹಿತ್ಯ ಸಾಹಿತ್ಯಗಳಲ್ಲಿ ಸಮಾಜ ಸಮಾಜಗಳಲ್ಲಿ – ಅಷ್ಟೇ ಏಕೆ? ರಾಜಕೀಯ ಕ್ಷೇತ್ರದಲ್ಲಿ ಆರ್ಥಿಕ ಕ್ಷೇತ್ರದಲ್ಲಿ, ಸರ್ವತ್ರ ಅದು ವ್ಯಾಪಿಸಬೇಕು. ಅತ್ಯಂತ ಕೀಳಾದವನಿಗೂ ಮೇಲಾಗುವ ಅವಕಾಶವಾಗಬೇಕು. ಇವೆರಡನ್ನೂ ಒಳಗೊಂಡ ಆಧ್ಯಾತ್ಮಿಕ ದೃಷ್ಟಿಯೇ ಪೂರ್ಣದೃಷ್ಟಿ.**

**– ಕುವೆಂಪು**

8. 2024–25 ರಲ್ಲಿ 52,000 ಕೋಟಿ ರೂ. ಗಳನ್ನು ಐದು ಗ್ಯಾರಂಟಿಗಳಾದ ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮಿ, ಯುವನಿಧಿ ಹಾಗೂ

ಅನ್ನಭಾಗ್ಯ ಯೋಜನೆಗಳ ಮೂಲಕ ಕೋಟ್ಯಾಂತರ ಜನರ ಕೈಗೆ ಹಂಚಿಕೆ ಮಾಡಲಾಗುತ್ತಿದೆ. ಈ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದ ಪ್ರತಿ ಕುಟುಂಬಕ್ಕೆ ವಾರ್ಷಿಕ 50,000 ದಿಂದ 55,000 ರೂ. ಗಳನ್ನು ಒದಗಿಸಲಾಗುತ್ತಿದೆ.

9. ಗ್ಯಾರಂಟಿ ಯೋಜನೆಗಳ ಜಾರಿಗಾಗಿ ಇಡೀ ಜಗತ್ತು ನಮ್ಮತ್ತ ಮೆಚ್ಚುಗೆಯ ನೋಟ ಬೀರಿದೆ. ಸಮಯ ಕಳೆದಂತೆ ಇದರ ಆರ್ಥಿಕ ಮತ್ತು ಸಾಮಾಜಿಕ ಅನುಕೂಲಗಳು ಇನ್ನಷ್ಟು ಸ್ಪಷ್ಟವಾಗಿ ಗೋಚರಿಸಲಿವೆ. ಹಲವು ದೇಶಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳು ನಮ್ಮ ಕೆಲಸದ ಅಧ್ಯಯನ ನಡೆಸಿ, ಶ್ಲಾಘಿಸಿವೆ. ಆದರೆ ಗ್ಯಾರಂಟಿ ಯೋಜನೆಗಳ ಮೇಲಿನ ನನ್ನ ನಂಬಿಕೆ ದೃಢವಾಗಲು ಕೇವಲ ಈ ಅಧ್ಯಯನಗಳಷ್ಟೇ ಕಾರಣವಲ್ಲ; ಬಸ್ ಹತ್ತುವ ಮುನ್ನ ತಲೆಬಾಗಿ ನಮಸ್ಕರಿಸಿದ ಮಹಿಳೆಯ ಮುಖದಲ್ಲಿದ್ದ ಸಂತೋಷ, ದೇವಾಲಯಗಳಿಗೆ ಭೇಟಿ ನೀಡುತ್ತಿರುವ ಲಕ್ಷಾಂತರ ಮಹಿಳೆಯರ ಪ್ರಾರ್ಥನೆ, ಯುವನಿಧಿಯಡಿ ನೆರವು ಪಡೆದ ನಿರುದ್ಯೋಗಿ ಯುವಕನ ಆನಂದಬಾಷ್ಪ– ಇವು ಗ್ಯಾರಂಟಿ ಯೋಜನೆಗಳ ಮೇಲಿನ ನನ್ನ ನಂಬಿಕೆಯನ್ನು ಇನ್ನಷ್ಟು ಬಲಪಡಿಸಿದೆ. ಅಭಿವೃದ್ಧಿಯ ಫಲವನ್ನು ಅದರ ಹಕ್ಕುದಾರರಾದ ಜನಸಾಮಾನ್ಯರಿಗೆ ಹಿಂತಿರುಗಿಸುವುದರಲ್ಲಿ ಅನನ್ಯವಾದ ಸಂತೃಪ್ತಿಯಿದೆ.

10. ಆದರೆ ವಿರೋಧಿಗಳು ಗ್ಯಾರಂಟಿ ಯೋಜನೆಗಳನ್ನು ಬಿಟ್ಟಿ ಭಾಗ್ಯಗಳೆಂದು ಬಣ್ಣಿಸಿ ರಾಜ್ಯ ದಿವಾಳಿಯಾಗಿದೆ, ರಾಜ್ಯದ ಬೊಕ್ಕಸದಲ್ಲಿ

ಹಣವಿಲ್ಲ ಎಂದು ಸುಳ್ಳು ಸುದ್ದಿಗಳನ್ನು ಹರಡಿ ನಮ್ಮ ಸ್ಥೈರ್ಯ ಕುಗ್ಗಿಸುವ ಪ್ರಯತ್ನ ಮಾಡುತ್ತಿದ್ದಾರೆ. ರಾಜ್ಯದ ಸಂಕಷ್ಟಗಳಿಗೆ ಸ್ಪಂದಿಸಲಾಗದವರು ತಮ್ಮ ಹುಳುಕನ್ನು ಮುಚ್ಚಿಹಾಕಲು ಇಂತಹ ಟೀಕೆಗಳನ್ನು ಮಾಡುತ್ತಿದ್ದಾರೆ. ಇನ್ನೊಂದೆಡೆ ನಮ್ಮ ಗ್ಯಾರಂಟಿಗಳನ್ನು ಕದ್ದು ಅವರ ಗ್ಯಾರಂಟಿಗಳೆಂದು ನಂಬಿಸಲು ಹೆಣಗಾಡುತ್ತಿರುವುದು ವಿಪರ್ಯಾಸ. ಇಂತಹ ಟೀಕೆಗಳಿಗೆ ನಾನಲ್ಲ; ಶರಣರೇ ಉತ್ತರ ನೀಡಿದ್ದಾರೆ:

**ಮನ ಶುದ್ಧವಿಲ್ಲದವಂಗೆ ದ್ರವ್ಯದ ಬಡತನವಲ್ಲದೆ**
**ಚಿತ್ತಶುದ್ಧದಲ್ಲಿ ಕಾಯಕವ ಮಾಡುವಲ್ಲಿ**
**ಸದ್ಭಕ್ತಂಗೆ ಎತ್ತ ನೋಡಿದಡತ್ತ ಲಕ್ಷ್ಮಿ ತಾನಾಗಿಪ್ಪಳು**
**ಮಾರಯ್ಯ ಪ್ರಿಯ ಅಮರೇಶ್ವರ ಲಿಂಗದ ಸೇವೆಯುಳ್ಳನ್ನಕ್ಕರ**

**– ಆಯ್ದಕ್ಕಿ ಲಕ್ಕಮ್ಮ**

## ಗ್ಯಾರಂಟಿ ಯೋಜನೆಯೊಂದಿಗೆ ಅಭಿವೃದ್ಧಿಯ ಮುನ್ನೋಟ (Guarantees and Beyond)

11. ಭವಿಷ್ಯದ ಕುರಿತ ನಮ್ಮ ದೂರದೃಷ್ಟಿ ಗ್ಯಾರಂಟಿ ಯೋಜನೆಗಳಿಗಷ್ಟೇ ಸಿಮೀತವಾಗಿರುವುದಿಲ್ಲ. ಇಷ್ಟು ದೊಡ್ಡ ಮಟ್ಟದ ಗ್ಯಾರಂಟಿ

ಯೋಜನೆಗಳ ಮಧ್ಯೆಯೂ ನಮ್ಮ ಸರ್ಕಾರದ ಒಂಭತ್ತು ತಿಂಗಳ ಅವಧಿಯಲ್ಲಿ ಸುಮಾರು 21,168 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಸಚಿವ ಸಂಪುಟದ ಅನುಮೋದನೆ ನೀಡಿದ್ದೇವೆ ಮತ್ತು ಹಿಂದೆ ಅನುಮೋದನೆಗೊಂಡ ಕಾಮಗಾರಿಗಳ 2,230 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಅನುಮೋದನೆ ನೀಡಿದ್ದೇವೆ. 2,188 ಕೋಟಿ ರೂ.ಗಳ ಕ್ರಿಯಾ ಯೋಜನೆಗೂ ಅನುಮೋದನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲರನ್ನೂ ಒಳಗೊಂಡ ಅಭಿವೃದ್ಧಿ ಹಾಗೂ ತ್ವರಿತ ಆರ್ಥಿಕ ಬೆಳವಣಿಗೆಗೆ ಪೂರಕ ವಾತಾವರಣ ನಿರ್ಮಾಣಕ್ಕೆ ನಾವು ಒತ್ತು ನೀಡಿದ್ದೇವೆ. ಆರ್ಥಿಕ ಅಭಿವೃದ್ಧಿಗೆ ಪೂರಕ ಮೂಲಸೌಕರ್ಯಗಳಾದ ಎಕ್ಸ್‌ಪ್ರೆಸ್‌ವೇ, ಅತ್ಯುತ್ತಮ ಗ್ರಾಮೀಣ ರಸ್ತೆಗಳು, ವಿಶ್ವದರ್ಜೆಯ ವಿಮಾನ ನಿಲ್ದಾಣಗಳು, ಕೈಗಾರಿಕಾ ಕಾರಿಡಾರ್‌ಗಳು ಮತ್ತು ನಗರ ಪ್ರದೇಶಗಳಲ್ಲಿ ಅತ್ಯುತ್ತಮ ಸಾರ್ವಜನಿಕ ಸಾರಿಗೆ ವ್ಯವಸ್ಥೆ ರೂಪಿಸಲು ಅಗತ್ಯ ಸಂಪನ್ಮೂಲ ಕ್ರೋಢೀಕರಿಸಲಾಗುವುದು. ವಿದ್ಯುತ್ ಉತ್ಪಾದನೆಯಲ್ಲಿ ಮತ್ತೆ ಮುಂಚೂಣಿಯ ರಾಜ್ಯವಾಗಿ ಹೊರಹೊಮ್ಮಲು ಇಂಧನ ಕ್ಷೇತ್ರದಲ್ಲಿ ಹೆಚ್ಚಿನ ಹೂಡಿಕೆ ಮಾಡಲಾಗುವುದು.

12. ಬೆಂಗಳೂರು ನಗರವನ್ನು ವಿಶ್ವದರ್ಜೆಯ ಮೂಲಸೌಕರ್ಯ ಒದಗಿಸುವ ಮೂಲಕ ಜಾಗತಿಕ ಮಟ್ಟದ ನಗರವಾಗಿ ಅಭಿವೃದ್ಧಿಪಡಿಸಲಾಗುವುದು. ಐಟಿ ಮತ್ತು ಬಿಟಿ ವಲಯ, ಕೃತಕ ಬುದ್ಧಿಮತ್ತೆ, ರೊಬೊಟಿಕ್ಸ್, ಸೆಮಿ–ಕಂಡಕ್ಟರ್, ಆಟೋಮೊಬೈಲ್ ಮತ್ತು

ಇತರ ಪ್ರವರ್ಧಮಾನಕ್ಕೆ ಬರುತ್ತಿರುವ ವಲಯಗಳ ಜಾಗತಿಕ ಪ್ರತಿಭೆಗಳನ್ನು ಆಕರ್ಷಿಸಲು ಕ್ರಮ ಕೈಗೊಳ್ಳಲಾಗುವುದು. ಈ ವಿಷಯದಲ್ಲಿ ನಾವು ದೇಶಕ್ಕೇ ಮಾದರಿಯಾಗಿ ಕಾರ್ಯನಿರ್ವಹಿಸಲಿದ್ದೇವೆ. ಇದು ನಮ್ಮ ಕಾಯಕ.

13. ಮಾನವ ಸಂಪನ್ಮೂಲ ಅಭಿವೃದ್ಧಿಗೆ ತಳಪಾಯವಾದ ಶಿಕ್ಷಣ, ಆರೋಗ್ಯ ಮತ್ತು ಕೌಶಲ್ಯಾಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅತ್ಯುತ್ತಮ ಗುಣಮಟ್ಟದ ಶಾಲೆಗಳನ್ನು ಅಭಿವೃದ್ಧಿಪಡಿಸಿ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಮೂಡಿಸಿ, ಅವರ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾದ ವ್ಯವಸ್ಥೆ ರೂಪಿಸಲಿದೆ. ನಮ್ಮ ಸರ್ಕಾರವು ಮುಂದಿನ ಐದು ವರ್ಷಗಳಲ್ಲಿ ಸ್ಥಳೀಯವಾಗಿಯೇ ಅತ್ಯುತ್ತಮ ಪ್ರಾಥಮಿಕ ಆರೋಗ್ಯ ಸೇವೆಗಳು ಹಾಗೂ ಸೂಪರ್-ಸ್ಪೆಷಾಲಿಟಿ ಆಸ್ಪತ್ರೆಗಳ ಸೇವೆಗಳನ್ನು ದೊರಕಿಸಲಿದೆ. ಕೌಶಲ್ಯಾಭಿವೃದ್ಧಿ ವಲಯದಲ್ಲಿ ಯುವನಿಧಿ ಮತ್ತು ಯುವನಿಧಿ ಪ್ಲಸ್ ಉಪಕ್ರಮಗಳ ಜೊತೆಗೆ ಮುಂದಿನ 5 ವರ್ಷಗಳಲ್ಲಿ ಯುವಜನರು ಉದ್ಯಮದ ಬೇಡಿಕೆಗೆ ತಕ್ಕಂತ ಉದ್ಯೋಗಗಳಿಗೆ ಸಜ್ಜಾಗಲಿದ್ದಾರೆ. ಈ ಉಪಕ್ರಮಗಳಿಗೆ ನಮ್ಮ ಬದ್ಧತೆ ಅಚಲವಾದುದು.

14. ಈ ಎಲ್ಲಾ ದಿಟ್ಟ ಹಾಗೂ ದೂರದೃಷ್ಟಿಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ದಕ್ಷ ಹಾಗೂ

ಸಂಕಲ್ಪಶಕ್ತಿಯುಳ್ಳ ಆಡಳಿತ ವ್ಯವಸ್ಥೆಯನ್ನು ಹೊಂದುವುದು ಅತ್ಯಗತ್ಯ. ಈ ನಿಟ್ಟಿನಲ್ಲಿ ಸಾಂಸ್ಥಿಕ ಸುಧಾರಣೆಗಳು, ವಿಕೇಂದ್ರೀಕರಣ, ಹೊಣೆಗಾರಿಕೆ ಹಾಗೂ ಫಲಿತಾಂಶ ಆಧಾರಿತ ಆಡಳಿತದ ಮೂಲಕ ಆಡಳಿತ ವ್ಯವಸ್ಥೆಯ ಕುರಿತು ಜನರಲ್ಲಿ ಮತ್ತೆ ವಿಶ್ವಾಸ ಮೂಡಿಸುವುದು ನಮ್ಮ ಆಶಯವಾಗಿದೆ.

15. ಅಭಿವೃದ್ಧಿಯ ಈ ನೀಲ ನಕಾಶೆಯನ್ನು ಯಶಸ್ವಿಯಾಗಿ ವಾಸ್ತವಕ್ಕಿಳಿಸಲು ಅವಿರತವಾಗಿ ಮುಂದಿನ ನಾಲ್ಕು ವರ್ಷ ಶ್ರಮಿಸುತ್ತೇವೆ. ವಿನೂತನ ಚಿಂತನೆಗಳು, ದಿಟ್ಟ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಗಿದೆ. ಬಸವಣ್ಣ ಮತ್ತು ಅಂಬೇಡ್ಕರ್ ಅವರ ಹಾದಿಯಲ್ಲಿ ಕ್ರಾಂತಿಕಾರಿ ಹೆಜ್ಜೆಗಳನ್ನಿಡಬೇಕಾಗಿದೆ. ಈ ಆಯವ್ಯಯವು ನಮ್ಮ ರಾಜ್ಯದ ಮುಂದಿನ ನಡೆಯನ್ನು ನಿರೂಪಿಸುತ್ತದೆ. ರಾಜಕೀಯ, ಆರ್ಥಿಕ ಮತ್ತು ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿ ಪರ್ವವನ್ನೊಳಗೊಂಡ ಕರ್ನಾಟಕದ ಅಭಿವೃದ್ಧಿಗೆ ಮುಂದಿನ ಒಂದು ದಶಕದ ಹಾದಿಯನ್ನು ನಿಚ್ಚಳಗೊಳಿಸಲಿದೆ.

16. ಈ ಆಯವ್ಯಯವು ಗ್ಯಾರಂಟಿ ಯೋಜನೆಗಳೊಂದಿಗೆ ಉದ್ಯೋಗ ಸೃಜನೆ, ಶಿಕ್ಷಣ, ಆರೋಗ್ಯ, ಹಸಿವು ನಿವಾರಣೆ, ಕೃಷಿ ಮತ್ತು ನೀರಾವರಿಗೆ ಪ್ರೋತ್ಸಾಹ, ಮೂಲಸೌಕರ್ಯ ಅಭಿವೃದ್ಧಿ ಮತ್ತಿತರ

ವಲಯಗಳ ಅಭಿವೃದ್ಧಿಗೆ ಒತ್ತು ನೀಡಲಿದೆ. ಎಲ್ಲಾ ದುರ್ಬಲ ವರ್ಗದ ಜನರಿಗೆ ಗೌರವಯುತ ಸ್ಥಾನಮಾನ ದೊರಕಿಸಲು ಆದ್ಯತೆ ನೀಡಲಿದೆ. ಈ ಆಯವ್ಯಯವು ಕರ್ನಾಟಕ ಮಾದರಿ ಅಭಿವೃದ್ಧಿಯ ಹೊಸ ದೃಷ್ಟಾಂತವನ್ನು ರೂಪಿಸಲಿದೆ.

## ರಾಜ್ಯದ ಆರ್ಥಿಕತೆ

17. ರಾಜ್ಯದ ಆರ್ಥಿಕತೆಯು 2023–24ನೇ ಸಾಲಿನಲ್ಲಿ ಶೇ.6.6ರಷ್ಟು (ಸ್ಥಿರ ಬೆಲೆಗಳಲ್ಲಿ) ಬೆಳವಣಿಗೆಯಾಗಲಿದೆ ಎಂದು ಅಂದಾಜಿಸಲಾಗಿದೆ. ರಾಜ್ಯದ ಈ ಶ್ಲಾಘನೀಯ ಬೆಳವಣಿಗೆಯು, ದೇಶದ ಆರ್ಥಿಕತೆಯನ್ನು ರೂಪಿಸುವಲ್ಲಿ ಪ್ರಮುಖ ಪಾತ್ರವಹಿಸಿದೆ ಎಂಬುದನ್ನು ದೃಢಪಡಿಸಿದೆ.

18. ಸೇವಾ ಮತ್ತು ಕೈಗಾರಿಕಾ ವಲಯಗಳು ರಾಜ್ಯದ ಆರ್ಥಿಕ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸಿವೆ. ಕಳೆದ ಸಾಲಿಗೆ ಹೋಲಿಸಿದರೆ, 2023–24ನೇ ಸಾಲಿನಲ್ಲಿ ಸೇವಾ ವಲಯವು ಶೇ.8.7ರಷ್ಟು (ಸ್ಥಿರ ಬೆಲೆಗಳಲ್ಲಿ) ಮತ್ತು ಕೈಗಾರಿಕೆ ವಲಯವು ಶೇ.7.5ರಷ್ಟು (ಸ್ಥಿರ ಬೆಲೆಗಳಲ್ಲಿ) ಬೆಳವಣಿಗೆ ಸಾಧಿಸಿದೆ. ಪ್ರಸಕ್ತ ವರ್ಷದಲ್ಲಿ ಮುಂಗಾರು ವೈಫಲ್ಯದಿಂದ ರಾಜ್ಯವು ತೀವ್ರ ಬರಗಾಲವನ್ನು

ಎದುರಿಸಬೇಕಾಯಿತು. ಇದರಿಂದಾಗಿ ಕೃಷಿ ಕ್ಷೇತ್ರವು ಶೇ.1.8ರಷ್ಟು (ಸ್ಥಿರ ಬೆಲೆಗಳಲ್ಲಿ) ಋಣಾತ್ಮಕ ಬೆಳವಣಿಗೆ ಹೊಂದಿದೆ.

19. ಜಾಗತಿಕ ಆರ್ಥಿಕ ಬೆಳವಣಿಗೆಯಲ್ಲಿನ ಕುಸಿತ ಹಾಗೂ ಅಭಿವೃದ್ಧಿ ಹೊಂದಿದ ರಾಷ್ಟ್ರಗಳಲ್ಲಿನ ಬಡ್ಡಿ ದರಗಳ ಹೆಚ್ಚಳದಿಂದ ಪ್ರಸಕ್ತ ವರ್ಷದ ಮೊದಲ ಆರು ತಿಂಗಳುಗಳಲ್ಲಿ ನಮ್ಮ ದೇಶಕ್ಕೆ ವಿದೇಶಿ ನೇರ ಹೂಡಿಕೆಯ ಕುಸಿತದ ನಡುವೆಯೂ, ರಾಜ್ಯದಲ್ಲಿ ಸೆಪ್ಟೆಂಬರ್ 2023ರ ಅಂತ್ಯದವರೆಗೆ 2.8 ಶತಕೋಟಿ ಅಮೇರಿಕನ್ ಡಾಲರ್‌ಗಳಷ್ಟು ವಿದೇಶಿ ಹೂಡಿಕೆಯಾಗಿರುತ್ತದೆ. ಇದು ವಿದೇಶಿ ಬಂಡವಾಳದಾರರಿಗೆ ರಾಜ್ಯವು ಆಕರ್ಷಕ ಹೂಡಿಕೆ ಕೇಂದ್ರವಾಗಿರುವುದನ್ನು ಸಾಬೀತುಪಡಿಸಿದೆ.

## ರಾಜ್ಯದ ಆರ್ಥಿಕ ಸ್ಥಿತಿ

20. ಕರ್ನಾಟಕ ರಾಜ್ಯವು ದೇಶದಲ್ಲಿ ಅತಿ ಹೆಚ್ಚು ಜಿ.ಎಸ್.ಟಿ ತೆರಿಗೆ ಸಂಗ್ರಹಿಸುವ 2ನೇ ರಾಜ್ಯವಾಗಿದ್ದು, 2022–23ಕ್ಕೆ ಹೋಲಿಸಿದರೆ ಪ್ರಸಕ್ತ ವರ್ಷದಲ್ಲಿ ಜಿ.ಎಸ್.ಟಿ ತೆರಿಗೆ ಸಂಗ್ರಹಣೆಯು ಶೇ.18ರಷ್ಟು ಹೆಚ್ಚಳ ಕಂಡಿದೆ. ಸ್ವಂತ ತೆರಿಗೆ ರಾಜಸ್ವವು ಹಿಂದಿನ ವರ್ಷಕ್ಕೆ ಹೋಲಿಸಿದರೆ 2023–24ರಲ್ಲಿ ಶೇ.12ರಷ್ಟು ಬೆಳವಣಿಗೆಯನ್ನು ಸಾಧಿಸಲಿದೆ. ಗ್ಯಾರಂಟಿ ಯೋಜನೆಗಳಿಂದ ಜನರ ಆದಾಯ ಪ್ರಮಾಣ ಹೆಚ್ಚಾಗಿ, ರಾಜ್ಯದ

ಆರ್ಥಿಕತೆಯನ್ನು ಉತ್ತೇಜಿಸುವಲ್ಲಿ ಸಹಕಾರಿಯಾಗಿರುವುದನ್ನು ಇದು ತೋರಿಸುತ್ತದೆ.

**ಕೇಂದ್ರ ಹಾಗೂ ರಾಜ್ಯಗಳ ಸಂಬಂಧ ನೌಕರ ಹಾಗೂ ಯಜಮಾನರ ಸಂಬಂಧಗಳಾಗದೆ ಸಂವಿಧಾನದತ್ತ ಅಧಿಕಾರ ವ್ಯಾಪ್ತಿಯೊಳಗೆ ಸ್ವಾಯತ್ತ ಘಟಕಗಳಾಗಿರಬೇಕು. ರಾಜ್ಯಗಳ ಜೊತೆ ಸಮಾನತೆಯ ಆಧಾರದಲ್ಲಿ ವ್ಯವಹರಿಸಬೇಕು.**

**– ಭಾರತ ರತ್ನ ಕರ್ಪೂರಿ ಠಾಕೂರ್**

21. ಸರಕು ಮತ್ತು ಸೇವಾ ತೆರಿಗೆಯನ್ನು ಪರಿಚಯಿಸುವ ಮೂಲಕ ರಾಜ್ಯಗಳ ತೆರಿಗೆ ಸಂಗ್ರಹಣೆಯು ಶೇ.14ರಷ್ಟು ಬೆಳವಣಿಗೆ ಹೊಂದಲಿದ್ದು, ಒಂದು ವೇಳೆ ಅಂದಾಜಿಗಿಂತ ಕಡಿಮೆ ಸಂಗ್ರಹವಾದಲ್ಲಿ, ಕೇಂದ್ರ ಸರ್ಕಾರದಿಂದ ಪರಿಹಾರ ನೀಡುವುದಾಗಿ ರಾಜ್ಯ ಸರ್ಕಾರಗಳಿಗೆ ಭರವಸೆ ನೀಡಲಾಗಿತ್ತು. ಶೇ.14ರಷ್ಟು ಬೆಳವಣಿಗೆ ದರದಂತೆ 2017 ರಿಂದ 2023–24ರವರೆಗೆ ರಾಜ್ಯದಲ್ಲಿ ಒಟ್ಟು 4,92,296 ಕೋಟಿ ರೂ.ಗಳ ಜಿ.ಎಸ್.ಟಿ ತೆರಿಗೆ ಸಂಗ್ರಹಣೆಯಾಗುತ್ತದೆ ಎಂದು ಅಂದಾಜಿಸಲಾಗಿತ್ತು. ಆದರೆ ವಾಸ್ತವಿಕವಾಗಿ ರಾಜ್ಯದಲ್ಲಿ 3,26,764 ಕೋಟಿ ರೂ.ಗಳ ಜಿ.ಎಸ್.ಟಿ ತೆರಿಗೆ ಸ್ವೀಕೃತವಾಗಿದೆ. ಜಿ.ಎಸ್.ಟಿ ತೆರಿಗೆ ಸಂಗ್ರಹಣೆಯಲ್ಲಿನ ಕೊರತೆ 1,65,532 ಕೋಟಿ ರೂ.ಗಳಿಗೆ ಎದುರಾಗಿ,

ಕೇಂದ್ರ ಸರ್ಕಾರವು ರಾಜ್ಯಕ್ಕೆ ಕೇವಲ 1,06,258 ಕೋಟಿ ರೂ. ಪರಿಹಾರವನ್ನು ಮಾತ್ರ ಬಿಡುಗಡೆ ಮಾಡಿದೆ. ಜಿ.ಎಸ್.ಟಿ. ತೆರಿಗೆಯ ಈ ಅವೈಜ್ಞಾನಿಕ ಅನುಷ್ಠಾನದಿಂದ ರಾಜ್ಯಕ್ಕೆ ಕಳೆದ ಏಳು ವರ್ಷಗಳ ಅವಧಿಯಲ್ಲಿ ಒಟ್ಟು 59,274 ಕೋಟಿ ರೂ.ಗಳ ನಷ್ಟವಾಗಿರುತ್ತದೆ.

22. 15ನೇ ಹಣಕಾಸು ಆಯೋಗವು 2020–21ಕ್ಕೆ ಅನ್ವಯವಾಗುವಂತೆ ನೀಡಿದ್ದ ಮಧ್ಯಂತರ ವರದಿಯ ಶಿಫಾರಸ್ಸಿನಿಂದ ರಾಜ್ಯಕ್ಕಾದ ಅನ್ಯಾಯವನ್ನು ಸರಿಪಡಿಸುವಲ್ಲಿ ಹಿಂದಿನ ಸರ್ಕಾರವು ವಿಫಲವಾಯಿತು. ಹಿಂದಿನ ಸರ್ಕಾರ ಕೈಚೆಲ್ಲಿ ಕೂತಿದ್ದರ ಪರಿಣಾಮವಾಗಿ ಅಂತಿಮ ವರದಿಯ ಶಿಫಾರಸ್ಸಿನಲ್ಲಿಯೂ ಸಹ ರಾಜ್ಯಕ್ಕೆ ತೆರಿಗೆ ಹಂಚಿಕೆಯಲ್ಲಿ ಅತಿ ಹೆಚ್ಚು ನಷ್ಟ ಅನುಭವಿಸಬೇಕಾಯಿತು. ರಾಜ್ಯದ ಜಿ.ಎಸ್.ಡಿ.ಪಿ ಲೆಕ್ಕಾಚಾರ ಮಾಡುವ ವಿಧಾನದಲ್ಲಿ ಬದಲಾವಣೆ ಹಾಗೂ 1971ರ ಬದಲು 2011ರ ಜನಗಣತಿ ವರದಿಯ ಬಳಕೆಯಿಂದಾಗಿ ಅಭಿವೃದ್ಧಿಶೀಲ ರಾಜ್ಯಗಳಿಗೆ ಭಾರೀ ನಷ್ಟವುಂಟಾಗಿದೆ. 14ನೇ ಹಣಕಾಸು ಆಯೋಗ ಶಿಫಾರಸ್ಸು ನೀಡಿದ್ದ ಹಂಚಿಕೆಯ ಸೂತ್ರವನ್ನು ಪಾಲಿಸಿದ್ದರೆ ಕರ್ನಾಟಕ ರಾಜ್ಯಕ್ಕೆ 2,77,350 ಕೋಟಿ ರೂ.ಗಳ ತೆರಿಗೆ ಪಾಲು ಸ್ವೀಕೃತವಾಗುತ್ತಿತ್ತು. ಆದರೆ 15ನೇ ಹಣಕಾಸು ಆಯೋಗದ ಶಿಫಾರಸ್ಸಿನಿಂದ ರಾಜ್ಯಕ್ಕೆ 2,15,253 ಕೋಟಿ ರೂ.ಗಳು ಮಾತ್ರ ಹಂಚಿಕೆಯಾಗಲಿದೆ ಎಂದು

ಅಂದಾಜಿಸಲಾಗಿದೆ. 15ನೇ ಹಣಕಾಸು ಆಯೋಗದ ಆರು ವರ್ಷದ ಅವಧಿಯಲ್ಲಿ ಕೇಂದ್ರದಿಂದ ರಾಜ್ಯಗಳಿಗೆ ಹಂಚಿಕೆಯಾಗುವ ಒಟ್ಟು ತೆರಿಗೆ ಹಂಚಿಕೆಯಲ್ಲಿ, ರಾಜ್ಯಕ್ಕೆ 62,098 ಕೋಟಿ ರೂ.ಗಳಷ್ಟು ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ.

23. ಇದಲ್ಲದೆ, 15ನೇ ಹಣಕಾಸು ಆಯೋಗವು ಮೊದಲನೆಯ ವರದಿಯಲ್ಲಿ 2020-21ನೇ ವರ್ಷಕ್ಕೆ 5,495 ಕೋಟಿ ರೂ. ವಿಶೇಷ ಅನುದಾನ ಒದಗಿಸುವಂತೆ ಹಾಗೂ ಅಂತಿಮ ವರದಿಯಲ್ಲಿ ಬೆಂಗಳೂರಿನ ಅಭಿವೃದ್ಧಿಗೆ 6,000 ಕೋಟಿ ರೂ. ರಾಜ್ಯ ಕೇಂದ್ರಿತ ಅನುದಾನವನ್ನು ಶಿಫಾರಸ್ಸು ಮಾಡಿತ್ತು. ಆದರೆ ಈ ಶಿಫಾರಸ್ಸುಗಳನ್ನು ಕೇಂದ್ರ ಸರ್ಕಾರವು ತಿರಸ್ಕರಿಸಿರುತ್ತದೆ. ರಾಜ್ಯದಲ್ಲಿ ಡಬಲ್ ಇಂಜಿನ್ ಎಂದು ಹೇಳಿಕೊಳ್ಳುವ ಸರ್ಕಾರ ಇದ್ದರೂ ಸಹ ಕೇಂದ್ರದಿಂದ ಒಟ್ಟು 11,495 ಕೋಟಿ ರೂ.ಗಳ ವಿಶೇಷ ಅನುದಾನ ಪಡೆಯುವಲ್ಲಿ ಹಿಂದಿನ ಸರ್ಕಾರವು ಅಸಮರ್ಥವಾಗಿರುತ್ತದೆ.

24. 15ನೇ ಹಣಕಾಸು ಆಯೋಗಕ್ಕೆ ಸರಿಯಾದ ವಿಶ್ಲೇಷಣೆಯೊಂದಿಗೆ ಜ್ಞಾಪನಾ ಪತ್ರದ (Memorandum) ಮೂಲಕ ಹಕ್ಕೊತ್ತಾಯ ಮಂಡಿಸಿದ್ದರೂ, ರಾಜ್ಯಕ್ಕೆ ನ್ಯಾಯ ಸಿಕ್ಕಿರುವುದಿಲ್ಲ. ಈ ಅನ್ಯಾಯವು ಮರುಕಳಿಸದಂತೆ ಮುನ್ನೆಚ್ಚರಿಕೆಯ ಕ್ರಮವಾಗಿ ಸಚಿವ ಸಂಪುಟದ ಮಾರ್ಗದರ್ಶನದೊಂದಿಗೆ ವಿಷಯ ತಜ್ಞರನ್ನು ಒಳಗೊಂಡ

ತಾಂತ್ರಿಕಕೋಶವನ್ನು ರಚಿಸಿ ರಾಜ್ಯಕ್ಕೆ ಹೆಚ್ಚು ತೆರಿಗೆ ಪಾಲು ಮತ್ತು ಅನುದಾನಗಳನ್ನು ಪಡೆಯಲು ಒಂದು ಜ್ಞಾಪನಾ ಪತ್ರವನ್ನು (Memorandum) ಸಿದ್ಧಪಡಿಸಿ ಸಮರ್ಥವಾದ ಮತ್ತು ವೈಜ್ಞಾನಿಕವಾಗಿ ವಿಶ್ಲೇಷಿಸಿದ ಅಂಕಿಅಂಶಗಳೊಂದಿಗೆ 16ನೇ ಹಣಕಾಸು ಆಯೋಗಕ್ಕೆ ಸಲ್ಲಿಸಲು ನಿರ್ಧರಿಸಲಾಗಿದೆ.

25. ಕೇಂದ್ರ ಸರ್ಕಾರವು ಸೆಸ್ ಮತ್ತು ಸರ್‌ಚಾರ್ಜ್‌ಗಳನ್ನು ಹೆಚ್ಚಿಸುತ್ತಿದ್ದು, ಅವುಗಳನ್ನು ರಾಜ್ಯಗಳೊಂದಿಗೆ ಹಂಚಿಕೆ ಮಾಡುವುದಿಲ್ಲ. ಕೇಂದ್ರ ಸರ್ಕಾರವು ವಿಧಿಸುವ ಸೆಸ್ ಮತ್ತು ಸರ್‌ಚಾರ್ಜ್‌ಗಳು 2017–18 ರಿಂದ 2023–24ರ ಅವಧಿಯಲ್ಲಿ ಶೇ.153ರಷ್ಟು ಹೆಚ್ಚಾಗಿರುತ್ತದೆ. ಸೆಸ್ ಮತ್ತು ಸರ್‌ಚಾರ್ಜ್‌ಗಳನ್ನು ರಾಜ್ಯಗಳೊಂದಿಗೆ ಹಂಚಿಕೆ ಮಾಡಿದ್ದರೆ, ರಾಜ್ಯಗಳಿಗೆ ಒಟ್ಟು 11,34,301 ಕೋಟಿ ರೂ.ಗಳು ಹಂಚಿಕೆಯಾಗುತ್ತಿತ್ತು. ಇದರಿಂದ ಕರ್ನಾಟಕ ರಾಜ್ಯಕ್ಕೆ ಮಾತ್ರ ಕಳೆದ ಏಳು ವರ್ಷಗಳ ಅವಧಿಯಲ್ಲಿ ಒಟ್ಟು 45,322 ಕೋಟಿ ರೂ.ಗಳ ನಷ್ಟ ಉಂಟಾಗಿದೆ.

26. ಜಿ.ಎಸ್.ಟಿ.ಯ ಅವೈಜ್ಞಾನಿಕ ಅನುಷ್ಠಾನ, ಸೆಸ್ ಮತ್ತು ಸರ್‌ಚಾರ್ಜ್‌ಗಳ ಹೆಚ್ಚಳ ಮತ್ತು ತೆರಿಗೆ ಹಂಚಿಕೆಯ ಸೂತ್ರ ಬದಲಾವಣೆ – ಕೇಂದ್ರ ಸರ್ಕಾರದ ಈ ಮೂರು ಬಗೆಯ ಅನ್ಯಾಯಗಳಿಂದ ಹಾಗೂ ನ್ಯಾಯಯುತವಾಗಿ ರಾಜ್ಯಗಳಿಗೆ ಹಣ ಬಿಡುಗಡೆ ಮಾಡದ

ಕಾರಣದಿಂದಾಗಿ ದೇಶದ ಎಲ್ಲಾ ರಾಜ್ಯಗಳ ಹಣಕಾಸು ಸಾಮರ್ಥ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗಿದೆ. ಕೇಂದ್ರದಲ್ಲಿ ಆಡಳಿತದಲ್ಲಿರುವ ಪಕ್ಷವೇ, ದೇಶದ ಹಲವು ರಾಜ್ಯಗಳಲ್ಲಿ ಆಡಳಿತದಲ್ಲಿರುವ ಕಾರಣ ಅವರಿಗೆ ಈ ಅನ್ಯಾಯಗಳ ವಿರುದ್ಧ ದನಿಯೆತ್ತಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ರಾಜ್ಯಗಳಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ದನಿಯೆತ್ತಿ, ರಾಜ್ಯಗಳ ಹಕ್ಕಿನ ರಕ್ಷಣೆ ಮಾಡುವ ಹೊಣೆಗಾರಿಕೆ ನಮ್ಮದಾಗಿದೆ.

27. ಬೆಲೆ ಏರಿಕೆ, ನಿರುದ್ಯೋಗ ಮತ್ತು ಆದಾಯದ ಅಸಮಾನತೆಗಳಿಂದ ರಾಷ್ಟ್ರದ ಜನತೆ ತತ್ತರಿಸಿದ್ದು, ಬಡವರಿಗೆ ನೇರವಾಗಿ ಪ್ರಯೋಜನವಾಗುವ ಕಲ್ಯಾಣ ಯೋಜನೆಗಳಿಗೆ ಆಯವ್ಯಯ ಹಂಚಿಕೆಯನ್ನು ಹೆಚ್ಚಿಸುವುದು ರಾಜ್ಯದ ಕರ್ತವ್ಯವಾಗಿದೆ. ರಾಜಸ್ವ ಕೊರತೆಯಲ್ಲಿ ಹೆಚ್ಚಳವಾದರೂ ಸಹ, ಅಭಿವೃದ್ಧಿಯ ಫಲಗಳು ಬಡಜನತೆಗೆ ತಲುಪುವುದನ್ನು ಖಚಿತಪಡಿಸಿಕೊಳ್ಳಲು ಅಂತಹ ಕಲ್ಯಾಣ ವೆಚ್ಚಗಳು ಅವಶ್ಯಕ. ಸಂಕಷ್ಟದ ಸಮಯದಲ್ಲಿ ಬಡವರು ಮತ್ತು ನಿರ್ಗತಿಕರ ನೆರವಿಗೆ ರಾಜ್ಯ ಸರ್ಕಾರ ಬರದಿದ್ದರೆ ರಾಜಸ್ವ ಹೆಚ್ಚುವರಿ ಸಾಧನೆಯು ಅರ್ಥಹೀನವಾಗಿರುತ್ತದೆ.

28. ಈ ಹಿನ್ನಲೆಯಲ್ಲಿ, ನಾವು ರಾಜಸ್ವ ಕೊರತೆಯ ಆಯವ್ಯಯವನ್ನು ಮಂಡಿಸಿದ್ದರೂ ಸಹ, 2024–25ರ ಆಯವ್ಯಯದಲ್ಲಿ ಕಲ್ಯಾಣ

ಕಾರ್ಯಕ್ರಮಗಳಿಗೆ 1,20,373 ಕೋಟಿ ರೂ.ಗಳ ಅನುದಾನವನ್ನು ಹಂಚಿಕೆ ಮಾಡಿರುತ್ತೇವೆ. ಅಲ್ಲದೆ ಬಂಡವಾಳ ವೆಚ್ಚಕ್ಕೆ ಅನುದಾನದ ಕೊರತೆ ಉಂಟಾಗದಂತೆ, ನಾವು ವಿತ್ತೀಯ ಕೊರತೆಯನ್ನು ಜಿ.ಎಸ್.ಡಿ.ಪಿ.ಯ ಶೇ.3ರೊಳಗೆ ಮತ್ತು ಒಟ್ಟು ಬಾಕಿಯಿರುವ ಹೊಣೆಗಾರಿಕೆಗಳನ್ನು ಜಿ.ಎಸ್.ಡಿ.ಪಿ.ಯ ಶೇ.25ರೊಳಗೆ ಕಾಯ್ದುಕೊಳ್ಳುವ ಮೂಲಕ ವಿತ್ತೀಯ ಹೊಣೆಗಾರಿಕೆಯನ್ನು ಪಾಲಿಸಿರುತ್ತೇವೆ.

## ಕೃಷಿ

**ಹೊಲವನುತ್ತು ಬಿತ್ತೋರು**
**ಬೆಳೆಯ ಕುಯ್ದು ಬೆವರೋರು**
**ಬಿಸಿಲಿನಲ್ಲಿ ಬೇಯೋರು ನನ್ನ ಜನಗಳು**

**– ಪದ್ಮಶ್ರೀ ಡಾ॥ ಸಿದ್ದಲಿಂಗಯ್ಯ**

29. ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸುವುದು ನಮ್ಮ ಸರ್ಕಾರದ ಆದ್ಯತೆಯ ವಿಷಯವಾಗಿದ್ದು, ಈ ಉದ್ದೇಶದಿಂದ ವಿವಿಧ ರೈತಪರ ಯೋಜನೆಗಳನ್ನು ಒಗ್ಗೂಡಿಸಿ, ಸಮಗ್ರ ಕೃಷಿಯನ್ನು ಉತ್ತೇಜಿಸುವ **ಕರ್ನಾಟಕ ರೈತ ಸಮೃದ್ಧಿ ಯೋಜನೆಯನ್ನು** ಜಾರಿಗೊಳಿಸಲಾಗುವುದು. ಈ ಯೋಜನೆಯಡಿ ರೈತರಿಗೆ ಕೆಳಕಂಡ

ವಿಷಯಗಳಲ್ಲಿ ಮಾರ್ಗದರ್ಶನ ಹಾಗೂ ಬೆಂಬಲ ನೀಡಲು ಕ್ರಮ ಕೈಗೊಳ್ಳಲಾಗುವುದು;

- ಕೃಷಿ, ಪಶುಸಂಗೋಪನೆ, ತೋಟಗಾರಿಕೆ, ಹೈನುಗಾರಿಕೆಗಳನ್ನು ಒಳಗೊಂಡಂತೆ ಸಮಗ್ರ ಕೃಷಿ ಕೈಗೊಳ್ಳುವ ಮೂಲಕ ಆದಾಯದಲ್ಲಿ ಸುಸ್ಥಿರತೆಯನ್ನು ಕಂಡುಕೊಳ್ಳಲು ಬೆಂಬಲ ನೀಡುವುದು.
- ಮಣ್ಣಿನ ಗುಣ ಹಾಗೂ ಮಾರುಕಟ್ಟೆ ಬೇಡಿಕೆಯನ್ನು ಆಧರಿಸಿ ಯಾವ ಬೆಳೆ ಬೆಳೆಯಬೇಕೆಂಬ ಕುರಿತು ರೈತರಿಗೆ ಮಾರ್ಗದರ್ಶನ ನೀಡುವುದು.
- ಮಣ್ಣು ಪರೀಕ್ಷೆ ಮತ್ತು ಗುಣಮಟ್ಟ ಕುರಿತು ಮಾಹಿತಿ ನೀಡುವುದು.
- ಹೊಸ ಕೃಷಿ ಪದ್ಧತಿ ಹಾಗೂ ತಂತ್ರಜ್ಞಾನಗಳ ಕುರಿತು ರೈತರಿಗೆ ಅರಿವು ಮೂಡಿಸಿ, ಬೆಂಬಲ ನೀಡುವುದು.
- ರೈತರಿಗೆ ಸಂಗ್ರಹಣೆ ಮತ್ತು ಮೌಲ್ಯವರ್ಧನೆಯ ಕುರಿತು ಅರಿವು ಮೂಡಿಸುವುದು.
- ರೈತರು ಬೆಳೆದ ಬೆಳೆಗೆ ಉತ್ತಮ ಬೆಲೆ ಪಡೆಯಲು ಮಾರುಕಟ್ಟೆ ಸಂಪರ್ಕ ಕಲ್ಪಿಸುವುದು.

30. ಕೃಷಿ ಮತ್ತು ಪೂರಕ ಚಟುವಟಿಕೆಗಳ ನೀತಿ ಮತ್ತು ಯೋಜನೆಗಳ ಸಂಯೋಜನೆ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕೆ ಅನುವಾಗುವಂತೆ ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ,

ಸಹಕಾರ, ಪಶುಸಂಗೋಪನೆ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಕೃಷಿ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಲಾಗುವುದು.

31. ನಮ್ಮ ಸರ್ಕಾರದ ಹಿಂದಿನ ಅವಧಿಯಲ್ಲಿ ಅತ್ಯಂತ ಜನಪ್ರಿಯವಾಗಿದ್ದ ಕೃಷಿ ಭಾಗ್ಯ ಯೋಜನೆಯನ್ನು ಮರುಜಾರಿಗೊಳಿಸಲಾಗಿರುತ್ತದೆ. 2023-24ನೇ ಸಾಲಿನಲ್ಲಿ 200 ಕೋಟಿ ರೂ.ಗಳ ಅನುದಾನ ಒದಗಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿಯೂ ಈ ಯೋಜನೆಯನ್ನು ಮುಂದುವರೆಸಲಾಗುವುದು.

32. ಕಣ್ಮರೆಯಾಗುತ್ತಿರುವ ಹಾಗೂ ನಶಿಸಿ ಹೋಗುತ್ತಿರುವ ಸ್ಥಳೀಯ ಬೆಳೆಗಳ ತಳಿಗಳನ್ನು ಸಂಗ್ರಹಿಸಲು ಮತ್ತು ಸಂರಕ್ಷಿಸುವ ಉದ್ದೇಶದಿಂದ ಒಂದು ಸಮುದಾಯ ಬೀಜ ಬ್ಯಾಂಕ್ ಅನ್ನು ಸ್ಥಾಪಿಸಲಾಗುವುದು.

33. **ನಮ್ಮ ಮಿಲ್ಲೆಟ್** ಎಂಬ ಹೊಸ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುವುದು. ಈ ಯೋಜನೆಯಡಿಯಲ್ಲಿ ಸಂಸ್ಕರಿಸಿದ ಸಿರಿಧಾನ್ಯಗಳು ಹಾಗೂ ಮೌಲ್ಯವರ್ಧಿತ ಸಿರಿಧಾನ್ಯ ಉತ್ಪನ್ನಗಳನ್ನು ಅಗ್ರಿ-ಟೆಕ್ ಕಂಪನಿಗಳು ಮತ್ತು ರಿಟೇಲ್ ಚೈನ್ಸ್‌ಗಳ ಸಹಭಾಗಿತ್ವದೊಂದಿಗೆ ಕೈಗೆಟುಕುವ ದರದಲ್ಲಿ ದೊರಕಿಸಲು ಅನುವು ಮಾಡಿಕೊಡಲಾಗುವುದು.

34. ರಾಜ್ಯದ ಬರಪೀಡಿತ ಮತ್ತು ಮಳೆಯಾಶ್ರಿತ ಪ್ರದೇಶಗಳಲ್ಲಿ ಸುಸ್ಥಿರ ಕೃಷಿ ಮಾಡಲು ಮಣ್ಣು ಮತ್ತು ನೀರಿನ ಸಂರಕ್ಷಣೆಗಾಗಿ ಪ್ರತಿ ವರ್ಷ 1,000 ದಂತೆ ಒಟ್ಟು 5,000 ಸಣ್ಣ ಸರೋವರಗಳನ್ನು ನರೇಗಾ ಯೋಜನೆಯಡಿ ನಿರ್ಮಿಸಲಾಗುವುದು.

35. ಬೆಂಗಳೂರಿನಲ್ಲಿರುವ ಕೃಷಿ ಇಲಾಖೆಯ ಆರ್.ಕೆ. ಶಾಲಾ ಕೃಷಿ ಕ್ಷೇತ್ರವನ್ನು ಕೃಷಿಗೆ ಸಂಬಂಧಿಸಿದ ತಾಂತ್ರಿಕತೆಗಳನ್ನು ಪಸರಿಸುವ ಜ್ಞಾನ ಕೇಂದ್ರವನ್ನಾಗಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುವುದು.

36. ರೈತರಿಗೆ ಕೀಟ, ರೋಗ ಮತ್ತು ಪೋಷಕಾಂಶ ನಿರ್ವಹಣೆಯ ಸಲಹೆ ನೀಡಲು ರಾಯಚೂರು ಕೃಷಿ ವಿಶ್ವವಿದ್ಯಾಲಯವು ಅಭಿವೃದ್ಧಿಪಡಿಸಿರುವ e-SAP ತಂತ್ರಾಂಶದ ಸೌಲಭ್ಯವನ್ನು ಎಲ್ಲಾ ರೈತರಿಗೆ ಪರಿಚಯಿಸಲು ಕ್ರಮ ವಹಿಸಲಾಗುವುದು.

37. ಆಹಾರ ಸಂಸ್ಕರಣಾ ವಲಯವು ರೈತರ ಆದಾಯ ಹೆಚ್ಚಿಸುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತಿದೆ. ಕೃಷಿ ಉತ್ಪನ್ನಗಳು ವ್ಯರ್ಥವಾಗದಂತೆ ತಡೆಯಲು ಹಾಗೂ ಬೆಳೆಗಳಿಗೆ ಸಮರ್ಪಕ ಬೆಲೆ ದೊರಕಿಸುವ ಸಲುವಾಗಿ ಕೃಷಿ ಇಲಾಖೆಯ ಅಧೀನದಲ್ಲಿ ಪ್ರತ್ಯೇಕ ಆಹಾರ ಸಂಸ್ಕರಣಾ ಆಯುಕ್ತಾಲಯ ರಚಿಸಲಾಗುವುದು. ಇದರ ಮೂಲಕ ವಿವಿಧ ಇಲಾಖೆಗಳಡಿಯಲ್ಲಿರುವ ಆಹಾರ ಸಂಸ್ಕರಣೆಗೆ

ಸಂಬಂಧಿಸಿದ ಎಲ್ಲಾ ಯೋಜನೆಗಳನ್ನು ಒಗ್ಗೂಡಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು.

38. ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ರಫ್ತನ್ನು ಉತ್ತೇಜಿಸಲು ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ಸಂಸ್ಥೆಯನ್ನು ಬಲಪಡಿಸಲು ಕ್ರಮವಹಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಈ ಉದ್ದೇಶಕ್ಕಾಗಿ PMFME ಯೋಜನೆಯಡಿಯಲ್ಲಿ 80 ಕೋಟಿ ರೂ.ಗಳನ್ನು ಒದಗಿಸಲಾಗುವುದು.

39. ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ರಫ್ತನ್ನು ಉತ್ತೇಜಿಸಲು ರಾಜ್ಯದಲ್ಲಿರುವ ವಿಮಾನ ನಿಲ್ದಾಣಗಳ ಹತ್ತಿರದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಆಹಾರ ಪಾರ್ಕ್‌ಗಳನ್ನು ಸ್ಥಾಪಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಶಿವಮೊಗ್ಗದ ಸೋಗಾನೆ, ವಿಜಯಪುರದ ಇಟ್ಟಂಗಿಹಾಳ ಮತ್ತು ಬೆಂಗಳೂರು ಗ್ರಾಮಾಂತರದ ಪೂಜೇನಹಳ್ಳಿಯಲ್ಲಿ ಸ್ಥಾಪಿಸಲಾಗುವುದು.

40. ಕೃಷಿ ನಾವೀನ್ಯತೆಯ ಯುಗದಲ್ಲಿ ಪಾರಂಪರಿಕ ಕೃಷಿ ಪದ್ಧತಿಯಲ್ಲಿ ಗಣನೀಯ ಬದಲಾವಣೆಗಳಾಗಿದ್ದು, ಉಪಗ್ರಹ ಚಿತ್ರ, ಸೆನ್ಸರ್‌ಗಳ ಬಳಕೆ ಮತ್ತು ಮಷಿನ್ ಲರ್ನಿಂಗ್ ನಂತಹ (Machine Learning) ಅತ್ಯಾಧುನಿಕ ತಂತ್ರಜ್ಞಾನಗಳನ್ನು ಆಧರಿಸಿ ಬೆಳೆಯ ಉತ್ಪಾದಕತೆ

ಮುನ್ಸೂಚನೆಯನ್ನು ಮಾಡಲು ಒಂದು ದತ್ತಾಂಶವನ್ನು ಅಭಿವೃದ್ಧಿಪಡಿಸಲಾಗುವುದು.

41. ರೈತ ಉತ್ಪಾದಕ ಸಂಸ್ಥೆಗಳನ್ನು (FPO) ಇನ್ನಷ್ಟು ಸದೃಢ ಮತ್ತು ಸುಸ್ಥಿರವಾಗಿ ಕಾರ್ಯನಿರ್ವಹಿಸಲು ಪೂರಕವಾದ ತರಬೇತಿ, ಮಾರ್ಗದರ್ಶನ ಹಾಗೂ ಬೆಂಬಲ ನೀಡುವ Agri Accelerator Platform ಮೂಲಕ ಕೃಷಿ ವಲಯದ Start–up ಗಳನ್ನು ಉತ್ತೇಜಿಸಲಾಗುವುದು.

42. ಮಂಡ್ಯ ಜಿಲ್ಲೆಯ ವಿ.ಸಿ. ಫಾರಂ ನಲ್ಲಿ ಕೃಷಿ ವಿಶ್ವವಿದ್ಯಾಲಯ ಸ್ಥಾಪಿಸುವ ಕುರಿತು ಪರಿಶೀಲಿಸಲು ತಜ್ಞರ ಸಮಿತಿ ರಚಿಸಲಾಗುವುದು.

## ತೋಟಗಾರಿಕೆ

43. ತೋಟಗಾರಿಕೆಗೆ ಸಂಬಂಧಿಸಿದ ತಾಂತ್ರಿಕ ಸಲಹೆ, ಮಾರುಕಟ್ಟೆ ಸಂಪರ್ಕ, ಬೇಸಾಯ ಪರಿಕರಗಳು ಮತ್ತು ಉತ್ಪನ್ನಗಳನ್ನು ಒಂದೇ ಸೂರಿನಡಿ ಒದಗಿಸುವ ಉದ್ದೇಶದಿಂದ ಆಯ್ದ ಜಿಲ್ಲೆಗಳಲ್ಲಿ ಕಿಸಾನ್ ಮಾಲ್‌ಗಳನ್ನು ಸ್ಥಾಪಿಸಲಾಗುವುದು.

44. ರಾಜ್ಯದಲ್ಲಿ 40,000 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯುತ್ತಿರುವ ಪುಷ್ಪ ಬೆಳೆಗಳ ಮಾರಾಟ ಮತ್ತು ರಫ್ತನ್ನು ಉತ್ತೇಜಿಸಲು ಬೆಂಗಳೂರಿನಲ್ಲಿ ಸುಸಜ್ಜಿತವಾದ ಅಂತಾರಾಷ್ಟ್ರೀಯ ಮಟ್ಟದ ವಾಣಿಜ್ಯ ಪುಷ್ಪ

ಮಾರುಕಟ್ಟೆಯನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

45. ತೋಟಗಾರಿಕೆ ಬೆಳೆಗಳ ಸಂಸ್ಕರಣೆ ಮತ್ತು ರಫ್ತಿನ ಪ್ರಮಾಣ ಹೆಚ್ಚಿಸಲು ಕೊಯ್ಲೋತರ ನಿರ್ವಹಣಾ ಕೇಂದ್ರ (Packhouse) ಹಾಗೂ ಮೌಲ್ಯವರ್ಧನ ಸಂಸ್ಕರಣಾ ಘಟಕಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

46. ರಾಜ್ಯದಲ್ಲಿ ಅಡಿಕೆ ಬೆಳೆಯಲ್ಲಿ ಕಂಡು ಬರುವ ಮಾರಕ ರೋಗಗಳನ್ನು ನಿಯಂತ್ರಿಸಲು ಪೂರಕವಾದ ಸಂಶೋಧನೆ ಹಾಗೂ ಸಸ್ಯ ಸಂರಕ್ಷಣೆ ಚಟುವಟಿಕೆಗಳನ್ನು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕೈಗೊಳ್ಳಲಾಗುವುದು.

47. ತೋಟಗಾರಿಕೆ ಬೆಳೆಗಳಲ್ಲಿ ಹೆಚ್ಚು ಇಂಗಾಲವನ್ನು ಹಿಡಿದಿಟ್ಟುಕೊಳ್ಳುವ ಬೆಳೆಗಳನ್ನು ಗುರುತಿಸಿ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ Carbon Credit ರೂಪದಲ್ಲಿ ಮಾರಾಟ ಮಾಡುವ ಮೂಲಕ ರೈತರು ಹೆಚ್ಚಿನ ಆದಾಯ ಗಳಿಸಲು ಅನುಕೂಲವಾಗುವಂತೆ ಉತ್ತೇಜನ ನೀಡಲಾಗುವುದು.

48. ರಾಜ್ಯದಲ್ಲಿ ಸಾಂಬಾರು ಪದಾರ್ಥ ಬೆಳೆಗಳನ್ನು ಬೆಳೆಯುವ ರೈತರನ್ನು ಪ್ರೋತ್ಸಾಹಿಸಲು ಹಾಗೂ ಬೆಳೆಗಳ ರಫ್ತನ್ನು ಉತ್ತೇಜಿಸಲು

ಚಿಕ್ಕಮಗಳೂರು ಜಿಲ್ಲೆಯಲ್ಲಿ ಸ್ಪೈಸ್ ಪಾರ್ಕ್‌ನ್ನು (Spice Park) ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುವುದು.

49. ತೋಟಗಾರಿಕೆ ಬೆಳೆಗಳಿಗೆ ವಿಜಯಪುರ ಜಿಲ್ಲೆಯು ಹೆಸರುವಾಸಿಯಾಗಿದೆ. ಈ ಭಾಗದಲ್ಲಿ ತೋಟಗಾರಿಕೆ ಬೆಳೆಗಳಿಗೆ ಇನ್ನಷ್ಟು ಉತ್ತೇಜನ ನೀಡಲು ವಿಜಯಪುರ ಜಿಲ್ಲೆಯ ಆಲಮೇಲದಲ್ಲಿ ತೋಟಗಾರಿಕೆ ಕಾಲೇಜನ್ನು ಸ್ಥಾಪಿಸಲಾಗುವುದು.

## ರೇಷ್ಮೆ

50. ಏಷ್ಯಾದಲ್ಲಿಯೇ ಅತಿ ಹೆಚ್ಚು ರೇಷ್ಮೆಗೂಡು ಮಾರಾಟ ವಹಿವಾಟು ನಡೆಸುವ ರಾಮನಗರ ಮತ್ತು ಶಿಡ್ಲಘಟ್ಟದಲ್ಲಿರುವ ರೇಷ್ಮೆ ಮಾರುಕಟ್ಟೆಗಳನ್ನು ಮೊದಲನೇ ಹಂತದಲ್ಲಿ 150 ಕೋಟಿ ರೂ. ವೆಚ್ಚದಲ್ಲಿ ಹೈ–ಟೆಕ್ ಮಾರುಕಟ್ಟೆಗಳನ್ನಾಗಿ ಅಭಿವೃದ್ಧಿಪಡಿಸಲು ಈಗಾಗಲೇ ಕ್ರಮವಹಿಸಲಾಗಿದೆ. ಕಾಮಗಾರಿಗಳನ್ನು ಶೀಘ್ರದಲ್ಲಿಯೇ ಪೂರ್ಣಗೊಳಿಸಿ 250 ಕೋಟಿ ರೂ. ವೆಚ್ಚದಲ್ಲಿ ಎರಡನೇ ಹಂತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

51. ರೇಷ್ಮೆ ನೂಲು ಬಿಚ್ಚಾಣಿಕೆದಾರರು ಉತ್ಪಾದಿಸಿದ ಕಚ್ಚಾ ರೇಷ್ಮೆಗೆ ಪ್ರೋತ್ಸಾಹಧನವನ್ನು ನೀಡಲು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ

ನಿಗಮದ ಸಹಯೋಗದೊಂದಿಗೆ ವಾರ್ಷಿಕ 12 ಕೋಟಿ ರೂ. ಒದಗಿಸಲಾಗುವುದು.

52. ಬೈವೋಲ್ಟೀನ್ ರೇಷ್ಮೆಗೂಡುಗಳಿಗೆ ಪ್ರಸ್ತುತ ನೀಡುತ್ತಿರುವ ಪ್ರೋತ್ಸಾಹಧನವನ್ನು ಪ್ರತಿ ಕಿಲೋಗೆ 10 ರೂ.ನಿಂದ 30 ರೂ.ಗೆ ಹೆಚ್ಚಿಸಲಾಗುವುದು.

## ಪಶುಸಂಗೋಪನೆ

53. ಈ ಆಯವ್ಯಯದಲ್ಲಿ ಘೋಷಿಸಲಾದ ಕರ್ನಾಟಕ ರೈತ ಸಮೃದ್ಧಿ ಯೋಜನೆಯೊಂದಿಗೆ ಸಂಯೋಜಿಸಿ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸಲಾಗುವುದು;

- ಅಮೃತ ಸ್ವಾಭಿಮಾನಿ ಕುರಿಗಾಹಿ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿಯೂ ಮುಂದುವರೆಸಿ 10,000 ಫಲಾನುಭವಿಗಳಿಗೆ ಸಹಾಯಧನ ನೀಡಲಾಗುವುದು.
- ಅಮೃತ ಮಹಲ್/ ಹಳ್ಳಿಕಾರ್/ ಖಿಲಾರಿ ರಾಸುಗಳನ್ನು ಸಂವರ್ಧನೆ ಮಾಡಿ ಉತ್ಕೃಷ್ಟ ಕರುಗಳನ್ನು ಒದಗಿಸಲಾಗುವುದು.
- ರೈತ ಮಹಿಳೆಯರಲ್ಲಿ ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು ಹಸು/ಎಮ್ಮೆ ಖರೀದಿಗೆ ಪಡೆಯುವ ಸಾಲವನ್ನು ಸಕಾಲದಲ್ಲಿ

ಮರುಪಾವತಿ ಮಾಡುವ ಮಹಿಳೆಯರಿಗೆ ರಾಜ್ಯ ಸರ್ಕಾರದಿಂದಲೇ ಶೇ.6ರ ಬಡ್ಡಿ ಸಹಾಯಧನ ನೀಡಲಾಗುವುದು.

- ಹಂದಿ ಮತ್ತು ಕೋಳಿ ಸಾಕಾಣಿಕೆಯನ್ನು ಪ್ರೋತ್ಸಾಹಿಸಲು ಆಸಕ್ತ ರೈತರಿಗೆ ತರಬೇತಿ ನೀಡುವ ಮೂಲಕ ರೈತರ ಆದಾಯ ಹೆಚ್ಚಿಸಲಾಗುವುದು.

54. ಜಿಲ್ಲಾ ಹಂತದಲ್ಲಿರುವ ತಜ್ಞ ಪಶುವೈದ್ಯಕೀಯ ಪಾಲಿಕ್ಲಿನಿಕ್‌ಗಳನ್ನು ತಾಲ್ಲೂಕು ಹಂತಕ್ಕೆ ವಿಸ್ತರಿಸಲು ಕ್ರಮವಹಿಸಲಾಗುವುದು. ಪ್ರಥಮ ಹಂತದಲ್ಲಿ ರಾಜ್ಯದ ಆಯ್ದ 20 ತಾಲ್ಲೂಕುಗಳ ಪಶು ಆಸ್ಪತ್ರೆಗಳನ್ನು ಪಾಲಿಕ್ಲಿನಿಕ್‌ಗಳನ್ನಾಗಿ ಮೇಲ್ದರ್ಜೆಗೇರಿಸಲು 10 ಕೋಟಿ ರೂ. ಒದಗಿಸಲಾಗುವುದು.

55. ಬಾಡಿಗೆ ಮತ್ತು ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 200 ಪಶುವೈದ್ಯ ಸಂಸ್ಥೆಗಳಿಗೆ 100 ಕೋಟಿ ರೂ. ವೆಚ್ಚದಲ್ಲಿ ನೂತನ ಕಟ್ಟಡಗಳನ್ನು ನಿರ್ಮಿಸಲಾಗುವುದು.

56. ರಾಜ್ಯದಲ್ಲಿ ಪರಂಪರಾಗತವಾಗಿ ಕುರಿ/ ಮೇಕೆ ಸಾಕಾಣಿಕೆಯನ್ನು ವಲಸೆ ಮುಖಾಂತರ ಕೈಗೊಳ್ಳುತ್ತಿರುವ ಕುರಿಗಾರರ ಹಿತರಕ್ಷಣೆಗಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು:

- ವಲಸೆ ಕುರಿಗಾಹಿಗಳ ಮತ್ತು ಸ್ವತ್ತುಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆ ಜಾರಿಗೊಳಿಸಲಾಗುವುದು.
- ಸಂಚಾರಿ ಕುರಿಗಾಹಿಗಳು ಇರುವ ಜಾಗದಲ್ಲೇ ಅವರ ಕುರಿ, ಮೇಕೆಗಳಿಗೆ ಸರ್ಕಾರಿ ವೈದ್ಯರಿಂದ ಲಸಿಕೆ ಹಾಕಲಾಗುವುದು.
- ಸಂಚಾರಿ ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು.
- ಸಂಚಾರಿ ಕುರಿಗಾಹಿಗಳ ಮಕ್ಕಳಿಗೆ ಸರ್ಕಾರಿ ವಸತಿ ಶಾಲೆಗಳಲ್ಲಿ ಪ್ರವೇಶಕ್ಕೆ ಆದ್ಯತೆ ನೀಡಿ ವಿದ್ಯಾರ್ಥಿ ವೇತನ ನೀಡಲಾಗುವುದು.

57. ಪುತ್ತೂರು ಪಶುವೈದ್ಯಕೀಯ ಕಾಲೇಜಿನ ಕಾಮಗಾರಿಗಳು ಮುಕ್ತಾಯದ ಹಂತದಲ್ಲಿದ್ದು, ಪ್ರಸಕ್ತ ಸಾಲಿನಲ್ಲಿ ಕಾಲೇಜನ್ನು ಕಾರ್ಯಾರಂಭ ಮಾಡಲಾಗುವುದು.

## ಮೀನುಗಾರಿಕೆ

58. ಮೀನುಗಾರಿಕೆ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಮುಂದಿನ ವರ್ಷಗಳಲ್ಲಿ 3,000 ಕೋಟಿ ರೂ.ಗಳಷ್ಟು ಬೃಹತ್ ಗಾತ್ರದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು;

- ಹೊನ್ನಾವರ ತಾಲ್ಲೂಕಿನ ಮಂಕಿ/ ಕಾಸರಕೋಡದಲ್ಲಿ ಮೀನುಗಾರಿಕೆ ಸಂಶೋಧನಾ ಕೇಂದ್ರ ಸ್ಥಾಪನೆ.

- ಭದ್ರಾವತಿಯಲ್ಲಿ ಅತ್ಯಾಧುನಿಕ ಮೀನು ಮಾರುಕಟ್ಟೆ ಸ್ಥಾಪನೆ.
- ಆಕ್ವಾ ಪಾರ್ಕ್‌ಗಳ ಸ್ಥಾಪನೆ.
- ಭಟ್ಕಳ ತಾಲ್ಲೂಕಿನ ಮುರುಡೇಶ್ವರದಲ್ಲಿ ಸುಸಜ್ಜಿತ ಮೀನುಗಾರಿಕೆ ಹೊರ ಬಂದರು ನಿರ್ಮಾಣ.
- ವಿಜಯಪುರದ ಆಲಮಟ್ಟಿಯಲ್ಲಿ ಒಳನಾಡು ಮೀನುಗಾರಿಕೆ ಕೌಶಲ್ಯಾಭಿವೃದ್ಧಿ ಕೇಂದ್ರ ಸ್ಥಾಪನೆ.

59. ಮತ್ಸ್ಯ ಆಶಾಕಿರಣ ಯೋಜನೆಯಡಿ ಮೀನುಗಾರಿಕೆ ನಿಷೇಧದ ಅವಧಿಯಲ್ಲಿ ಕರಾವಳಿಯ ಮೀನುಗಾರರಿಗೆ ನೀಡುತ್ತಿರುವ ಪರಿಹಾರ ಮೊತ್ತದ ರಾಜ್ಯದ ಪಾಲನ್ನು 1,500 ರೂ.ಗಳಿಂದ 3,000 ರೂ.ಗಳಿಗೆ ಹೆಚ್ಚಿಸಲಾಗುವುದು.

60. ಸಮುದ್ರ ಮೀನುಗಾರಿಕೆಗೆ ತೆರಳಿದಾಗ ಅಪಘಾತ ಅಥವಾ ಅನಾರೋಗ್ಯಕ್ಕೆ ಒಳಗಾಗುವ ಮೀನುಗಾರರನ್ನು ತ್ವರಿತವಾಗಿ ದಡಕ್ಕೆ ತರಲು ರಾಜ್ಯದಲ್ಲಿ ಪ್ರಪ್ರಥಮ ಸಮುದ್ರ ಆಂಬುಲೆನ್ಸ್ ಅನ್ನು 7 ಕೋಟಿ ರೂ. ವೆಚ್ಚದಲ್ಲಿ ಖರೀದಿಸಲಾಗುವುದು.

61. 2024–25ನೇ ಸಾಲಿನಲ್ಲಿ 10,000 ವಸತಿರಹಿತ ಮೀನುಗಾರರಿಗೆ ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲಾಗುವುದು.

62. ರಾಜ್ಯದಲ್ಲಿನ 16 ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣವನ್ನು ನಬಾರ್ಡ್ ಸಹಯೋಗದೊಂದಿಗೆ 20 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುವುದು.

63. ಚಿತ್ರದುರ್ಗ, ಹೊಳಲ್ಕೆರೆ ಮತ್ತು ಹೊಸದುರ್ಗ ತಾಲ್ಲೂಕುಗಳ ಗಣಿಬಾಧಿತ ಪ್ರದೇಶದಲ್ಲಿ ಮೀನುಗಾರಿಕೆಯನ್ನು ಕೈಗೊಳ್ಳಲು 6 ಕೋಟಿ ರೂ. ವೆಚ್ಚ ಮಾಡಲಾಗುವುದು.

## ಸಹಕಾರ

64. ಗ್ರಾಮೀಣ ಆರ್ಥಿಕತೆಯ ಜೀವನಾಡಿಯಾಗಿರುವ ಸಹಕಾರ ವಲಯವನ್ನು ಬಲಪಡಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ. 2023–24ನೇ ಸಾಲಿನಲ್ಲಿ ಬಡ್ಡಿ ರಹಿತ ಅಲ್ಪಾವಧಿ ಸಾಲವನ್ನು 3 ಲಕ್ಷ ರೂ.ನಿಂದ 5 ಲಕ್ಷ ರೂ.ಗಳಿಗೆ ಹಾಗೂ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲವನ್ನು ಶೇ.3ರ ಬಡ್ಡಿ ದರದಲ್ಲಿ 10 ಲಕ್ಷ ರೂ.ನಿಂದ 15 ಲಕ್ಷ ರೂ.ಗಳಿಗೆ ಏರಿಸುವ ಮಹತ್ತರ ಕ್ರಮ ತೆಗೆದುಕೊಂಡಿದೆ. ಪ್ರಸಕ್ತ ಸಾಲಿನಲ್ಲಿ ರಾಜ್ಯದ 36 ಲಕ್ಷಕ್ಕಿಂತ ಹೆಚ್ಚಿನ ರೈತರಿಗೆ 27,000 ಕೋಟಿ ರೂ.ಗಳಷ್ಟು ದಾಖಲೆಯ ಸಾಲಗಳನ್ನು ವಿತರಿಸುವ ಗುರಿ ಹೊಂದಲಾಗಿದೆ.

65. ಸಹಕಾರಿ ಬ್ಯಾಂಕುಗಳ ಆರ್ಥಿಕ ಸ್ಥಿರತೆಯನ್ನು ಕಾಪಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು;

- ನಮ್ಮ ಸರ್ಕಾರದ ಹಿಂದಿನ ಅವಧಿಯಲ್ಲಿ 50,000 ರೂ. ವರೆಗಿನ ರೈತರ ಬೆಳೆ ಸಾಲ ಮನ್ನಾ ಯೋಜನೆಯಡಿ 21 ಲಕ್ಷ ರೈತರಿಗೆ 7,631 ಕೋಟಿ ರೂ. ಬೆಳೆ ಸಾಲ ಮನ್ನಾ ಮಾಡಲಾಗಿತ್ತು. ಈ ಯೋಜನೆಯಡಿಯಲ್ಲಿ ಡಿಸಿಸಿ ಬ್ಯಾಂಕುಗಳಿಗೆ ಸುಮಾರು 132 ಕೋಟಿ ರೂ. ಬಿಡುಗಡೆಯಾಗದ ಪರಿಣಾಮವಾಗಿ ಬ್ಯಾಂಕುಗಳು ಆರ್ಥಿಕ ಸಂಕಷ್ಟಕ್ಕೆ ಒಳಗಾಗಬೇಕಾಯಿತು. ಆದ್ದರಿಂದ, ಡಿಸಿಸಿ ಬ್ಯಾಂಕುಗಳಿಗೆ ಬಾಕಿ ಇರುವ 132 ಕೋಟಿ ರೂ. ಮೊತ್ತವನ್ನು ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ.
- ಡಿಸಿಸಿ ಮತ್ತು ಪಿಕಾರ್ಡ್ ಬ್ಯಾಂಕುಗಳ ಮಧ್ಯಮಾವಧಿ ಮತ್ತು ದೀರ್ಘಾವಧಿ ಸುಸ್ತಿ ಸಾಲಗಳ ಬಡ್ಡಿ ಮನ್ನಾ ಮಾಡಲು ನಮ್ಮ ಸರ್ಕಾರ ತೀರ್ಮಾನಿಸಿದ್ದು, ಇದರಿಂದ ಸುಮಾರು 57,000 ರೈತರಿಗೆ ಅನುಕೂಲವಾಗಲಿದೆ. ಇದರಿಂದ ಡಿಸಿಸಿ/ಪಿಕಾರ್ಡ್ ಬ್ಯಾಂಕುಗಳಿಗೆ 496 ಕೋಟಿ ರೂ.ಗಳಷ್ಟು ಸಾಲ ಮರುಪಾವತಿಯಾಗುವ ನಿರೀಕ್ಷೆಯಿರುವುದರಿಂದ ಬ್ಯಾಂಕುಗಳ ಆರ್ಥಿಕ ಪರಿಸ್ಥಿತಿಯಲ್ಲಿ ಗಣನೀಯ ಸುಧಾರಣೆಯಾಗಲಿದೆ.

ಈ ಉದ್ದೇಶಕ್ಕಾಗಿ 450 ಕೋಟಿ ರೂ. ಅನುದಾನ ಒದಗಿಸಲಾಗುವುದು.

66. ಕರ್ನಾಟಕ ಕೃಷಿ ಬೆಲೆ ಆಯೋಗವು ತನ್ನ ವರದಿಯಲ್ಲಿ 26 ಬೆಳೆಗಳನ್ನು ಕರ್ನಾಟಕದಲ್ಲಿ ಪ್ರಮುಖವಾದವು ಎಂದು ಗುರುತಿಸಿದ್ದು, ಇವುಗಳಲ್ಲಿ 16ಕ್ಕೆ ಮಾತ್ರ ಕೇಂದ್ರ ಸರ್ಕಾರ ಕನಿಷ್ಠ ಬೆಂಬಲ ಬೆಲೆ ಘೋಷಿಸುತ್ತಿದೆ. ಆದ್ದರಿಂದ ಕರ್ನಾಟಕ ರಾಜ್ಯದ ಇತರ ಪ್ರಮುಖ ಬೆಳೆಗಳಾದ ಅಡಿಕೆ, ಈರುಳ್ಳಿ, ದ್ರಾಕ್ಷಿ, ಮಾವು, ಬಾಳೆ ಮತ್ತು ಇತರ ತೋಟಗಾರಿಕಾ ಬೆಳೆಗಳಿಗೂ ಕನಿಷ್ಠ ಬೆಂಬಲ ಬೆಲೆ ಘೋಷಿಸುವಂತೆ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಲಾಗುವುದು.

67. ಕೃಷಿ ತಜ್ಞ ಎಂ.ಎಸ್.ಸ್ವಾಮಿನಾಥನ್ ಅವರಿಗೆ ಭಾರತ ರತ್ನ ನೀಡಿರುವುದು ಸಂತೋಷದ ವಿಷಯ. ಅವರ ಅಧ್ಯಕ್ಷತೆಯ ಸಮಿತಿ ವರದಿ ಶಿಫಾರಸು ಮಾಡಿದಂತೆ ಕನಿಷ್ಠ ಬೆಂಬಲ ಬೆಲೆಯನ್ನು ವ್ಯವಸಾಯಕ್ಕೆ ತಗಲುವ ವೆಚ್ಚ ಮತ್ತು ಶೇ.50 ರಷ್ಟು ಲಾಭಾಂಶ ಆಧಾರದಡಿ ನಿಗದಿ ಮಾಡುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು.

68. ಮಾಧ್ಯಮಿಕ, ಫೆಡರಲ್ ಹಾಗೂ ಅಪೆಕ್ಸ್ ಸಹಕಾರ ಸಂಘಗಳ ಆಡಳಿತ ಮಂಡಳಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ

ಹಾಗೂ ಮಹಿಳೆಯರಿಗೆ ಮೀಸಲಾತಿ ತರಲು ಅಧಿನಿಯಮಗಳಿಗೆ ತಿದ್ದುಪಡಿ ತರಲಾಗುವುದು.

69. ಕೃಷಿ ಉತ್ಪನ್ನ ಸಂಸ್ಕರಣೆ, ಮಾರುಕಟ್ಟೆ ಸಂಪರ್ಕ ಮತ್ತು ಮೌಲ್ಯವರ್ಧನೆಯಲ್ಲಿಯೂ ಸಹಕಾರ ವಲಯವು ಪ್ರಮುಖ ಪಾತ್ರ ವಹಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕೃಷಿ ಮಾರಾಟ ಇಲಾಖೆಯ ಮೂಲಕ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು;

- ಯಲಬುರ್ಗಾ, ಬಸವನಬಾಗೇವಾಡಿ, ರಾಣೆಬೆನ್ನೂರು, ಬಳ್ಳಾರಿ ಹಾಗೂ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಒಟ್ಟು 50 ಕೋಟಿ ರೂ. ವೆಚ್ಚದಲ್ಲಿ ಹಾಗೂ ರಾಯಚೂರು ಮತ್ತು ಮೈಸೂರಿನಲ್ಲಿ ತಲಾ 40 ಕೋಟಿ ರೂ. ವೆಚ್ಚದಲ್ಲಿ ಶೀತಲಗೃಹಗಳನ್ನು ನಿರ್ಮಿಸಲಾಗುವುದು.
- ರಾಯಚೂರಿನಲ್ಲಿ ಸುಸಜ್ಜಿತ ಒಣಮೆಣಸಿನಕಾಯಿ ಮಾರುಕಟ್ಟೆಯನ್ನು ಅಂದಾಜು 25 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು ಮತ್ತು ರಾಣೆಬೆನ್ನೂರಿನಲ್ಲಿ 112 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ 222 ಎಕರೆ ಮೆಗಾ ಮಾರುಕಟ್ಟೆ ಪ್ರಾಂಗಣದಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆಯನ್ನು ಪ್ರಾರಂಭಿಸಲಾಗುವುದು.

- ಮಂಗಳೂರಿನ ನೆಲ್ಲಿಕಾಯಿ ರಸ್ತೆಯಲ್ಲಿರುವ ಮಾರುಕಟ್ಟೆಯಲ್ಲಿ 35 ಕೋಟಿ ರೂ. ವೆಚ್ಚದಲ್ಲಿ ಅತ್ಯಾಧುನಿಕ ಕೃಷಿ ಸಂಕೀರ್ಣವನ್ನು ಸ್ಥಾಪಿಸಲಾಗುವುದು.
- ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಎಲ್ಲಾ ಕಾರ್ಯ ಚಟುವಟಿಕೆಗಳನ್ನು 10 ಕೋಟಿ ರೂ. ವೆಚ್ಚದಲ್ಲಿ ಡಿಜಿಟೈಜ್ ಮಾಡಲಾಗುವುದು.
- ಬೆಂಗಳೂರಿನ ದಾಸನಪುರ, ಮೈಸೂರು, ಹುಬ್ಬಳ್ಳಿ, ಬಳ್ಳಾರಿ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಳಗಾವಿಯ ಮಾರುಕಟ್ಟೆಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ Bio CNG Plant ಸ್ಥಾಪಿಸುವ ಮೂಲಕ ಶೂನ್ಯ ತ್ಯಾಜ್ಯ ತರಕಾರಿ ಮಾರುಕಟ್ಟೆಗಳನ್ನಾಗಿ ಪರಿವರ್ತಿಸಲಾಗುವುದು.
- ಎ.ಪಿ.ಎಂ.ಸಿ ಗಳಲ್ಲಿ ವಿದ್ಯುತ್ ಚಾಲಿತ ವಾಹನಗಳ Charging ಕೇಂದ್ರಗಳನ್ನು ಹಾಗೂ ಪೆಟ್ರೋಲ್ ಬಂಕ್‌ಗಳನ್ನು PPP ಮಾದರಿಯಲ್ಲಿ ಸ್ಥಾಪಿಸಲು ಒತ್ತು ನೀಡಲಾಗುವುದು.

70. ಎ.ಪಿ.ಎಂ.ಸಿ ಗಳನ್ನು ಬಲಪಡಿಸುವ ಮೂಲಕ ರೈತರಿಗೆ ತಮ್ಮ ಬೆಳೆಗಳಿಗೆ ಉತ್ತಮ ಆದಾಯ ಗಳಿಸಲು ನೆರವಾಗಲು ಈ ಕೆಳಕಂಡ ಕ್ರಮಗಳನ್ನು ಪ್ರಸ್ತಾಪಿಸಿದೆ;

- ರೈತ ವಿರೋಧಿ ಎ.ಪಿ.ಎಂ.ಸಿ ತಿದ್ದುಪಡಿ ಕಾಯ್ದೆಯನ್ನು ಹಿಂಪಡೆಯುವ ವಿಧೇಯಕಕ್ಕೆ ವಿಧಾನ ಸಭೆಯ ಅಂಗೀಕಾರ ಪಡೆಯಲಾಗಿದ್ದು, ವಿಧಾನ ಪರಿಷತ್ತಿನಲ್ಲಿ ಸದನ ಸಮಿತಿಯ ಪರಿಶೀಲನೆಗೆ ಒಪ್ಪಿಸಲಾಗಿದೆ. ಸದರಿ ವಿಧೇಯಕಕ್ಕೆ ಶೀಘ್ರದಲ್ಲಿಯೇ ಅಂಗೀಕಾರ ಪಡೆಯಲು ಕ್ರಮವಹಿಸಲಾಗುವುದು.
- ರಾಜ್ಯದಲ್ಲಿ ಆರ್ಥಿಕವಾಗಿ ದುರ್ಬಲವಾಗಿರುವ ಮಾರುಕಟ್ಟೆ ಸಮಿತಿಗಳಿಗೆ ಅನುದಾನ ಒದಗಿಸಲು ಆರ್ಥಿಕವಾಗಿ ಸುಸ್ಥಿತಿಯಲ್ಲಿರುವ ಸಮಿತಿಗಳಿಂದ ವಂತಿಗೆಯನ್ನು ಪಡೆಯುವ ಮೂಲಕ ಮಾರುಕಟ್ಟೆ ಅಭಿವೃದ್ಧಿ ಸಹಾಯ ನಿಧಿ ಸ್ಥಾಪಿಸಲು ಕಾನೂನು ರಚಿಸಲಾಗುವುದು.
- ಬೆಂಬಲ ಬೆಲೆ ಯೋಜನೆ ಜಾರಿಗೆ ಶಾಸನಾತ್ಮಕ ಬೆಂಬಲ ನೀಡಲು ಕ್ರಮವಹಿಸಲಾಗುವುದು.

71. ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹಿತ ಕಾಯಲು ಮತ್ತು ತೂಕದಲ್ಲಾಗುವ ಮೋಸ ತಡೆಗಟ್ಟಲು ಎಲ್ಲಾ ಸಕ್ಕರೆ ಕಾರ್ಖಾನೆಗಳ ಬಳಿ Weigh Bridge ಗಳನ್ನು ಎ.ಪಿ.ಎಂ.ಸಿ. ಗಳ ಮೂಲಕ ಸ್ಥಾಪಿಸಲಾಗುವುದು.

72. ಕರ್ನಾಟಕ ಉಗ್ರಾಣ ನಿಗಮವು ತೀವ್ರ ಹಣಕಾಸು ಹಾಗೂ ಆಡಳಿತಾತ್ಮಕ ಬಿಕ್ಕಟ್ಟು ಎದುರಿಸುತ್ತಿದ್ದು, ನಾವು ಅಧಿಕಾರಕ್ಕೆ ಬಂದ ನಂತರ 4.54 ಲಕ್ಷ ಮೆಟ್ರಿಕ್ ಟನ್ ಸಾಮರ್ಥ್ಯದ 76 ಗೋದಾಮುಗಳ

ನಿರ್ಮಾಣ ಪೂರ್ಣಗೊಳಿಸಲು 376 ಕೋಟಿ ರೂ. ಗಳ ವಿಶೇಷ ಪ್ಯಾಕೇಜ್ ಅನ್ನು ನೀಡಲಾಗಿದೆ.

73. ಕರ್ನಾಟಕ ರಾಜ್ಯ ಉಗ್ರಾಣ ನಿಗಮದಲ್ಲಿ ಬಳಕೆಯಾಗದೇ ಇರುವ ಉಗ್ರಾಣಗಳ ಸಾಮರ್ಥ್ಯ ಬಳಸಿ ಪಿಪಿಪಿ ಮಾದರಿಯಲ್ಲಿ ಶೀತಲಗೃಹಗಳನ್ನು ಸ್ಥಾಪಿಸಲಾಗುವುದು.

## ಜಲಸಂಪನ್ಮೂಲ

74. ಕಾವೇರಿ ಕಣಿವೆಯ ಮಹತ್ವಾಕಾಂಕ್ಷಿ ಯೋಜನೆಯಾದ ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ಅನುಷ್ಠಾನಕ್ಕಾಗಿ ಒಂದು ಪ್ರತ್ಯೇಕ ಯೋಜನಾ ವಿಭಾಗವನ್ನು ಹಾಗೂ 2 ಉಪ ವಿಭಾಗಗಳನ್ನು ಈಗಾಗಲೇ ಸ್ಥಾಪಿಸಲಾಗಿದೆ. ಈ ಯೋಜನೆಯಡಿ ಮುಳುಗಡೆಯಾಗುವ ಭೂಮಿಯನ್ನು ಗುರುತಿಸುವ ಸರ್ವೆ ಹಾಗೂ ಮರಗಳ ಎಣಿಕೆ ಪ್ರಕ್ರಿಯೆಯನ್ನು ಚಾಲನೆಗೊಳಿಸಿದ್ದು ಉಳಿದ ಅಗತ್ಯ ತೀರುವಳಿಗಳನ್ನು ಸಕ್ಷಮ ಪ್ರಾಧಿಕಾರಗಳಿಂದ ಪಡೆದು ಶೀಘ್ರವಾಗಿ ಪ್ರಾರಂಭಿಸಲು ಆದ್ಯತೆ ಮೇರೆಗೆ ಕ್ರಮವಹಿಸಲಾಗುವುದು.

75. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ದೊಡ್ಡನಗರದ ಬಳಿಯ ವಿತರಣಾ ತೊಟ್ಟಿಯವರೆಗೆ ಪೂರ್ವ

ಪರೀಕ್ಷಾರ್ಥವಾಗಿ (Pre–Commissioning Test) ನೀರು ಹರಿಸಿ ಚಾಲನೆಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಯೋಜನೆಯ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಗುರುತ್ವ ಕಾಲುವೆಗೆ ನೀರು ಹರಿಸಲಾಗುವುದರ ಜೊತೆ ಸಮತೋಲನಾ ಜಲಾಶಯದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

76. ಉತ್ತರ ಕರ್ನಾಟಕದ ಪ್ರಮುಖ ಯೋಜನೆಯಾಗಿರುವ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3 ಯೋಜನೆಯಡಿಯ ಉಪ ಯೋಜನೆಗಳನ್ನು ಪೂರ್ಣಗೊಳಿಸಲು ಹಾಗೂ ಇದರಡಿ ಭೂಸ್ವಾಧೀನ ಮತ್ತು ಪುನರ್ ವಸತಿ ಹಾಗೂ ಪುನರ್ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು. ಕೃಷ್ಣಾ ನ್ಯಾಯಾಧಿಕರಣ–2ರ ಅಂತಿಮ ತೀರ್ಪಿನ ಬಾಕಿಯಿರುವ ಗೆಜೆಟ್ ಅಧಿಸೂಚನೆ ಹೊರಡಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವುದರೊಂದಿಗೆ ಅಗತ್ಯವಿರುವ ಕಾನೂನಾತ್ಮಕ ಕ್ರಮಗಳನ್ನು ಮುಂದುವರೆಸಲಾಗುವುದು.

77. ಭದ್ರಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ತನ್ನ 2023–24ನೇ ಸಾಲಿನ ಆಯವ್ಯಯದಲ್ಲಿ 5,300 ಕೋಟಿ ರೂ. ಅನುದಾನ ಘೋಷಿಸಿಲಾಗಿತ್ತು. ಆದರೆ ಈವರೆಗೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. ಹಾಗೆಯೇ ಹಿಂದಿನ ರಾಜ್ಯ ಸರ್ಕಾರ ತನ್ನ ಆಯವ್ಯಯ ಘೋಷಣೆಯಲ್ಲಿ ಭದ್ರಾ ಮೇಲ್ದಂಡೆ

ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಮಾನ್ಯತೆ ನೀಡಲಾಗುತ್ತಿರುವುದರಿಂದ ಮಾನ್ಯ ಪ್ರಧಾನಮಂತ್ರಿಗಳಿಗೆ ಅಭಿನಂದನೆಗಳನ್ನು ತಿಳಿಸಲಾಗಿತ್ತು, ಆದರೆ ಈವರೆಗೆ ರಾಷ್ಟ್ರೀಯ ಯೋಜನೆಯಾಗಿ ಕೇಂದ್ರ ಸರ್ಕಾರವು ಘೋಷಿಸದೆ ಇರುವುದರಿಂದ ಇದು ಹುಸಿಯಾದ ಘೋಷಣೆಯಾಗಿದೆ. ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯಡಿ ರಾಜ್ಯ ಸರ್ಕಾರವು ಚಿತ್ರದುರ್ಗ ಜಿಲ್ಲೆಯ ಸುಮಾರು 75,000 ಎಕರೆ ನೀರಾವರಿ ಸಾಮರ್ಥ್ಯ ಕಲ್ಪಿಸಲು ಯೋಜಿಸಿದ್ದು, ಆಯವ್ಯಯದಲ್ಲಿ ಘೋಷಿಸಿದಂತೆ ಅನುದಾನವನ್ನು ಬಿಡುಗಡೆ ಮಾಡಿ ಯೋಜನೆಯನ್ನು ರೈತರಿಗೆ ತಲುಪಿಸಲು ಸಹಕಾರಿಯಾಗುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು.

78. ಕಳಸಾ ಮತ್ತು ಬಂಡೂರಾ ನಾಲಾ ತಿರುವು ಯೋಜನೆಗಳಡಿ 3.9 TMC ನೀರಿನ ಬಳಕೆಗಾಗಿ ವಿವರವಾದ ಯೋಜನಾ ವರದಿಗಳಿಗೆ ಕೇಂದ್ರ ಜಲ ಆಯೋಗದ ತೀರುವಳಿ ದೊರಕಿದ್ದು, ಪ್ರಸ್ತುತ ರಾಷ್ಟ್ರೀಯ ವನ್ಯಜೀವಿ ಮಂಡಳಿಯಿಂದ ಅರಣ್ಯ ತೀರುವಳಿ ನಿರೀಕ್ಷಿಸಿ ರಾಜ್ಯ ಸರ್ಕಾರವು ಟೆಂಡರ್ ಪ್ರಕ್ರಿಯೆಯನ್ನು ಚಾಲನೆಗೊಳಿಸಲಾಗಿರುತ್ತದೆ. ಆದರೆ ಈ ನಡುವೆ ಕೇಂದ್ರ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿ ಸಭೆಯಲ್ಲಿ

ಅರಣ್ಯ ತೀರುವಳಿಯನ್ನು ಅನುಮೋದಿಸದೇ ಮುಂದೂಡಲಾಗಿರುತ್ತದೆ.

79. ತುಂಗಭದ್ರಾ ಜಲಾಶಯದಲ್ಲಿ ಹೂಳಿನ ಸಂಗ್ರಹಣೆಯಿಂದ ಉಂಟಾಗಿರುವ ನೀರು ಸಂಗ್ರಹಣೆ ಸಾಮರ್ಥ್ಯದ ಕೊರತೆ ನಿವಾರಿಸಲು ಜಲಾಶಯ ವ್ಯಾಪ್ತಿಯಲ್ಲಿನ ರೈತರ ಬಹುದಿನದ ಬೇಡಿಕೆಯಾದ ಕೊಪ್ಪಳ ಜಿಲ್ಲೆಯ ನವಲಿ ಬಳಿ ಸಮತೋಲನಾ ಜಲಾಶಯ ನಿರ್ಮಾಣ ಯೋಜನೆಯ 15,600 ಕೋಟಿ ರೂ. ಮೊತ್ತದ ವಿವರವಾದ ಯೋಜನಾ ವರದಿ ಸಿದ್ಧವಾಗಿದ್ದು, ಸದರಿ ಯೋಜನೆಯ ಅನುಷ್ಠಾನ ಸಂಬಂಧ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳೊಂದಿಗೆ ಸಮಾಲೋಚನೆ ಪ್ರಕ್ರಿಯೆ ಚಾಲನೆಗೊಳಿಸಿದ್ದು, ಯೋಜನೆ ಕಾರ್ಯಗತಗೊಳಿಸಲು ಆದ್ಯತೆ ನೀಡಲಾಗುವುದು.

80. ಪ್ರತಿಷ್ಠಿತ ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಯ ಪ್ರವಾಸೋದ್ಯಮ ಆಕರ್ಷಣೀಯ ಕೇಂದ್ರವನ್ನಾಗಿ ಉನ್ನತೀಕರಿಸುವ ಯೋಜನೆಯನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳಲಾಗುವುದು.

81. ಧಾರವಾಡದಲ್ಲಿರುವ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆಯನ್ನು (ವಾಲ್ಮಿ) ಪ್ರಸಕ್ತ ಸಾಲಿನಲ್ಲಿ Centre of Excellence in Water Management ಆಗಿ ಉನ್ನತೀಕರಿಸಲಾಗುವುದು.

82. ಪಾವಗಡ ಸೋಲಾರ್ ಪಾರ್ಕ್ ಮಾದರಿಯಲ್ಲಿ ಜಲಸಂಪನ್ಮೂಲ ಇಲಾಖೆಯ ಮಾಲೀಕತ್ವವಿರುವ ಜಮೀನಿನಲ್ಲಿ ಮತ್ತು ಜಲಾಶಯಗಳ ಹಿನ್ನೀರಿನಲ್ಲಿ ಸೂಕ್ತ ಮಾದರಿಯ ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸುವ ಯೋಜನೆಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳಲಾಗುವುದು.

83. ಪ್ರಗತಿಯಲ್ಲಿರುವ ಏತ ನೀರಾವರಿ ಯೋಜನೆಗಳಾದ ಬೂದಿಹಾಳ್–ಪೀರಾಪುರ ಹಂತ–1, ಶ್ರೀ ವೆಂಕಟೇಶ್ವರ ಹಾಗೂ ಕೆಂಪವಾಡ ಬಸವೇಶ್ವರ ಹಾಗೂ ಕೆರೆ ತುಂಬಿಸುವ ಯೋಜನೆಗಳಾದ ಮುಂಡಗೋಡ, ತುಪರೀಹಳ್ಳ, ಸಾಸಿವೆಹಳ್ಳಿ, ದೇವದುರ್ಗ ಮತ್ತು ಗುರುಮಿಠಕಲ್ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

84. ಪ್ರಗತಿಯಲ್ಲಿರುವ ಹೇಮಾವತಿ ಯೋಜನೆ ವೈನಾಲೆಯಡಿ 5.45 ಕಿ.ಮೀ ಉದ್ದದ ಹಾಗೂ ತುಮಕೂರು ಶಾಖಾ ನಾಲೆಯಡಿ 166.90 ಕಿ.ಮೀ. ಉದ್ದದ ನಾಲೆಯ ಆಧುನೀಕರಣ ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು. ಇದರಿಂದ ನೀರಿನ ಬಳಕೆಯ ದಕ್ಷತೆಯು ವೃದ್ಧಿಸಲಿದೆ.

85. ಕರ್ನಾಟಕ ನೀರಾವರಿ ನಿಗಮದಡಿ ಏತ ನೀರಾವರಿ ಯೋಜನೆಗಳಾದ ಕಲಬುರಗಿಯ ಯಡಳ್ಳಿ ಹಾಗೂ ತೆರ್ನಳ್ಳಿ, ಉಡುಪಿ ಜಿಲ್ಲೆಯ ಸ್ವರ್ಣ

ಹಾಗೂ ಸಿದ್ದಾಪುರ, ಬಾಗಲಕೋಟೆ ಜಿಲ್ಲೆಯ ಮೆಳ್ಳಿಗೇರಿ–ಹಲಗಲಿ, ಸಸಾಲಟ್ಟಿ–ಶಿವಲಿಂಗೇಶ್ವರ, ಶಿರೂರು, ಹನವಾಳ, ಬೆಳಗಾವಿಯ ಜಿಲ್ಲೆಯ ಅಥಣಿ–ಕೊಟ್ಟಲಗಿ–ಅಮ್ಮಾಜೇಶ್ವರಿ, ಶ್ರೀ ಚನ್ನವೃಷಭೇಂದ್ರ, ಮಹಾಲಕ್ಷ್ಮಿ, ಸತ್ತಿಗೇರಿ, ಮಾರ್ಕಂಡೇಯ, ಬೈಲಹೊಂಗಲ ವಿಧಾನಸಭಾ ಕ್ಷೇತ್ರದ ಹಳೆಯ ಏತ ನೀರಾವರಿ ಯೋಜನೆಗಳ ಪುನಶ್ಚೇತನ ಹಾಗೂ ಕೆರೆ ತುಂಬಿಸುವ ಯೋಜನೆಗಳಾದ ರಾಯಚೂರು ಜಿಲ್ಲೆಯ ಗುಂಜಳ್ಳಿ, ಕಲಬುರಗಿ ಜಿಲ್ಲೆಯ ಆಳಂದ, ಬೀದರ್ ಜಿಲ್ಲೆಯ ಔರಾದ್, ಬೆಳಗಾವಿ ಜಿಲ್ಲೆಯ ಅರಬಾವಿ, ಹಿರೆಬಾಗೇವಾಡಿ, ಸಂತಿ ಬಸ್ತವಾಡ, ಕಾಗವಾಡ, ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ, ಕಿರವತ್ತಿ, ಗದಗ ಜಿಲ್ಲೆಯ ಜಾಲವಾಡಗಿ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ 7,280 ಕೋಟಿ ರೂ. ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲಾಗುವುದು. ಪ್ರಸ್ತಾಪಿತ ಯೋಜನೆಗಳಿಂದ ಬಾಧಿತ ಅಚ್ಚುಕಟ್ಟು ಪ್ರದೇಶವೂ ಒಳಗೊಂಡಂತೆ 97,698 ಹೆಕ್ಟರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರೆಯಲಿದೆ.

86. ಕೃಷ್ಣಾ ಭಾಗ್ಯ ಜಲ ನಿಗಮದಡಿ ಏತ ನೀರಾವರಿ ಯೋಜನೆಗಳಾದ ಬಾಗಲಕೋಟೆ ಜಿಲ್ಲೆಯ ಕೆರೂರು, ವಿಜಯಪುರ ಜಿಲ್ಲೆಯ ಹೊರ್ತಿ–ರೇವಣಸಿದ್ದೇಶ್ವರ, ಚಿಮ್ಮಲಗಿ, ಮುಳವಾಡ, ಯಾದಗಿರಿ

ಜಿಲ್ಲೆಯ ಭೀಮಾ ಪ್ಲಾಂಕ್, ಪ್ರಸಕ್ತ ಸಾಲಿನಲ್ಲಿ 3,779 ಕೋಟಿ ರೂ. ಮೊತ್ತದಲ್ಲಿ ಅನುಷ್ಠಾನಗೊಳಿಸಲಾಗುವುದು. ಈ ಯೋಜನೆಗಳಿಂದ ಬಾಧಿತ ಅಚ್ಚುಕಟ್ಟು ಪ್ರದೇಶವೂ ಒಳಗೊಂಡಂತೆ 1,09,350 ಹೆಕ್ಟರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರೆಯಲಿದೆ.

87. ಕೊಪ್ಪಳ ಜಿಲ್ಲೆಯ ಯಲಬುರ್ಗಾ-ಕುಕನೂರು ತಾಲ್ಲೂಕಿನ 38 ಕೆರೆಗಳನ್ನು ಕುಡಿಯುವ ನೀರು ಹಾಗೂ ಅಂತರ ಜಲ ಅಭಿವೃದ್ಧಿಗಾಗಿ ಕೆರೆ ತುಂಬಿಸುವ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ 970 ಕೋಟಿ ರೂ. ಅಂದಾಜು ಮೊತ್ತದಲ್ಲಿ ಹಾಗೂ ರಾಯಚೂರು ಜಿಲ್ಲೆಯ ಮಸ್ಕಿ ತಾಲ್ಲೂಕಿನ ಪಾಮನಕಲ್ಲೂರು ಹಾಗೂ ಇತರ ಪ್ರದೇಶಗಳಿಗೆ ನಾರಾಯಣಪುರ ಬಲದಂಡೆ ಕಾಲುವೆಯಿಂದ ಅಂದಾಜು 990 ಕೋಟಿ ರೂ. ಮೊತ್ತದಲ್ಲಿ ನೀರಾವರಿ ಸೌಲಭ್ಯ ಕಲ್ಪಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು.

88. ಕಾವೇರಿ ನೀರಾವರಿ ನಿಗಮದಡಿ ವಿಶ್ವೇಶ್ವರಯ್ಯ ನಾಲಾ ಜಾಲದ ಹೆಬ್ಬಕವಾಡಿ, ನಿಡಘಟ್ಟ, ತುರುಗನೂರು, ಮಳವಳ್ಳಿ ತಾಲ್ಲೂಕಿನ ಮಾದವಮಂತ್ರಿ ನಾಲೆಗಳ ಹಾಗೂ ಮದ್ದೂರು ತಾಲ್ಲೂಕು ಕೆಮ್ಮಣ್ಣುನಾಲಾ ಆಧುನೀಕರಣ, ಹುಣಸೂರು ತಾಲ್ಲೂಕಿನ ಮರದೂರು, ಕನಕಪುರದ ಹೆಗ್ಗನೂರು ಕೆರೆ ತುಂಬಿಸುವ ಯೋಜನೆಗಳು, ಶ್ರೀರಂಗ ಕುಡಿಯುವ ನೀರು ಯೋಜನೆಗೆ ಪೈಪ್‌ಲೈನ್

ಮೂಲಕ ನೀರು ಒದಗಿಸುವ ಯೋಜನೆ, ವರುಣಾ ವಿಧಾನಸಭಾ ಕ್ಷೇತ್ರದಲ್ಲಿ ನಾಲೆಗಳ ಅಭಿವೃದ್ಧಿ, ಗುಬ್ಬಿಯ ಮಠದಹಳ್ಳಿ ಕುಡಿಯುವ ನೀರು ಯೋಜನೆ, ರಾಮನಗರದ ಬಳಿ ಅರ್ಕಾವತಿ River Front Development ಯೋಜನೆಗಳನ್ನು ಅಂದಾಜು 2,000 ಕೋಟಿ ರೂ. ಮೊತ್ತದಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು.

89. ಕಲಬುರಗಿ ನಗರಕ್ಕೆ ಕುಡಿಯುವ ನೀರು ಸರಬರಾಜಿಗಾಗಿ ಬೆಣ್ಣೆತೊರಾ ಜಲಾಶಯಕ್ಕೆ ಭೀಮಾ ಮತ್ತು ಕಾಗಿಣಾ ನದಿಗಳಿಂದ ನೀರು ತುಂಬಿಸುವ 365 ಕೋಟಿ ರೂ. ಮೊತ್ತದ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು.

90. ಧಾರವಾಡ ಜಿಲ್ಲೆಯಲ್ಲಿ ಬೆಣ್ಣೆಹಳ್ಳದಿಂದ ಪ್ರವಾಹ ಪೀಡಿತ ಗ್ರಾಮಗಳಿಗೆ ತಡೆಗೋಡೆ ನಿರ್ಮಾಣ ಮಾಡಲು ರಾಜ್ಯ ವಿಪತ್ತು ಉಪಶಮನ ನಿಧಿಯಿಂದ (SDMF) ಯೋಜನೆ ರೂಪಿಸಲಾಗುವುದು.

## ಸಣ್ಣ ನೀರಾವರಿ

91. ಮಳೆಯ ಕೊರತೆಯಿಂದಾಗಿ ಸಣ್ಣ ನೀರಾವರಿ ಕೆರೆಗಳ ವಿನ್ಯಾಸಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರು ದೊರೆಯುತ್ತಿಲ್ಲ. ಅಲ್ಲದೆ, ಕುಡಿಯುವ ನೀರಿಗೂ ತೊಂದರೆಯಾಗುತ್ತಿದೆ. ಇಂತಹ ಕೆರೆಗಳನ್ನು ಸಮೀಪದ ಜೀವನದಿಗಳಿಂದ ತುಂಬಿಸಲು ಯೋಜನೆಗಳನ್ನು ಕೈಗೊಳ್ಳಲು

ಗಣನೀಯ ಪ್ರಮಾಣದ ವೆಚ್ಚ ಮಾಡಲಾಗಿದೆ. ಈ ಯೋಜನೆಗಳಿಂದಾಗಿ ಸ್ಥಳೀಯ ಅಂತರ್ಜಲ ಮಟ್ಟದ ವಸ್ತುಸ್ಥಿತಿ, ಸುತ್ತಲಿನ ರೈತರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗಳ ಆಧಾರದಲ್ಲಿ ಮೌಲ್ಯಮಾಪನ ಕಾರ್ಯ ಕೈಗೊಳ್ಳಲಾಗುವುದು.

92. ಕುಡಿಯುವ ನೀರು, ಕೃಷಿ ಹಾಗೂ ಕೈಗಾರಿಕೆಗಳಿಗೆ ನೀರನ್ನು ಸಮರ್ಪಕವಾಗಿ ಪೂರೈಸಲು ಕೆರೆಗಳ ಅಭಿವೃದ್ಧಿ, ಚೆಕ್ ಡ್ಯಾಂ ಮತ್ತು ಬ್ರಿಡ್ಜ್ ಕಂ ಬ್ಯಾರೇಜ್ ನಂತಹ 115 ಕಾಮಗಾರಿಗಳನ್ನು 200 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು.

93. ಪ್ರಗತಿಯಲ್ಲಿರುವ 455 ಕೋಟಿ ರೂ. ಮೊತ್ತದ ಕೆ.ಸಿ ವ್ಯಾಲಿ 2ನೇ ಹಂತದ ಉದ್ದೇಶಿತ 272 ಕೆರೆ ತುಂಬಿಸುವ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

94. ರಾಯಚೂರು ಜಿಲ್ಲೆಯ ಚಿಕ್ಕಲಪರ್ವಿ ಹತ್ತಿರ ತುಂಗಭದ್ರಾ ನದಿಗೆ ಬಿ.ಸಿ.ಬಿ ನಿರ್ಮಾಣ, ಮಾನ್ವಿ ತಾಲ್ಲೂಕಿನ ಕುರ್ಡಿ ಕೆರೆ ತುಂಬಿಸುವ ಯೋಜನೆ, ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲ್ಲೂಕಿನ ಕೆಸ್ತೂರು ಕೊಪ್ಪಲು ಏತ ನೀರಾವರಿ, ನಂಜನಗೂಡು ತಾಲ್ಲೂಕಿನ ದೇವನೂರು ಗ್ರಾಮದ ಬಳಿ ಏತ ನೀರಾವರಿ, ಚಿತ್ತಾಪುರ ತಾಲ್ಲೂಕಿನ ಕೆರೆ ತುಂಬಿಸುವ ಯೋಜನೆ, ಸೊರಬ ತಾಲ್ಲೂಕಿನ ವರದಾ ನದಿಗೆ

ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್, ಜೇವರ್ಗಿ ತಾಲ್ಲೂಕಿನಲ್ಲಿ ಬಾಂದಾರು ಹಾಗೂ ಕೆರೆ ತುಂಬಿಸುವ ಕಾಮಗಾರಿ ಮತ್ತು ಕುಕನೂರು ಹಾಗೂ ಯಲಬುರ್ಗಾ ತಾಲ್ಲೂಕಿನಲ್ಲಿ ಕೆರೆ/ ಬ್ರಿಡ್ಜ್ ಕಂ ಬ್ಯಾರೇಜ್ ಯೋಜನೆಗಳನ್ನು 850 ಕೋಟಿ ರೂ. ಅಂದಾಜು ಮೊತ್ತದಲ್ಲಿ ಕೈಗೆತ್ತಿಕೊಳ್ಳಲಾಗುವುದು.

## ಶಾಲಾ ಶಿಕ್ಷಣ ಮತ್ತು ಸಾಕ್ಷರತೆ

**ಶಾಲೆಯ ಮಕ್ಕಳಿಗೆ ನಮ್ಮ ರಾಷ್ಟ್ರಧರ್ಮ ಯಾವುದು ಎಂದು ಕೇಳಿದರೆ, ಭಾವೈಕ್ಯತೆಯೇ, ಸಾಮರಸ್ಯವೇ, ಪ್ರಜಾಪ್ರಭುತ್ವವೇ ನಮ್ಮ ರಾಷ್ಟ್ರಧರ್ಮ ಎಂದು ಹೇಳಿ. ಸಂವಿಧಾನವೇ ರಾಷ್ಟ್ರೀಯ ಗ್ರಂಥ ಎಂದು ನಮ್ಮ ಮಕ್ಕಳಿಗೆ ಹೇಳಿಕೊಡಿ.**

**– ಪದ್ಮಶ್ರೀ ಇಬ್ರಾಹಿಂ ಸುತಾರ**

95. ರಾಜ್ಯದ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳನ್ನು ನೀಡಲು ನಮ್ಮ ಸರ್ಕಾರ ಹೆಚ್ಚಿನ ಪ್ರಾಮುಖ್ಯತೆ ನೀಡಿದ್ದು, 2023–24ನೇ ಸಾಲಿನಲ್ಲಿ 600 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿರುತ್ತದೆ. 2024–25ನೇ ಸಾಲಿನಲ್ಲಿ ಶಾಲಾ/ಕಾಲೇಜುಗಳ ಕೊಠಡಿ ನಿರ್ಮಾಣ, ದುರಸ್ತಿ, ಶೌಚಾಲಯ ನಿರ್ಮಾಣದಂತಹ ಕಾಮಗಾರಿಗಳನ್ನು 850 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುವುದು.

96. ಸರ್ಕಾರಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ ಮತ್ತು ಅಗತ್ಯ ಮೂಲಸೌಕರ್ಯ ಒದಗಿಸಲು ನಮ್ಮ ಸರ್ಕಾರ ವಿಶೇಷ ಆಸಕ್ತಿ ವಹಿಸಿದೆ. ಸರ್ಕಾರಿ ಶಾಲೆಯ ಮಕ್ಕಳೂ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯಶಸ್ವಿಯಾಗಬೇಕೆಂಬ ಆಶಯದೊಂದಿಗೆ ನಮ್ಮ ಸರ್ಕಾರ ಕಾರ್ಯನಿರ್ವಹಿಸುತ್ತಿದೆ. ಈ ನಿಟ್ಟಿನಲ್ಲಿ ಕೆಳಕಂಡ ಉಪಕ್ರಮಗಳನ್ನು ಕೈಗೊಳ್ಳಲಾಗುವುದು;

- ಪೂರ್ವ ಪ್ರಾಥಮಿಕ ಹಂತದಿಂದ ಪದವಿ ಪೂರ್ವ ತರಗತಿಗಳವರೆಗಿನ ಶಿಕ್ಷಣವನ್ನು ಒಂದೇ ಸೂರಿನಡಿ ನೀಡುವ ಉದ್ದೇಶದಿಂದ ಆಯ್ದ ಶಾಲೆಗಳನ್ನು ಸಿ.ಎಸ್.ಆರ್. ಅನುದಾನದಡಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಅಭಿವೃದ್ಧಿಪಡಿಸಲಾಗುವುದು.
- 3 ರಿಂದ 5 ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಗಣಿತ ವಿಷಯದಲ್ಲಿ ಆಸಕ್ತಿ ಮೂಡಿಸಿ ಸಾಮರ್ಥ್ಯ ಹೆಚ್ಚಿಸಲು J–PAL ಸಂಸ್ಥೆಯ ಸಹಯೋಗದಲ್ಲಿ ಗಣಿತ–ಗಣಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು.
- ಕಲಿಕೆಯಲ್ಲಿ ಹಿಂದುಳಿದ 6 ಮತ್ತು 7 ನೇ ತರಗತಿ ವಿದ್ಯಾರ್ಥಿಗಳಿಗೆ ಕಲಿಕಾ ಸಾಮರ್ಥ್ಯ ಸುಧಾರಿಸಲು 10 ಕೋಟಿ ರೂ. ಅನುದಾನದಲ್ಲಿ ಮರು ಸಿಂಚನ ಕಾರ್ಯಕ್ರಮ ಜಾರಿಗೊಳಿಸಲಾಗುವುದು.

- ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿರುವ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ವಿಜ್ಞಾನ ಪ್ರಯೋಗಾಲಯ, ಕಂಪ್ಯೂಟರ್ ಲ್ಯಾಬ್, ಇಂಟರ್‌ನೆಟ್ ಸೌಲಭ್ಯಗಳನ್ನು ಎರಡು ವರ್ಷಗಳ ಪ್ಯಾಕೇಜ್ ಅಡಿಯಲ್ಲಿ ಒದಗಿಸಲು 50 ಕೋಟಿ ರೂ. ಮೀಸಲಿಡಲಾಗುವುದು.
- 2,000 ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ದ್ವಿಭಾಷಾ ಮಾಧ್ಯಮ (ಕನ್ನಡ ಮತ್ತು ಇಂಗ್ಲೀಷ್) ಶಾಲೆಗಳಾಗಿ ಪರಿವರ್ತಿಸಲಾಗುವುದು.

97. ಎಲ್ಲಾ ಶಿಕ್ಷಣ ಸಂಸ್ಥೆಗಳನ್ನು ಸಾಮಾಜಿಕ ಸಾಮರಸ್ಯ, ವೈಜ್ಞಾನಿಕ ಮನೋಭಾವ ಮತ್ತು ಸಹಬಾಳ್ವೆಯ ವಿದ್ಯಾ–ಕೇಂದ್ರಗಳನ್ನಾಗಿ ರೂಪಿಸಲು **ನಾವು–ಮನುಜರು** ಎಂಬ ಹೆಸರಿನಲ್ಲಿ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ವಾರಕ್ಕೆ ಎರಡು ಗಂಟೆಗಳ ವಿಚಾರ–ವಿಮರ್ಶೆ ಮತ್ತು ಸಂವಾದ ಚಟುವಟಿಕೆಗಳನ್ನು ಒಳಗೊಂಡ ತರಗತಿಗಳನ್ನು ನಡೆಸಲಾಗುವುದು.

98. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಸಹಯೋಗದೊಂದಿಗೆ ಸರ್ಕಾರಿ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು.

99. ರಾಜ್ಯದಲ್ಲಿರುವ 74 ಆದರ್ಶ ವಿದ್ಯಾಲಯಗಳನ್ನು ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳಲ್ಲಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗುವುದು. ವಿದ್ಯಾರ್ಥಿಗಳ ಸಂಖ್ಯಾಬಲ ಹೆಚ್ಚಿರುವ

ಆಯ್ದ 100 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಗಣಕ ವಿಜ್ಞಾನ ಸಂಯೋಜನೆಯನ್ನು ಪ್ರಾರಂಭಿಸಲಾಗುವುದು.

100. ವಿಜ್ಞಾನ ವಿಷಯಗಳಲ್ಲಿ 400 ಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ವಿಜ್ಞಾನ ಪ್ರಯೋಗಾಲಯಗಳನ್ನು ಉನ್ನತೀಕರಿಸಲು ತಲಾ 10 ಲಕ್ಷ ರೂ. ನಂತೆ ಅನುದಾನ ಒದಗಿಸಲಾಗುವುದು.

101. ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ಅಂದಾಜು 20,000 ವಿದ್ಯಾರ್ಥಿಗಳಿಗೆ NEET/JEE/CET ತರಬೇತಿ ಕಾರ್ಯಕ್ರಮಗಳನ್ನು 10 ಕೋಟಿ ರೂ.ಗಳ ವೆಚ್ಚದಲ್ಲಿ ಹಮ್ಮಿಕೊಳ್ಳಲಾಗುವುದು.

102. ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯವನ್ನು ಒದಗಿಸಲು ನಮ್ಮ ಸರ್ಕಾರವು ನಿರ್ಧರಿಸಿದೆ. ಇದರಿಂದ ರಾಜ್ಯದ 46,829 ಸರ್ಕಾರಿ ಶಾಲೆಗಳು ಮತ್ತು 1,234 ಪದವಿ ಪೂರ್ವ ಕಾಲೇಜುಗಳಿಗೆ ಅನುಕೂಲವಾಗಲಿದೆ. ಈ ಉದ್ದೇಶಕ್ಕಾಗಿ ಒಟ್ಟು 25 ಕೋಟಿ ರೂ. ವೆಚ್ಚವಾಗಲಿದೆ.

103. ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ವಿವಿಧ ವಿಷಯಗಳ ಶಿಕ್ಷಕರು/ಉಪನ್ಯಾಸಕರುಗಳನ್ನು ನೇಮಕ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು.

## ಉನ್ನತ ಶಿಕ್ಷಣ

104. ಕಳೆದ ಆಯವ್ಯಯದಲ್ಲಿ ಘೋಷಿಸಿರುವಂತೆ, ರಾಜ್ಯದ ಅಸ್ಮಿತೆ ಮತ್ತು ಸಂಸ್ಕೃತಿಗೆ ಅನುಗುಣವಾಗಿ, ಕರ್ನಾಟಕ ರಾಜ್ಯ ಶಿಕ್ಷಣ ನೀತಿಯ ಕರಡನ್ನು ಸಿದ್ಧಪಡಿಸಲು ರಾಜ್ಯ ಶಿಕ್ಷಣ ನೀತಿ ಆಯೋಗವನ್ನು ರಚಿಸಲಾಗಿದೆ. ಆಯೋಗವು ಶೀಘ್ರದಲ್ಲಿಯೇ ವರದಿಯನ್ನು ಸಲ್ಲಿಸಲಿದ್ದು, ಅದರಂತೆ ಪರಿಶೀಲಿಸಿ ರಾಜ್ಯ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸಲಾಗುವುದು.

105. ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ವಿದ್ಯಾರ್ಥಿನಿಯರ ದಾಖಲಾತಿಯನ್ನು ಹೆಚ್ಚಿಸುವ ಮೂಲಕ ಮಹಿಳೆಯರನ್ನು ಸಬಲೀಕರಣಗೊಳಿಸಲು ನಮ್ಮ ಸರ್ಕಾರ ಆದ್ಯತೆ ನೀಡುತ್ತಾ ಬಂದಿದೆ. ಹಿಂದಿನ ಅಧಿಕಾರಾವಧಿಯಲ್ಲಿ ಕಾಲೇಜು ವಿದ್ಯಾರ್ಥಿನಿಯರಿಗೆ ಉಚಿತ ಶಿಕ್ಷಣ ನೀಡುವ ಮಹತ್ತರ ತೀರ್ಮಾನವನ್ನು ಕೈಗೊಂಡಿತ್ತು. ಇದೀಗ ಇನ್ನೊಂದು ಹೆಜ್ಜೆ ಮುಂದಿಡುತ್ತಾ ರಾಜ್ಯದ 30 ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳು ಮತ್ತು ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್‌ಗಳ

ಉನ್ನತೀಕರಣಕ್ಕಾಗಿ ಒಟ್ಟು 30 ಕೋಟಿ ರೂ. ಅನುದಾನ ಒದಗಿಸಲಾಗುವುದು.

106. 2024–25ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳ ಕಾಮಗಾರಿಗಳಿಗೆ 250 ಕೋಟಿ ರೂ. ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಕಾಮಗಾರಿಗಳಿಗೆ 120 ಕೋಟಿ ರೂ. ಅನುದಾನ ಒದಗಿಸಲಾಗುವುದು. ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಅಗತ್ಯತೆಗನುಗುಣವಾಗಿ ತುಂಬಲಾಗುವುದು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿಗೆ ಕ್ರಮವಹಿಸಲಾಗುವುದು.

107. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವತಿಯಿಂದ ಕೊಪ್ಪಳ, ಬೀದರ್, ಯಾದಗಿರಿ, ರಾಯಚೂರು ಮತ್ತು ಕಲಬುರಗಿಯಲ್ಲಿ ವಿಶ್ವವಿದ್ಯಾಲಯಗಳ ಘಟಕ ಕಾಲೇಜನ್ನು ಅವಶ್ಯವಿರುವ ಜಿಲ್ಲಾ/ ತಾಲ್ಲೂಕು ಕೇಂದ್ರಗಳಲ್ಲಿ ಸ್ಥಾಪಿಸಲಾಗುವುದು.

108. ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯವನ್ನು (UVCE) 500 ಕೋಟಿ ರೂ. ವೆಚ್ಚದಲ್ಲಿ ಐಐಟಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ಇದಕ್ಕಾಗಿ ಸರ್ಕಾರದಿಂದ 100 ಕೋಟಿ ರೂ. ಅನುದಾನ ಒದಗಿಸಲಾಗುವುದು. ಜೊತೆಗೆ ಸಿ.ಎಸ್.ಆರ್. ನಿಧಿ ಮತ್ತು ವಿಶ್ವವಿದ್ಯಾಲಯದ ಹಳೆಯ ವಿದ್ಯಾರ್ಥಿಗಳು

ನೀಡುವ ದೇಣಿಗೆ ಮೂಲಕ ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಸಂಪನ್ಮೂಲಗಳನ್ನು ಸಂಗ್ರಹಿಸಲಾಗುವುದು.

109. ಹಳೆಯ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಅಭಿವೃದ್ಧಿಗೊಳಿಸಲು **ಬೇರು-ಚಿಗುರು** ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು.

110. ಉನ್ನತ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ತಮ್ಮ ಆವಿಷ್ಕಾರಗಳಿಗೆ ಪೇಟೆಂಟ್ ಪಡೆದುಕೊಳ್ಳಲು ಅಗತ್ಯವಾದ ತಾಂತ್ರಿಕ ಮತ್ತು ಆರ್ಥಿಕ ನೆರವು ನೀಡಲು 10 ಕೋಟಿ ರೂ.ಗಳ Corpus Fund ಸ್ಥಾಪಿಸಲಾಗುವುದು.

111. ವಿಷಯ ತಜ್ಞರು, ನಾಗರಿಕ ಸೇವಾ ಅಧಿಕಾರಿಗಳು ಮತ್ತು ಉದ್ಯಮಿಗಳಿಂದ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳಿಗೆ **ಪ್ರೇರಣಾ** ಎಂಬ ಕಾರ್ಯಕ್ರಮದಡಿ ಮಾರ್ಗದರ್ಶನವನ್ನು (Mentorship) ನೀಡಲಾಗುವುದು.

112. ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಕಟ್ಟಡವನ್ನು 54 ಕೋಟಿ ರೂ. ವೆಚ್ಚದಲ್ಲಿ ಹಾಗೂ ಮಹಾರಾಣಿ ಕಲಾ ಮತ್ತು ವಾಣಿಜ್ಯ ಕಾಲೇಜು ಹಾಸ್ಟೆಲ್ ಕಟ್ಟಡ ನಿರ್ಮಾಣವನ್ನು 116 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುವುದು.

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ

113. ರಾಜ್ಯದಲ್ಲಿ ತೀವ್ರ ಅಸ್ವಸ್ಥತೆಯಿಂದ ಬಳಲುತ್ತಿರುವ ರೋಗಿಗಳಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಿ ಪ್ರಾಣ ಉಳಿಸುವ ಉದ್ದೇಶದಿಂದ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಆಧುನಿಕ ಕ್ರಿಟಿಕಲ್ ಕೇರ್ ಬ್ಲಾಕ್‌ಗಳನ್ನು ಸ್ಥಾಪಿಸಲಾಗುವುದು. ಈಗಾಗಲೇ 15 ಜಿಲ್ಲೆಗಳಲ್ಲಿ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಉಡುಪಿ, ದಾವಣಗೆರೆ, ವಿಜಯಪುರ, ಮೈಸೂರು, ಮಂಡ್ಯ, ಧಾರವಾಡ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ 187 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು. ಮುಂದಿನ ಸಾಲಿನಲ್ಲಿ ಉಳಿದ 9 ಜಿಲ್ಲೆಗಳಲ್ಲಿಯೂ ಕ್ರಿಟಿಕಲ್ ಕೇರ್ ಬ್ಲಾಕ್‌ಗಳನ್ನು ಸ್ಥಾಪಿಸಲಾಗುವುದು.

114. ತಾಲ್ಲೂಕು ಆಸ್ಪತ್ರೆಗಳಿಲ್ಲದ ಆನೇಕಲ್, ನೆಲಮಂಗಲ, ಹೊಸಕೋಟೆ, ಶೃಂಗೇರಿ, ಖಾನಾಪುರ, ಶಿರಹಟ್ಟಿ ಮತ್ತು ಯಳಂದೂರು ತಾಲ್ಲೂಕುಗಳಲ್ಲಿ ಪ್ರಸಕ್ತ ಸಾಲಿನಲ್ಲಿ 100 ಹಾಸಿಗೆ ಸಾಮರ್ಥ್ಯದ ತಾಲ್ಲೂಕು ಆಸ್ಪತ್ರೆಗಳನ್ನು 280 ಕೋಟಿ ರೂ. ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು.

115. ಆರೋಗ್ಯ ಇಲಾಖೆಯ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ದುರಸ್ತಿ ಮತ್ತು ಉನ್ನತೀಕರಣಕ್ಕೆ 75 ಕೋಟಿ ರೂ. ಗಳ ಅನುದಾನವನ್ನು ಒದಗಿಸಲಾಗುವುದು.

116. ಬೆಂಗಳೂರಿನ ಕೆ.ಸಿ. ಜನರಲ್ ಆಸ್ಪತ್ರೆ ಆವರಣದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ ಮತ್ತಿತರ ಮೂಲಸೌಕರ್ಯ ಕಾಮಗಾರಿಗಳನ್ನು 150 ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

117. ಗ್ರಾಮೀಣ ಪ್ರದೇಶದ ಜನರಿಗೆ 24x7 ತುರ್ತು ಆರೋಗ್ಯ ಸೇವೆಯನ್ನು ನೀಡಲು ಮುಂದಿನ 2 ವರ್ಷಗಳಲ್ಲಿ 350 ಕೋಟಿ ರೂ.ಗಳ ವೆಚ್ಚದಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ 15 ಸಮುದಾಯ ಆರೋಗ್ಯ ಕೇಂದ್ರಗಳನ್ನು ಮಾನವ ಸಂಪನ್ಮೂಲದೊಂದಿಗೆ ಕಾರ್ಯಗತಗೊಳಿಸಲಾಗುವುದು.

118. ಕಲ್ಯಾಣ ಕರ್ನಾಟಕ ಭಾಗದಲ್ಲಿ 46 ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು 221 ಕೋಟಿ ರೂ.ಗಳ ವೆಚ್ಚದಲ್ಲಿ KKRDB ಮೂಲಕ ಸ್ಥಾಪಿಸಲಾಗುವುದು.

119. ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆಯನ್ನು ನೀಡಲು 6,493 ಆರೋಗ್ಯ ಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ 199 ಆರೋಗ್ಯ

ಮತ್ತು ಕ್ಷೇಮ ಕೇಂದ್ರಗಳ ಕಟ್ಟಡ ಕಾಮಗಾರಿಗಾಗಿ 130 ಕೋಟಿ ರೂ. ಗಳ ಅನುದಾನವನ್ನು ಒದಗಿಸಲಾಗುವುದು.

120. ಜಿಲ್ಲಾ ಆಸ್ಪತ್ರೆಗಳು ಮತ್ತು ವೈದ್ಯಕೀಯ ಕಾಲೇಜುಗಳಲ್ಲಿರುವ ಮಕ್ಕಳ ತಜ್ಞರು, ಮತ್ತು ಕ್ರಿಟಿಕಲ್ ಕೇರ್ ಮೆಡಿಸಿನ್ ತಜ್ಞ ಮತ್ತಿತರ ತಜ್ಞ ವೈದ್ಯರುಗಳ ಸೇವೆಯನ್ನು ಟೆಲಿ–ಐಸಿಯು ವ್ಯವಸ್ಥೆಯ ಮೂಲಕ ತಾಲ್ಲೂಕು ಆಸ್ಪತ್ರೆಗಳಿಗೆ ಒದಗಿಸಲಾಗುವುದು.

121. ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ಮತ್ತು ನಿರಂತರ ಅನುಸರಣೆಗಾಗಿ ಬಹುತೇಕ ಜಿಲ್ಲೆಗಳಲ್ಲಿ Chemotherapy ಚಿಕಿತ್ಸಾ ಕೇಂದ್ರಗಳು ಲಭ್ಯವಿರದ ಕಾರಣ, ಸರ್ಕಾರವು 20 ಕೋಟಿ ರೂ. ವೆಚ್ಚದಲ್ಲಿ ಪ್ರತಿ ಜಿಲ್ಲೆಯಲ್ಲಿಯೂ ಒಂದು ಡೇ–ಕೇರ್ ಕಿಮೋಥೆರಪಿ ಕೇಂದ್ರವನ್ನು ಸ್ಥಾಪಿಸಲಾಗುವುದು.

122. ಮಹಿಳೆಯರಲ್ಲಿ ಹೆಚ್ಚುತ್ತಿರುವ ಸ್ತನ ಕ್ಯಾನ್ಸರ್ ಮತ್ತು ಗರ್ಭಕಂಠದ ಕ್ಯಾನ್ಸರ್ ಅನ್ನು ಪ್ರಾರಂಭಿಕ ಹಂತದಲ್ಲಿಯೇ ಪತ್ತೆ ಹಚ್ಚಿ ಚಿಕಿತ್ಸೆ ನೀಡಲು 20 ಜಿಲ್ಲಾ ಆಸ್ಪತ್ರೆಗಳಲ್ಲಿ Digital Mammography ಯಂತ್ರಗಳನ್ನು ಮತ್ತು ಕೆ.ಸಿ. ಜನರಲ್ ಆಸ್ಪತ್ರೆ ಬೆಂಗಳೂರು ಹಾಗೂ ಉಡುಪಿ, ಕೋಲಾರ ಮತ್ತು ದಾವಣಗೆರೆ ಜಿಲ್ಲಾ ಆಸ್ಪತ್ರೆಗಳಿಗೆ Colposcopy ಉಪಕರಣಗಳ ಖರೀದಿಗೆ ಒಟ್ಟಾರೆಯಾಗಿ 21 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು.

123. ಮುಂದಿನ ಎರಡು ವರ್ಷಗಳಲ್ಲಿ ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಿಗೆ Hub and Spoke ಮಾದರಿಯಲ್ಲಿ ವಿಸ್ತರಿಸುವ ಮೂಲಕ STEMI (ತೀವ್ರ ಹೃದ್ರೋಗ) ಚಿಕಿತ್ಸೆಯನ್ನು ಬಲಪಡಿಸಲಾಗುವುದು. ಇದಲ್ಲದೇ STEMI and Stroke ಚಿಕಿತ್ಸೆಗಾಗಿ ಥ್ರಂಬೋಲಿಟಿಕ್ ಔಷಧಗಳ (Thrombolytic Drugs) ಸಂಗ್ರಹಣೆಗಾಗಿ 32 ಕೋಟಿ ರೂ.ಗಳನ್ನು ಒದಗಿಸಲಾಗುವುದು.

124. ರಾಜ್ಯದ ಜಿಲ್ಲಾ ಆಸ್ಪತ್ರೆಗಳನ್ನು ಅಗ್ನಿ ಅವಘಡಗಳಿಂದ ರಕ್ಷಿಸಲು 13 ಜಿಲ್ಲಾ ಆಸ್ಪತ್ರೆಗಳಲ್ಲಿ ಅಗ್ನಿಶಾಮಕ ವ್ಯವಸ್ಥೆಯನ್ನು 6 ಕೋಟಿ ರೂ.ಗಳ ವೆಚ್ಚದಲ್ಲಿ ಅಳವಡಿಸಲಾಗುವುದು.

125. 2025 ರೊಳಗೆ ಕ್ಷಯರೋಗ ನಿರ್ಮೂಲನೆಗೊಳಿಸಲು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕ್ಷಯರೋಗ ತಪಾಸಣೆಗಾಗಿ 87 True–Nat Machines ಗಳನ್ನು ಖರೀದಿಸಲು 6 ಕೋಟಿ ರೂ. ಗಳ ಅನುದಾನ ಒದಗಿಸಲಾಗುವುದು.

126. ಕಲ್ಯಾಣ ಕರ್ನಾಟಕದಲ್ಲಿ Haemophilia ಮತ್ತು Thalassemia ರೋಗಿಗಳಿಗೆ ಸೂಕ್ತ ಚಿಕಿತ್ಸಾ ಸೌಲಭ್ಯಗಳ ಕೊರತೆಯಿರುವುದರಿಂದ ಕಲಬುರಗಿ ಮತ್ತು ಕೊಪ್ಪಳದ ICDT ಕೇಂದ್ರಗಳ ಬಲವರ್ಧನೆಗೆ 7 ಕೋಟಿ ರೂ.ಗಳನ್ನು ಒದಗಿಸಲಾಗುವುದು.

127. ಉತ್ತರ ಕರ್ನಾಟಕದ ಹಲವಾರು ಜಿಲ್ಲೆಗಳ First Referral Unit (FRU) ಗಳಲ್ಲಿ ರಕ್ತ ಸಂಗ್ರಹ ಘಟಕಗಳಿಲ್ಲದ ಕಾರಣ, ರೋಗಿಗಳಿಗೆ ತುರ್ತು ಸಮಯದಲ್ಲಿ ರಕ್ತ ಪೂರೈಸಲು ತೊಂದರೆ ಉಂಟಾಗುತ್ತಿದೆ. ಇದನ್ನು ನೀಗಿಸಲು 50 ಹೊಸ ರಕ್ತ ಶೇಖರಣಾ ಘಟಕಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಸ್ಥಾಪಿಸಲಾಗುವುದು.

128. ಮುಂದಿನ 4 ವರ್ಷಗಳಲ್ಲಿ ಪ್ರತಿ ಜಿಲ್ಲಾ ಆಸ್ಪತ್ರೆಯಲ್ಲಿ ಸಂಯೋಜಿತ ಮತ್ತು ಸಾರ್ವಜನಿಕ ಆರೋಗ್ಯ ಪ್ರಯೋಗಾಲಯವನ್ನು (IPHL) ಸ್ಥಾಪಿಸುವ ಮೂಲಕ ಸಾರ್ವಜನಿಕರಿಗೆ ಕೈಗೆಟಕುವ ದರದಲ್ಲಿ ಉತ್ತಮ ಪ್ರಯೋಗಾಲಯ ಸೇವೆಗಳನ್ನು ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ ಚಿಕ್ಕಮಗಳೂರು, ವಿಜಯನಗರ, ಶಿವಮೊಗ್ಗ, ಬೆಳಗಾವಿ, ಮಂಡ್ಯ, ಹಾಸನ ಮತ್ತು ಕೊಡಗು ಜಿಲ್ಲೆಗಳಲ್ಲಿ ಮತ್ತು 2025-26 ನೇ ಸಾಲಿನಲ್ಲಿ ಚಿತ್ರದುರ್ಗ, ಬಾಗಲಕೋಟೆ, ಚಾಮರಾಜನಗರ, ಬೀದರ್, ಕೊಪ್ಪಳ, ರಾಯಚೂರು, ಕಲಬುರಗಿ, ಉತ್ತರ ಕನ್ನಡ ಮತ್ತು ಗದಗ ಜಿಲ್ಲೆಗಳಲ್ಲಿ ಪ್ರಯೋಗಾಲಯವನ್ನು (IPHL) ಸ್ಥಾಪಿಸಲಾಗುವುದು. ಇದಲ್ಲದೇ ಪ್ರಸಕ್ತ ಸಾಲಿನಲ್ಲಿ ಹುನಗುಂದ, ಸಿರಾ ಮತ್ತು ಹಗರಿಬೊಮ್ಮನಹಳ್ಳಿಯಲ್ಲಿ ತಾಲ್ಲೂಕು ಮಟ್ಟದ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗುವುದು. ಇದಕ್ಕೆ ಒಟ್ಟಾರೆಯಾಗಿ 11 ಕೋಟಿ ರೂ.ಗಳ ಅನುದಾನವನ್ನು ನೀಡಲಾಗುವುದು.

129. ಬೆಂಗಳೂರಿನಲ್ಲಿ ಬಡಜನತೆಗೆ ಉಚಿತ ಪ್ರಯೋಗಾಲಯ ಸೇವೆಯನ್ನು ಒದಗಿಸಲು Hub and Spoke ಮಾದರಿಯಲ್ಲಿ 430 ಪ್ರಯೋಗಾಲಯಗಳ ಸ್ಥಾಪನೆಗೆ ಮುಂದಿನ ಎರಡು ವರ್ಷಗಳಲ್ಲಿ 20 ಕೋಟಿ ರೂ. ಗಳ ಅನುದಾನವನ್ನು ನೀಡಲಾಗುವುದು.

130. ಮಧುಮೇಹ ನಿಯಂತ್ರಣಕ್ಕಾಗಿ ಸಾರ್ವಜನಿಕರಿಗೆ ಆಯುಷ್ ಚಿಕಿತ್ಸೆ ನೀಡಲು ರಾಜ್ಯದ ನಾಲ್ಕು ವಿಭಾಗಗಳಲ್ಲಿ ತಲಾ ಒಂದು ಆಯುರ್ವೇದ ಮಧುಮೇಹ ಘಟಕವನ್ನು ಸ್ಥಾಪಿಸಲಾಗುವುದು.

131. ಕೋವಿಡ್-19 ಸಾಂಕ್ರಾಮಿಕ ರೋಗದ ನಿವಾರಣೆ ಹಾಗೂ ತಡೆಗಟ್ಟುವಿಕೆ ಸಂಬಂಧವಾಗಿ 2021ರಲ್ಲಿ ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ನೀಡಿರುವ ವರದಿಯಲ್ಲಿನ ಗಂಭೀರವಾದ ಆರೋಪಗಳ ಬಗ್ಗೆ ನ್ಯಾಯಾಂಗ ತನಿಖೆ ನಡೆಸಲು ವಿಚಾರಣಾ ಆಯೋಗವನ್ನು ನೇಮಿಸಿದೆ. ಆಯೋಗವು ನೀಡುವ ವರದಿಯನ್ನಾಧರಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

## ವೈದ್ಯಕೀಯ ಶಿಕ್ಷಣ

132. ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಕ್ಷೇತ್ರವು ಸರ್ಕಾರಿ ವಲಯದಲ್ಲಿಯೂ ವ್ಯಾಪಕ ಬೆಳವಣಿಗೆ ಹೊಂದಿರುವುದರಿಂದ ಇಲಾಖೆಯ ಕಾರ್ಯನಿರ್ವಹಣೆಯಲ್ಲಿ ಇನ್ನಷ್ಟು ದಕ್ಷತೆ ತರುವ ನಿಟ್ಟಿನಲ್ಲಿ

ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯವನ್ನು ಆಯುಕ್ತಾಲಯವನ್ನಾಗಿ ಉನ್ನತೀಕರಿಸಲಾಗುವುದು.

133. 2024–25ನೇ ಸಾಲಿನಲ್ಲಿ ವೈದ್ಯಕೀಯ ಕಾಲೇಜುಗಳ ನಿರ್ಮಾಣ ಮತ್ತು ಉಪಕರಣಗಳ ಖರೀದಿಗಾಗಿ 400 ಕೋಟಿ ರೂ.ಗಳ ಅನುದಾನವನ್ನು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ನಿರ್ಮಾಣಕ್ಕಾಗಿ 130 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು.

134. ಮೈಸೂರಿನಲ್ಲಿರುವ 40 ಹಾಸಿಗೆ ಸಾಮರ್ಥ್ಯದ Nephro–Urology ಆಸ್ಪತ್ರೆಯನ್ನು 100 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ ಉನ್ನತೀಕರಿಸಲಾಗುವುದು.

135. ಕಲಬುರಗಿ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಮಕ್ಕಳ ಆರೋಗ್ಯ ಘಟಕವನ್ನು ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆಯ ತಾಂತ್ರಿಕ ನೆರವಿನೊಂದಿಗೆ ಸ್ಥಾಪಿಸಲಾಗುವುದು.

136. ಗದಗ, ಕೊಪ್ಪಳ ಮತ್ತು ಚಾಮರಾಜನಗರದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗಳು ನಿರ್ಮಾಣವಾಗಿದ್ದು, ಈ ಆಸ್ಪತ್ರೆಗಳಿಗೆ ಅವಶ್ಯವಿರುವ ವೈದ್ಯಕೀಯ ಉಪಕರಣ ಮತ್ತು ಪೀಠೋಪಕರಣಗಳ ಖರೀದಿಗಾಗಿ 150 ಕೋಟಿ ರೂ.ಗಳನ್ನು ಒದಗಿಸಲಾಗುವುದು.

137. ಬೆಂಗಳೂರಿನ ನೆಫ್ರೋ–ಯುರಾಲಜಿ ಸಂಸ್ಥೆಯ ಶಸ್ತ್ರ ಚಿಕಿತ್ಸಾ ವಿಭಾಗದಲ್ಲಿ 20 ಕೋಟಿ ರೂ.ಗಳ ವೆಚ್ಚದಲ್ಲಿ ರೋಬೋಟಿಕ್ ಯಂತ್ರದ ಮೂಲಕ ಉತ್ತಮ ಶಸ್ತ್ರಚಿಕಿತ್ಸೆಯನ್ನು ನೀಡಲು ಕ್ರಮವಹಿಸಲಾಗುವುದು.

138. ವೈದ್ಯಕೀಯ ಕಾಲೇಜುಗಳಲ್ಲಿನ ಆಸ್ಪತ್ರೆ ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ 114 Modular OT ಗಳನ್ನು 177 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

139. ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ Cathlab ಸೌಲಭ್ಯದೊಂದಿಗೆ Super Speciality Cardiac Unit ಅನ್ನು 10 ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲಾಗುವುದು. ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಪಿಪಿಪಿ ಮಾದರಿಯಲ್ಲಿ Cardiac Unit ಪ್ರಾರಂಭಿಸಲಾಗುವುದು.

140. ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ವೈದ್ಯಕೀಯ ಸಂಸ್ಥೆಗಳಲ್ಲಿ 64 Anaesthesia Workstation ಗಳನ್ನು 34 ಕೋಟಿ ರೂ. ವೆಚ್ಚದಲ್ಲಿ ಖರೀದಿಸಿ ಅಳವಡಿಸಲಾಗುವುದು.

141. ರಾಜ್ಯದಲ್ಲಿ ಈಗಾಗಲೇ ನಾಲ್ಕು ಜಿಲ್ಲೆಗಳಲ್ಲಿ Human Milk Bank ಘಟಕಗಳನ್ನು ಸ್ಥಾಪಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ರಾಯಚೂರು, ಮೈಸೂರು ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಹೊಸ ಘಟಕಗಳನ್ನು ಸ್ಥಾಪಿಸಲಾಗುವುದು.

142. ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಅಪಾಯಕಾರಿ ಸಾಂಕ್ರಾಮಿಕ ರೋಗಗಳು ಮತ್ತು ವೈರಲ್ ಸೋಂಕುಗಳನ್ನು ಪತ್ತೆ ಹಚ್ಚಲು Viral Research & Diagnostic Laboratory (VRDL) ಅನ್ನು ಸ್ಥಾಪಿಸಲಾಗುವುದು.

143. ಸಾರ್ವಜನಿಕರ ಎಲ್ಲಾ ಆರೋಗ್ಯ ಮಾಹಿತಿಯನ್ನು ಡಿಜಿಟಲೀಕರಣಗೊಳಿಸುವ ಸಂಬಂಧ ಡಿಜಿಟಲ್ ಹೆಲ್ತ್ ಸೊಸೈಟಿಯನ್ನು ಆರಂಭಿಸಲು ಈಗಾಗಲೇ ಕ್ರಮವಹಿಸಲಾಗಿರುತ್ತದೆ. ಇದರಡಿಯಲ್ಲಿ ಒಂದು Health Repository ಯನ್ನು ಸೃಜಿಸಿ ಸಾರ್ವಜನಿಕರ ಚಿಕಿತ್ಸಾ ಮಾಹಿತಿಯು ಒಂದೇ ಮೂಲದಿಂದ ಎಲ್ಲಾ ಆಸ್ಪತ್ರೆಗಳು ಮತ್ತು ವೈದ್ಯರಿಗೆ ಲಭ್ಯವಾಗುವಂತೆ ಮತ್ತು ಹೆಚ್ಚಿನ ಚಿಕಿತ್ಸೆಗಾಗಿ ಉನ್ನತ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡುವುದನ್ನು ಮತ್ತು ಚಿಕಿತ್ಸಾ ಸಮಯವನ್ನು ಸ್ವಯಂಚಾಲಿತವಾಗಿ ನಿಗದಿಪಡಿಸುವ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗುವುದು.

144. ಚಿತ್ರದುರ್ಗ ಜಿಲ್ಲೆಯಲ್ಲಿ ವೈದ್ಯಕೀಯ ವಿಜ್ಞಾನ ಸಂಸ್ಥೆಯನ್ನು 500 ಕೋಟಿ ರೂ.ಗಳ ವೆಚ್ಚದಲ್ಲಿ 2023–24ನೇ ಸಾಲಿನಿಂದ 150 ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳ ದಾಖಲಾತಿಯೊಂದಿಗೆ ಪ್ರಾರಂಭಿಸಲಾಗಿರುತ್ತದೆ. ವೈದ್ಯಕೀಯ ಕಾಲೇಜಿನ ಕಟ್ಟಡ, ವಿದ್ಯಾರ್ಥಿ

ವಸತಿ ನಿಲಯ, ಸಿಬ್ಬಂದಿ ವಸತಿ ಗೃಹಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

145. ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಥಾಪಿಸಿದ ಮೈಸೂರು ವೈದ್ಯಕೀಯ ಮಹಾವಿದ್ಯಾಲಯದ ಶತಮಾನೋತ್ಸವದ ನೆನಪಿಗಾಗಿ ಕೆ.ಆರ್. ಆಸ್ಪತ್ರೆ ಆವರಣದಲ್ಲಿ 75 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಹೊರ ರೋಗಿ ವಿಭಾಗದ ಕಟ್ಟಡವನ್ನು ನಿರ್ಮಿಸಲಾಗುವುದು.

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ

146. ಮಹಿಳೆಯರ ಆರ್ಥಿಕ ಸ್ವಾತಂತ್ರ್ಯಕ್ಕೆ ಬೆಂಬಲ ನೀಡುವ ಮಹತ್ವಾಕಾಂಕ್ಷಿ ಯೋಜನೆ ಗೃಹಲಕ್ಷ್ಮಿ. ಈ ಯೋಜನೆಯಡಿ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2,000 ರೂ. ನೀಡಲಾಗುತ್ತಿದೆ. ಕುಟುಂಬ ದತ್ತಾಂಶದನ್ವಯ 1.33 ಕೋಟಿ APL, BPL, AAY ಪಡಿತರ ಚೀಟಿ ಹೊಂದಿರುವ ಯಜಮಾನಿ ಮಹಿಳೆಯರನ್ನು ಅರ್ಹ ಫಲಾನುಭವಿಗಳೆಂದು ಗುರುತಿಸಲಾಗಿದೆ. ಜನವರಿ ಅಂತ್ಯದವರೆಗೆ 1.17 ಕೋಟಿ ಮಹಿಳೆಯರು ಯೋಜನೆಯಡಿ ನೋಂದಾಯಿಸಿಕೊಂಡಿದ್ದು, ಈವರೆಗೆ 11,726 ಕೋಟಿ ರೂ.ಗಳನ್ನು ನೇರವಾಗಿ ಫಲಾನುಭವಿಗಳ ಖಾತೆಗೆ ವರ್ಗಾಯಿಸಲಾಗಿದೆ. 2024-25ನೇ ಸಾಲಿನಲ್ಲಿ 28,608 ಕೋಟಿ ರೂ. ಒದಗಿಸಲಾಗಿದೆ. ಇದರಿಂದ ಕುಟುಂಬ ನಿರ್ವಹಣೆಯ ಜೊತೆಗೆ ಆದಾಯೋತ್ಪನ್ನ

ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಲು ಮಹಿಳೆಯರಿಗೆ ಈ ಯೋಜನೆ ಅವಕಾಶ ಕಲ್ಪಿಸಿದೆ.

147. ಮಕ್ಕಳ ಪ್ರಾರಂಭಿಕ ಶಿಕ್ಷಣ ಮತ್ತು ಆರೈಕೆಯಲ್ಲಿ ಸಾಮರ್ಥ್ಯ ಅಭಿವೃದ್ಧಿಗೆ 20,000 ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ತರಬೇತಿ ಕಾರ್ಯಾಗಾರಗಳನ್ನು ಆಯೋಜಿಸಲು 10 ಕೋಟಿ ರೂ. ಗಳನ್ನು ಒದಗಿಸಲಾಗುವುದು.

148. ಅಂಗನವಾಡಿ ಮೂಲಕ ಕೈಗೊಳ್ಳುವ ಚಟುವಟಿಕೆಗಳನ್ನು ಸುಗಮಗೊಳಿಸಲು 90 ಕೋಟಿ ರೂ. ವೆಚ್ಚದಲ್ಲಿ 75,938 ಸ್ಮಾರ್ಟ್ ಫೋನ್‌ಗಳನ್ನು ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಮೇಲ್ವಿಚಾರಕಿಯರಿಗೆ ಒದಗಿಸಲಾಗುವುದು.

149. ರಾಜ್ಯದಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 1,000 ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು 200 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು.

150. ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಸಹಾಯಕಿಯರಿಗೆ ಗ್ರಾಚ್ಯುಟಿ ಸವಲತ್ತುಗಳನ್ನು ನೀಡಲಾಗುವುದು.

151. Cerebral Palsy, Muscular Dystrophy, Parkinsons ಮತ್ತು Multiple Sclerosis ಕಾಯಿಲೆಗಳಿಂದ ಬಳಲುತ್ತಿರುವ

ವ್ಯಕ್ತಿಗಳ ಆರೈಕೆದಾರರಿಗೆ ಪ್ರತಿ ಮಾಹೆ 1,000 ರೂ. ಪ್ರೋತ್ಸಾಹಧನವನ್ನು ನೀಡಲಾಗುವುದು.

152. ಆರೋಗ್ಯ ಇಲಾಖೆಯೊಂದಿಗೆ ಸಮನ್ವಯಿಸಿ ಎಲ್ಲಾ ತಾಲ್ಲೂಕುಗಳಲ್ಲಿ ಹಿರಿಯ ನಾಗರಿಕರಿಗೆ ಪ್ರತಿ ವರ್ಷ ಎರಡು Cataract ಶಸ್ತ್ರಚಿಕಿತ್ಸೆ ಶಿಬಿರಗಳನ್ನು ಆಯೋಜಿಸಲಾಗುವುದು.

153. ನಿರಾಶ್ರಿತ ಬೌದ್ಧಿಕ ವಿಕಲಚೇತನರ ಆರೈಕೆ ಮತ್ತು ಸಂರಕ್ಷಣೆಗಾಗಿ 4 ಅನುಪಾಲನಾ ಗೃಹಗಳನ್ನು ಎರಡು ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

154. ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ಒದಗಿಸಲು ಇನ್ನೂ ಬಾಕಿಯಿರುವ 1,500 ವಿಶೇಷಚೇತನರಿಗೆ 2024–25ನೇ ಸಾಲಿನಲ್ಲಿ ದ್ವಿಚಕ್ರ ವಾಹನಗಳನ್ನು ವಿತರಿಸಲಾಗುವುದು.

155. ಲಿಂಗತ್ವ ಅಲ್ಪಸಂಖ್ಯಾತರ ಬದುಕನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಮೈತ್ರಿ ಯೋಜನೆಯಡಿ ನೀಡುವ ಮಾಸಾಶನವನ್ನು 800 ರೂ.ಗಳಿಂದ 1,200 ರೂ.ಗಳಿಗೆ ಹೆಚ್ಚಿಸಲಾಗುವುದು. ಜೊತೆಗೆ ಗುರುತಿಸುವಿಕೆ ಹಾಗೂ ಗುರುತಿನ ಚೀಟಿ ವಿತರಣೆಯ ಪ್ರಕ್ರಿಯೆಗಳನ್ನು ಸರಳಗೊಳಿಸಲಾಗುವುದು.

156. ಮಾಜಿ ದೇವದಾಸಿಯರ ಕಲ್ಯಾಣಕ್ಕಾಗಿ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು;

- ಪ್ರಸ್ತುತ ನೀಡುತ್ತಿರುವ ಮಾಸಾಶನವನ್ನು 1500 ರೂ.ಗಳಿಂದ 2000 ರೂ.ಗಳಿಗೆ ಹೆಚ್ಚಿಸಲಾಗುವುದು.
- ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ವಿಶೇಷ ಪ್ಯಾಕೇಜ್ ಅನ್ನು ನೀಡಲಾಗುವುದು.
- ನಿವೇಶನ ಹೊಂದಿರುವ ವಸತಿರಹಿತರಿಗೆ ರಾಜೀವ್ ಗಾಂಧಿ ವಸತಿ ನಿಗಮದಿಂದ ವಸತಿ ಸೌಲಭ್ಯ ಕಲ್ಪಿಸಲಾಗುವುದು.
- ಅವರ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಪುನರ್ವಸತಿ ಕಲ್ಪಿಸಲು ಮರುಸಮೀಕ್ಷೆ ನಡೆಸಲಾಗುವುದು.

157. 2024-25ನೇ ಸಾಲಿನಲ್ಲಿ ಮಹಿಳಾ ಉದ್ದೇಶಿತ ಯೋಜನೆಗಳಿಗೆ 86,423 ಕೋಟಿ ರೂ.ಗಳನ್ನು ಒದಗಿಸಲಾಗುವುದು.

158. ಮಕ್ಕಳ ಉದ್ದೇಶಿತ ಯೋಜನೆಗಳಿಗೆ 2024-25ನೇ ಸಾಲಿನಲ್ಲಿ 54,617 ಕೋಟಿ ರೂ.ಗಳನ್ನು ಒದಗಿಸಲಾಗುವುದು.

## ಸಮಾಜ ಕಲ್ಯಾಣ

**ಒಂದು ತೋಟದಲ್ಲಿ ನೂರು ಹೂವು ಅರಳಲಿ**
**ಎಲ್ಲಾ ಕೂಡಿ ಆಡುವಂಥ ಗಾಳಿ ಬೀಸಲಿ**

**– ಡೇರ್ ಡೆವಿಲ್ ಮುಸ್ತಫಾ ಚಿತ್ರದಿಂದ**

159. ಕರ್ನಾಟಕ ಅನುಸೂಚಿತ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆಯಡಿಯಲ್ಲಿ 2024–25ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆಗೆ 27,674 ಕೋಟಿ ರೂ. ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಗೆ 11,447 ಕೋಟಿ ರೂ. ಗಳು ಸೇರಿದಂತೆ ಒಟ್ಟಾರೆ 39,121 ಕೋಟಿ ರೂ. ಗಳ ಅನುದಾನವನ್ನು ಒದಗಿಸಲಾಗಿದೆ.

160. ವೈಜ್ಞಾನಿಕವಾಗಿ ಹಾಗೂ ಸಂವಿಧಾನಬದ್ಧವಾಗಿ ಪರಿಶಿಷ್ಟ ಜಾತಿಯ ಮೀಸಲು ವರ್ಗೀಕರಣ ಮಾಡುವುದು ಸರ್ಕಾರದ ಧ್ಯೇಯವಾಗಿದೆ. ಈ ಕುರಿತು ಭಾರತದ ಸಂವಿಧಾನದ ಅನುಚ್ಛೇದ 341ಕ್ಕೆ ಅಗತ್ಯ ತಿದ್ದುಪಡಿ ತಂದು, ಹೊಸದಾಗಿ Clause-3 ಅನ್ನು ಸೇರ್ಪಡೆಗೊಳಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

161. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ವಸತಿ ಶಾಲೆಗಳು ಮತ್ತು ವಿದ್ಯಾರ್ಥಿ ನಿಲಯಗಳ ನಿರ್ಮಾಣಕ್ಕಾಗಿ ಒಟ್ಟು 2,710 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

162. ಕ್ರೈಸ್ ಅಡಿಯಲ್ಲಿ 2023–24ನೇ ಸಾಲಿನಲ್ಲಿ 23 ವಸತಿ ಶಾಲೆಗಳ ಕಟ್ಟಡ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ. 2024–25ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಇಲಾಖೆಗಳಿಗೆ ಸೇರಿದ ಒಟ್ಟು 29 ವಸತಿ ಶಾಲಾ ಸಂಕೀರ್ಣಗಳ ನಿರ್ಮಾಣ ಕಾಮಗಾರಿಗಳನ್ನು 638 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುವುದು.

163. ವಸತಿ ಶಾಲೆಗಳು ಇಲ್ಲದಿರುವ ಹೋಬಳಿಗಳ ಪೈಕಿ 20 ಹೋಬಳಿಗಳಲ್ಲಿ ಹೊಸ ವಸತಿ ಶಾಲೆಗಳನ್ನು ಕ್ರೈಸ್ ಸಂಸ್ಥೆಯ ಮೂಲಕ ಪ್ರಾರಂಭಿಸಲಾಗುವುದು.

164. 2023–24ನೇ ಸಾಲಿನಲ್ಲಿ 23 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾರ್ಯ ಪೂರ್ಣಗೊಳಿಸಲಾಗಿದೆ. ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿರುವ 18 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು 2024–25ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯ ಮುಖಾಂತರ ನಿರ್ಮಾಣ ಮಾಡಲಾಗುವುದು.

165. ಶೈಕ್ಷಣಿಕವಾಗಿ ಪ್ರಮುಖ ನಗರಗಳಲ್ಲಿ ವಸತಿನಿಲಯಗಳಿಗೆ ಬೇಡಿಕೆ ಹೆಚ್ಚುತ್ತಿರುವ ಕಾರಣ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ 31 ಹೊಸ ಮೆಟ್ರಿಕ್ ನಂತರದ ವಸತಿನಿಲಯಗಳನ್ನು ಮಂಜೂರು ಮಾಡಲಾಗುವುದು.

166. ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡಗಳ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳು, ಆಶ್ರಮ ಶಾಲೆಗಳು ಮತ್ತು ವಸತಿ ಶಾಲೆಗಳ ವಿದ್ಯಾರ್ಥಿಗಳ ಭೋಜನ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆಗೆ 100 ರೂ. ನಂತೆ ಹೆಚ್ಚಿಸಲಾಗುವುದು.

167. ಬೆಂಗಳೂರು ನಗರವು ವೇಗವಾಗಿ ಬೆಳೆಯುತ್ತಿರುವುದರಿಂದ ಬೆಂಗಳೂರು ಪೂರ್ವ ಭಾಗದಲ್ಲಿ 500 ಸಂಖ್ಯೆಯ ಒಂದು ನಿರಾಶ್ರಿತರ ಪರಿಹಾರ ಕೇಂದ್ರವನ್ನು 10 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

168. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಿಗೆ ವಿರಳ ಮತ್ತು ದುಬಾರಿ ವೆಚ್ಚದ ಚಿಕಿತ್ಸಾ ಸೇವೆಗಳನ್ನು ಒದಗಿಸಲು 35 ಕೋಟಿ ರೂ.ಗಳ Corpus Fund ಅನ್ನು ಸ್ಥಾಪಿಸಲಾಗುವುದು. ಈ ನಿಧಿಯ ಬಡ್ಡಿ ಆಕರಣೆಯನ್ನು ರೋಗಿಗಳ ಚಿಕಿತ್ಸೆಯ ಅಗತ್ಯಕ್ಕನುಗುಣವಾಗಿ ನೀಡಲಾಗುವುದು.

169. ಪದ್ಮಶ್ರೀ ಡಾ. ಸಿದ್ದಲಿಂಗಯ್ಯ ಅವರ ಸ್ಮರಣಾರ್ಥ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸಲಾಗುವುದು.

170. ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗಳಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳಿಂದ 2024–25ನೇ ವರ್ಷದಲ್ಲಿ ಒಟ್ಟಾರೆಯಾಗಿ 1,750 ಕೋಟಿ ರೂ.ಗಳ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುವುದು.

## ಪರಿಶಿಷ್ಟ ಪಂಗಡಗಳ ಕಲ್ಯಾಣ

171. ಪರಿಶಿಷ್ಟ ವರ್ಗಗಳ ಸರ್ವತೋಮುಖ ಅಭಿವೃದ್ಧಿಗಾಗಿ ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ಪ್ರತ್ಯೇಕ ಸಚಿವಾಲಯವನ್ನು ಸ್ಥಾಪಿಸಲಾಗಿದೆ. ಈ ಸಚಿವಾಲಯಕ್ಕೆ ಅಗತ್ಯ ಹುದ್ದೆಗಳನ್ನು ಸೃಜಿಸಿ 2023–24ನೇ ಸಾಲಿನಿಂದ ಕಾರ್ಯಾರಂಭ ಮಾಡಲಾಗಿದೆ.

172. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಆಶ್ರಮ ಶಾಲೆಗಳ ಹೆಸರನ್ನು ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು ಎಂದು ಮರು ನಾಮಕರಣ ಮಾಡಲಾಗುವುದು. ಈ ಶಾಲೆಗಳ ಉನ್ನತೀಕರಣಕ್ಕೆ ವಿವಿಧ ಕ್ರಮಗಳನ್ನು ಕೈಗೊಳ್ಳಲಾಗುವುದು;

- 1 ರಿಂದ 5ನೇ ತರಗತಿವರೆಗೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಶಾಲೆಗಳಲ್ಲಿ 6ನೇ ತರಗತಿ ಪ್ರಾರಂಭಿಸಲಾಗುವುದು.

- 1 ರಿಂದ 7ನೇ ತರಗತಿವರೆಗೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಶಾಲೆಗಳಲ್ಲಿ 8ನೇ ತರಗತಿಯನ್ನು ಪ್ರಾರಂಭಿಸಲಾಗುವುದು.
- ಪ್ರತಿ ತರಗತಿಯ ವಿದ್ಯಾರ್ಥಿಗಳ ಸಂಖ್ಯಾಬಲವನ್ನು 25 ರಿಂದ 40ಕ್ಕೆ ಹೆಚ್ಚಿಸಲಾಗುವುದು.

173. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಇಲ್ಲದಿರುವ 7 ಜಿಲ್ಲಾ ಕೇಂದ್ರಗಳಲ್ಲಿ ತಲಾ ಎರಡರಂತೆ 100 ಸಂಖ್ಯಾಬಲದ ಬಾಲಕ/ಬಾಲಕಿಯರ 14 ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗುವುದು.

174. IISc, IIT ಮತ್ತು NIT ಸಂಸ್ಥೆಗಳ ಮೂಲಕ Artificial Intelligence and Machine Learning ಮುಂತಾದ 6 ರಿಂದ 12 ತಿಂಗಳ ಅವಧಿಯ ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡಗಳ 200 ಇಂಜಿನಿಯರಿಂಗ್ ಪದವೀಧರರಿಗೆ 15,000 ರೂ.ಗಳ ಶಿಷ್ಯವೇತನವನ್ನು ನೀಡಲಾಗುವುದು.

175. ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ 5,000 ಯುವಕ/ಯುವತಿಯರಿಗೆ ಡ್ರೋನ್ ತರಬೇತಿಯನ್ನು ನೀಡಲಾಗುವುದು.

176. ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ, ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ 25,000 ರೂ.ಗಳಂತೆ ಶಿಷ್ಯವೇತನ ನೀಡಲಾಗುವುದು.

177. ಪರಿಶಿಷ್ಟ ಪಂಗಡದ ಕೊರಗ, ಜೇನುಕುರುಬ, ಯರವ, ಕಾಡುಕುರುಬ, ಸೋಲಿಗ, ಗೊಂಡ, ಸಿದ್ದಿ, ಮಲೈಕುಡಿ, ಕುಡಿಯ, ಹಸಲರು, ಗೌಡಲು, ಬೆಟ್ಟಕುರುಬ, ಹಕ್ಕಿ–ಪಿಕ್ಕಿ, ಇರುಳಿಗ, ರಾಜಗೊಂಡ ಹರಿಣಿಶಿಕಾರಿ ಮುಂತಾದ 23 ಅಲೆಮಾರಿ, ಅರೆ ಅಲೆಮಾರಿ ಸಮುದಾಯಗಳ ಸಮಗ್ರ ಅಭಿವೃದ್ಧಿಗಾಗಿ ಈ ಕೆಳಕಂಡ ಎರಡು ಉಪಕ್ರಮಗಳನ್ನು ರೂಪಿಸಲಾಗುವುದು;

- ಏಕಲವ್ಯ ಮಾದರಿಯ ಪ್ರತಿ ವಸತಿ ಶಾಲೆಯಲ್ಲಿ 20 ಸೀಟುಗಳನ್ನು ಮೀಸಲಿರಿಸಿ, ಪ್ರವೇಶ ಪರೀಕ್ಷೆಯಿಂದ ವಿನಾಯಿತಿ ನೀಡಿ ನೇರ ಪ್ರವೇಶ ಕಲ್ಪಿಸಲಾಗುವುದು.
- ಪಡಿತರ ಚೀಟಿ ಮುಂತಾದ ಸರ್ಕಾರಿ ದಾಖಲೆಗಳನ್ನು ಒದಗಿಸಲು ವಿಶೇಷ ಕೋಶವನ್ನು 3 ಕೋಟಿ ರೂ.ಗಳ ಅನುದಾನದಲ್ಲಿ ತಾತ್ಕಾಲಿಕವಾಗಿ ಒಂದು ವರ್ಷದ ಅವಧಿಗೆ ಸ್ಥಾಪಿಸಲಾಗುವುದು.

## ಹಿಂದುಳಿದ ವರ್ಗಗಳ ಕಲ್ಯಾಣ

178. ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ 4 ಕ್ರಮಗಳನ್ನು ಕೈಗೊಳ್ಳಲಾಗುವುದು;

- 100 ಸಂಖ್ಯಾಬಲದ ಮೆಟ್ರಿಕ್ ನಂತರದ 75 ಬಾಲಕರ ಮತ್ತು 75 ಬಾಲಕಿಯರ ವಸತಿನಿಲಯಗಳನ್ನು ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸಲಾಗುವುದು.
- ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 100 ಸಂಖ್ಯಾಬಲದ 150 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಹಾಗೂ 174 ಮೊರಾರ್ಜಿ ದೇಸಾಯಿ ವಸತಿ ಶಾಲೆ/ ಕಾಲೇಜುಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು 200 ಕೋಟಿ ರೂ. ವೆಚ್ಚದಲ್ಲಿ ಹಂತ ಹಂತವಾಗಿ ಒದಗಿಸಲಾಗುವುದು.
- ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ 30 ವಿದ್ಯಾರ್ಥಿನಿಲಯಗಳಿಗೆ ನಾಲ್ಕು ಕೋಟಿ ರೂ. ಗಳ ಘಟಕ ವೆಚ್ಚದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು.

- ಹಳೆಯ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಇಲಾಖೆಯ ವಸತಿ ನಿಲಯಗಳನ್ನು ಅಭಿವೃದ್ಧಿಪಡಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು.

179. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಆಶ್ರಮ ಶಾಲೆಗಳನ್ನು ಡಿ.ದೇವರಾಜು ಅರಸು ವಸತಿ ಶಾಲೆಗಳೆಂದು ಮರುನಾಮಕರಣ ಮಾಡಲಾಗುವುದು.

180. ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ CLAT, MAT ಮತ್ತು Chartered Accountant ಫೌಂಡೇಷನ್ ಪರೀಕ್ಷೆಗಳಿಗೆ ಸಿದ್ಧಗೊಳಿಸಲು ಪರೀಕ್ಷಾ ಪೂರ್ವ ತರಬೇತಿ ನೀಡಲಾಗುವುದು.

181. ದೇಶದ ಪ್ರತಿಷ್ಠಿತ ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಲು ಪ್ರಸಕ್ತ ಸಾಲಿನಲ್ಲಿ 500 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ತರಬೇತಿ ಸಂಸ್ಥೆಗಳಿಂದ ಎರಡು ವರ್ಷಗಳ JEE/NEET ತರಬೇತಿಯನ್ನು ಉಚಿತವಾಗಿ ನೀಡಲಾಗುವುದು.

182. ಅಲೆಮಾರಿ, ಅರೆ ಅಲೆಮಾರಿ ಸಮುದಾಯಗಳ ಆರ್ಥಿಕ ಹಾಗೂ ಸಾಮಾಜಿಕ ಸ್ಥಿತಿಗತಿಗಳ ಬಗ್ಗೆ ಅಧ್ಯಯನ ಮಾಡಲು 'ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಆಯೋಗ' ರಚಿಸಲಾಗುವುದು.

183. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳಿಂದ 2024–25ನೇ ವರ್ಷದಲ್ಲಿ ಒಟ್ಟಾರೆಯಾಗಿ 1,600 ಕೋಟಿ ರೂ.ಗಳ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುವುದು.

## ಅಲ್ಪಸಂಖ್ಯಾತರ ಕಲ್ಯಾಣ

184. ಅಲ್ಪಸಂಖ್ಯಾತ ಸಮುದಾಯಗಳಲ್ಲಿ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡುವ ಮೂಲಕ ಅವರ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣಕ್ಕಾಗಿ ಹಲವು ಕ್ರಮಗಳನ್ನು ಕೈಗೊಳ್ಳಲಾಗುವುದು;

- 50 ಸಂಖ್ಯಾಬಲವುಳ್ಳ 50 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗುವುದು.
- 100 ಸಂಖ್ಯಾಬಲವುಳ್ಳ 100 ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗುವುದು.
- 100 ಹೊಸ ಮೌಲಾನಾ ಆಜಾದ್ ಶಾಲೆಗಳನ್ನು ತೆರೆಯಲಾಗುವುದು.
- ಸ್ವಂತ ಕಟ್ಟಡವನ್ನು ಹೊಂದಿರುವ 25 ಶಾಲೆಗಳಲ್ಲಿ ಪದವಿ ಪೂರ್ವ ಶಿಕ್ಷಣವನ್ನು ಪ್ರಾರಂಭಿಸಲಾಗುವುದು.

185. ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ಬಿ.ಎಸ್ಸಿ. ನರ್ಸಿಂಗ್/ ಜಿ.ಎನ್.ಎಂ ನರ್ಸಿಂಗ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶುಲ್ಕ ಭರಿಸುವ ಯೋಜನೆಯನ್ನು ಪುನಃ ಪ್ರಾರಂಭ ಮಾಡಲಾಗುವುದು.

186. ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಉದ್ಯಮಶೀಲರು ಸ್ಥಾಪಿಸುವ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಹೊಸ ಘಟಕಗಳನ್ನು ಸ್ಥಾಪಿಸಲು ಹಾಗೂ ಅಸ್ತಿತ್ವದಲ್ಲಿರುವ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಘಟಕಗಳ ಉನ್ನತೀಕರಣಕ್ಕೆ KSFC ಮೂಲಕ ಪಡೆಯುವ 10 ಕೋಟಿ ರೂ.ವರೆಗಿನ ಸಾಲಕ್ಕೆ ಶೇ.6ರಷ್ಟು ಬಡ್ಡಿ ಸಹಾಯಧನ ನೀಡಲಾಗುವುದು.

187. ರೇಷ್ಮೆ ನೂಲು ಬಿಚ್ಚಾಣಿಕೆಯಲ್ಲಿ ತೊಡಗಿರುವ ಅಲ್ಪಸಂಖ್ಯಾತ ಫಲಾನುಭವಿಗಳ ಆರ್ಥಿಕ ಸ್ಥಿತಿಯನ್ನು ಉತ್ತಮಪಡಿಸಲು ರೇಷ್ಮೆ ಇಲಾಖೆ ಮೂಲಕ ತರಬೇತಿ ಮತ್ತು ಕೆ.ಎಂ.ಡಿ.ಸಿ ಮೂಲಕ ಸಾಲ ಸೌಲಭ್ಯಗಳನ್ನು ನೀಡಲಾಗುವುದು.

188. ಅಲ್ಪಸಂಖ್ಯಾತ ಸಮುದಾಯದ ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ವಿವಿಧ ರೀತಿಯ ಸ್ವಯಂ ಉದ್ಯೋಗ ಚಟುವಟಿಕೆಗಳಿಗೆ ಉತ್ತೇಜನ ನೀಡಲು 10 ಕೋಟಿ ರೂ. ಒದಗಿಸಲಾಗುವುದು.

189. ರಾಜ್ಯದಲ್ಲಿನ ವಕ್ಫ್ ಆಸ್ತಿಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ 100 ಕೋಟಿ ರೂ. ಅನುದಾನ ಒದಗಿಸಲಾಗುವುದು ಹಾಗೂ ಭಾರತೀಯ ಪುರಾತತ್ವ ಇಲಾಖೆಯ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳನ್ನು ಆದ್ಯತೆಯ ಮೇರೆಗೆ ಅಭಿವೃದ್ಧಿಪಡಿಸಲಾಗುವುದು.

190. ವಕ್ಫ್ ಸಂಸ್ಥೆಯ ಧಾರ್ಮಿಕ ಗುರುಗಳಿಗೆ ಹಾಗೂ ಮುತವಲ್ಲಿಗಳಿಗೆ ಪ್ರಚಲಿತ ವಿದ್ಯಮಾನಗಳ ಬಗ್ಗೆ ಅರಿವು ಮೂಡಿಸಲು ತರಬೇತಿ ಕಾರ್ಯಾಗಾರಗಳನ್ನು ಏರ್ಪಡಿಸಲಾಗುವುದು.

191. ರಾಜ್ಯದಲ್ಲಿನ ಪ್ರಮುಖ ಧಾರ್ಮಿಕ ಸ್ಥಳಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು 20 ಕೋಟಿ ರೂ. ಅನುದಾನ ಒದಗಿಸಲಾಗುವುದು.

192. ಮಂಗಳೂರಿನ ಹಜ್ ಭವನದ ನಿರ್ಮಾಣ ಕಾಮಗಾರಿಯನ್ನು 10 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುವುದು.

193. ಜೈನರ ಪ್ರಮುಖ ಧಾರ್ಮಿಕ ಸ್ಥಳಗಳ ಅಭಿವೃದ್ಧಿಗಾಗಿ 50 ಕೋಟಿ ರೂ. ಅನುದಾನ ಒದಗಿಸಲಾಗುವುದು.

194. ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ 200 ಕೋಟಿ ರೂ. ಒದಗಿಸಲಾಗುವುದು.

195. ಬೌದ್ಧರ ಪವಿತ್ರ ಗ್ರಂಥಗಳಾದ ತ್ರಿಪಿಟಕಗಳನ್ನು ಪಾಲಿ ಭಾಷೆಯಿಂದ ಕನ್ನಡಕ್ಕೆ ಅನುವಾದ ಮಾಡಲು ಸೂಕ್ತ ಅನುದಾನ ಒದಗಿಸಲಾಗುವುದು.

196. ರಾಜ್ಯದಲ್ಲಿ ವಾಸಿಸುತ್ತಿರುವ ಸಿಖ್ಖ್ ಲಿಗಾರ್ ಸಮುದಾಯದ ಜನರ ಆರ್ಥಿಕ ಸಬಲೀಕರಣಕ್ಕಾಗಿ ಎರಡು ಕೋಟಿ ರೂ. ಅನುದಾನದಲ್ಲಿ ಹೊಸ ಯೋಜನೆಗಳನ್ನು ರೂಪಿಸಲಾಗುವುದು.

197. ಬೀದರ್‌ನಲ್ಲಿರುವ ಶ್ರೀ ನಾನಕ್ ಝೀರಾ ಸಾಹೇಬ್ ಗುರುದ್ವಾರದ ಅಭಿವೃದ್ಧಿಗಾಗಿ ಒಂದು ಕೋಟಿ ರೂ. ಅನುದಾನ ನೀಡಲಾಗುವುದು.

198. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2024–25ನೇ ವರ್ಷದಲ್ಲಿ ಒಟ್ಟಾರೆಯಾಗಿ 393 ಕೋಟಿ ರೂ.ಗಳ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುವುದು

## ವಸತಿ

199. ಎಲ್ಲಾ ವಸತಿರಹಿತರಿಗೆ ಸೂರು ಒದಗಿಸುವ ಧ್ಯೇಯ ನಮ್ಮ ಸರ್ಕಾರದ್ದಾಗಿದೆ. ನಮ್ಮ ಹಿಂದಿನ ಅವಧಿಯಲ್ಲಿ 14.54 ಲಕ್ಷ ಮನೆಗಳನ್ನು ನಿರ್ಮಿಸಲಾಗಿತ್ತು. 2019 ರಿಂದ 2023ರ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ ಕೇವಲ 5.19 ಲಕ್ಷ. ಬಾಕಿ ಉಳಿದಿರುವ 12 ಲಕ್ಷ ಮನೆಗಳ ನಿರ್ಮಾಣದ

ಹೊಣೆಗಾರಿಕೆ ನಮ್ಮ ಸರ್ಕಾರದ ಮುಂದಿದ್ದು, 2023–2024ನೇ ಸಾಲಿನಲ್ಲಿ 3 ಲಕ್ಷ ಮನೆಗಳ ನಿರ್ಮಾಣ ಪೂರ್ಣಗೊಳಿಸಲಾಗುತ್ತಿದೆ. 2024–25ರಲ್ಲಿ 3 ಲಕ್ಷ ಮನೆಗಳ ನಿರ್ಮಾಣದ ಗುರಿ ಹೊಂದಲಾಗಿದೆ. ಇದಲ್ಲದೇ, ರಾಜ್ಯದಲ್ಲಿ ವಸತಿರಹಿತರ ಸಂಖ್ಯೆಯನ್ನು ಗುರುತಿಸಲು ಒಂದು ಸಮೀಕ್ಷೆಯನ್ನು ನಡೆಸಲಾಗುವುದು.

200. ಕೊಳಗೇರಿ ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಎ.ಎಚ್.ಪಿ.) ಅಡಿ 1,18,359 ಮನೆಗಳನ್ನು ನಿರ್ಮಿಸಲಾಗುತ್ತಿದೆ. ಬಹುತೇಕ ಫಲಾನುಭವಿಗಳು ಬಡ ಕುಟುಂಬದವರಾಗಿದ್ದು, ತಮ್ಮ ಪಾಲಿನ ವಂತಿಗೆಯಾದ ಐದು ಲಕ್ಷ ರೂ.ಗಳನ್ನು ಪಾವತಿಸಲು ಸಾಧ್ಯವಾಗದೇ ಯೋಜನೆಯು ಮಂದಗತಿಯಲ್ಲಿ ಸಾಗುತ್ತಿತ್ತು. ಇದನ್ನು ಮನಗಂಡು ನಮ್ಮ ಸರ್ಕಾರವು ಫಲಾನುಭವಿಗಳು ಪಾವತಿಸಬೇಕಾದ ವಂತಿಗೆಯನ್ನು ಒಂದು ಲಕ್ಷ ರೂ.ಗಳಿಗೆ ಸೀಮಿತಗೊಳಿಸಿ ಹೆಚ್ಚುವರಿ ನಾಲ್ಕು ಲಕ್ಷ ರೂ.ವರೆಗಿನ ಫಲಾನುಭವಿ ವಂತಿಗೆಯನ್ನು ಭರಿಸಲು ತೀರ್ಮಾನಿಸಿದೆ. ಅದರಂತೆ ಶೀಘ್ರದಲ್ಲಿಯೇ 48,796 ಮನೆಗಳನ್ನು ಪೂರ್ಣಗೊಳಿಸಿ ಕೊಳಗೇರಿ ನಿವಾಸಿಗಳಿಗೆ ಹಸ್ತಾಂತರಿಸಲಾಗುವುದು.

201. ನಗರ ಪ್ರದೇಶದ ಬಡ ನಿವಾಸಿಗಳಿಗೆ ಕೈಗೆಟಕುವ ದರದಲ್ಲಿ ವಸತಿ ಸೌಲಭ್ಯ ಒದಗಿಸಲು ಸಂಪನ್ಮೂಲ ಕ್ರೋಢೀಕರಣಕ್ಕಾಗಿ ವಸತಿ ಇಲಾಖೆಯು ಹಲವು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಿದೆ;

- Asset Monetisation, ವಸತಿ ಸೆಸ್ ಮತ್ತು ವಿವಿಧ ಶಾಸನ ಬದ್ಧ ಶುಲ್ಕಗಳನ್ನು ವಿಧಿಸುವ ಮೂಲಕ ಸಂಪನ್ಮೂಲ ಕ್ರೋಢೀಕರಿಸಿ Karnataka Affordable Housing Fund ಅನ್ನು (KAHF) ಸ್ಥಾಪಿಸಲಾಗುವುದು.
- ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಕಾಯ್ದೆಯಡಿ ಕೊಳೆಗೇರಿ ಸೆಸ್ ದರ ಪರಿಷ್ಕರಣೆ ಮಾಡುವುದು.
- ಕರ್ನಾಟಕ ಕೊಳೆಗೇರಿ ಅಭಿವೃದ್ಧಿ ಮಂಡಳಿಯ ಸ್ಥಿರ ಆಸ್ತಿಗಳಿಂದ ಸಂಪನ್ಮೂಲ ಸೃಜಿಸಲಾಗುವುದು.

202. ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರವು ರಿಯಲ್ ಎಸ್ಟೇಟ್ ವಲಯದಲ್ಲಿ ಪಾರದರ್ಶಕತೆ, ವಿಶ್ವಾಸಾರ್ಹತೆ ಹಾಗೂ ದಕ್ಷತೆಯನ್ನು ಹೆಚ್ಚಿಸಲು ಹಾಗೂ ಮನೆ ಖರೀದಿದಾರರ ಹಿತರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತಿದೆ. 2023–24 ನೇ ಸಾಲಿನಲ್ಲಿ ಡೆವಲಪರ್‌ಗಳಿಗೆ 40 ಕೋಟಿ ರೂ. ದಂಡ ವಿಧಿಸಲಾಗಿರುತ್ತದೆ. ಮುಂದಿನ ದಿನಗಳಲ್ಲಿ ದಕ್ಷ ಹಾಗೂ ಪರಿಣಾಮಕಾರಿ ಕಾರ್ಯನಿರ್ವಹಣೆಯ ಮೂಲಕ ಜನರ ಹಿತರಕ್ಷಣೆಗೆ ಆದ್ಯತೆ ನೀಡಲಾಗುವುದು.

## ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳು

203. ಹಸಿವು ಮುಕ್ತ ಕರ್ನಾಟಕ ನಿರ್ಮಾಣದ ಕನಸಿನೊಂದಿಗೆ ನಮ್ಮ ಸರ್ಕಾರದ ಹಿಂದಿನ ಅವಧಿಯಲ್ಲಿ ಉಚಿತ ಅಕ್ಕಿ ವಿತರಿಸುವ ಅನ್ನಭಾಗ್ಯ ಯೋಜನೆ ಜಾರಿಗೆ ತರಲಾಗಿತ್ತು. ಈ ಬಾರಿ ನಾವು ನೀಡಿದ್ದ ಭರವಸೆಯಂತೆ ಹೆಚ್ಚುವರಿಯಾಗಿ ಐದು ಕೆ.ಜಿ. ಆಹಾರ ಧಾನ್ಯ ನೀಡಲು ತೀರ್ಮಾನಿಸಲಾಗಿದೆ. ಆದರೆ ಕೇಂದ್ರ ಸರ್ಕಾರದ ಅಸಹಕಾರ ಧೋರಣೆಯಿಂದಾಗಿ ಅಕ್ಕಿ ಲಭ್ಯವಾಗದ ಕಾರಣ, ನಮ್ಮ ಸರ್ಕಾರವು ಪ್ರತಿ ಫಲಾನುಭವಿಗೆ ಪ್ರತಿ ಕೆ.ಜಿ. ಅಕ್ಕಿಗೆ 34 ರೂ.ನಂತೆ ಪ್ರತಿ ಮಾಹೆ 170 ರೂ. ನೇರ ನಗದು ವರ್ಗಾವಣೆ ಮಾಡುವ ಮೂಲಕ ನಮ್ಮ ಬದ್ಧತೆಯನ್ನು ಪ್ರದರ್ಶಿಸಿದ್ದೇವೆ. ಜನವರಿ 2024ರ ಅಂತ್ಯದವರೆಗೆ 4.02 ಕೋಟಿ ಫಲಾನುಭವಿಗಳಿಗೆ 4,595 ಕೋಟಿ ರೂ. ವರ್ಗಾವಣೆ ಮಾಡಲಾಗಿದೆ.

204. ಡಾ॥ ಮನ್‌ಮೋಹನ್ ಸಿಂಗ್ ಅವರ ನೇತೃತ್ವದ ಯುಪಿಎ ಸರ್ಕಾರದ ಅವಧಿಯಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ನು 2013 ರಲ್ಲಿ ಜಾರಿಗೆ ತರಲಾಯಿತು. ಪಡಿತರ ಹಾಗೂ ಆಹಾರ ಧಾನ್ಯ ವಿತರಣಾ ವ್ಯವಸ್ಥೆಯನ್ನು ತಳಹಂತದಲ್ಲಿ ಬಲಪಡಿಸುವ ಮೂಲಕ ಜಾಗೃತಿ ಸಮಿತಿಗಳಲ್ಲಿ ಜನರ ಸಹಭಾಗಿತ್ವವನ್ನು ಹೆಚ್ಚಿಸಲಾಗುವುದು. ಇದರಿಂದ

ಆಹಾರ ಭದ್ರತಾ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನ, ಹಾಗೂ ಹಸಿವು ಮುಕ್ತ ಕರ್ನಾಟಕದ ನಮ್ಮ ಆಶಯವನ್ನು ಈಡೇರಿಸಲು ನೆರವಾಗಲಿದೆ.

205. **ಅನ್ನ–ಸುವಿಧಾ** ಎಂಬ ಹೊಸ ಯೋಜನೆಯಡಿಯಲ್ಲಿ ಹೋಮ್ ಡೆಲಿವೆರಿ ಆಪ್ ಮೂಲಕ 80 ವರ್ಷ ದಾಟಿದ ಹಿರಿಯ ನಾಗರಿಕರು ಮಾತ್ರ ಇರುವ ಮನೆಯ ಬಾಗಿಲಿಗೆ ಆಹಾರ ಧಾನ್ಯಗಳನ್ನು ತಲುಪಿಸುವ ಸಾಮಾಜಿಕ ಭದ್ರತಾ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು.

## ಕಾರ್ಮಿಕ

206. ನಮ್ಮ ಸರ್ಕಾರವು ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (Gig Workers) ಬದುಕಿನ ಭದ್ರತೆಗಾಗಿ Platform–Based Gig Workers Fund and Welfare Fee Bill ಎಂಬ ಹೊಸ ವಿಧೇಯಕವನ್ನು ಜಾರಿಗೆ ತರಲಿದೆ. ತನ್ಮೂಲಕ ಅರ್ಹ ಆನ್–ಲೈನ್ ವಹಿವಾಟುಗಳ ಮೇಲೆ ಸೆಸ್ ವಿಧಿಸಿ ಗಿಗ್ ಕಾರ್ಮಿಕರ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.

207. ಪ್ರಸ್ತುತ ಆಶಾದೀಪ ಯೋಜನೆಯಡಿ ಅಪ್ರೆಂಟಿಸ್ ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ

ಅಭ್ಯರ್ಥಿಗಳಿಗೆ ನೀಡುವ ಸೌಲಭ್ಯವನ್ನು ವಿಸ್ತರಿಸಲು ವಿವಿಧ ಕ್ರಮಗಳನ್ನು ಕೈಗೊಳ್ಳಲಾಗುವುದು;

- ಮಾಲೀಕರಿಗೆ ವರ್ಗಾಯಿಸುವ ಶಿಷ್ಯವೇತನದ ಅವಧಿಯನ್ನು ಆರು ತಿಂಗಳಿನಿಂದ ಒಂದು ವರ್ಷಕ್ಕೆ ಹೆಚ್ಚಿಸಲಾಗುವುದು.
- ಅಪ್ರೆಂಟಿಸ್ ತರಬೇತಿ ಪಡೆದವರನ್ನು ಅದೇ ಮಾಲೀಕರು ಖಾಯಂ ಆಗಿ ನೇಮಕಾತಿ ಮಾಡಿಕೊಂಡಲ್ಲಿ ಮಾಲೀಕರಿಗೆ ವೇತನ ಮರುಪಾವತಿ ಮಾಡುವ ಅವಧಿಯನ್ನು ಒಂದು ವರ್ಷದಿಂದ ಎರಡು ವರ್ಷಗಳ ಅವಧಿಗೆ ಹೆಚ್ಚಿಸಲಾಗುವುದು ಹಾಗೂ ವೇತನದ ಗರಿಷ್ಠ ಮಿತಿಯನ್ನು 6,500 ರಿಂದ 7,000 ರೂ. ಗಳಿಗೆ ಹೆಚ್ಚಿಸಲಾಗುವುದು.
- ಹೊಸದಾಗಿ ಖಾಯಂ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳ ಮಾಸಿಕ 6,000 ರೂ.ಗಳ ಗರಿಷ್ಠ ವೇತನವನ್ನು ಎರಡು ವರ್ಷಗಳವರೆಗೆ ಮಾಲೀಕರಿಗೆ ಮರುಪಾವತಿ ಮಾಡಲಾಗುವುದು.

208. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ವಲಸೆ ಹೋದ ಸಂದರ್ಭದಲ್ಲಿ ಅವರಿಗೆ ತಾತ್ಕಾಲಿಕ ವಸತಿ ಸೌಲಭ್ಯ ಒದಗಿಸಲು ಆಯ್ದ 10 ಜಿಲ್ಲೆಗಳಲ್ಲಿ 100 ಕೋಟಿ ರೂ.ಗಳ ವೆಚ್ಚದಲ್ಲಿ ತಾತ್ಕಾಲಿಕ ವಸತಿ ಸಮುಚ್ಛಯಗಳನ್ನು ನಿರ್ಮಿಸಲಾಗುವುದು.

209. ವಾಣಿಜ್ಯ ಸಾರಿಗೆ ವಾಹನಗಳ ನೋಂದಣಿಯ ಮೇಲೆ ಸುಂಕವನ್ನು ವಿಧಿಸುವ ಮೂಲಕ ಸಾರಿಗೆ ವಾಹನಗಳ ಕಾರ್ಮಿಕರಿಗೆ ಭದ್ರತಾ ಮತ್ತು ಕಲ್ಯಾಣ ಕಾರ್ಯಕ್ರಮಗಳನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ರೂಪಿಸಲಾಗುವುದು. ಅಲ್ಲದೇ, ವಾಹನ ಚಾಲಕರಿಗೆ ನಿಲ್ದಾಣ/ಹೆದ್ದಾರಿ ಬದಿಯಲ್ಲಿ ಅಗತ್ಯ ಮೂಲಸೌಕರ್ಯ ಒದಗಿಸಲು ಕ್ರಮವಹಿಸಲಾಗುವುದು.

210. ಇ.ಎಸ್.ಐ ಯೋಜನೆಯಡಿ ಒಟ್ಟಾರೆ 311 ಕೋಟಿ ರೂ. ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಸೇವೆಗಳು, Point of Care Mobile Digital Diagnostic Kiosk, Mobile Health Unit, 40 ವರ್ಷ ಮೇಲ್ಪಟ್ಟ ಕಾರ್ಮಿಕರಿಗೆ ಸಮಗ್ರ ಆರೋಗ್ಯ ತಪಾಸಣೆ, ಎಲ್ಲಾ ವಿಮಾದಾರರಿಗೆ Tetanus ಮತ್ತು Hepatitis ಲಸಿಕೆ ಕಾರ್ಯಕ್ರಮ ಹಾಗೂ ಅತ್ಯಾಧುನಿಕ ರೋಗಪತ್ತೆ ಹಚ್ಚುವ ಕೇಂದ್ರ ಸ್ಥಾಪನೆ ಮುಂತಾದ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು.

## ಕೌಶಲ್ಯಾಭಿವೃದ್ಧಿ

211. ನಿರುದ್ಯೋಗಿ ಯುವಜನರಲ್ಲಿ ಭರವಸೆ ತುಂಬಿ, ಉದ್ಯೋಗ ಪಡೆದುಕೊಳ್ಳುವತ್ತ ಬೆಂಬಲ ನೀಡುವ ಯೋಜನೆ ಯುವನಿಧಿ. ಸ್ವಾಮಿ

ವಿವೇಕಾನಂದರವರ ಜನ್ಮದಿನವಾದ ರಾಷ್ಟ್ರೀಯ ಯುವ ದಿನಾಚರಣೆದಂದು ಚಾಲನೆಗೊಂಡ ಯುವನಿಧಿ ಯೋಜನೆಯಡಿ ಪದವಿ ಪಡೆದು ಆರು ತಿಂಗಳಾದರೂ ನಿರುದ್ಯೋಗಿಗಳಾಗಿರುವ ಪದವೀಧರ ಯುವಕರಿಗೆ ಮಾಸಿಕ 3,000 ರೂ. ಹಾಗೂ ಡಿಪ್ಲೊಮಾ ಪಡೆದವರಿಗೆ 1,500 ರೂ. ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ. ನಿರುದ್ಯೋಗ ಭತ್ಯೆ ನೀಡುವುದರೊಂದಿಗೆ ಈ ಯುವಕರಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯ ವತಿಯಿಂದ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುವುದು. ಈಗಾಗಲೇ ಒಂದು ಲಕ್ಷಕ್ಕೂ ಹೆಚ್ಚು ಯುವಕರು ಈ ಯೋಜನೆಯಡಿ ನೋಂದಾಯಿಸಿಕೊಂಡಿದ್ದು, ಡಿಬಿಟಿ ಮೂಲಕ ನೆರವು ವರ್ಗಾಯಿಸಲಾಗುತ್ತಿದೆ.

212. ರಾಜ್ಯದ ಮಾನವ ಸಂಪನ್ಮೂಲದ ಸಮರ್ಪಕ ಬಳಕೆ ಮಾಡಲು ಮತ್ತು ಯುವಜನರಿಗೆ ಉತ್ತಮ ಉದ್ಯೋಗ ಮತ್ತು ಉದ್ಯಮ ಅವಕಾಶಗಳನ್ನು ಒದಗಿಸಲು ರಾಜ್ಯ ಕೌಶಲ್ಯ ನೀತಿಯನ್ನು ಸಿದ್ಧಪಡಿಸಲಾಗುವುದು.

213. ಯುವನಿಧಿ ಪ್ಲಸ್ ಉಪಕ್ರಮದಡಿಯಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಲ್ಲಿ ನೀಡುತ್ತಿರುವ ಕೋರ್ಸುಗಳಲ್ಲಿ ವಿಷಯಾಧಾರಿತ ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯನ್ನು 25,000 ಯುವನಿಧಿ ಫಲಾನುಭವಿಗಳಿಗೆ ನೀಡಲಾಗುವುದು. ಯುವಜನರ ಕೌಶಲ್ಯಾಭಿವೃದ್ಧಿಗೆ ಉತ್ತೇಜನ ನೀಡುವುದರೊಂದಿಗೆ ಉದ್ಯೋಗಾಕಾಂಕ್ಷಿಗಳನ್ನು ಮತ್ತು

ಉದ್ಯೋಗದಾತರನ್ನು ಒಂದೇ ವೇದಿಕೆಯಡಿ ತರುವ ಮೂಲಕ ಯುವಸಮೃದ್ಧಿ ಉದ್ಯೋಗ ಮೇಳವನ್ನು ರಾಜ್ಯದ ವಿವಿಧ ಭಾಗಗಳಲ್ಲಿ ಆಯೋಜಿಸಲಾಗುವುದು.

214. ಕೈಗಾರಿಕಾ ಮತ್ತು ಉದಯೋನ್ಮುಖ ವಲಯಗಳಲ್ಲಿ ನುರಿತ ಉದ್ಯೋಗಿಗಳ ಅಗತ್ಯವನ್ನು ಪೂರೈಸಲು ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಸ್ಕಿಲ್ ಅಕಾಡೆಮಿಯನ್ನು ಸ್ಥಾಪಿಸಲಾಗುವುದು

215. ಜಿ.ಟಿ.ಟಿ.ಸಿ. ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರಗಳನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಕಲಬುರಗಿ, ಕೊಪ್ಪಳದ ತಳಕಲ್ ಮತ್ತು ಮೈಸೂರಿನ ವರುಣಾದಲ್ಲಿ ಒಟ್ಟು 350 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಮೊದಲನೇ ಹಂತದ ಯೋಜನೆಯನ್ನು ಮೂರು ವರ್ಷಗಳ ಅವಧಿಯಲ್ಲಿ 120 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

216. ಬಳ್ಳಾರಿ ಮತ್ತು ಚಿತ್ರದುರ್ಗದಲ್ಲಿ ಜಿಲ್ಲಾ ಖನಿಜ ನಿಧಿಯ ಮೂಲಕ ಹಾಗೂ ಗದಗ ಜಿಲ್ಲೆಯ ರೋಣದಲ್ಲಿ NABARD ಸಹಯೋಗದೊಂದಿಗೆ ಒಟ್ಟು 150 ಕೋಟಿ ರೂ. ವೆಚ್ಚದಲ್ಲಿ ಹೊಸ ಜಿ.ಟಿ.ಟಿ.ಸಿ ಗಳನ್ನು ಪ್ರಾರಂಭಿಸಲಾಗುವುದು.

217. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್, ಮೆಕ್ಯಾಟ್ರಾನಿಕ್ಸ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್, ರೊಬೊಟಿಕ್ಸ್ ಇತ್ಯಾದಿ ಹೆಚ್ಚುವರಿ

ಡಿಪ್ಲೊಮ ಕೋರ್ಸ್‌ಗಳನ್ನು ವಿವಿಧ ಜಿ.ಟಿ.ಟಿ.ಸಿ ಗಳಲ್ಲಿ ಹಂತ ಹಂತವಾಗಿ ಪ್ರಾರಂಭಿಸಲಾಗುವುದು. ಇದರಿಂದ ಹೆಚ್ಚುವರಿಯಾಗಿ 15,000 ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ.

218. ಕಲಬುರಗಿಯ ಕೆ.ಜಿ.ಟಿ.ಟಿ.ಐ.ನಲ್ಲಿ ಸಿ.ಎನ್.ಸಿ (Computer Numerical Control) ಯಂತ್ರವನ್ನು ಕೇಂದ್ರೀಕರಿಸುವ ಮೊದಲ ಶ್ರೇಷ್ಠತಾ ಕೇಂದ್ರವನ್ನು 16 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

219. ಐ.ಟಿ.ಐ. ಮತ್ತು ಜಿ.ಟಿ.ಟಿ.ಸಿ. ವಿದ್ಯಾರ್ಥಿಗಳಿಗೆ ಉದ್ಯೋಗ ನಿಯುಕ್ತಿಗೆ ಅನುಕೂಲವಾಗುವಂತೆ ಆಂಗ್ಲ ಮತ್ತು ಸಂವಹನ ಕೌಶಲ್ಯ ತರಬೇತಿಯನ್ನು 5 ಕೋಟಿ ರೂ. ವೆಚ್ಚದಲ್ಲಿ ನೀಡಲಾಗುವುದು. ಇದರಿಂದ ಸುಮಾರು 40,000ಕ್ಕೂ ಹೆಚ್ಚು ಪ್ರಶಿಕ್ಷಣಾರ್ಥಿಗಳಿಗೆ ಪ್ರಯೋಜನವಾಗಲಿದೆ.

220. ಶ್ರೇಷ್ಠತೆ ಮತ್ತು ಉನ್ನತ ಸಾಧನೆಯನ್ನು ಗುರುತಿಸಲು ಮತ್ತು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಯುವ ಪ್ರಶಿಕ್ಷಣಾರ್ಥಿಗಳನ್ನು ಕೌಶಲ್ಯ ಸ್ಪರ್ಧೆಗಳಿಗೆ ಸಿದ್ಧಪಡಿಸಲು ರಾಜ್ಯ ಕೌಶಲ್ಯ ಒಲಿಂಪಿಕ್ಸ್ ಅನ್ನು ಆಯೋಜಿಸಲಾಗುವುದು.

221. ಉದ್ಯೋಗಶೀಲತೆಯನ್ನು ಹೆಚ್ಚಿಸಲು Dual System of Training (DST) ಅನ್ನು ರಾಜ್ಯದ ಎಲ್ಲಾ ಐ.ಟಿ.ಐ ಗಳಲ್ಲಿ ಸ್ಥಳೀಯ

ಕೈಗಾರಿಕೆಗಳು ಹಾಗೂ ಉದ್ಯಮಗಳ ಸಹಭಾಗಿತ್ವದಲ್ಲಿ ಹಂತ ಹಂತವಾಗಿ ವಿಸ್ತರಿಸಲಾಗುವುದು.

222. ರಾಜ್ಯದಲ್ಲಿ ಉದ್ಯಮಗಳ ಬೇಡಿಕೆಗೆ ಪೂರಕವಾದ ಉತ್ತಮ ಗುಣಮಟ್ಟದ ಕೌಶಲ್ಯ ಪರಿಸರ ವ್ಯವಸ್ಥೆಯನ್ನು ರಚಿಸುವತ್ತ ಗಮನಹರಿಸಲು ಸ್ಕಿಲ್ ಕನೆಕ್ಟ್ ಸಮಿಟ್ ಅನ್ನು (Skill Connect Summit) ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಆಯೋಜಿಸಲಾಗುವುದು.

223. ಕೆ.ಎಸ್.ಡಿ.ಸಿ ಅಡಿಯಲ್ಲಿ ಸ್ಥಾಪಿಸಲಾಗಿರುವ ಅಂತಾರಾಷ್ಟ್ರೀಯ ವಲಸೆ ಕೋಶದ ಮೂಲಕ ವಿದೇಶಿ ಉದ್ಯೋಗದಾತರೊಂದಿಗೆ ಸಂವಾದಗಳನ್ನು ನಡೆಸಲಾಗುತ್ತಿದೆ. ಸದರಿ ಕೋಶವನ್ನು ಬಲಪಡಿಸಿ ಉದ್ಯೋಗಾಕಾಂಕ್ಷಿಗಳಿಗೆ ಕೌಶಲ್ಯಾಭಿವೃದ್ಧಿ ಹಾಗೂ ವಿದೇಶದಲ್ಲಿ ಉದ್ಯೋಗಾವಕಾಶ ಕಲ್ಪಿಸಲು ಅಗತ್ಯ ಸಮನ್ವಯ ಕಾರ್ಯಗಳನ್ನು ಕೈಗೊಳ್ಳಲಾಗುವುದು.

224. ಕೇಂದ್ರ ಮತ್ತು ರಾಜ್ಯ ಸರ್ಕಾರದ ಅಧೀನದಲ್ಲಿರುವ ಎಲ್ಲಾ ಸಂಸ್ಥೆಗಳಲ್ಲಿ ನೇಮಕಾತಿಗಾಗಿ ಹೊರಡಿಸಲಾಗುವ ಅಧಿಸೂಚನೆಗಳನ್ನು ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಒಂದೇ ಜಾಲತಾಣದಲ್ಲಿ ಪ್ರಕಟಿಸಲಾಗುವುದು.

225. ಮಹಿಳೆಯರ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣವನ್ನು ಸಕ್ರಿಯಗೊಳಿಸಲು ನಮ್ಮ ಸರ್ಕಾರ ಆದ್ಯತೆ ನೀಡಿದೆ. ಈ ನಿಟ್ಟಿನಲ್ಲಿ 50,000 ಎಸ್.ಹೆಚ್.ಜಿ. ಮಹಿಳಾ ಸ್ವಾಮ್ಯದ ಸೂಕ್ಷ್ಮ ಉದ್ಯಮಗಳನ್ನು ಎರಡು ವರ್ಷಗಳಲ್ಲಿ ಅಭಿವೃದ್ಧಿಪಡಿಸಲಾಗುವುದು.

226. IIM-B ಸಹಯೋಗದೊಂದಿಗೆ ಎಲ್ಲಾ 31 ಜಿಲ್ಲೆಗಳಲ್ಲಿ ಉದ್ಯಮಿಗಳನ್ನು ಉತ್ತೇಜಿಸಲು ಜಿಲ್ಲಾ ಮಟ್ಟದ ಇನ್ಕ್ಯುಬೇಶನ್ ಕೇಂದ್ರಗಳನ್ನು (DLIC) ಹಂತ ಹಂತವಾಗಿ ಸ್ಥಾಪಿಸಲಾಗುವುದು. ಮೊದಲನೇ ಹಂತದಲ್ಲಿ ಆಯ್ದ 10 ಜಿಲ್ಲೆಗಳಲ್ಲಿ ಇನ್ಕ್ಯುಬೇಶನ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

227. ಒಂದು ಲಕ್ಷ ಮಹಿಳಾ ಸ್ವ–ಸಹಾಯ ಗುಂಪುಗಳನ್ನು ಮೀನುಗಾರಿಕೆ, ಕುಕ್ಕುಟ, ಕುರಿ ಮತ್ತು ಮೇಕೆ ಸಾಕಾಣಿಕೆ, ಜೇನು ಸಾಕಾಣಿಕೆ ಸಂಬಂಧಿಸಿದ ಕಿರು ಉದ್ದಿಮೆಗಳನ್ನು ಸ್ಥಾಪಿಸಲು ಮತ್ತು ಅವುಗಳಿಗೆ ಸೂಕ್ತ ಮಾರುಕಟ್ಟೆ ಅವಕಾಶಗಳನ್ನು ಕಲ್ಪಿಸಲು 100 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುವುದು.

228. ಕೆಫೆ ಸಂಜೀವಿನಿ ಎಂಬ ಮಹಿಳೆಯರೇ ನಡೆಸುವ ಕ್ಯಾಂಟೀನ್‌ಗಳನ್ನು ಸ್ಥಾಪಿಸುವ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಸ್ಥಳೀಯ ಆಹಾರವನ್ನು ಶುಚಿ–ರುಚಿಯಾಗಿ ಕೈಗೆಟಕುವ ದರದಲ್ಲಿ ಒದಗಿಸಲಾಗುವುದು. ಪ್ರಸಕ್ತ

ಸಾಲಿನಲ್ಲಿ 7.50 ಕೋಟಿ ರೂ. ವೆಚ್ಚದಲ್ಲಿ 50 ಕೆಫೆಗಳನ್ನು ಸ್ಥಾಪಿಸಲಾಗುವುದು.

229. ಕಾಫಿ ಮಂಡಳಿಯ ಸಹಭಾಗಿತ್ವದಲ್ಲಿ ಸ್ವ–ಸಹಾಯ ಗುಂಪುಗಳ ಸದಸ್ಯರಾಗಿರುವ ಒಂದು ಲಕ್ಷ ಮಹಿಳೆಯರಿಗೆ ಕಾಫಿ ಉದ್ಯಮಿಗಳಾಗಲು ತರಬೇತಿ ನೀಡಲಾಗುವುದು. ಇದರ ಜೊತೆಯಲ್ಲಿ 2500 ಕಾಫಿ ಕಿಯೋಸ್ಕ್‌ಗಳನ್ನು 25 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು ಮತ್ತು ಇದರ ಸಂಪೂರ್ಣ ನಿರ್ವಹಣೆಯನ್ನು ಎಸ್.ಹೆಚ್.ಜಿ. ಮಹಿಳೆಯರ ಮೂಲಕ ಮಾಡಲಾಗುವುದು.

230. ವಿದ್ಯಾರ್ಥಿನಿಯರು ಮತ್ತು ಉದ್ಯೋಗಸ್ಥ ಮಹಿಳೆಯರಿಗೆ ಕೈಗೆಟಕುವ ದರದಲ್ಲಿ ರಾತ್ರಿ ತಂಗುವ ವ್ಯವಸ್ಥೆಯನ್ನು 5 ನಗರಗಳಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ಒದಗಿಸಲಾಗುವುದು. ಈ ವಸತಿ ವ್ಯವಸ್ಥೆಯನ್ನು ಮಹಿಳಾ ಸ್ವ–ಸಹಾಯ ಗುಂಪುಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಸಹಭಾಗಿತ್ವದಲ್ಲಿ ನಿರ್ವಹಿಸಲಾಗುವುದು.

231. ಸ್ಥಳೀಯ ಮಹಿಳಾ ಸ್ವ–ಸಹಾಯ ಗುಂಪುಗಳ ಸಕ್ರಿಯ ಭಾಗವಹಿಸುವಿಕೆ ಮತ್ತು ನಾಯಕತ್ವದೊಂದಿಗೆ ಗ್ರಾಮ ಪಂಚಾಯಿತಿ ಮಟ್ಟದ ಆಡಳಿತ ಬಲಪಡಿಸುವ ಉದ್ದೇಶದಿಂದ GP-SHG ಒಗ್ಗೂಡಿಸುವಿಕೆಯ ನೀತಿಯನ್ನು ಜಾರಿಗೊಳಿಸಲಾಗುವುದು.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

232. ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ಮತ್ತು ಗುಣಾತ್ಮಕವಾಗಿ ಅಭಿವೃದ್ಧಿಪಡಿಸಲು **ಪ್ರಗತಿ ಪಥ** ಯೋಜನೆಯನ್ನು ಬಾಹ್ಯ ನೆರವಿನೊಂದಿಗೆ ಪ್ರಾರಂಭಿಸಲಾಗುವುದು. ಈ ಯೋಜನೆ ಅಡಿಯಲ್ಲಿ 189 ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳಲ್ಲಿ ತಲಾ 50 ಕಿ.ಮೀ. ಉದ್ದದ ರಸ್ತೆಗಳಂತೆ, ಒಟ್ಟಾರೆಯಾಗಿ 9,450 ಕಿ.ಮೀ. ಉದ್ದದ ರಸ್ತೆ ಸಂಪರ್ಕ ಜಾಲವನ್ನು 5,200 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

233. **ಕಲ್ಯಾಣ ಪಥ** ಯೋಜನೆಯಡಿ ಕಲ್ಯಾಣ ಕರ್ನಾಟಕದ 38 ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳಲ್ಲಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ ಮಾದರಿಯಲ್ಲಿ ಒಟ್ಟು 1,150 ಕಿ.ಮೀ. ರಸ್ತೆಗಳನ್ನು 1,000 ಕೋಟಿ ರೂ.ಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

234. ಕರ್ನಾಟಕದಲ್ಲಿ ಗ್ರಾಮ ಪಂಚಾಯತಿಗಳು ಆರೋಗ್ಯ ರಕ್ಷಣೆ, ಘನತ್ಯಾಜ್ಯ ನಿರ್ವಹಣೆ, ಗ್ರಂಥಾಲಯ ನವೀಕರಣ ಮುಂತಾದ ಕ್ಷೇತ್ರಗಳಲ್ಲಿ ನಾಯಕತ್ವದ ಸಾಮರ್ಥ್ಯವನ್ನು ಪ್ರದರ್ಶಿಸಿವೆ. ಈ ದಿಸೆಯಲ್ಲಿ ಗ್ರಾಮ ಪಂಚಾಯಿತಿಗಳನ್ನು ಸಾಮಾಜಿಕ ಕಳಕಳಿಯುಳ್ಳ ಸ್ಪಂದನಾಶೀಲ ಹಾಗೂ ಸಮರ್ಥ ಗ್ರಾಮ ಸರ್ಕಾರಗಳನ್ನಾಗಿ ರೂಪಿಸಲು ಕ್ರಮವಹಿಸಲಾಗುವುದು.

235. ನಮ್ಮ ರಾಜ್ಯ ಎಂದಿನಂತೆ ನರೇಗಾ ಯೋಜನೆಯ ಅನುಷ್ಠಾನದಲ್ಲಿ ಮುಂಚೂಣಿಯಲ್ಲಿದೆ. 2024–25ನೇ ಸಾಲಿನಲ್ಲಿ 16 ಕೋಟಿ ಮಾನವ–ದಿನಗಳನ್ನು ಸೃಜಿಸಿ, ಸುಮಾರು 30 ಲಕ್ಷ ಕುಟುಂಬಗಳಿಗೆ ಉದ್ಯೋಗ ನೀಡುವ ಗುರಿ ಹೊಂದಲಾಗಿದೆ. ಪ್ರಮುಖವಾಗಿ ಜಲಾನಯನ ಇಲಾಖೆಯ ಒಗ್ಗೂಡಿಸುವಿಕೆಯೊಂದಿಗೆ 5,000 ಎಕರೆ ಸವಳು–ಜವಳು ಭೂಮಿಯನ್ನು ಸುಧಾರಿಸುವ ಮತ್ತು ಪ್ರತಿ ತಾಲ್ಲೂಕಿಗೆ ಕನಿಷ್ಠ 2ರಂತೆ ಬೂದು ನೀರು ಸಂಸ್ಕರಣಾ ಘಟಕಗಳನ್ನು ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ.

236. ಅರಿವು ಕೇಂದ್ರಗಳನ್ನು ಬಲಪಡಿಸುವ ದೃಷ್ಟಿಯಿಂದ 132 ಕೋಟಿ ರೂ. ವೆಚ್ಚದಲ್ಲಿ ಸ್ವಂತ ಕಟ್ಟಡ ನಿರ್ಮಾಣ ಮಾಡಲಾಗುವುದು ಮತ್ತು ಪುಸ್ತಕಗಳು, ಡಿಜಿಟಲ್ ಉಪಕರಣಗಳು ಹಾಗೂ ವಿಕಲಚೇತನ ಸ್ನೇಹಿ ಉಪಕರಣಗಳನ್ನು ಖರೀದಿಸಲಾಗುವುದು.

237. ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ತ್ವರಿತ ಸೇವಾ ಪೂರೈಕೆ, ಭ್ರಷ್ಟಾಚಾರ ನಿಯಂತ್ರಣ ಮತ್ತು ದಕ್ಷತೆಯನ್ನು ಹೆಚ್ಚಿಸಲು ಪ್ರಸಕ್ತ ವರ್ಷ 5 ಉಪ ಕ್ರಮಗಳನ್ನು ಕೈಗೊಳ್ಳಲಿದೆ;

- ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಲೆಕ್ಕ ಸಹಾಯಕರ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡಲಾಗುವುದು.

- ಗ್ರಾಮ ಪಂಚಾಯಿತಿಗಳ ಸಂಪನ್ಮೂಲಗಳನ್ನು ಹೆಚ್ಚಿಸಲು ಗ್ರಾಮ ಪಂಚಾಯಿತಿ ಸ್ವತ್ತುಗಳ Asset Monetisation ನೀತಿಯನ್ನು ಜಾರಿಗೆ ತರಲಾಗುವುದು.
- ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಇ–ಆಫೀಸ್ ಅನ್ನು ಪ್ರಾರಂಭಿಸಲಾಗುವುದು.
- ಸೇವಾ ಸಿಂಧು ಪೋರ್ಟಲ್ ಮೂಲಕ ಒದಗಿಸಲಾಗುತ್ತಿರುವ ಎಲ್ಲಾ ಸೇವೆಗಳನ್ನು ಈ ವರ್ಷದಿಂದ ಬಾಪೂಜಿ ಸೇವಾ ಕೇಂದ್ರಗಳಲ್ಲೂ ಪ್ರಾರಂಭಿಸಲಾಗುವುದು.
- ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನಿಗದಿತ ಶುಲ್ಕ ಪಾವತಿಯೊಂದಿಗೆ ವ್ಯವಹಾರ ಪರವಾನಗಿಗಳ ಸ್ವಯಂಚಾಲಿತ ನವೀಕರಣಕ್ಕೆ ಕಾಯ್ದೆಯಲ್ಲಿ ಸೂಕ್ತ ತಿದ್ದುಪಡಿ ತರಲಾಗುವುದು.
- ಗ್ರಾಮ ಪಂಚಾಯಿತಿಗಳ ಸಭೆಗಳು ಮತ್ತು ಗ್ರಾಮ ಸಭೆಗಳ ಕಾರ್ಯಕಲಾಪಗಳ ನೇರ ಪ್ರಸಾರ ಮಾಡಲಾಗುವುದು.

238. ಗ್ರಾಮ ಪಂಚಾಯಿತಿಗಳಲ್ಲಿನ ವಿದ್ಯುತ್ ಬಳಕೆಯ ಮೇಲೆ ನಿಗಾವಹಿಸಲು ಹಾಗೂ ವಿದ್ಯುತ್ ವೆಚ್ಚ ಕಡಿಮೆ ಮಾಡಲು ಪ್ರಾಯೋಗಿಕವಾಗಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು;

- 50 ಗ್ರಾಮ ಪಂಚಾಯಿತಿಗಳಲ್ಲಿ **ಹೊಂಬೆಳಕು** ಕಾರ್ಯಕ್ರಮದಡಿ 25 ಕೋಟಿ ರೂ.ಗಳ ವೆಚ್ಚದಲ್ಲಿ ಸೋಲಾರ್ ದೀಪಗಳನ್ನು ಅಳವಡಿಸಲಾಗುವುದು;
- 200 ಗ್ರಾಮ ಪಂಚಾಯಿತಿಗಳಲ್ಲಿ ಬೀದಿ ದೀಪಗಳ ವ್ಯವಸ್ಥಿತ ಮೀಟರಿಂಗ್ ಮಾಡಲಾಗುವುದು;

239. ಪ್ರಸಕ್ತ ಸಾಲಿನಿಂದ ಆಯ್ದ 100 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮಸ್ಥರ ಸಹಭಾಗಿತ್ವದೊಂದಿಗೆ ಹಿರಿಯ ನಾಗರಿಕರ ಆರೈಕೆ ಮತ್ತು ಚಿಕಿತ್ಸೆಯನ್ನು ನಿರ್ವಹಿಸಲು ಆರೈಕೆ–ಉಪಶಮನ (Palliative Care) ಕೇಂದ್ರಗಳನ್ನು ಪ್ರಾರಂಭಿಸಲಾಗುವುದು.

240. **ಪ್ರೇರಣಾ** ಕಾರ್ಯಕ್ರಮದಡಿ ಸ್ವಸಹಾಯ ಗುಂಪುಗಳ ಮಹಿಳೆಯರು, ಗ್ರಾಮ ಪಂಚಾಯಿತಿಗಳ ಮಹಿಳಾ ಸದಸ್ಯರು ಹಾಗೂ ಗ್ರಾಮೀಣ ಪ್ರದೇಶದ ಮುಂಚೂಣಿಯ ಕಾರ್ಯಕರ್ತೆಯರಲ್ಲಿ Menstrual Cup ಬಳಕೆಯನ್ನು ಪ್ರೋತ್ಸಾಹಿಸಲಾಗುವುದು. ಇದರ ಮೂಲಕ ಗ್ರಾಮದ ಇತರೆ ಮಹಿಳೆಯರನ್ನು ಇವುಗಳನ್ನು ಬಳಕೆ ಮಾಡಲು ಪ್ರೇರೇಪಿಸಲಾಗುವುದು.

241. ರಾಜ್ಯದ 100 ಆಯ್ದ ಗ್ರಾಮ ಪಂಚಾಯಿತಿಗಳಲ್ಲಿ ಮಹಿಳೆಯರ ಆಕಾಂಕ್ಷೆ ಮತ್ತು ಆಸಕ್ತಿಗೆ ಅನುಗುಣವಾಗಿ ಉದ್ಯೋಗಾಧಾರಿತ ಕೌಶಲ್ಯ ತರಬೇತಿ ನೀಡಲು ಸಾವಿತ್ರಿಬಾಯಿ ಫುಲೆ ಮಹಿಳಾ ಸಬಲೀಕರಣ

ಯೋಜನೆಯನ್ನು ಪ್ರಾರಂಭಿಸಲಾಗುವುದು. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ತಲಾ ಒಂದು ಲಕ್ಷ ರೂ. ನೆರವಿನೊಂದಿಗೆ ಎಸ್.ಹೆಚ್.ಜಿ.ಗಳ ಸಹಯೋಗದೊಂದಿಗೆ ಎಣ್ಣೆ ಗಾಣವನ್ನು ಸ್ಥಾಪಿಸಲಾಗುವುದು.

242. ಗ್ರಾಮೀಣ ಪ್ರದೇಶದಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಸ್ವ–ಸಹಾಯ ಸಂಘಗಳ ಒಕ್ಕೂಟಗಳ ಮೂಲಕ ಕೈಗೊಳ್ಳಲಾಗುತ್ತಿದೆ. ಸದರಿ ವ್ಯವಸ್ಥೆಯನ್ನು ಸುಸ್ಥಿರವಾಗಿ ನಿರ್ವಹಿಸಲು, ತ್ಯಾಜ್ಯವನ್ನು ಕಡಿಮೆ ಮಾಡುವ, ಪುನಃ ಬಳಸುವ ಮತ್ತು ಮರಳಿ ಉಪಯೋಗಿಸುವ ತತ್ವಗಳಾಧಾರಿತ ವರ್ತುಲ ಆರ್ಥಿಕತೆ (Circular Economy) ಮಾದರಿಯನ್ನು ಪ್ರಸಕ್ತ ಸಾಲಿನಿಂದ ಪ್ರೋತ್ಸಾಹಿಸಲಾಗುವುದು.

243. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ಚುನಾಯಿತ ಸದಸ್ಯರಿಗೆ ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳ ಸದಸ್ಯರಿಗೆ ತರಬೇತಿ ನೀಡಲಾಗುವುದು ಹಾಗೂ ದೇಶದ ಪ್ರಪ್ರಥಮ ವರ್ತುಲ ಆರ್ಥಿಕತೆಯ (Circular Economy) ಪ್ರಯೋಗಾಲಯವನ್ನು ಸ್ಥಾಪಿಸಲು ಎರಡು ಕೋಟಿ ರೂ.ಗಳನ್ನು ಒದಗಿಸಲಾಗುವುದು.

244. ಜೀತ ಕಾರ್ಮಿಕ ಪದ್ಧತಿಯಿಂದ ಬಿಡುಗಡೆಗೊಂಡ ಕಾರ್ಮಿಕರ ಪುನರ್ವಸತಿಗಾಗಿ ನೀಡುವ ಮಾಸಿಕ ಪ್ರೋತ್ಸಾಹಧನವನ್ನು 2,000 ರೂ.ಗಳಿಗೆ ಹೆಚ್ಚಿಸಲಾಗುವುದು. ಈ ಪಿಡುಗಿನ ಪರಿಣಾಮಕಾರಿ ನಿರ್ಮೂಲನೆಗೆ ಪೂರಕವಾಗಿ ಸಂಬಂಧಪಟ್ಟ ಇಲಾಖೆಗಳ ಕ್ಷೇತ್ರಮಟ್ಟದ ಅಧಿಕಾರಿಗಳನ್ನು ಜೀತ ಕಾರ್ಮಿಕ ನಿಷೇಧ ಅಧಿಕಾರಿಗಳಾಗಿ ಅಧಿಸೂಚಿಸಲಾಗುವುದು.

245. ಕಲ್ಯಾಣ ಕರ್ನಾಟಕ ಭಾಗದ ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸರ್ಕಾರದ ಮಾನ್ಯತೆಯುಳ್ಳ ದಾಖಲೆಗಳನ್ನು ಡಿಜಿಲಾಕರ್ ಆಪ್‌ನಲ್ಲಿ ಸುರಕ್ಷಿತವಾಗಿರಿಸುವ ಸಲುವಾಗಿ **ನನ್ನ ಗುರುತು** ಅಭಿಯಾನವನ್ನು ಸಮಾಜ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ 1,000 ಗ್ರಾಮ ಪಂಚಾಯಿತಿಗಳಲ್ಲಿ ಹಮ್ಮಿಕೊಳ್ಳಲಾಗುವುದು.

246. ಪಂಚಾಯತ್ ರಾಜ್ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ಹಂಚಿಕೆ ಮಾಡಬೇಕಾದ ಅನುದಾನದ ಸೂತ್ರಗಳ ಬಗ್ಗೆ ಅಧ್ಯಯನ ನಡೆಸಿ, ಸೂಕ್ತ ಶಿಫಾರಸ್ಸು ಮಾಡಲು 5ನೇ ರಾಜ್ಯ ಹಣಕಾಸು ಆಯೋಗವನ್ನು ರಚಿಸಲಾಗಿದೆ. ಆಯೋಗದಿಂದ ಸ್ವೀಕೃತವಾಗುವ ಶಿಫಾರಸ್ಸುಗಳನ್ನು ನಮ್ಮ ಸರ್ಕಾರವು ಪ್ರಾಮಾಣಿಕವಾಗಿ ಪರಿಶೀಲಿಸುತ್ತದೆ ಮತ್ತು

ರಾಜ್ಯದಲ್ಲಿ ಸ್ಥಳೀಯ ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ಕ್ರಮ ಕೈಗೊಳ್ಳಲಾಗುವುದು.

## ಯೋಜನೆ

247. 2024–25 ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಮೂಲ ಸೌಕರ್ಯಗಳ ಅಭಿವೃದ್ಧಿಗೆ ಪ್ರಾಮುಖ್ಯತೆ ನೀಡಲು 5,000 ಕೋಟಿ ರೂ.ಗಳ ಯೋಜನೆಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

248. ಡಾ॥ ಡಿ.ಎಂ. ನಂಜುಂಡಪ್ಪ ವರದಿಯನ್ನು 2002 ರಲ್ಲಿ ಸಲ್ಲಿಸಲಾಗಿದ್ದು, ಕಳೆದ 22 ವರ್ಷಗಳಲ್ಲಿ ಈ ವರದಿಯ ಆಧಾರದ ಮೇಲೆ ಹಿಂದುಳಿದ ಪ್ರದೇಶಗಳಲ್ಲಿ ಅಸಮತೋಲನೆಯನ್ನು ನಿವಾರಿಸಲು ಬಹಳಷ್ಟು ಯೋಜನೆಗಳನ್ನು ಮತ್ತು ಬಂಡವಾಳ ಹೂಡಿಕೆಯನ್ನು ಮಾಡಲಾಗಿದೆ. ಇದರಿಂದ ಆಗಿರುವ ಬದಲಾವಣೆಗಳು ಮತ್ತು ಪರಿಣಾಮಗಳನ್ನು ಅಧ್ಯಯನ ಮಾಡಲು ಪ್ರಸಕ್ತ ಸಾಲಿನಲ್ಲಿ ಒಂದು ಉನ್ನತಾಧಿಕಾರಿ ಸಮಿತಿಯನ್ನು ರಚಿಸಲಾಗುವುದು. ಈ ಸಮಿತಿಯ ಮೂಲಕ ಪ್ರಸ್ತುತ ರಾಜ್ಯದಲ್ಲಿನ ಆರ್ಥಿಕ ಮತ್ತು ಪ್ರಾದೇಶಿಕ ಅಸಮಾನತೆಯ ಆಧಾರದ ಮೇಲೆ ಜಿಲ್ಲೆ ಮತ್ತು ತಾಲ್ಲೂಕುಗಳನ್ನು ವರ್ಗೀಕರಿಸಿ ಹೊಸ ಅಭಿವೃದ್ಧಿ ಸೂಚ್ಯಂಕಗಳನ್ನು ತಯಾರಿಸಲಾಗುವುದು.

249. ಕರ್ನಾಟಕ ರಾಜ್ಯ ಪರಿವರ್ತನಾ ಸಂಸ್ಥೆಯ (SITK) ಮೂಲ ಉದ್ದೇಶಗಳನ್ನು ಮತ್ತು ಕಾರ್ಯವನ್ನು ಸೂಕ್ತವಾಗಿ ಬಿಂಬಿಸುವ ನಿಟ್ಟಿನಲ್ಲಿ ಸಂಸ್ಥೆಯ ಹೆಸರನ್ನು ಬದಲಾವಣೆ ಮಾಡಿ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗವೆಂದು (KSPPC) ಪುನರ್‌ರಚಿಸಲಾಗುವುದು.

## ನಗರಾಭಿವೃದ್ಧಿ

250. ಬೆಂಗಳೂರು ನಗರವನ್ನು ವಿಶ್ವದರ್ಜೆಯ ನಗರವಾಗಿ ಅಭಿವೃದ್ಧಿಪಡಿಸಲು ನಾವು ಬ್ರಾಂಡ್ ಬೆಂಗಳೂರು ಪರಿಕಲ್ಪನೆಯನ್ನು ರೂಪಿಸಿ ಜಾರಿಗೊಳಿಸುತ್ತಿದ್ದೇವೆ. ಜನರ ಬದುಕಿನ ಗುಣಮಟ್ಟ ಸುಧಾರಣೆಗಾಗಿ ಹಾಗೂ ಹೂಡಿಕೆದಾರರನ್ನು ಆಕರ್ಷಿಸಲು ವಿವಿಧ ವಲಯಗಳಲ್ಲಿ ಗಣನೀಯ ಸುಧಾರಣೆಗಳನ್ನು ತರಲು ಹಲವಾರು ದಿಟ್ಟ ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ಪ್ರಸಕ್ತ ಸಾಲಿನಲ್ಲಿ ಸಂಪನ್ಮೂಲಗಳ ಹೆಚ್ಚಳ, ಸಂಚಾರ ದಟ್ಟಣೆ ನಿವಾರಣೆ, ಗುಣಮಟ್ಟದ ರಸ್ತೆಗಳ ನಿರ್ಮಾಣ, ಶುದ್ಧ ಕುಡಿಯುವ ನೀರು ಪೂರೈಕೆ, ಉತ್ತಮ ಸಾರ್ವಜನಿಕ ಸಾರಿಗೆ ಮತ್ತು ಸ್ವಚ್ಛ-ಸುಂದರ ಬೆಂಗಳೂರು ನಿರ್ಮಾಣದ ಕುರಿತು ಹೆಚ್ಚಿನ ಗಮನ ಹರಿಸುತ್ತೇವೆ.

251. ಬಿ.ಬಿ.ಎಂ.ಪಿ ಯಲ್ಲಿ ತೆರಿಗೆ ಮತ್ತು ತೆರಿಗೆಯೇತರ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸರ್ಕಾರವು ಹಲವು ಉಪಕ್ರಮಗಳನ್ನು ಕೈಗೊಳ್ಳಲಿದೆ;

- 2023–24ನೇ ಸಾಲಿನಲ್ಲಿ 4,300 ಕೋಟಿ ರೂ. ತೆರಿಗೆ ಸಂಗ್ರಹ ಮಾಡುವ ಮುಖಾಂತರ ದಾಖಲೆಯ ತೆರಿಗೆ ಸಂಗ್ರಹ ಮಾಡುವತ್ತ ಮುನ್ನಡೆದಿದೆ. ಇದು 2022–23ನೇ ಸಾಲಿಗಿಂತ 1,000 ಕೋಟಿ ರೂ. ಗಳಷ್ಟು ಹೆಚ್ಚಾಗಿದೆ. 2024–25ರಲ್ಲಿ ತೆರಿಗೆ ಸಂಗ್ರಹ ವ್ಯವಸ್ಥೆಯಲ್ಲಿ ಸೋರಿಕೆ ತಡೆಗಟ್ಟುವ ಮೂಲಕ 6,000 ಕೋಟಿ ರೂ.ಗಳಷ್ಟು ತೆರಿಗೆ ಸಂಗ್ರಹದ ನಿರೀಕ್ಷೆ ಇದೆ.
- ಪ್ರಸಕ್ತ ಸಾಲಿನಿಂದ ಪರಿಷ್ಕೃತ ಜಾಹೀರಾತು ನೀತಿ ಮತ್ತು Premium FAR ನೀತಿಯನ್ನು ಜಾರಿಗೆ ತರುವ ಮೂಲಕ ಹೆಚ್ಚುವರಿಯಾಗಿ 2,000 ಕೋಟಿ ರೂ.ಗಳಷ್ಟು ತೆರಿಗೆಯೇತರ ಸಂಪನ್ಮೂಲ ಸಂಗ್ರಹಿಸುವ ಗುರಿ ಹೊಂದಲಾಗಿದೆ.
- ಬಿಬಿಎಂಪಿ ವ್ಯಾಪ್ತಿಯ ಎಲ್ಲಾ 20 ಲಕ್ಷ ಆಸ್ತಿಗಳ ಆಸ್ತಿ ತೆರಿಗೆ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಿ 2024–25ನೇ ಸಾಲಿನಿಂದ ಮಾಲೀಕರಿಗೆ ಡಿಜಿಟಲ್ ಇ–ಖಾತಾ ಮತ್ತು ಆಸ್ತಿ ತೆರಿಗೆ ಪಾವತಿ ವಿವರಗಳನ್ನು ದೊರಕಿಸಲಾಗುವುದು.

252. ಮೇಲೆ ವಿವರಿಸಿರುವಂತೆ ಸಂಗ್ರಹವಾಗುವ ಹೆಚ್ಚುವರಿ ಸಂಪನ್ಮೂಲಗಳಿಂದ ಆದ್ಯತೆಯ ಮೇಲೆ ಬೆಂಗಳೂರಿನ ಸಂಚಾರ ದಟ್ಟಣೆಯ ಸಮಸ್ಯೆಯನ್ನು ನಿವಾರಿಸಲು ಸರ್ಕಾರವು ವಿವಿಧ ಯೋಜನೆಗಳನ್ನು ಕೈಗೆತ್ತಿಕೊಳ್ಳಲಿದೆ;

- ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ನಗರದ ಪ್ರಮುಖ ರಸ್ತೆಗಳಲ್ಲಿ 147 ಕಿ.ಮೀ ಉದ್ದದ ವೈಟ್ ಟಾಪಿಂಗ್ ಕಾಮಗಾರಿಗಳನ್ನು 1,700 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲು ಮಂಜೂರಾತಿ ನೀಡಲಾಗಿದೆ. ಈ ಕಾಮಗಾರಿಗಳನ್ನು ಡಿಸೆಂಬರ್ 2025 ರೊಳಗೆ ಪೂರ್ಣಗೊಳಿಸಲಾಗುವುದು.
- ಭೂಮಿಯ ಅಲಭ್ಯತೆ ಮತ್ತು ಭೂಸ್ವಾಧೀನ ಪ್ರಕ್ರಿಯೆಯಲ್ಲಿನ ತೊಡಕುಗಳ ಕಾರಣ ಅಸ್ತಿತ್ವದಲ್ಲಿರುವ ರಸ್ತೆಗಳ ವಿಸ್ತರಣೆಯು ಅತ್ಯಂತ ಕಷ್ಟಸಾಧ್ಯವಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಸುರಂಗ ಮಾರ್ಗ (Tunnel) ನಿರ್ಮಿಸುವ ಮೂಲಕ ನಗರದಲ್ಲಿ ಸಂಚಾರ ದಟ್ಟಣೆಯನ್ನು ಬಗೆಹರಿಸಲು ನಿರ್ಧರಿಸಿದೆ. ಈ ವರ್ಷ ಸಂಚಾರ ದಟ್ಟಣೆ ಅತ್ಯಂತ ತೀವ್ರವಾಗಿರುವ ಹೆಬ್ಬಾಳ ಜಂಕ್ಷನ್ ನಲ್ಲಿ ಪ್ರಾಯೋಗಿಕವಾಗಿ ಟನೆಲ್ ಅನ್ನು ನಿರ್ಮಿಸಲಾಗುವುದು.
- ನಾಲಾ ಬಫರ್ ವಲಯದೊಳಗೆ ನಾಲಾ ಬಫರ್ ಅನ್ನು ಬಳಸಿಕೊಂಡು ಸರ್ವಋತು ರಸ್ತೆಗಳನ್ನು ನಿರ್ಮಿಸುವ ಹೊಸ ಪರಿಕಲ್ಪನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಈಗಾಗಲೇ 200 ಕೋಟಿ ರೂ. ಅಂದಾಜು ವೆಚ್ಚದಲ್ಲಿ 100 ಕಿ.ಮೀ. ಉದ್ದದ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಹೆಚ್ಚುವರಿಯಾಗಿ 100 ಕಿ.ಮೀ. ಉದ್ದದ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುವುದು.

- ಸುಗಮ ಸಂಚಾರ-ಬ್ರಾಂಡ್ ಬೆಂಗಳೂರು ಯೋಜನೆಯಡಿ ಅಂತಾರಾಷ್ಟ್ರೀಯ ಮಟ್ಟದ ತಜ್ಞ ಸಂಸ್ಥೆಯನ್ನು ನೇಮಿಸಿಕೊಳ್ಳಲಾಗಿದೆ. ಈ ಸಂಸ್ಥೆಯು ನೀಡುವ ವರದಿಯನ್ನು ಆಧರಿಸಿ, ಬೆಂಗಳೂರಿನ ಸಂಚಾರ ದಟ್ಟಣೆಗೆ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುವುದು.

253. ಬೆಂಗಳೂರಿನಲ್ಲಿ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವುದರ ಜೊತೆಗೆ ಬೆಂಗಳೂರಿನ ಆರ್ಥಿಕ ಚಟುವಟಿಕೆಗಳು ದೊಡ್ಡ ಪ್ರಮಾಣದಲ್ಲಿ ವೃದ್ಧಿಸಲು ಸಹಕಾರಿಯಾಗುವಂತೆ ಪೆರಿಫೆರಲ್ ರಿಂಗ್ ರೋಡ್ ಅನ್ನು **ಬೆಂಗಳೂರು ಬಿಸಿನೆಸ್ ಕಾರಿಡಾರ್** ಎಂಬ ಹೊಸ ಪರಿಕಲ್ಪನೆಯಲ್ಲಿ ಪರಿಚಯಿಸಲು ಉದ್ದೇಶಿಸಲಾಗಿದೆ. ಈ ಯೋಜನೆಯಡಿ 73 ಕಿ.ಮೀ. ಉದ್ದದ ರಸ್ತೆಯನ್ನು 27,000 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಪಿಪಿಪಿ ಮಾದರಿಯಲ್ಲಿ ನಿರ್ಮಾಣ ಮಾಡಲು RFP ಕರೆಯಲಾಗಿದೆ. ಈ ಯೋಜನೆಯನ್ನು ಇದೇ ಸಾಲಿನಲ್ಲಿ ಪ್ರಾರಂಭ ಮಾಡಲು ಉದ್ದೇಶಿಸಿದೆ.

254. ಬೆಂಗಳೂರು ನಗರದಲ್ಲಿ 250 ಮೀಟರ್ ಎತ್ತರದ ಸ್ಕೈ-ಡೆಕ್ (Sky-Deck) ನಿರ್ಮಾಣಕ್ಕಾಗಿ ನೂತನ ಪರಿಕಲ್ಪನೆ ಒದಗಿಸುವಂತೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಪಡೆದ ವಾಸ್ತುವಿನ್ಯಾಸಗಾರರನ್ನು

ಆಹ್ವಾನಿಸಿದೆ. ಇದರಿಂದ ನಗರದ ಒಳಗೆ ಆಕರ್ಷಕವಾದ ಪ್ರವಾಸಿ ತಾಣವನ್ನು ಸೃಜಿಸಿದಂತಾಗುತ್ತದೆ.

255. ನಗರಾಭಿವೃದ್ಧಿ ಇಲಾಖೆಯ ಅಂಗಸಂಸ್ಥೆಗಳಾದ BBMP, BMRCL, BWSSB, BDA ಗಳ ವ್ಯಾಪ್ತಿಯಲ್ಲಿ ಪ್ರತಿ ತಿಂಗಳು ವಿದ್ಯುತ್ ಶುಲ್ಕ ಪಾವತಿಯ ಆರ್ಥಿಕ ಹೊರೆ ಕಡಿಮೆಗೊಳಿಸಲು ಸೋಲಾರ್ ಪಾರ್ಕ್ ಅನ್ನು Captive/Group Captive ಮೂಲಕ ಸ್ಥಾಪಿಸಲಾಗುವುದು.

256. ಬೆಂಗಳೂರಿನಲ್ಲಿ ಬಿ.ಎಂ.ಟಿ.ಸಿ ಸೇವೆಯೊಂದಿಗೆ ಮೆಟ್ರೋ ರೈಲು ಹಾಗೂ ಸಬ್–ಅರ್ಬನ್ ರೈಲು ಯೋಜನೆಗಳು ಜನರ ಸುಗಮ ಸಂಚಾರದ ದೃಷ್ಟಿಯಿಂದ ಕ್ರಾಂತಿಕಾರಿ ಬದಲಾವಣೆ ತರಲಿವೆ. ಈ ಬಹುವಿಧ ಸಾರಿಗೆ ವ್ಯವಸ್ಥೆಗಳನ್ನು ಒಗ್ಗೂಡಿಸಿ, ಪರಸ್ಪರ ಸಮನ್ವಯದಿಂದ ಕಾರ್ಯಾಚರಣೆ ಮಾಡುವ ಮೂಲಕ ಜನರು ಹೆಚ್ಚು ಹೆಚ್ಚಾಗಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಅವಲಂಬಿಸಲು ಪ್ರೇರೇಪಿಸುವುದು ನಮ್ಮ ಆದ್ಯತೆಯಾಗಿದೆ. ಇದರಿಂದ ಸಂಚಾರ ದಟ್ಟಣೆ ಹಾಗೂ ಪರಿಸರ ಮಾಲಿನ್ಯಗಳ ನಿಯಂತ್ರಣ ಸಾಧ್ಯವಾಗುವುದಲ್ಲದೆ, ಬದುಕು ಇನ್ನಷ್ಟು ಸುಗಮವಾಗಲಿದೆ.

257. ದೇಶದ ಅತ್ಯುತ್ತಮ ಮೆಟ್ರೋ ಸೇವೆಗಳಲ್ಲಿ ಮುಂಚೂಣಿಯಲ್ಲಿರುವ ನಮ್ಮ ಮೆಟ್ರೋ ರೈಲು ಯೋಜನೆಯು ಬೆಂಗಳೂರು ನಗರದ ಸಂಚಾರ

ವ್ಯವಸ್ಥೆಯ ಜೀವನಾಡಿಯಾಗಿದೆ. 8 ಲಕ್ಷಕ್ಕೂ ಹೆಚ್ಚಿನ ಜನರು ಪ್ರತಿನಿತ್ಯ ಮೆಟ್ರೋ ಸೇವೆಯನ್ನು ಬಳಸುತ್ತಿದ್ದಾರೆ. ಪ್ರಸ್ತುತ ಕಾರ್ಯಾಚರಣೆಯಲ್ಲಿರುವ 74 ಕಿ.ಮೀ. ಮಾರ್ಗದೊಂದಿಗೆ 2025ರ ಮಾರ್ಚ್ ವೇಳೆಗೆ ಹೆಚ್ಚುವರಿಯಾಗಿ 44 ಕಿ.ಮೀ. ಮಾರ್ಗ ಸೇರ್ಪಡೆಯಾಗಲಿದೆ.

258. ಮೆಟ್ರೋ ಯೋಜನೆ ಹಂತ–2 ಮತ್ತು 2ಎ ಯೋಜನೆಯಡಿ ಹೊರವರ್ತುಲ ರಸ್ತೆ– ವಿಮಾನ ನಿಲ್ದಾಣ ಮಾರ್ಗವು 2026ರ ಜೂನ್ ವೇಳೆಗೆ ಪೂರ್ಣಗೊಳ್ಳಲಿದೆ. ಪ್ರಸಕ್ತ ಸಾಲಿನಲ್ಲಿ ಮೆಟ್ರೋ ಸೇವೆಯ ಇತಿಹಾಸದಲ್ಲಿಯೇ ಪ್ರಥಮ ಬಾರಿ ಕಾರ್ಯಾಚರಣೆಯು ಲಾಭದಾಯಕವಾಗಿ (Operational Profit) ಪರಿಣಮಿಸಿರುವುದು ಹೆಮ್ಮೆಯ ಸಂಕೇತವಾಗಿದೆ.

259. ನಮ್ಮ ಮೆಟ್ರೋ ಹಂತ–3 ರಡಿ ಅಂದಾಜು 15,611 ಕೋಟಿ ರೂ. ವೆಚ್ಚದ ಯೋಜನೆಗೆ ರಾಜ್ಯ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಕೇಂದ್ರ ಸರ್ಕಾರದ ಅನುಮೋದನೆಯ ನಿರೀಕ್ಷೆಯಲ್ಲಿದೆ.

260. ನಮ್ಮ ಮೆಟ್ರೋ ಹಂತ–3ಎ ರಡಿಯಲ್ಲಿ ಸರ್ಜಾಪುರದಿಂದ ಅಗರ, ಕೋರಮಂಗಲ ಡೈರಿ ವೃತ್ತ, ಮೇಖ್ರಿ ವೃತ್ತ ಮೂಲಕ ಹೆಬ್ಬಾಳವನ್ನು ಸಂಪರ್ಕಿಸುವ ಮಾರ್ಗ ನಿರ್ಮಾಣ ಕುರಿತು ಡಿ.ಪಿ.ಆರ್. ಕರಡು

ಸಿದ್ಧಪಡಿಸಲಾಗಿದ್ದು, ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗುವುದು.

261. ಮಂದಗತಿಯಲ್ಲಿ ಸಾಗುತ್ತಿದ್ದ ಬೆಂಗಳೂರು ಉಪನಗರ ರೈಲು ಯೋಜನೆಯನ್ನು ನಮ್ಮ ಸರ್ಕಾರವು ಅಧಿಕಾರಕ್ಕೆ ಬಂದ ನಂತರ ಚುರುಕುಗೊಳಿಸಿ, ಬೈಯ್ಯಪ್ಪನಹಳ್ಳಿಯಿಂದ ಚಿಕ್ಕಬಾಣಾವರ ವರೆಗಿನ ಕಾರಿಡಾರ್-2ರ ಸಿವಿಲ್ ಕಾಮಗಾರಿಗಳನ್ನು ವೇಗವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಕಾರಿಡಾರ್-4 ರ ಹೀಲಲಿಗೆಯಿಂದ ರಾಜಾನುಕುಂಟೆ ವರೆಗಿನ 46.2 ಕಿ.ಮೀ. ಉದ್ದದ ಮಾರ್ಗ ನಿರ್ಮಾಣಕ್ಕೆ ಕಾರ್ಯಾದೇಶ ನೀಡಲಾಗಿದೆ. Rolling Stock ಮತ್ತು ಅದರ ಕಾರ್ಯಾಚರಣೆ ಮತ್ತು ನಿರ್ವಹಣೆಗೆ RFP ಆಹ್ವಾನ ಮಾಡಲಾಗಿದೆ. European Investment Bank ಮತ್ತು ಜರ್ಮನಿಯ KFW ಬ್ಯಾಂಕುಗಳ ಜೊತೆಗೆ ಆರ್ಥಿಕ ನೆರವಿಗೆ ಒಪ್ಪಂದ ಮಾಡಿಕೊಳ್ಳಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಈ ಮಹತ್ವಾಕಾಂಕ್ಷಿ ಯೋಜನೆಯ ಅಗತ್ಯತೆಯ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆದು ಹೆಚ್ಚಿನ ಅನುದಾನ ನೀಡುವಂತೆ ಒತ್ತಾಯಿಸಲಾಗುವುದು ಮತ್ತು ಕೇಂದ್ರ ಸರ್ಕಾರ ನೀಡುವ ಅನುದಾನಕ್ಕೆ ಎದುರಾಗಿ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಒದಗಿಸಲಾಗುವುದು.

262. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಪ್ರತಿದಿನ ಸರಾಸರಿ 42 ಲಕ್ಷ ಜನರಿಗೆ ಸೇವೆಯನ್ನು ಒದಗಿಸುತ್ತಿದ್ದು, ದೇಶದಲ್ಲಿಯೇ ಅತ್ಯುತ್ತಮ ನಗರ ಸಾರಿಗೆ ವ್ಯವಸ್ಥೆಗಳಲ್ಲಿ ಒಂದಾಗಿದೆ. ಮುಂದಿನ ದಿನಗಳಲ್ಲಿ 1,334 ಹೊಸ ಎಲೆಕ್ಟ್ರಿಕ್ ಬಸ್‌ಗಳು ಮತ್ತು 820 ಬಿಎಸ್–6 ಡೀಸೆಲ್ ಬಸ್ಸುಗಳನ್ನು ಬಿ.ಎಂ.ಟಿ.ಸಿ.ಗೆ ಸೇರ್ಪಡೆಗೊಳಿಸಲಾಗುವುದು.

263. ಪ್ರಯಾಣಿಕರ ಹಿತದೃಷ್ಟಿಯಿಂದ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಿಂದ ಮಹಿಳಾ ಸುರಕ್ಷತೆಯನ್ನು ಒಳಗೊಂಡ Vehicle Tracking ಹೊಂದಿರುವ ಮೊಬೈಲ್ ಆಪ್ ಅನ್ನು ಅನುಷ್ಠಾನಗೊಳಿಸಲಾಗುತ್ತಿದೆ.

264. ಜಪಾನ್ ಸರ್ಕಾರದ ಸಹಯೋಗದೊಂದಿಗೆ ಬೆಂಗಳೂರು ನಗರದಲ್ಲಿ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು Area Traffic Signal Control System ಅನ್ನು ನಗರದ ಪ್ರಮುಖ 28 ಜಂಕ್ಷನ್‌ಗಳಲ್ಲಿ ಅಳವಡಿಸುವ ಮೂಲಕ ಟ್ರಾಫಿಕ್ ಸಿಗ್ನಲ್ ನಲ್ಲಿ ವಾಹನಗಳ ಸಂದಣಿಯನ್ನು ಶೇ.30ರಷ್ಟು ಹಾಗೂ ಸರಾಸರಿ ವಿಳಂಬವನ್ನು ಶೇ.13ರಷ್ಟು ಕಡಿಮೆಗೊಳಿಸಲಾಗುವುದು.

265. ನಗರದ ಅಭಿವೃದ್ಧಿಯ ಮಹತ್ವಾಕಾಂಕ್ಷಿ ಕಾರ್ಯಕ್ರಮಗಳ ಜೊತೆಯಲ್ಲಿ ನಾಗರಿಕರ ಬದುಕಿನ ಗುಣಮಟ್ಟ ಸುಧಾರಣೆಗೂ ನಮ್ಮ ಸರ್ಕಾರ ಆದ್ಯತೆ ನೀಡುತ್ತಿದ್ದು, ಉತ್ತಮ ಪರಿಸರ, 24x7 ಕುಡಿಯುವ ನೀರಿನ

ಪೂರೈಕೆ ಮತ್ತು ಸ್ವಚ್ಛತೆಯ ನಿರ್ವಹಣೆಗೆ ಒತ್ತು ನೀಡಲಾಗುವುದು. ಈ ನಿಟ್ಟಿನಲ್ಲಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು;

- ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ 5,550 ಕೋಟಿ ರೂ. ಅಂದಾಜು ವೆಚ್ಚದಲ್ಲಿ 775 ಎಂ.ಎಲ್.ಡಿ ಸಾಮರ್ಥ್ಯದ ಕಾವೇರಿ ಹಂತ–5 ಯೋಜನೆಯನ್ನು ಮೇ 2024 ರಲ್ಲಿ ಕಾರ್ಯಾರಂಭಗೊಳಿಸುವ ಮೂಲಕ 12 ಲಕ್ಷ ಜನರಿಗೆ ಪ್ರತಿದಿನ 110 ಲೀಟರ್ ಶುದ್ಧ ಕುಡಿಯುವ ನೀರನ್ನು ಒದಗಿಸಲಾಗುವುದು.

- ಕಾವೇರಿ ಹಂತ–5 ರಡಿಯಲ್ಲಿ ಒಳಚರಂಡಿ ಕಾಮಗಾರಿಗಳನ್ನು ಡಿಸೆಂಬರ್ 2024 ರಲ್ಲಿ ಪೂರ್ಣಗೊಳಿಸಲಾಗುವುದು. ಇದರಿಂದ 228 ಕಿ.ಮೀ ವ್ಯಾಪ್ತಿಯಲ್ಲಿ ಒಳಚರಂಡಿ ಕೊಳವೆಯನ್ನು ಅಳವಡಿಸಲಾಗುವುದು ಮತ್ತು 13 ಎಸ್.ಟಿ.ಪಿ ಘಟಕಗಳಿಂದ 100 ಎಂ.ಎಲ್.ಡಿ ರಷ್ಟು ಒಳಚರಂಡಿ ನೀರನ್ನು ಸಂಸ್ಕರಿಸುವ ಸಾಮರ್ಥ್ಯವನ್ನು ಸೃಜಿಸಲಾಗುವುದು.

- 07 ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳನ್ನು (ಎಸ್.ಟಿ.ಪಿ) 441 ಕೋಟಿ ರೂ.ಗಳ ಮೊತ್ತದಲ್ಲಿ ಉನ್ನತೀಕರಿಸಲಾಗುವುದು. ಇದರಿಂದ 268 ಎಂ.ಎಲ್.ಡಿ ತ್ಯಾಜ್ಯ ನೀರನ್ನು ಪ್ರತಿನಿತ್ಯ ಸಂಸ್ಕರಿಸಿ ಮರುಬಳಕೆ ಮಾಡಲು ಅನುಕೂಲವಾಗಲಿದೆ.

- ಬಿ.ಬಿ.ಎಂ.ಪಿ ವ್ಯಾಪ್ತಿಗೆ ಸೇರ್ಪಡೆಯಾದ 110 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸುವ ಯೋಜನೆಯ ಎರಡನೇ ಹಂತವನ್ನು 200 ಕೋಟಿ ರೂ.ಗಳ ಮೊತ್ತದಲ್ಲಿ ಪ್ರಾರಂಭಿಸಲಾಗುವುದು.

266. ಮನೆಗಳಿಂದ ತ್ಯಾಜ್ಯ ಸಂಸ್ಕರಣಾ ಘಟಕಗಳವರೆಗೂ ತ್ಯಾಜ್ಯಗಳ ವಿಲೇವಾರಿಯನ್ನು ವ್ಯವಸ್ಥಿತವಾಗಿ ನಿರ್ವಹಿಸಲು ಬೆಂಗಳೂರು ನಗರ ಜಿಲ್ಲೆಯನ್ನು ನಾಲ್ಕು ವಲಯಗಳನ್ನಾಗಿ ವಿಂಗಡಿಸಿ, ಪ್ರತಿಯೊಂದು ವಲಯಕ್ಕೂ ನುರಿತ ಸಂಸ್ಥೆಯನ್ನು ಪಾರದರ್ಶಕವಾಗಿ ನೇಮಿಸಲಾಗುವುದು. ನಗರದ ಹೊರವಲಯದ ನಾಲ್ಕು ಕಡೆಗಳಲ್ಲಿ 50 ರಿಂದ 100 ಎಕರೆ ಜಮೀನನ್ನು ಗುರುತಿಸಿ ಮುಂದಿನ 30 ವರ್ಷಗಳ ಬೆಳವಣಿಗೆಯನ್ನು ಗಮನದಲ್ಲಿಟ್ಟು ವೈಜ್ಞಾನಿಕ ತ್ಯಾಜ್ಯ ವಿಲೇವಾರಿಗೆ ಅವಕಾಶ ಕಲ್ಪಿಸಲಾಗುವುದು.

267. ಬಿಬಿಎಂಪಿಯ ಅರಣ್ಯ, ಕೆರೆ ಮತ್ತು ತೋಟಗಾರಿಕಾ ವಿಭಾಗವನ್ನು ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ನಿರ್ವಹಣಾ ವಿಭಾಗ ಎಂದು ಮರುನಾಮಕರಣ ಮಾಡಿ, ಕಾರ್ಯವ್ಯಾಪ್ತಿಯನ್ನು ವಿಸ್ತರಿಸಲಾಗಿದೆ. ನಗರದಲ್ಲಿ ವಾತಾವರಣದ ಸ್ವಚ್ಛತೆಗಾಗಿ ಮರಗಳ ಗಣತಿ, ಕೆರೆ ಮತ್ತು ಉದ್ಯಾನವನಗಳ ತಂತ್ರಾಂಶ ಆಧಾರಿತ ಮೇಲ್ವಿಚಾರಣೆ ಹಾಗೂ ಕೆರೆ ಮತ್ತು ಉದ್ಯಾನಗಳ ಅಭಿವೃದ್ಧಿಯಲ್ಲಿ

ಸಾರ್ವಜನಿಕ ಸಹಭಾಗಿತ್ವವನ್ನು ಹೆಚ್ಚಿಸಲು ಪ್ರತ್ಯೇಕ ನೀತಿ ಜಾರಿಗೊಳಿಸಲಾಗುವುದು.

268. ಬಿಬಿಎಂಪಿ ಸಹಯೋಗದೊಂದಿಗೆ ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದಲ್ಲಿ ಸರ್ವಜ್ಞ ಉದ್ಯಾನವನವನ್ನು ಅಭಿವೃದ್ಧಿಪಡಿಸಲಾಗುವುದು.

269. ಬೆಂಗಳೂರು ಹಾಗೂ 10 ಮಹಾನಗರ ಪಾಲಿಕೆಗಳಲ್ಲಿ ವಾಣಿಜ್ಯ ಮತ್ತು ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ-ವಹಿವಾಟಿನ ಮೇಲಿನ ನಿರ್ಬಂಧವನ್ನು ಬೆಳಗಿನ ಜಾವ ಒಂದು ಗಂಟೆಯವರೆಗೆ (1:00 am) ವಿಸ್ತರಿಸಲಾಗುವುದು.

## ಪೌರಾಡಳಿತ

270. ಬೆಂಗಳೂರಿಗೆ ಪರ್ಯಾಯವಾಗಿ ರಾಜ್ಯದಲ್ಲಿ ಸುಸ್ಥಿರವಾದ ಮೂಲಸೌಕರ್ಯಗಳನ್ನು ಒಳಗೊಂಡ ಮತ್ತು ಉದ್ಯೋಗಾವಕಾಶಗಳನ್ನು ಸೃಜಿಸುವಂತೆ ಆಕರ್ಷಕ ನಗರಗಳನ್ನು ಅಭಿವೃದ್ಧಿಪಡಿಸುವ ಮೂಲಕ ಬೆಂಗಳೂರಿನ ಮೇಲಿನ ಒತ್ತಡವನ್ನು ತಗ್ಗಿಸಲು ಸರ್ಕಾರವು ವಿವಿಧ ಯೋಜನೆಗಳನ್ನು ರೂಪಿಸಲಿದೆ;

- ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ 2.0 ಅಡಿ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಮೂಲಭೂತ ಸೌಕರ್ಯಗಳ

ಅಭಿವೃದ್ಧಿಗಾಗಿ 2,000 ಕೋಟಿ ರೂ. ಗಳನ್ನು ಒದಗಿಸಲಾಗುವುದು.

- ಮೈಸೂರು, ಮಂಗಳೂರು, ಹುಬ್ಬಳ್ಳಿ–ಧಾರವಾಡ, ಬೆಳಗಾವಿ, ಕಲಬುರಗಿ, ಕೆ.ಜಿ.ಎಫ್, ತುಮಕೂರಿನ ವಸಂತನರಸಾಪುರ ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಇಂಟಿಗ್ರೇಟೆಡ್ ಟೌನ್‌ಶಿಪ್‌ಗಳನ್ನು ಅಭಿವೃದ್ಧಿಪಡಿಸಲಾಗುವುದು.
- ಬೆಂಗಳೂರಿನ ಹೊರವಲಯದಲ್ಲಿರುವ ದೇವನಹಳ್ಳಿ, ನೆಲಮಂಗಲ, ಹೊಸಕೋಟೆ, ದೊಡ್ಡಬಳ್ಳಾಪುರ, ಮಾಗಡಿ ಮತ್ತು ಬಿಡದಿಯಲ್ಲಿ ರಸ್ತೆ ಮತ್ತು ರೈಲು ಸಂಪರ್ಕದೊಂದಿಗೆ ಉಪನಗರ ಟೌನ್‌ಶಿಪ್‌ಗಳನ್ನಾಗಿ (Satellite Townships) ಅಭಿವೃದ್ಧಿಪಡಿಸಲಾಗುವುದು.
- ಬೆಂಗಳೂರಿನ BIEC ನಿಂದ ತುಮಕೂರುವರೆಗೆ ಮತ್ತು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ದೇವನಹಳ್ಳಿವರೆಗೆ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಮೆಟ್ರೋ ರೈಲು ಯೋಜನೆಗಳನ್ನು ಪ್ರಾರಂಭಿಸಲು ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗುವುದು.

271. ರಾಜ್ಯದ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಜನದಟ್ಟಣೆಯು ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದರಿಂದ ರಿಂಗ್ ರಸ್ತೆಯ ಮೇಲೆ ಒತ್ತಡ ಹೆಚ್ಚಾಗಿದೆ.

ಈ ಹಿನ್ನೆಲೆಯಲ್ಲಿ ಮೈಸೂರು ನಗರಕ್ಕೆ ಪೆರಿಫೆರಲ್ ರಿಂಗ್ ರಸ್ತೆಯನ್ನು ಪಿಪಿಪಿ ಅಥವಾ ಟೌನ್ ಪ್ಲಾನಿಂಗ್ ಮಾದರಿಯಲ್ಲಿ ನಿರ್ಮಿಸಲು ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗುವುದು.

272. ನಗರ ಪ್ರದೇಶದ ಎಲ್ಲಾ ಮನೆಗಳಿಗೆ ಕುಡಿಯುವ ನೀರನ್ನು ಒದಗಿಸಲು ಅಮೃತ್ 2.0 ಕೇಂದ್ರ ಪುರಸ್ಕೃತ ಯೋಜನೆಯಡಿ ಅನುಷ್ಠಾನಗೊಳಿಸಲಾಗುತ್ತಿದ್ದು, ಇದರಲ್ಲಿ ರಾಜ್ಯದ ಪಾಲು 4,615 ಕೋಟಿ ರೂ. ಗಳಾಗಿದೆ. ಕಳೆದ ವರ್ಷ ಈ ಉದ್ದೇಶಕ್ಕಾಗಿ ನಾವು 320 ಕೋಟಿ ರೂ. ಅನುದಾನ ಒದಗಿಸಿದ್ದು, ಈ ವರ್ಷ 200 ಕೋಟಿ ರೂ. ಒದಗಿಸಿ, 7.5 ಲಕ್ಷ ಮನೆಗಳಿಗೆ ನಲ್ಲಿ ಸಂಪರ್ಕದ ಮೂಲಕ ಕುಡಿಯುವ ನೀರನ್ನು ಒದಗಿಸುವ ಗುರಿ ಹೊಂದಿದ್ದೇವೆ.

273. ಕೇಂದ್ರ ಪುರಸ್ಕೃತ ಸ್ವಚ್ಛ ಭಾರತ್ ಮಿಷನ್ 2.0 ಅಡಿಯಲ್ಲಿ ದ್ರವ ಹಾಗೂ ಘನ ತ್ಯಾಜ್ಯ ಸಂಸ್ಕರಣೆಗೆ ಕೇಂದ್ರ ಸರ್ಕಾರದ ಪಾಲು 2,185 ಕೋಟಿ ರೂ.ಗಳನ್ನು ಒಳಗೊಂಡಂತೆ 5,072 ಕೋಟಿ ರೂ ವೆಚ್ಚ ಮಾಡಲಾಗುತ್ತಿದೆ. ಪ್ರಸಕ್ತ ವರ್ಷದಲ್ಲಿ ನಮ್ಮ ಜಲ ಮೂಲಗಳನ್ನು ಮಲಿನಗೊಳಿಸುವ ದ್ರವ ತ್ಯಾಜ್ಯಗಳ ಸಂಸ್ಕರಣೆ, ಲೆಗೆಸಿ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿಗೆ ಆದ್ಯತೆ ನೀಡುವ ಮೂಲಕ ನಗರಗಳಲ್ಲಿ ಸ್ವಚ್ಛ ವಾತಾವರಣ ನಿರ್ಮಾಣ ಮಾಡಲು ಒತ್ತು ನೀಡಲಾಗುವುದು.

274. ಸ್ಥಳೀಯ ಸಂಸ್ಥೆ, ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಜಂಟಿ ಸಹಭಾಗಿತ್ವದ ಯೋಜನೆಯಾದ ಅಮೃತ್ 2.0 ಅಡಿಯಲ್ಲಿ, 539 ಕೋಟಿ ರೂ. ಮೊತ್ತದಲ್ಲಿ ಕೆರೆ ಹಾಗೂ ಜಲಮೂಲಗಳ ಪುನಶ್ಚೇತನ ಮತ್ತು ಉದ್ಯಾನವನಗಳ ಅಭಿವೃದ್ಧಿ ಕಾಮಗಾರಿಗಳನ್ನು ಆಯ್ದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೈಗೊಳ್ಳಲಾಗುವುದು.

275. ನಗರ ಪ್ರದೇಶಗಳಲ್ಲಿ ಆಸ್ತಿಗಳ ಅಕ್ರಮ ನೋಂದಣಿ ತಡೆಗಟ್ಟಲು ಹಾಗೂ ಆಸ್ತಿ ನೋಂದಣಿ ಮತ್ತು ಖಾತಾ ನಮೂದನ್ನು ಇನ್ನಷ್ಟು ಸರಳೀಕರಣಗೊಳಿಸಲು, ಕಾವೇರಿ ಮತ್ತು ಇ–ಆಸ್ತಿ ತಂತ್ರಾಂಶಗಳ ಸಂಯೋಜನೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಲಾಗುವುದು.

276. ಆಸ್ತಿ ತೆರಿಗೆ ಮತ್ತು ಇನ್ನಿತರೆ ಶುಲ್ಕಗಳನ್ನು ಪರಿಣಾಮಕಾರಿಯಾಗಿ ವಸೂಲಿ ಮಾಡಲು ಹಾಗೂ ತೆರಿಗೆ ಸೋರಿಕೆಯನ್ನು ತಡೆಗಟ್ಟಲು 3ಡಿ ಡ್ರೋನ್ ತಂತ್ರಜ್ಞಾನವನ್ನು ಬಳಸಿಕೊಂಡು ಸ್ವತ್ತುಗಳ ಮ್ಯಾಪಿಂಗ್ ಮತ್ತು ಮರು ಮೌಲ್ಯಮಾಪನವನ್ನು ಕೈಗೊಳ್ಳಲಾಗುವುದು.

277. ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕವನ್ನು ಸಮರ್ಪಕವಾಗಿ ವಸೂಲು ಮಾಡಲು, ಸ್ಥಳೀಯ ಮಹಿಳಾ ಸ್ವ–ಸಹಾಯ ಗುಂಪುಗಳ ಸೇವೆಯನ್ನು ಪಡೆಯಲಾಗುವುದು.

278. ನೇರಪಾವತಿಯಡಿ ಕೆಲಸ ನಿರ್ವಹಿಸುತ್ತಿರುವ 24,005 ಪೌರಕಾರ್ಮಿಕರನ್ನು ಈಗಾಗಲೇ ಖಾಯಂಗೊಳಿಸಲು ಸರ್ಕಾರದಿಂದ

ಅನುಮೋದನೆ ನೀಡಲಾಗಿದೆ. ನೇರಪಾವತಿಯಡಿಯಲ್ಲಿ ಬಾಕಿ ಉಳಿದಿರುವ ಪೌರಕಾರ್ಮಿಕರಿಗೂ ಹಂತ ಹಂತವಾಗಿ ಖಾಯಂಗೊಳಿಸಲು ಕ್ರಮವಹಿಸಲಾಗುವುದು.

279. ಸಮರ್ಪಕ ಹಾಗೂ ಯೋಜಿತ ನಗರೀಕರಣಕ್ಕಾಗಿ ಒಂದು ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಎಲ್ಲಾ ಸ್ಥಳೀಯ ಯೋಜನಾ ಪ್ರಾಧಿಕಾರಗಳನ್ನು ನಗರಾಭಿವೃದ್ಧಿ ಪ್ರಾಧಿಕಾರಗಳನ್ನಾಗಿ ಉನ್ನತೀಕರಿಸಲು ಕ್ರಮಕೈಗೊಳ್ಳಲಾಗುವುದು.

280. ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಡೆಯುವ ಸಭೆಗಳ ಕಾರ್ಯಕಲಾಪಗಳನ್ನು ನೇರ ಪ್ರಸಾರ ಮಾಡಲಾಗುವುದು.

281. ಮೈಸೂರಿನ ಪ್ರಖ್ಯಾತ ಲ್ಯಾನ್ಸ್‌ಡೌನ್ ಕಟ್ಟಡ ಮತ್ತು ದೇವರಾಜ ಮಾರುಕಟ್ಟೆಯನ್ನು ಪಾರಂಪರಿಕ ಶೈಲಿಯಲ್ಲಿಯೇ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುವುದು.

## ಇಂಧನ

282. ಗೃಹ ವಿದ್ಯುತ್ ಬಳಕೆದಾರರಿಗೆ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಗ್ಯಾರಂಟಿ ಯೋಜನೆಯನ್ನು ಜುಲೈ 1 ರಿಂದ ಅನ್ವಯವಾಗುವಂತೆ ಜಾರಿಗೊಳಿಸಲಾಗಿದೆ. ಈ ಯೋಜನೆಯಡಿ 1.65 ಕೋಟಿ ಗ್ರಾಹಕರು

ನೋಂದಾಯಿಸಿಕೊಂಡಿದ್ದು, ಅಂದಾಜು 5 ಕೋಟಿಯಷ್ಟು ಜನರು ಉಚಿತ ವಿದ್ಯುತ್ ಸೌಲಭ್ಯ ಪಡೆಯುತ್ತಿದ್ದಾರೆ.

283. ಇದರೊಂದಿಗೆ ಕುಟೀರ ಜ್ಯೋತಿ, ಭಾಗ್ಯ ಜ್ಯೋತಿ, ಅಮೃತ ಜ್ಯೋತಿ ಮೊದಲಾದ ಯೋಜನೆಗಳ ಫಲಾನುಭವಿಗಳನ್ನೂ ಸಹ ಗೃಹಜ್ಯೋತಿ ಯೋಜನೆಯ ವ್ಯಾಪ್ತಿಗೆ ಸೇರ್ಪಡೆಗೊಳಿಸಲಾಗಿದೆ. ಅಲ್ಲದೆ, 48 ಯುನಿಟ್ ಒಳಗಿನ ಸರಾಸರಿ ಬಳಕೆಗೆ ಶೇ.10ರಷ್ಟು ಹೆಚ್ಚುವರಿ ವಿದ್ಯುತ್ ಬದಲಿಗೆ 10 ಯುನಿಟ್‌ಗಳಷ್ಟು ಹೆಚ್ಚುವರಿ ವಿದ್ಯುತ್ ಒದಗಿಸಲು ತೀರ್ಮಾನಿಸಲಾಗಿದೆ.

284. ಹಿಂದಿನ ಸರ್ಕಾರದ ಅವಧಿಯಲ್ಲಿ ವಿದ್ಯುತ್ ಉತ್ಪಾದನೆಯ ಸ್ಥಾಪಿತ ಸಾಮರ್ಥ್ಯದಲ್ಲಿ ಯಾವುದೇ ಹೆಚ್ಚಳವಾಗಿಲ್ಲ. ಮುಂದಿನ 7 ವರ್ಷಗಳಲ್ಲಿ ಇಂಧನ ವಲಯಕ್ಕೆ ಹೆಚ್ಚಿನ ಬಂಡವಾಳವನ್ನು ಆಕರ್ಷಿಸುವ ಮೂಲಕ ವಿದ್ಯುತ್ ಉತ್ಪಾದನೆಯ ಸ್ಥಾಪಿತ ಸಾಮರ್ಥ್ಯವನ್ನು 32,000 ಮೆಗಾವ್ಯಾಟ್ ನಿಂದ 60,000 ಮೆಗಾವ್ಯಾಟ್ ಗಳಿಗೆ ಹೆಚ್ಚಿಸಲಾಗುವುದು.

285. ರಾಜ್ಯವು ಉತ್ಪಾದಿಸುತ್ತಿರುವ ವಿದ್ಯುತ್ತಿನ ಶೇ.63 ರಷ್ಟು ಇಂಧನವು ನವೀಕರಿಸಬಹುದಾದ ಇಂಧನದಿಂದ ಆಗಿರುತ್ತದೆ. ನಮ್ಮ ಸರ್ಕಾರದ ಸಕಾರಾತ್ಮಕ ನೀತಿಗಳಿಂದ ಈ ವಲಯದಲ್ಲಿ ಸಾವಿರಾರು ಕೋಟಿ ರೂ. ಖಾಸಗಿ ಹೂಡಿಕೆಯನ್ನು ಮಾಡಲಾಗುತ್ತಿದೆ. ಈ ನೀತಿಗಳನ್ನು ಇನ್ನಷ್ಟು ಹೂಡಿಕೆದಾರರ ಸ್ನೇಹಿಯನ್ನಾಗಿ ಮಾಡಲು ಕ್ರಮವಹಿಸಲಾಗುವುದು.

286. ರೈತರನ್ನು ಸ್ವಾವಲಂಬಿಗಳನ್ನಾಗಿ ಮಾಡಲು PM–KUSUM Component–B ಯೋಜನೆಯಡಿ 1,174 ಕೋಟಿ ರೂ. ಅಂದಾಜು ವೆಚ್ಚದಲ್ಲಿ 40,000 ಜಾಲ ಮುಕ್ತ (Off Grid) ಸೋಲಾರ್ ಪಂಪ್ ಸೆಟ್‌ಗಳನ್ನು ಸ್ಥಾಪಿಸಲಾಗುತ್ತಿದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾಲು ಶೇ.30ರಷ್ಟಿದ್ದು, ರಾಜ್ಯ ಸರ್ಕಾರದ ವತಿಯಿಂದ ನೀಡುವ ಸಹಾಯಧನವನ್ನು ಶೇ.30ರಿಂದ ಶೇ.50ಕ್ಕೆ ಹೆಚ್ಚಿಸಲಾಗಿದೆ.

287. ಕರ್ನಾಟಕ ವಿದ್ಯುತ್ ನಿಗಮವು Tehri Hydro Development Corporation India Limited (THDCIL) ಸಹಯೋಗದೊಂದಿಗೆ ತೇಲುವ (Floating) ಸೌರ ಹಾಗೂ ಭೂಸ್ಥಾಪಿತ (Ground mounted) ಸೌರ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.

288. ಕೃಷಿ ಪಂಪ್‌ಸೆಟ್ ಫೀಡರ್ ಸೌರೀಕರಣ ಯೋಜನೆ ಹಂತ–I ಅಡಿಯಲ್ಲಿ 1,320 ಮೆಗಾ ವ್ಯಾಟ್ ವಿಕೇಂದ್ರೀಕೃತ ಉತ್ಪಾದನೆಗೆ ಕ್ರಮವಹಿಸಲಾಗಿದೆ. ಇದರಿಂದ 3.37 ಲಕ್ಷ ರೈತರಿಗೆ ಅನುಕೂಲವಾಗಲಿದೆ. ಇದಲ್ಲದೆ, ಹಂತ–II ಅಡಿಯಲ್ಲಿ 1,192 ಮೆಗಾ ವ್ಯಾಟ್ ಸೌರ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ 4.30 ಲಕ್ಷ ಐ.ಪಿ. ಸೆಟ್‌ಗಳನ್ನು ಸೌರೀಕರಣಗೊಳಿಸಲು ಉದ್ದೇಶಿಸಲಾಗಿದೆ.

289. ಗ್ರೀನ್ ಹೈಡ್ರೋಜನ್ ಭವಿಷ್ಯದ ಇಂಧನ. ಖಾಸಗಿ ಬಂಡವಾಳವನ್ನು ಈ ವಲಯಕ್ಕೆ ಆಕರ್ಷಿಸಲು 300 ಕಿಲೋ ವ್ಯಾಟ್ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರವನ್ನು ಪ್ರಾಯೋಗಿಕವಾಗಿ ಅಂದಾಜು 10 ಕೋಟಿ ರೂ. ವೆಚ್ಚದಲ್ಲಿ MNRE ನಿಧಿಯಿಂದ ಸ್ವಯಂ–ಸುಸ್ಥಿರ ಘಟಕದ ಆಧಾರದ ಮೇಲೆ KREDL ವತಿಯಿಂದ ಅನುಷ್ಠಾನಗೊಳಿಸಲಾಗುವುದು ಮತ್ತು ಗ್ರೀನ್ ಹೈಡ್ರೋಜನ್ ನೀತಿಯನ್ನು ರೂಪಿಸಲಾಗುವುದು.

290. KREDL ನಿಂದ ಪ್ರತೀ ಎಸ್ಕಾಂ ವ್ಯಾಪ್ತಿಯ ಆಯ್ದ ಒಂದು ಹಿಂದುಳಿದ ಗ್ರಾಮದಲ್ಲಿ ಪ್ರಾಯೋಗಿಕವಾಗಿ ಮೈಕ್ರೋಗ್ರಿಡ್ ವ್ಯವಸ್ಥೆಯ (Microgrid) ಮೂಲಕ ಬ್ಯಾಟರಿ ಶೇಖರಣೆಯನ್ನು ಹೊಂದಿದ 500 ಕಿಲೋ ವ್ಯಾಟ್ ಸಾಮರ್ಥ್ಯದ ಸೌರ ಘಟಕದ ಸ್ಥಾಪನೆಯ ಮೂಲಕ ಸದರಿ ಗ್ರಾಮಗಳನ್ನು ಸ್ವಾವಲಂಬಿ ಗ್ರಾಮಗಳನ್ನಾಗಿ ಮಾಡಲು ಉದ್ದೇಶಿಸಿದೆ.

291. ನವೀಕರಿಸಬಹುದಾದ ಇಂಧನವನ್ನು ಬೃಹತ್ ಪ್ರಮಾಣದಲ್ಲಿ ಉತ್ಪಾದಿಸಿ ಬೇಡಿಕೆ ಹೆಚ್ಚಿರುವ ಕೇಂದ್ರಗಳು ಮತ್ತು ಗ್ರೀನ್ ಹೈಡ್ರೋಜನ್ ಹಬ್‌ಗಳಿಗೆ ರವಾನಿಸಲು 765 kV ಯ Ultra High Voltage (UHV) ಟ್ರಾನ್ಸ್‌ಮಿಷನ್ ಮಾರ್ಗಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುವುದು.

292. ಪ್ರಸರಣ ಮಾರ್ಗಗಳ ನಿರ್ವಹಣೆಯಲ್ಲಿ ನಿಗದಿತ ಸ್ಥಗಿತಗಳು ಹಾಗೂ ದೀರ್ಘಾವಧಿಯ ಸ್ಥಗಿತಗಳನ್ನು ತಪ್ಪಿಸಲು 66 kV ಮತ್ತು 110 kV ಮೊಬೈಲ್/ ವಾಹನ ಮೇಲಿರಿಸಿರುವ ಸಬ್‌ಸ್ಟೇಷನ್‌ಗಳನ್ನು ಖರೀದಿಸಲಾಗುವುದು.

293. ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಹುಮಹಡಿ ಕಟ್ಟಡಗಳ ಬೆಳವಣಿಗೆಯಿಂದಾಗಿ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ನೀಗಿಸಲು, ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಬ್‌ಸ್ಟೇಷನ್‌ಗಳನ್ನು ಉನ್ನತೀಕರಿಸಲಾಗುವುದು.

294. ವಿದ್ಯುತ್ ಚಾಲಿತ ವಾಹನಗಳಿಗೆ ಉತ್ತೇಜನ ನೀಡಲು 2,500 EV Charging ಕೇಂದ್ರಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು. ಅಲ್ಲದೇ, ವಿದ್ಯುತ್ ಸರಬರಾಜು ಕಂಪನಿಗಳ ಮೂಲಕ 35 ಕೋಟಿ ರೂ. ವೆಚ್ಚದಲ್ಲಿ 100 ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

## ಲೋಕೋಪಯೋಗಿ

295. ಪ್ರಸಕ್ತ ಸಾಲಿನಲ್ಲಿ ಕೆಶಿಪ್–4 ಯೋಜನೆಯನ್ನು ಜಾರಿಗೊಳಿಸಲಾಗುವುದು. ಈ ಯೋಜನೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 875 ಕಿ.ಮೀ ಉದ್ದದ ರಾಜ್ಯ ಹೆದ್ದಾರಿಯನ್ನು ಬಾಹ್ಯ

ಹಣಕಾಸು ಸಂಸ್ಥೆಯ ನೆರವಿನೊಂದಿಗೆ 5,736 ಕೋಟಿ ರೂ. ಮೊತ್ತದಲ್ಲಿ ಅಭಿವೃದ್ಧಿಪಡಿಸಲಾಗುವುದು.

296. ರಾಜ್ಯದಲ್ಲಿನ 1,300 ಕಿ.ಮೀ. ಉದ್ದದ ಪ್ರಮುಖ ರಸ್ತೆಗಳನ್ನು 4,000 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಪ್ರಸಕ್ತ ಸಾಲಿನಲ್ಲಿ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ (SHDP) ಹಂತ–5ನ್ನು ಪ್ರಾರಂಭಿಸಲಾಗುವುದು.

297. ಬೆಳಗಾವಿ ನಗರ ಪರಿಮಿತಿಯಲ್ಲಿ ವಾಹನ ದಟ್ಟಣೆ ಹಾಗೂ ಸಂಚಾರ ದಟ್ಟಣೆ ನಿವಾರಿಸಲು 450 ಕೋಟಿ ರೂ. ವೆಚ್ಚದಲ್ಲಿ 4.50 ಕಿ.ಮೀ. ಉದ್ದದ ಮೇಲ್ಸೇತುವೆ (Elevated Corridor) ನಿರ್ಮಾಣ ಕಾಮಗಾರಿಯನ್ನು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕೈಗೊಳ್ಳಲಾಗುವುದು.

298. ಬೆಂಗಳೂರು–ಮಂಡ್ಯ–ಮೈಸೂರು ರಾಷ್ಟ್ರೀಯ ಹೆದ್ದಾರಿಯ ಮೈಸೂರು ಹೊರವಲಯದಲ್ಲಿರುವ ಜಂಕ್ಷನ್‌ನಲ್ಲಿ ವಾಹನ ಸಂಚಾರ ದಟ್ಟಣೆಯನ್ನು ನೀಗಿಸಲು ಎನ್.ಹೆಚ್.ಎ.ಐ ಸಹಯೋಗದೊಂದಿಗೆ ಮೇಲುಸೇತುವೆ ನಿರ್ಮಾಣ ಮಾಡಲಾಗುವುದು.

299. ಮೈಸೂರಿನ ಕುಕ್ಕರಹಳ್ಳಿ ಬಳಿ ಹಾಗೂ ಕೆ.ಆರ್.ಎಸ್. ರಸ್ತೆ, ಶಿವಮೊಗ್ಗ–ಬೊಮ್ಮನಕಟ್ಟೆ ರಸ್ತೆ, ಗದಗ ಜಿಲ್ಲೆಯ ರೋಣದ ಮಲ್ಲಾಪುರ, ಚನ್ನಪಟ್ಟಣ–ಬೈರಾಪಟ್ಟಣ ಮಾರ್ಗ ಮತ್ತು

ಚಿಕ್ಕಬಳ್ಳಾಪುರ ಸೇರಿದಂತೆ ಒಟ್ಟು 6 ರೈಲ್ವೆ ಮೇಲು ಹಾಗೂ ಕೆಳಸೇತುವೆಗಳ ನಿರ್ಮಾಣವನ್ನು 350 ಕೋಟಿ ರೂ. ಮೊತ್ತದಲ್ಲಿ ಕೈಗೊಳ್ಳಲಾಗುವುದು.

300. ಸಮರ್ಪಿತ ಆರ್ಥಿಕ ಕಾರಿಡಾರ್‌ಗಳು ಆರ್ಥಿಕ ಅಭಿವೃದ್ಧಿಗೆ ಪೂರಕ ಮೂಲಸೌಕರ್ಯ ಜಾಲವನ್ನು ಒದಗಿಸುತ್ತವೆ. ರಾಜ್ಯದ ಮೂಲಕ ಹಾದು ಹೋಗುವ ಮುಂಬೈ-ಚೆನ್ನೈ ಕಾರಿಡಾರ್‌ನಲ್ಲಿ ನಾವು ಹಲವಾರು ಕೈಗಾರಿಕಾ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಂಡಿದ್ದೇವೆ. ಇದೇ ಮಾದರಿಯಲ್ಲಿ ರಾಜ್ಯ ಸರ್ಕಾರವು ಎರಡು ಆರ್ಥಿಕ ಕಾರಿಡಾರ್ ಅಭಿವೃದ್ಧಿಪಡಿಸಲು ಉದ್ದೇಶಿಸಿದೆ. ಒಂದು ಕಾರಿಡಾರ್ ಮಂಗಳೂರು ಬಂದರಿನಿಂದ ಬೆಂಗಳೂರು ವರೆಗೆ ಅಭಿವೃದ್ಧಿಪಡಿಸಲಾಗುವುದು. ಇದರಿಂದ ಬಂದರು ಸಂಪರ್ಕ ಸುಲಭವಾಗುವುದಲ್ಲದೆ, ಯುರೋಪ್ ಮತ್ತು ಮಧ್ಯಪ್ರಾಚ್ಯ ರಾಷ್ಟ್ರಗಳಿಗೆ ಸರಕು ಸಾಗಾಣಿಕೆ ಅವಧಿ ಗಣನೀಯವಾಗಿ ಕಡಿಮೆಯಾಗಲಿದೆ. ಇನ್ನೊಂದು ಕಾರಿಡಾರ್ ಅನ್ನು ಬೀದರ್ ಹಾಗೂ ಬೆಂಗಳೂರು ನಡುವೆ ಅಭಿವೃದ್ಧಿಪಡಿಸುವ ಮೂಲಕ ಕಲ್ಯಾಣ ಕರ್ನಾಟಕ ಪ್ರದೇಶದ ಆರ್ಥಿಕ ಅಭಿವೃದ್ಧಿಯನ್ನು ಚುರುಕುಗೊಳಿಸಲಾಗುವುದು.

## ಮೂಲಸೌಕರ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ

301. ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಮೂಲಸೌಕರ್ಯ ಯೋಜನೆಗಳ ಪ್ರಗತಿ ಮೇಲ್ವಿಚಾರಣೆಗೆ ಹಾಗೂ ಎದುರಾಗುವ ಅಂತರ್ ಇಲಾಖಾ ಮತ್ತು ಹಣಕಾಸಿನ ತೊಡಕುಗಳನ್ನು ಬಗೆಹರಿಸಲು ಮುಖ್ಯಮಂತ್ರಿಗಳ ಕಛೇರಿಯಲ್ಲಿ ಪ್ರತ್ಯೇಕ ಘಟಕವನ್ನು ಸ್ಥಾಪಿಸಲಾಗುವುದು.

302. ರಾಜ್ಯದ 320 ಕಿ.ಮೀ. ಉದ್ದದ ಕರಾವಳಿ ತೀರವನ್ನು ಆರ್ಥಿಕ ಅಭಿವೃದ್ಧಿಗೆ ಸಮರ್ಥವಾಗಿ ಬಳಸಿಕೊಳ್ಳಲು ಆದ್ಯತೆ ನೀಡಲಾಗುವುದು. ಬಂದರು, ರೈಲು ಮತ್ತು ವಿಮಾನ ಸಂಪರ್ಕವನ್ನು ಒದಗಿಸುವ ಮೂಲಕ ಕೆಲವು ವರ್ಷಗಳಲ್ಲಿ ಅಂದಾಜು 20,000 ಕೋಟಿ ರೂ.ಗಳ ಹೂಡಿಕೆಯೊಂದಿಗೆ ಸಮುದ್ರ ಸಾರಿಗೆ, ಸರಕು ಸಾಗಣೆ ಹಾಗೂ ಪರಿಸರ ಪ್ರವಾಸೋದ್ಯಮ ವಲಯಗಳಲ್ಲಿ ಗಣನೀಯ ಅಭಿವೃದ್ಧಿ ಸಾಧಿಸುವ ಗುರಿ ಹೊಂದಿದ್ದೇವೆ.

303. ರಾಜ್ಯದಲ್ಲಿ ಜಲಸಾರಿಗೆ ಮೂಲಸೌಕರ್ಯಗಳ ಅಭಿವೃದ್ಧಿಯಲ್ಲಿ ಖಾಸಗಿ ಹೂಡಿಕೆಗಳನ್ನು ಆಕರ್ಷಿಸಲು, ಕರ್ನಾಟಕ ಜಲಸಾರಿಗೆ ಅಭಿವೃದ್ಧಿ

ನೀತಿಯನ್ನು ಹಾಗೂ ಒಳನಾಡು ಜಲಸಾರಿಗೆ ನಿಯಮಗಳನ್ನು ರೂಪಿಸಲಾಗುವುದು.

304. ಸಾಗರಮಾಲಾ ಯೋಜನೆಯಡಿ ಕಡಲ ತೀರದ ವ್ಯಾಪಾರಕ್ಕೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುವ ಉದ್ದೇಶದಿಂದ ಅಂದಾಜು 1,017 ಕೋಟಿ ರೂ.ಗಳ ವೆಚ್ಚದಲ್ಲಿ ಒಟ್ಟು 26 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು. ಇವುಗಳ ಪೈಕಿ ರಾಜ್ಯದ ಪಾಲು 530 ಕೋಟಿ ರೂ.ಗಳಾಗಿದೆ. ಮುಂದುವರೆದು, ಇನ್ನೂ 1,145 ಕೋಟಿ ರೂ. ಮೊತ್ತದ 12 ಕಾಮಗಾರಿಗಳ ವಿಸ್ತೃತ ಯೋಜನಾ ವರದಿಗಳನ್ನು ಕೇಂದ್ರದ ಅನುಮೋದನೆಗಾಗಿ ಸಲ್ಲಿಸಲಾಗಿದೆ.

305. ಕರಾವಳಿ ತೀರ ಪ್ರದೇಶ ಹಾಗೂ ಬಂದರುಗಳ ಅಭಿವೃದ್ಧಿಯು ರಾಜ್ಯದ ಜಲಸಾರಿಗೆ ವಹಿವಾಟು ಹೆಚ್ಚಿಸಿ, ಉದ್ಯೋಗ ಸೃಜನೆಯ ಜೊತೆಗೆ, ರಾಜ್ಯದಲ್ಲಿ ಆರ್ಥಿಕ ಚಟುವಟಿಕೆಗಳನ್ನು ಉತ್ತೇಜಿಸುತ್ತದೆ. ಈ ನಿಟ್ಟಿನಲ್ಲಿ ವಿವಿಧ ಕ್ರಮಗಳನ್ನು ಕೈಗೊಳ್ಳಲು ನಮ್ಮ ಸರ್ಕಾರವು ಬದ್ಧವಾಗಿದೆ;

- ಉತ್ತರ ಕನ್ನಡ ಜಿಲ್ಲೆಯ ಕೇಣಿಯಲ್ಲಿ 30 MTPA ಸಾಮರ್ಥ್ಯದ ಮತ್ತು 4,200 ಕೋಟಿ ರೂ. ಅಂದಾಜು ಯೋಜನಾ ವೆಚ್ಚದ ಹೊಸ ಆಳಸಮುದ್ರ ಸರ್ವಋತು ಬಂದರನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

- ಉತ್ತರ ಕನ್ನಡ ಜಿಲ್ಲೆಯ ಪಾವಿನಕುರ್ವೆಯಲ್ಲಿ ಪಿ.ಪಿ.ಪಿ. ಮಾದರಿಯಲ್ಲಿ ಅಂದಾಜು 3048 ಕೋಟಿ ರೂ.ಗಳ ಯೋಜನಾ ವೆಚ್ಚದಲ್ಲಿ ಎರಡನೇ ಬೃಹತ್ ಬಂದರಿನ ಅಭಿವೃದ್ಧಿಗೆ ಅಂತರಾಷ್ಟ್ರೀಯ ಟೆಂಡರ್ ಅನ್ನು ಕರೆಯಲಾಗಿದೆ.
- ಕಾರವಾರ, ಮಲ್ಪೆ ಮತ್ತು ಹಳೇ ಮಂಗಳೂರು ಬಂದರುಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಡಿ ನಾಲ್ಕು ಬರ್ತ್‌ಗಳನ್ನು ಅಭಿವೃದ್ಧಿಪಡಿಸಲು ಗುರುತಿಸಲಾಗಿದೆ.
- ಕಾರವಾರ, ಹಳೆ ಮಂಗಳೂರು ಮತ್ತು ರಾಜ್ಯದ 11 ಕಿರು ಬಂದರುಗಳಲ್ಲಿ ಸುಗಮ ಸಂಚಾರಕ್ಕಾಗಿ ಹೂಳೆತ್ತುವ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೆತ್ತಿಗೊಳ್ಳಲಾಗುತ್ತಿದೆ.
- ಉತ್ತರ ಕನ್ನಡ ಜಿಲ್ಲೆಯ ಮಂಕಿಯಲ್ಲಿ ವಿವಿಧೋದ್ದೇಶ ಬಂದರಿನ ಅಭಿವೃದ್ಧಿಗೆ ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗುತ್ತಿದೆ.
- ಕಾರವಾರ ಬಂದರಿನಲ್ಲಿ ಬೆಂಕಿ ನಂದಿಸುವ ಉಪಕರಣಗಳ ಅಳವಡಿಕೆ ಕಾಮಗಾರಿಯನ್ನು ಕೈಗೊಳ್ಳಲಾಗುವುದು.
- ಹಳೇ ಮಂಗಳೂರು ಬಂದರಿನಲ್ಲಿ 350 ಮೀ. ಉದ್ದದ ಕೋಸ್ಟಲ್ ಬರ್ತ್ ನಿರ್ಮಾಣ ಕಾಮಗಾರಿಯನ್ನು 2024-25ನೇ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

306. ಹಳೆ ಮಂಗಳೂರು ಮತ್ತು ಹಂಗಾರಕಟ್ಟೆ ಬಂದರುಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಆಧುನಿಕ ಹಡಗು ನಿರ್ಮಾಣ ಚಟುವಟಿಕೆಗಳನ್ನು ಪ್ರಾರಂಭಿಸಲಾಗಿದೆ. ಈ ವಲಯದಲ್ಲಿ ಇನ್ನೂ ಹೆಚ್ಚು ಹೂಡಿಕೆಯನ್ನು ಆಕರ್ಷಿಸಲು ಆದ್ಯತೆ ನೀಡಲಾಗುವುದು.

307. ಮೂಲಸೌಕರ್ಯ ಅಭಿವೃದ್ದಿ ಇಲಾಖೆಯಡಿಯಲ್ಲಿ ಕಾರ್ಯಸಾಧ್ಯತಾ ವರದಿಗಳ ತಯಾರಿಕೆಗಾಗಿ Karnataka Infrastructure Project Development Fund ಅನ್ನು (KIPDF) ಸ್ಥಾಪಿಸಲಾಗಿದ್ದು, ಇದನ್ನು ಆರ್ಥಿಕವಾಗಿ ಮತ್ತಷ್ಟು ಸದೃಢಗೊಳಿಸಲಾಗುವುದು ಮತ್ತು ಈ ಕೆಳಕಂಡ ಯೋಜನೆಗಳ ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲು ನುರಿತ ಸಂಸ್ಥೆಗಳನ್ನು (Transaction Advisor) ನೇಮಿಸಿಕೊಳ್ಳಲಾಗುವುದು.

- ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಕ್ರೂಸ್ ಮತ್ತು ಪ್ರವಾಸೋದ್ಯಮ ಬಂದರನ್ನು (ICTP) ಅಭಿವೃದ್ಧಿಪಡಿಸಲು ಐ.ಐ.ಟಿ. ಮದ್ರಾಸ್ ಸಹಯೋಗದೊಂದಿಗೆ ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗುವುದು.
- ದ್ವೀಪಗಳ ಸಮಗ್ರ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್ ಅನ್ನು ತಯಾರಿಸಲಾಗುವುದು.

- ಮಂಗಳೂರಿನ ಗುರುಪುರ ಹಾಗೂ ನೇತ್ರಾವತಿ ನದಿಗಳಲ್ಲಿ ಜಲಮೆಟ್ರೋ ಸೇವೆಗಳನ್ನು ಪರಿಚಯಿಸಲು ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗುವುದು.

308. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಗಳೊಂದಿಗೆ ಸಂಪರ್ಕ ಸಾಧಿಸುವ ದೃಷ್ಟಿಯಿಂದ 1600 ಕೋಟಿ ರೂ. ವೆಚ್ಚದಲ್ಲಿ ವಿವಿಧ ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ;

- ಮೈಸೂರು ವಿಮಾನ ನಿಲ್ದಾಣದ ರನ್-ವೇ ವಿಸ್ತರಣೆಗೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಭೂಸ್ವಾಧೀನಕ್ಕೆ 126 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಹಾಗೂ ಪ್ರಸಕ್ತ ಸಾಲಿನಲ್ಲಿ ಬಾಕಿ 43 ಕೋಟಿ ರೂ. ಬಿಡುಗಡೆಗೊಳಿಸಿ, ಕಾಮಗಾರಿ ಪ್ರಾರಂಭಕ್ಕೆ ಕ್ರಮ ವಹಿಸಲಾಗುವುದು.
- ವಿಜಯಪುರದಲ್ಲಿ 350 ಕೋಟಿ ರೂ.ಗಳ ವೆಚ್ಚದಲ್ಲಿ ವಿಮಾನ ನಿಲ್ದಾಣ ಕಾಮಗಾರಿಯು ಮುಕ್ತಾಯ ಹಂತದಲ್ಲಿದ್ದು, ಶೀಘ್ರವೇ ಕಾರ್ಯಾಚರಣೆ ಪ್ರಾರಂಭವಾಗಲಿದೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಈ ಯೋಜನೆಗೆ 94 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ.
- ಹಾಸನ ವಿಮಾನ ನಿಲ್ದಾಣ ಕಾಮಗಾರಿಗೆ 2023-24ನೇ ಸಾಲಿನಲ್ಲಿ 55 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದ್ದು, ಪ್ರಸಕ್ತ

ಸಾಲಿನಲ್ಲಿ ಬಾಕಿ ಇರುವ 30 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.

- 220 ಕೋಟಿ ರೂ. ವೆಚ್ಚದ ರಾಯಚೂರು ವಿಮಾನ ನಿಲ್ದಾಣ ನಿರ್ಮಾಣಕ್ಕೆ ಅಗತ್ಯ ಅನುದಾನ ಒದಗಿಸಲಾಗುವುದು.
- ಕಾರವಾರ ನೌಕಾನೆಲೆಯ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯ ಭೂಸ್ವಾಧೀನ ಪ್ರಕ್ರಿಯೆಯ ತೊಡಕುಗಳನ್ನು ನಿವಾರಿಸಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.

309. ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪದಲ್ಲಿ ನಿರ್ಮಾಣವಾಗುತ್ತಿರುವ ಸಿಗ್ನೇಚರ್ ಬಿಸಿನೆಸ್ ಪಾರ್ಕ್‌ನಿಂದ ಹಣಕಾಸು, ಉದಯೋನ್ಮುಖ ತಂತ್ರಜ್ಞಾನ ವಲಯಗಳು ಹಾಗೂ ಸಂಶೋಧನಾ ಸಂಸ್ಥೆಗಳಿಗೆ ಉತ್ತೇಜನ ದೊರೆಯಲಿದೆ. ಒಟ್ಟು 817 ಕೋಟಿ ರೂ. ಯೋಜನಾ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಸಿಗ್ನೇಚರ್ ಬಿಸಿನೆಸ್ ಪಾರ್ಕ್ ಮುಂದಿನ ದಿನಗಳಲ್ಲಿ 5,000 ಕೋಟಿ ರೂ. ಹೂಡಿಕೆಯನ್ನು ಆಕರ್ಷಿಸುವ ನಿರೀಕ್ಷೆ ಇದೆ.

310. ರಾಜ್ಯದಲ್ಲಿ ರೈಲ್ವೆ ಇಲಾಖೆಯೊಂದಿಗೆ ವೆಚ್ಚ ಹಂಚಿಕೆ ಆಧಾರದಲ್ಲಿ 12,147 ಕೋಟಿ ರೂ.ಗಳ 9 ರೈಲ್ವೆ ಕಾಮಗಾರಿಗಳು ಪ್ರಗತಿಯಲ್ಲಿವೆ. ಈ ಯೋಜನೆಯ ಕಾಮಗಾರಿಗಳು ಹಾಗೂ ಭೂಸ್ವಾಧೀನಕ್ಕಾಗಿ 9,915 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಭರಿಸಲಿದೆ.

2023-24ನೇ ಸಾಲಿನಲ್ಲಿ 600 ಕೋಟಿ ರೂ.ಗಳನ್ನು ರೈಲ್ವೆ ಯೋಜನೆಗಳಿಗಾಗಿ ಬಿಡುಗಡೆಗೊಳಿಸಲಾಗಿದೆ. ಕೇಂದ್ರ ಸರ್ಕಾರದ ಪಾಲನ್ನು ಕ್ಷಿಪ್ರಗತಿಯಲ್ಲಿ ಪಡೆದು ಆದ್ಯತೆಯನುಸಾರ ರಾಜ್ಯದ ಪಾಲಿನ ಅನುದಾನ ಬಿಡುಗಡೆ ಮಾಡಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು.

311. ರಾಜ್ಯದ ಮೂಲಸೌಕರ್ಯ ಯೋಜನೆಗಳನ್ನು ಖಾಸಗಿ ಹೂಡಿಕೆಯೊಂದಿಗೆ ಅಭಿವೃದ್ಧಿಪಡಿಸಲು ಚಾಲ್ತಿಯಲ್ಲಿರುವ ಮೂಲಸೌಕರ್ಯ ಯೋಜನೆಗಳ ಪಿ.ಪಿ.ಪಿ. ನೀತಿ-2018ರ ಮಧ್ಯಂತರ ಪರಿಷ್ಕರಣೆಯನ್ನು ಮಾಡಲಾಗುವುದು.

312. ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಎಲ್ಲಾ ಪಿ.ಪಿ.ಪಿ. ಮಾದರಿಯ ಯೋಜನೆಗಳ ಮಾಹಿತಿ ಸಂಗ್ರಹಣೆ, ಮೇಲ್ವಿಚಾರಣೆ ಮತ್ತು ಪರಿಶೀಲನೆಗಾಗಿ ತಂತ್ರಜ್ಞಾನ ಆಧಾರಿತ ಮಾಹಿತಿ ನಿರ್ವಹಣಾ ವ್ಯವಸ್ಥೆಯನ್ನು (Information Management System) ಅಳವಡಿಸಲಾಗುವುದು.

313. ರಾಜ್ಯದ ತೆರಿಗೆಯೇತರ ರಾಜಸ್ವ ಸಂಗ್ರಹದ ಸಾಮರ್ಥ್ಯದ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಆಸ್ತಿ ನಗದೀಕರಣದ ಅವಕಾಶಗಳನ್ನು ಗುರುತಿಸಲು ಹಾಗೂ ಈ ಪ್ರಕ್ರಿಯೆಯನ್ನು

ಪಾರದರ್ಶಕ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ವಿಧಾನವನ್ನು ರೂಪಿಸಲು ತಜ್ಞರ ಸಮಿತಿಯೊಂದನ್ನು ರಚಿಸಲಾಗುವುದು.

## ವಾಣಿಜ್ಯ ಮತ್ತು ಕೈಗಾರಿಕೆ

314. ಕರ್ನಾಟಕ ಸರ್ಕಾರವು 2023–24ನೇ ಸಾಲಿನಲ್ಲಿ ಸುಮಾರು 88,150 ಕೋಟಿ ರೂ.ಗಳ ಹೂಡಿಕೆಯನ್ನು ಆಕರ್ಷಿಸಿದೆ. Electronic System Design and Manufacturing (ESDM), ವಿದ್ಯುತ್ ಚಾಲಿತ ವಾಹನಗಳಿಗೆ ಲಿಥಿಯಂ ಅಯಾನ್ ಬ್ಯಾಟರಿ ತಯಾರಿಕೆ, ತಯಾರಿಕಾ ವಲಯ, ಆಟೊಮೊಬೈಲ್, ಡೇಟಾ ಸೆಂಟರ್ ಮತ್ತಿತರ ವಲಯಗಳಲ್ಲಿ ಈ ಹೂಡಿಕೆಗಳನ್ನು ಮಾಡಲಾಗುತ್ತಿದೆ.

315. ಬೆಂಗಳೂರು ಸಮೀಪ ಸುಮಾರು 2000 ಎಕರೆ ಪ್ರದೇಶದಲ್ಲಿ Knowledge Health Care, Innovation and Research City (KHIR) ಅಭಿವೃದ್ಧಿಪಡಿಸಲು ಯೋಜಿಸಲಾಗಿದ್ದು, ಈ ಯೋಜನೆಯಿಂದ ಅಂದಾಜು 40,000 ಕೋಟಿ ರೂ.ಗಳ ಬಂಡವಾಳ ಹೂಡಿಕೆಯಾಗಲಿದ್ದು, ಸುಮಾರು 80,000 ಜನರಿಗೆ ಉದ್ಯೋಗ ದೊರೆಯುವ ನಿರೀಕ್ಷೆಯಿದೆ.

316. ಕೈಗಾರಿಕಾ ಅಭಿವೃದ್ಧಿಯಲ್ಲಿ ಕರ್ನಾಟಕದ ಉನ್ನತ ಸ್ಥಾನವನ್ನು ಉಳಿಸಿಕೊಳ್ಳಲು ಹಾಗೂ ಇನ್ನೂ ಹೆಚ್ಚು ಬಂಡವಾಳ ಹೂಡಿಕೆಯನ್ನು ಆಕರ್ಷಿಸಲು ಹೊಸ ಕೈಗಾರಿಕಾ ನೀತಿಯನ್ನು ಜಾರಿಗೆ ತರಲಾಗುವುದು.

317. ರಾಜ್ಯಕ್ಕೆ ವಿದೇಶಿ ಹೂಡಿಕೆಗಳನ್ನು ಆಕರ್ಷಿಸಲು ಫೆಬ್ರವರಿ 2025ರಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶವನ್ನು (Global Investor's Meet) ಆಯೋಜಿಸಲಾಗುವುದು.

318. ಗ್ರಾಮೀಣ ಜನರಲ್ಲಿ ಆರ್ಥಿಕ ಶಿಸ್ತು ಮತ್ತು ಉಳಿತಾಯ ಮನೋಭಾವವನ್ನು ಉತ್ತೇಜಿಸಲು ಎಂ.ಎಸ್.ಐ.ಎಲ್. ವತಿಯಿಂದ ಚಿಟ್‌ಫಂಡ್ ಅನ್ನು ಗ್ರಾಮಾಂತರ ಪ್ರದೇಶಗಳಿಗೆ ವಿಸ್ತರಿಸಲಾಗುವುದು.

319. ಯಶವಂತಪುರದಲ್ಲಿ ಕೆ.ಎಸ್.ಡಿ.ಎಲ್ ವತಿಯಿಂದ ಜಮೀನಿನಲ್ಲಿ ವಿವಿಧ ಸರ್ಕಾರಿ ಇಲಾಖೆಗಳನ್ನು ನಿರ್ವಹಿಸಲು ಸುಸಜ್ಜಿತ ಕಛೇರಿ ಸಂಕೀರ್ಣವನ್ನು ನಿರ್ಮಿಸಲಾಗುವುದು.

320. ವಿವಿಧ ಜಿಲ್ಲೆಗಳಲ್ಲಿ ಅಸ್ತಿತ್ವದಲ್ಲಿರುವ ಕೈಗಾರಿಕಾ ವಸಾಹತುಗಳನ್ನು ಕೇಂದ್ರ ಸರ್ಕಾರದ ಸಹಯೋಗದಲ್ಲಿ 39 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕರ್ನಾಟಕ ಸಣ್ಣ ಪ್ರಮಾಣದ ಕೈಗಾರಿಕೆಗಳ ನಿಗಮದ (KSSIDC) ಮೂಲಕ ಮೇಲ್ದರ್ಜೆಗೇರಿಸಲಾಗುವುದು.

321. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜಂಟಿ ಸಹಭಾಗಿತ್ವದಲ್ಲಿ ಬೆಂಗಳೂರು-ಮುಂಬಯಿ ಎಕನಾಮಿಕ್ ಕಾರಿಡಾರ್ ಯೋಜನೆಯಡಿ ಧಾರವಾಡ ಸಮೀಪ ಸುಮಾರು 6,000 ಎಕರೆ ಜಮೀನಿನಲ್ಲಿ ಕೈಗಾರಿಕಾ ಅಭಿವೃದ್ಧಿಗೆ ಒತ್ತು ನೀಡುವ ಸಂಬಂಧ ಕೈಗಾರಿಕಾ ನೋಡ್ ಅನ್ನು ಅಭಿವೃದ್ಧಿಪಡಿಸುವ ಮೂಲಕ ಉತ್ತರ ಕರ್ನಾಟಕದ ನಿರುದ್ಯೋಗ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಹಾಗೂ ಆರ್ಥಿಕ ಬೆಳವಣಿಗೆಗಳಿಗೆ ಉತ್ತೇಜನ ನೀಡಲು ತೀರ್ಮಾನಿಸಿದೆ.

322. ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಸ್ಟಾಕ್ ಎಕ್ಸ್‌ಚೇಂಜ್‌ಗಳಲ್ಲಿ ಐಪಿಓ ಬಿಡುಗಡೆ ಮಾಡಲು ತಗಲುವ ವೆಚ್ಚದಲ್ಲಿ ಗರಿಷ್ಠ ಮಿತಿ 25 ಲಕ್ಷ ರೂ. ಗಳಿಗೆ ಒಳಪಟ್ಟು ಶೇ.50 ರಷ್ಟು ಸಹಾಯಧನ ನೀಡಲಾಗುವುದು.

323. ಸರ್ಕಾರಿ ಇಲಾಖೆಗಳು, ಸಾರ್ವಜನಿಕ ಉದ್ದಿಮೆಗಳು ಮತ್ತು ಎಂ.ಎಸ್.ಎಂ.ಇ.ಗಳನ್ನು TReDS ವೇದಿಕೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಎಂ.ಎಸ್.ಎಂ.ಇ. ಗಳಿಗೆ ಬರಬೇಕಾದ ಪಾವತಿಗಳು ಕಾಲಮಿತಿಯೊಳಗೆ ಸ್ವೀಕೃತಿಯಾಗಿ ಅವುಗಳ ನಗದು ಹರಿವು ಸದೃಢಗೊಳಿಸಬೇಕು ಎಂಬ ಉದ್ದೇಶದಿಂದ TReDS ಸೇವಾ ಪೂರೈಕೆದಾರರೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗುವುದು.

324. ಪರಿಶಿಷ್ಟ ಜಾತಿಗೆ ಸೇರಿದ ವಿದ್ಯಾರ್ಥಿಗಳಿಗೆ ವಿಶೇಷ ಘಟಕ ಯೋಜನೆಯಡಿ ಕರ್ನಾಟಕ ಚರ್ಮ ಮತ್ತು ಫ್ಯಾಷನ್ ತಂತ್ರಜ್ಞಾನ ಸಂಸ್ಥೆಯಲ್ಲಿ (ಕೆಐಎಲ್‌ಟಿ) ಡಿಪ್ಲೊಮಾ ಇನ್ ಲೆದರ್ ಅಂಡ್ ಫ್ಯಾಶನ್ ಟೆಕ್ನಾಲಜಿ ಕೋರ್ಸ್ ಮಾಡಲು ಪ್ರೋತ್ಸಾಹಧನ ನೀಡಲಾಗುವುದು.

325. ರಾಜ್ಯದಲ್ಲಿನ ಕಟ್ಟಡಕಲ್ಲು ಸೇರಿದಂತೆ ಎಲ್ಲಾ ಉಪ ಖನಿಜಗಳ ಅನಧಿಕೃತ ಗಣಿಗಾರಿಕೆಯನ್ನು ನಿಯಂತ್ರಿಸುವ ಜೊತೆಗೆ ಸಂಪೂರ್ಣ ಖನಿಜ ಬಳಕೆ ಪ್ರಮಾಣವನ್ನು ಡ್ರೋನ್ ಸರ್ವೆ ಮೂಲಕ ವೈಜ್ಞಾನಿಕವಾಗಿ ಅಂದಾಜಿಸುವ ವ್ಯವಸ್ಥೆಯನ್ನು ರಾಜ್ಯಾದ್ಯಂತ ಅನುಷ್ಠಾನಗೊಳಿಸಿ, ರಾಜಸ್ವ ಸಂಗ್ರಹಣೆಯನ್ನು ಹೆಚ್ಚಿಸಲಾಗುವುದು. ಇದರಿಂದ ಉದ್ಯಮ ಸ್ನೇಹಿ, ಸರಳ ಮತ್ತು ಉತ್ತರದಾಯಿತ್ವ ಹೊಂದಿರುವ ವ್ಯವಸ್ಥೆಯನ್ನು ಕಲ್ಪಿಸಲಾಗುವುದು.

326. ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ನಿಗದಿತ ಬೆಲೆಯಲ್ಲಿ ಮರಳು ಲಭ್ಯಪಡಿಸಲು ಹೊಸ ಮರಳು ನೀತಿ 2020 ಅನ್ನು ಅನುಮೋದಿಸಲಾಗಿದೆ. ಸರ್ಕಾರದ ಎಲ್ಲಾ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ಈ ನೀತಿಯನ್ನು ಜಾರಿಗೊಳಿಸುವಲ್ಲಿನ ಗೊಂದಲಗಳನ್ನು ನಿವಾರಿಸಿ ಸಾರ್ವಜನಿಕರಿಗೆ ಸುಲಭವಾಗಿ ಹಾಗೂ ಯೋಗ್ಯ ದರದಲ್ಲಿ ಮರಳನ್ನು ಒದಗಿಸಲಾಗುವುದು.

327. ಮಂಡ್ಯದ ಮೈಶುಗರ್ ಕಾರ್ಖಾನೆಯ ಆವರಣದಲ್ಲಿ ಹೊಸ ಸಕ್ಕರೆ ಕಾರ್ಖಾನೆಯನ್ನು ನಿರ್ಮಿಸಲಾಗುವುದು. ಸರ್ಕಾರದ ಅನುದಾನ, ಇತರೆ ಮೂಲಗಳು ಹಾಗೂ ಕಾರ್ಖಾನೆಯ Asset Monetisation ಮೂಲಕ ಸಂಪನ್ಮೂಲವನ್ನು ಕ್ರೋಢೀಕರಿಸಲಾಗುವುದು.

328. ರಾಜ್ಯದಲ್ಲಿ ಜವಳಿ ಹಾಗೂ ನೇಕಾರಿಕೆ ಅಭಿವೃದ್ಧಿ, ಬಂಡವಾಳ ಹೂಡಿಕೆ ಹಾಗೂ ಉದ್ಯೋಗ ಸೃಜಿಸಲು 2024-29ರ ಅವಧಿಗೆ 10,000 ಕೋಟಿ ರೂ.ಗಳ ಬಂಡವಾಳ ಹೂಡಿಕೆ ಹಾಗೂ 2 ಲಕ್ಷ ಉದ್ಯೋಗಗಳ ಸೃಜನೆಯ ಗುರಿಯೊಂದಿಗೆ ಹೊಸ ಜವಳಿ ನೀತಿಯನ್ನು ಜಾರಿಗೊಳಿಸಲಾಗುವುದು.

329. ರಾಜ್ಯ ಹಾಗೂ ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಲಬುರಗಿ ಜಿಲ್ಲೆಯ 1,000 ಎಕರೆ ಪ್ರದೇಶದಲ್ಲಿ ಪಿ.ಪಿ.ಪಿ. ಮಾದರಿಯಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ನ್ನು ಸ್ಥಾಪಿಸಲಾಗುತ್ತಿದೆ. ಇದರಿಂದ 1 ಲಕ್ಷ ಜನರಿಗೆ ನೇರ ಉದ್ಯೋಗ ಹಾಗೂ 2 ಲಕ್ಷ ಜನರಿಗೆ ಪರೋಕ್ಷ ಉದ್ಯೋಗ ಸೃಜನೆಯಾಗುವ ನಿರೀಕ್ಷೆಯಿದೆ. ಈ ಯೋಜನೆಗೆ ಪೂರಕವಾದ ಮೂಲ ಸೌಕರ್ಯಕ್ಕಾಗಿ 50 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು.

330. ಕಿತ್ತೂರು ಕರ್ನಾಟಕ, ಕಲ್ಯಾಣ ಕರ್ನಾಟಕ (ರಾಯಚೂರು) ಮತ್ತು ಮೈಸೂರು ವಿಭಾಗಗಳಲ್ಲಿ ನೂತನ ಜವಳಿ ಪಾರ್ಕ್‌ಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಪ್ರಾರಂಭಿಸಲಾಗುವುದು. ಇದರಿಂದ ಸುಮಾರು 10,000 ಉದ್ಯೋಗ ಸೃಷ್ಟಿಯಾಗಲಿದೆ.

331. ಬಳ್ಳಾರಿಯಲ್ಲಿ ಅಸಂಘಟಿತವಾಗಿರುವ ಜೀನ್ಸ್ ಉದ್ದಿಮೆಗಳನ್ನು ಸಂಘಟಿಸಿ, ವಿಶ್ವದರ್ಜೆಗೆ ಉನ್ನತೀಕರಿಸಲು ಮೂಲ ಸೌಕರ್ಯಗಳನ್ನು ಒಳಗೊಂಡಂತೆ ಜೀನ್ಸ್ ಅಪಾರೆಲ್ ಪಾರ್ಕ್ ಹಾಗೂ ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಅಭಿವೃದ್ಧಿಪಡಿಸಲಾಗುವುದು.

332. ಜವಳಿ ಪಾರ್ಕ್‌ಗಳು ಇಲ್ಲದಿರುವ ರಾಜ್ಯದ 25 ಜಿಲ್ಲೆಗಳಲ್ಲಿ ಮಿನಿ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸುವ ಉದ್ದಿಮೆದಾರರಿಗೆ ಮೂಲಸೌಕರ್ಯಕ್ಕಾಗಿ ಜವಳಿ ನೀತಿಯನ್ವಯ ಸಹಾಯಧನವನ್ನು ನೀಡಲಾಗುವುದು.

333. ಮಹಾತ್ಮಾ ಗಾಂಧೀಜಿಯವರು ಭೇಟಿ ನೀಡಿದ್ದ ನಂಜನಗೂಡು ತಾಲ್ಲೂಕಿನ ಬದನವಾಳು ಗ್ರಾಮದಲ್ಲಿ ಖಾದಿ ಚಟುವಟಿಕೆ ಪ್ರೋತ್ಸಾಹಕ್ಕಾಗಿ ಕ್ರಮವಹಿಸಲಾಗುವುದು.

## ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ

**ನಾವು ನಾವೀನ್ಯತೆ ಮತ್ತು ತಂತ್ರಜ್ಞಾನಕ್ಕೆ ಪೂರಕ ವಾತಾವರಣ ಅಭಿವೃದ್ಧಿಪಡಿಸಬೇಕಾಗಿದೆ. ಈ ನಿಟ್ಟಿನಲ್ಲಿ ವಿನೂತನ ಕಾರ್ಯಶೈಲಿ ಹಾಗೂ ಚಿಂತನಾ ಕ್ರಮದ ಅಗತ್ಯವಿದೆ. ನಮ್ಮ ಪರಿಸರವೇ ನಾವೀನ್ಯತೆಯನ್ನು ಉತ್ತೇಜಿಸುವಂತಿರಬೇಕು.**

**– ಭಾರತ ರತ್ನ ಪ್ರೊ. ಸಿ.ಎನ್.ಆರ್. ರಾವ್**

334. ಸ್ಟಾರ್ಟಪ್ ವಲಯದಲ್ಲಿ ಕರ್ನಾಟಕದ ಮುಂಚೂಣಿಯನ್ನು ಕಾಯ್ದುಕೊಳ್ಳಲು ಮೂರು ಹೊಸ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುವುದು;

- ವಿದ್ಯಾರ್ಥಿಗಳು ಮತ್ತು ಉದ್ಯಮಿಗಳಿಂದ ಪ್ರಾರಂಭವಾದ ನವೀನ ಪ್ರಯತ್ನಗಳು, ಸ್ಟಾರ್ಟಪ್‌ಗಳನ್ನು ಉತ್ತೇಜಿಸಲು ರಾಜೀವ್ ಗಾಂಧಿ ವಾಣಿಜ್ಯೋದ್ಯಮ ಕಾರ್ಯಕ್ರಮಗಳಡಿ ಜ್ಞಾನಾಧಾರಿತ ಮತ್ತು ತಂತ್ರಜ್ಞಾನ ಚಾಲಿತ ಪರಿಕಲ್ಪನೆಗಳು ಮತ್ತು ನಾವೀನ್ಯತೆಗಳನ್ನು ಪೋಷಿಸಲಾಗುವುದು.

- ಮಹಿಳಾ ಉದ್ಯಮಿಗಳನ್ನು ಬೆಂಬಲಿಸಲು ಮಹಿಳಾ ಉತ್ಕೃಷ್ಟತೆ ಮತ್ತು ಉದ್ಯಮಶೀಲತೆಯಲ್ಲಿ ಬೆಂಬಲ ಕಾರ್ಯಕ್ರಮ ಪ್ರಾರಂಭಿಸಲಾಗುವುದು.
- ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯ ಅಗ್ರಿ ಇನ್ನೋವೇಶನ್ ಸ್ಟಾರ್ಟ್‌ಅಪ್‌ಗಳನ್ನು ಸ್ಥಾಪಿಸಲು ಸಿ–ಕ್ಯಾಂಪ್‌ನ ಅಗ್ರಿ ಇನ್ನೋವೇಶನ್ ಪಾರ್ಕ್‌ಗೆ 5 ಎಕರೆ ಭೂಮಿಯನ್ನು ಮೀಸಲಿಡಲು ಉದ್ದೇಶಿಸಲಾಗಿದೆ.

335. ತಂತ್ರಜ್ಞಾನ ಕ್ಷೇತ್ರದಲ್ಲಿ ರಾಜ್ಯವು ಮೊದಲ ಸ್ಥಾನದಲ್ಲಿದ್ದು, ಈ ಸ್ಥಾನವನ್ನು ಬಲಪಡಿಸಲು ಮತ್ತು ಉದಯೋನ್ಮುಖ ತಂತ್ರಜ್ಞಾನಗಳಿಗೆ ಉತ್ತೇಜನ ನೀಡಲು ಫಿನ್‌ಟೆಕ್, ಸ್ಪೇಸ್‌ಟೆಕ್ ಮತ್ತು ಆಟೋಮೋಟಿವ್ ಟೆಕ್‌ನಲ್ಲಿ ಸೆಂಟರ್ ಆಫ್ ಎಕ್ಸಲೆನ್ಸ್ ಅನ್ನು ಮುಂದಿನ 5 ವರ್ಷಗಳ ಅವಧಿಯಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಉದ್ಯಮಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಸಹಯೋಗದೊಂದಿಗೆ ಸ್ಥಾಪಿಸಲಾಗುವುದು.

336. ಬೆಂಗಳೂರು ನಗರವು 400ಕ್ಕೂ ಹೆಚ್ಚು ಜಾಗತಿಕ ಸಾಮರ್ಥ್ಯ ಕೇಂದ್ರಗಳ (Global Capability Centres) ನೆಲೆಯಾಗಿದೆ. ಈ ಹಿನ್ನೆಲೆಯಲ್ಲಿ 2024–25ನೇ ಸಾಲಿನಲ್ಲಿ ಹೊಸ ಜಾಗತಿಕ ಸಾಮರ್ಥ್ಯ ಕೇಂದ್ರಗಳ ನೀತಿಯನ್ನು ಜಾರಿಗೊಳಿಸುವ ಮೂಲಕ

ಕರ್ನಾಟಕಕ್ಕೆ ಪ್ರಮುಖ ವಲಯಗಳಲ್ಲಿ ಹೂಡಿಕೆ ಆಕರ್ಷಿಸಲು ಒತ್ತು ನೀಡಲಾಗುವುದು.

337. ಬೆಂಗಳೂರಿನಾಚೆಗೂ ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಯುವಕರ ಕೌಶಲ್ಯಾಭಿವೃದ್ಧಿಗಾಗಿ ಕಲಬುರಗಿ, ಶಿವಮೊಗ್ಗ, ಹುಬ್ಬಳ್ಳಿ ಮತ್ತು ತುಮಕೂರಿನಲ್ಲಿ ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸೊಸೈಟಿ ಮತ್ತು ಕಿಯೋನಿಕ್ಸ್ ಸಹಯೋಗದೊಂದಿಗೆ ಒಟ್ಟಾರೆ 12 ಕೋಟಿ ರೂ. ವೆಚ್ಚದಲ್ಲಿ ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಕೌಶಲ್ಯ ಮತ್ತು ನಾವೀನ್ಯತಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

338. ರಾಜ್ಯದಲ್ಲಿ ಜಿನೋಮಿಕ್ಸ್‌ನಲ್ಲಿ ಅಧ್ಯಯನ ಮತ್ತು ಸಂಶೋಧನೆಯನ್ನು ಉತ್ತೇಜಿಸಲು ಸುಧಾರಿತ ಜಿನೋಮ್ ಎಡಿಟಿಂಗ್ ಮತ್ತು ಜೀನ್ ಥೆರಪಿ ಕೇಂದ್ರವನ್ನು ಸ್ಥಾಪಿಸಲಾಗುವುದು. ಈ ಸಂಸ್ಥೆಯು ಆರೋಗ್ಯ, ಕೃಷಿ ಮತ್ತು ಜೀವ ವಿಜ್ಞಾನದ ಇತರ ಕ್ಷೇತ್ರಗಳಲ್ಲಿ ಅತ್ಯಾಧುನಿಕ ಸಂಶೋಧನೆಗೆ ಉತ್ತೇಜನ ನೀಡಲಿದೆ.

339. ರಾಜ್ಯದಲ್ಲಿ AVGC-XR ಕಂಪನಿಗಳ ಬೆಳವಣಿಗೆಯನ್ನು ಪೋಷಿಸುವ ಮತ್ತು 30,000 ಹೊಸ ಉದ್ಯೋಗ ಸೃಜನೆಯ ಗುರಿಯೊಂದಿಗೆ AVGC-XR 3.0 ನೀತಿಯನ್ನು 2024-29ರ ಅವಧಿಗೆ 150 ಕೋಟಿ ರೂ. ಬದ್ಧತಾ ವೆಚ್ಚದೊಂದಿಗೆ ಜಾರಿಗೆ ತರಲಾಗುವುದು.

ಇದರೊಂದಿಗೆ Centre of Excellence in Gaming ಅನ್ನು ಸ್ಥಾಪಿಸಲಾಗುವುದು.

340. ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ, ಚಟುವಟಿಕೆ ಆಧಾರಿತ ಪರಿಸರವನ್ನು ಒದಗಿಸಲು 3 ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ;

- ಈಗಾಗಲೇ ಅನುಮೋದನೆಗೊಂಡಿರುವ ಚಾಮರಾಜನಗರ, ಹಾಸನ, ಮಡಿಕೇರಿ, ಶಿರಸಿ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ ಮತ್ತು ಧಾರವಾಡದಲ್ಲಿ ವಿಜ್ಞಾನ ಕೇಂದ್ರ/ತಾರಾಲಯಗಳನ್ನು ಕಾರ್ಯಾರಂಭಗೊಳಿಸಲಾಗುವುದು.
- ಉಡುಪಿ, ಹಾವೇರಿ, ಚಿತ್ತಾಪುರ, ಆದಿಚುಂಚನಗಿರಿ, ತುಮಕೂರಿನಲ್ಲಿ ವಿಜ್ಞಾನ ಕೇಂದ್ರಗಳ ಕಾಮಗಾರಿಯು ಪ್ರಗತಿಯಲ್ಲಿದ್ದು, ಇದನ್ನು ಪೂರ್ಣಗೊಳಿಸಲಾಗುವುದು.
- ಶಿವಮೊಗ್ಗ, ರಾಯಚೂರು, ಚಿಕ್ಕಮಗಳೂರು, ಯಾದಗಿರಿ ಮತ್ತು ಮೈಸೂರಿನಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ವಿಜ್ಞಾನ ಕೇಂದ್ರ/ತಾರಾಲಯಗಳನ್ನು ಹೊಸದಾಗಿ ಸ್ಥಾಪಿಸಲಾಗುವುದು.
- ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ 170 ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ.

341. ವಿದ್ಯಾರ್ಥಿಗಳಿಗೆ ರಾತ್ರಿ ಆಕಾಶ ವೀಕ್ಷಣೆ ಮತ್ತು ಆಕಾಶ ಕಾಯಗಳ ಕುರಿತು ಆಸಕ್ತಿ ಮೂಡಿಸಲು ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿಯಲ್ಲಿ ಬರುವ ಒಟ್ಟು 833 ವಸತಿ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ತಲಾ ಒಂದು ದೂರದರ್ಶಕವನ್ನು ಒಟ್ಟಾರೆ 3 ಕೋಟಿ ರೂ. ವೆಚ್ಚದಲ್ಲಿ ಒದಗಿಸಲಾಗುವುದು.

342. ಬೆಂಗಳೂರು ಇಂಡಿಯಾ ನ್ಯಾನೋ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗುವುದು. ಸಮ್ಮೇಳನದ ಪೂರ್ವಭಾವಿಯಾಗಿ ಜನಸಮುದಾಯದಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ಉದ್ದೇಶದೊಂದಿಗೆ, ಒಂದು ತಿಂಗಳ ಕಾಲ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಉತ್ಸವವನ್ನು ಆಯೋಜಿಸಲಾಗುವುದು.

343. ಬೆಂಗಳೂರು ನಗರದಲ್ಲಿ ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಒಟ್ಟು 233 ಕೋಟಿ ರೂ. ವೆಚ್ಚದಲ್ಲಿ ವಿಜ್ಞಾನ ನಗರಿಯನ್ನು (Science City) ಸ್ಥಾಪಿಸಲಾಗುವುದು.

## ಕನ್ನಡ ಮತ್ತು ಸಂಸ್ಕೃತಿ

344. 12ನೇ ಶತಮಾನದಲ್ಲಿ ಸಾಮಾಜಿಕ ಮತ್ತು ಲಿಂಗ ಸಮಾನತೆಗಾಗಿ ಮತ್ತು ವರ್ಗಬೇಧ ಹಾಗೂ ವರ್ಣಬೇಧ ವಿರುದ್ಧವಾಗಿ ಶೋಷಿತ ವರ್ಗದ ಜನರಲ್ಲಿ ಆತ್ಮಸ್ಥೈರ್ಯವನ್ನು ತುಂಬಿ, ಸಮಾಜೋಧಾರ್ಮಿಕ

ಕ್ರಾಂತಿಯನ್ನು ಮಾಡಿದ ಶ್ರೇಯಸ್ಸು ವಿಶ್ವಗುರು ಬಸವಣ್ಣನವರಿಗೆ ಸಲ್ಲುತ್ತದೆ. ಜಗತ್ತಿನಲ್ಲಿ ಪ್ರಜಾಪ್ರಭುತ್ವಕ್ಕೆ ಅನುಭವ ಮಂಟಪ ಸ್ಥಾಪನೆ ಮೂಲಕ ಬುನಾದಿಯನ್ನು ಶ್ರೀ ಬಸವೇಶ್ವರರು ಹಾಕಿರುವುದು ಕನ್ನಡಿಗರು ಮತ್ತು ಭಾರತೀಯರ ಹೆಮ್ಮೆಯಾಗಿದೆ. ಇಂತಹ ಅಪೂರ್ವ ವ್ಯಕ್ತಿತ್ವದ ವಿಶ್ವಗುರು ಜಗಜ್ಯೋತಿ ಬಸವಣ್ಣನವರನ್ನು ಕರ್ನಾಟಕ ಸರ್ಕಾರ **ಸಾಂಸ್ಕೃತಿಕ ನಾಯಕ** ಎಂದು ಘೋಷಿಸಿದೆ. ಎಲ್ಲಾ ಸರ್ಕಾರಿ ಕಛೇರಿಗಳಲ್ಲಿರುವ ವಿಶ್ವಗುರು ಜಗಜ್ಯೋತಿ ಬಸವಣ್ಣನವರ ಭಾವ ಚಿತ್ರದಲ್ಲಿ **ವಿಶ್ವಗುರು ಬಸವಣ್ಣ – ಸಾಂಸ್ಕೃತಿಕ ನಾಯಕ** ಎಂದು ಮುದ್ರಿಸಲಾಗುವುದು.

***ಇವನಾರವ ಇವನಾರವ ಎಂದೆನಿಸದಿರಯ್ಯ***
***ಇವ ನಮ್ಮವ ಇವ ನಮ್ಮವ ಎಂದೆನಿಸಯ್ಯ***

– ***ಸಾಂಸ್ಕೃತಿಕ ನಾಯಕ ಬಸವಣ್ಣ***

345. 12ನೇ ಶತಮಾನದಲ್ಲಿ ಬಸವಾದಿ ಶರಣರು ಸಮ ಸಮಾಜದ ನಿರ್ಮಾಣಕ್ಕೆ ಬುನಾದಿ ಹಾಕಿದರು. ಇವರು ತಮ್ಮ ವಚನ ಸಾಹಿತ್ಯದ ಮೂಲಕ ಕಾಯಕ – ದಾಸೋಹದ ತತ್ವವನ್ನು ಪ್ರಸಾರ ಮಾಡಿದರು. ಈ ಹಿನ್ನೆಲೆಯಲ್ಲಿ ಶರಣರ ಜೀವನ ಚರಿತ್ರೆ, ಅವರು ನಡೆದು ಬಂದ ದಾರಿ ಮತ್ತು ವಚನ ಸಾಹಿತ್ಯ ಕುರಿತು ರಾಜ್ಯದ ಎಲ್ಲಾ

ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

346. ಬಸವಣ್ಣನವರ ಬದುಕು, ಸಂದೇಶ, ಚಿಂತನೆಯನ್ನು ವ್ಯಾಪಕವಾಗಿ ಪ್ರಚುರಪಡಿಸುವ ನಿಟ್ಟಿನಲ್ಲಿ ಸರ್ವ ಧರ್ಮ ಸಂಸತ್ತನ್ನು ಬಸವ ಜಯಂತಿಯಂದು ಆಯೋಜಿಸಲಾಗುವುದು.

347. ಬಸವಣ್ಣನವರ ಜನ್ಮಸ್ಥಳವಾದ ಬಸವನಬಾಗೇವಾಡಿಯ ಅಭಿವೃದ್ಧಿಗೆ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ರಚಿಸಲಾಗುವುದು.

348. ಬಸವಣ್ಣ ಹಾಗೂ ಇತರ ಶರಣರ ವಚನಗಳನ್ನು ವಿಶ್ವಕ್ಕೆ ಪರಿಚಯಿಸುವ ವಚನ ಸಂಗ್ರಹಾಲಯ/ವಚನ ಮಂಟಪವನ್ನು ಕಲಬುರಗಿಯಲ್ಲಿ ಸ್ಥಾಪಿಸಲಾಗುವುದು.

349. ನಮ್ಮ ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸಂಭ್ರಮ-50 ಅಭಿಯಾನದಡಿ ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ. ವರ್ಷಪೂರ್ತಿ ನಡೆಯಲಿರುವ ಈ ಕಾರ್ಯಕ್ರಮಕ್ಕೆ ಅಗತ್ಯ ಅನುದಾನ ಬಿಡುಗಡೆ ಮಾಡಲಾಗಿದೆ.

350. ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿದ್ದು, ಎಲ್ಲಾ ಕಛೇರಿಗಳು, ಅಂಗಡಿ-ಮುಂಗಟ್ಟುಗಳು, ವಿವಿಧ ವಾಣಿಜ್ಯೋದ್ಯಮ

ಸಂಸ್ಥೆಗಳ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡವನ್ನು ಕಡ್ಡಾಯವಾಗಿ ಅಳವಡಿಸಲು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮದಡಿ ಜಾರಿಗೆ ತರಲಾಗುವುದು.

351. ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಗಡಿಭಾಗದಲ್ಲಿ ಕನ್ನಡ ಶಾಲೆಗಳ ಅಭಿವೃದ್ಧಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸುವ ಮೂಲಕ ಕನ್ನಡ ಭಾಷೆ ಅಭಿವೃದ್ಧಿ ಮಾಡಲಾಗುವುದು.

352. ತುಳು, ಕೊಡವ, ಬ್ಯಾರಿ ಮತ್ತು ಕೊಂಕಣಿ ಕರ್ನಾಟಕದ ಪ್ರಾದೇಶಿಕ ಭಾಷೆಗಳಾಗಿದ್ದು, ಅವುಗಳ ಅಭಿವೃದ್ಧಿಗಾಗಿ ಅಕಾಡೆಮಿಗಳ ಮೂಲಕ ಭಾಷೆ, ಸಂಸ್ಕೃತಿ, ಸಾಹಿತ್ಯವನ್ನು ಪ್ರೋತ್ಸಾಹಿಸಲಾಗುವುದು.

353. ಅಳಿವಿನಂಚಿನಲ್ಲಿರುವ ಜಾನಪದ ಕಲಾಪ್ರಕಾರಗಳಾದ ದೊಡ್ಡಾಟ, ಸಣ್ಣಾಟ, ಶ್ರೀಕೃಷ್ಣ ಪಾರಿಜಾತ, ತೊಗಲು ಗೊಂಬೆಯಾಟ, ಸೂತ್ರದ ಗೊಂಬೆಯಾಟ, ಕರಗ ಮುಂತಾದವುಗಳ ಪುನರುಜ್ಜೀನಕ್ಕಾಗಿ ತರಬೇತಿ ಮತ್ತು ಪ್ರದರ್ಶನಗಳನ್ನು ಹಮ್ಮಿಕೊಳ್ಳಲಾಗುವುದು.

354. ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯದವರ ಕಲೆ ಮತ್ತು ಸಂಸ್ಕೃತಿಯನ್ನು ಗುರುತಿಸಿ, ಉಳಿಸಿ, ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಅಲೆಮಾರಿ ಸಂಸ್ಕೃತಿ ಉತ್ಸವವನ್ನು ಆಯೋಜಿಸಲಾಗುವುದು.

355. ರಂಗಭೂಮಿಯ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಸ್ಥಾಪಿಸಲಾಗಿರುವ ರಂಗಾಯಣಗಳಿಗೆ ಹೆಚ್ಚಿನ ಅನುದಾನ ನೀಡುವ ಮೂಲಕ ಇನ್ನಷ್ಟು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಲು ಉತ್ತೇಜನ ನೀಡಲಾಗುವುದು.

356. ಭಾರತದ ಪ್ರಸಿದ್ಧ ಸಾಮಾಜಿಕ ಮತ್ತು ರಾಜಕೀಯ ಚಿಂತಕರುಗಳಾದ ನಾರಾಯಣ ಗುರುಗಳು, ಜ್ಯೋತಿಬಾ ಫುಲೆ, ಪೆರಿಯಾರ್ ರಾಮಸ್ವಾಮಿ, ರಾಮ ಮನೋಹರ ಲೋಹಿಯಾ ಹಾಗೂ ಬಾಬು ಜಗಜೀವನರಾಮ್ ರವರ ಬರಹಗಳನ್ನು ಕನ್ನಡಕ್ಕೆ ಭಾಷಾಂತರಿಸಿ ಪ್ರಕಟಿಸಲಾಗುವುದು.

357. ಸಂತ ಕವಿ ಕನಕದಾಸ ಅಧ್ಯಯನ ಕೇಂದ್ರದ ಮೂಲಕ ತತ್ವಪದ, ಕೀರ್ತನ ಸಾಹಿತ್ಯ ಮತ್ತು ಭಕ್ತಿ ಚಳವಳಿ ಸೇರಿದಂತೆ ಸಾಹಿತ್ಯ ಸಮೀಕ್ಷೆ, ಸಂಗ್ರಹಣೆ, ಪ್ರಕಟಣೆ ಮತ್ತು ಪ್ರಸಾರ ಕಾರ್ಯಗಳನ್ನು ಕೈಗೊಳ್ಳಲು ಒಂದು ಕೋಟಿ ರೂ. ಒದಗಿಸಲಾಗುವುದು.

358. ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶಿವಯೋಗಿ ಸಿದ್ಧರಾಮೇಶ್ವರರವರ ಬದುಕು–ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲಾಗುವುದು.

359. ತ್ರಿಪದಿಗಳ ಮೂಲಕ ಜೀವನಸಾರವನ್ನು ಹೇಳಿದ ವಚನಕಾರ ಸರ್ವಜ್ಞನ ಸ್ಮಾರಕವನ್ನು ಹಿರೇಕೆರೂರು ತಾಲ್ಲೂಕಿನಲ್ಲಿ ಅಭಿವೃದ್ಧಿಪಡಿಸಲಾಗುವುದು.

360. ಸಾಹಿತ್ಯ, ನಾಟಕ, ಜನಪದ ಕಲೆ, ನೃತ್ಯ, ಸಂಗೀತ ಸೇರಿದಂತೆ ಸಂಸ್ಕೃತಿಯ ವಿವಿಧ ಪ್ರಕಾರಗಳ ತರಬೇತಿ, ಪ್ರದರ್ಶನ ಮತ್ತು ಅಧ್ಯಯನದಲ್ಲಿ ತೊಡಗಿಸಿಕೊಂಡಿರುವ ಕೋಲಾರದ ಆದಿಮ ಸಾಂಸ್ಕೃತಿಕ ಕೇಂದ್ರದ ಅಭಿವೃದ್ಧಿಗಾಗಿ ಅಗತ್ಯ ನೆರವು ನೀಡಲಾಗುವುದು.

361. ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪನವರ ಸ್ಮಾರಕವನ್ನು ನಿರ್ಮಿಸಲಾಗುವುದು.

## ಯುವ ಸಬಲೀಕರಣ ಮತ್ತು ಕ್ರೀಡೆ

362. ಕಳೆದ ಸಾಲಿನ ಆಯವ್ಯಯದಲ್ಲಿ ಕ್ರೀಡಾಪಟುಗಳಿಗೆ ಪೊಲೀಸ್ ಮತ್ತು ಅರಣ್ಯ ಇಲಾಖೆಯ ನೇಮಕಾತಿಯಲ್ಲಿ ಹುದ್ದೆಗಳನ್ನು ಮೀಸಲಿಡಲಾಗುವುದೆಂದು ಘೋಷಿಸಲಾಗಿತ್ತು. ಪ್ರಸಕ್ತ ಸಾಲಿನಿಂದ ಇತರೆ ಇಲಾಖೆಗಳ ನೇಮಕಾತಿಯಲ್ಲಿಯೂ ಶೇ.2ರಷ್ಟು ಹುದ್ದೆಗಳನ್ನು ಮೀಸಲಿಡಲಾಗುವುದು.

363. ಬೆಂಗಳೂರಿನ ಉತ್ತರ ತಾಲ್ಲೂಕಿನಲ್ಲಿ ಲಭ್ಯವಿರುವ ಅಂದಾಜು 70 ಎಕರೆ ನಿವೇಶನದಲ್ಲಿ ಅತ್ಯಾಧುನಿಕ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾ ಸಮುಚ್ಛಯವನ್ನು ಒಳಗೊಂಡ ಕ್ರೀಡಾ ನಗರವನ್ನು (Sports City) ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

364. ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ 04 ಸ್ಥಳಗಳಲ್ಲಿ ಬಹುಕ್ರೀಡಾ ಸೌಲಭ್ಯಗಳನ್ನೊಳಗೊಂಡ ಅತ್ಯಾಧುನಿಕ ಕ್ರೀಡಾ ಸಂಕೀರ್ಣಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಿಸಲಾಗುವುದು.

365. ರಾಜ್ಯದ ವಿವಿಧ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಹಾಗೂ ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು Rifle Shooting Association, Hockey Karnataka, Amateur Boxing Association, Archery Association, Athletic Association, Kayaking and Canoeing Academy, Cycling Academy Vijayapura ಹಾಗೂ Fencing Association ಗಳಿಗೆ ಒಟ್ಟಾರೆ 12 ಕೋಟಿ ರೂ. ಅನುದಾನ ನೀಡಲಾಗುವುದು.

366. ರಾಜ್ಯದ ಕ್ರೀಡಾಪಟುಗಳಿಗೆ ಅತ್ಯುನ್ನತ ಸ್ಪರ್ಧಾ ಅವಕಾಶ ಒದಗಿಸಲು ಪ್ರತಿ ವರ್ಷ ಒಂದು ರಾಜ್ಯ ಮಟ್ಟದ ಒಲಿಂಪಿಕ್ಸ್ ಮತ್ತು 14 ವರ್ಷ ವಯೋಮಾನದ ಒಳಗಿನವರಿಗೆ ಮಿನಿ ಒಲಿಂಪಿಕ್ಸ್ ಆಯೋಜಿಸಲಾಗುವುದು.

367. ಮುಂಬರುವ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗಳಿಸುವ ಕ್ರೀಡಾಪಟುಗಳಿಗೆ 06 ಕೋಟಿ ರೂ., ಬೆಳ್ಳಿ ಪದಕ ಪಡೆಯುವ ಕ್ರೀಡಾಪಟುಗಳಿಗೆ 04 ಕೋಟಿ ರೂ. ಹಾಗೂ ಕಂಚಿನ ಪದಕ ಪಡೆಯುವ ಕ್ರೀಡಾಪಟುಗಳಿಗೆ 03 ಕೋಟಿ ರೂ. ಪ್ರೋತ್ಸಾಹಧನ ನೀಡಲಾಗುವುದು.

368. ಏಷಿಯನ್ ಮತ್ತು ಕಾಮನ್‌ವೆಲ್ತ್ ಕ್ರೀಡಾಕೂಟಗಳಲ್ಲಿ ಚಿನ್ನದ ಪದಕ ವಿಜೇತ ಕ್ರೀಡಾಪಟುಗಳಿಗೆ 35 ಲಕ್ಷ ರೂ., ಬೆಳ್ಳಿ ಪದಕ ವಿಜೇತ ಕ್ರೀಡಾಪಟುಗಳಿಗೆ 25 ಲಕ್ಷ ರೂ. ಹಾಗೂ ಕಂಚಿನ ಪದಕ ವಿಜೇತ ಕ್ರೀಡಾಪಟುಗಳಿಗೆ 15 ಲಕ್ಷ ರೂ. ಪ್ರೋತ್ಸಾಹಧನ ನೀಡಲಾಗುವುದು.

369. ಕರ್ನಾಟಕದ ಕ್ರೀಡಾಪಟುಗಳು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ಸಮಯದಲ್ಲಿ ಗಾಯಗೊಂಡಲ್ಲಿ ಅವರ ಚಿಕಿತ್ಸೆಗೆ ನೆರವಾಗಲು ಆರೋಗ್ಯ ವಿಮೆ ಸೌಲಭ್ಯವನ್ನು ರಾಜ್ಯ ಸರ್ಕಾರದ ವತಿಯಿಂದ ಒದಗಿಸಲಾಗುವುದು.

370. ರಾಜ್ಯದ 14 ಸ್ಥಳಗಳಲ್ಲಿ ಮುಂದಿನ ಎರಡು ವರ್ಷದೊಳಗೆ 35 ಕೋಟಿ ರೂ. ವೆಚ್ಚದಲ್ಲಿ ಮಹಿಳಾ ಕ್ರೀಡಾ ವಸತಿ ನಿಲಯಗಳನ್ನು ನಿರ್ಮಿಸಲಾಗುವುದು. ಕೊಡಗು ಜಿಲ್ಲೆಯ ಪೊನ್ನಂಪೇಟೆಯಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಕ್ರೀಡಾ ವಸತಿ ನಿಲಯ ಕಟ್ಟಡವನ್ನು ನಿರ್ಮಿಸಲಾಗುವುದು. ಬಳ್ಳಾರಿಯಲ್ಲಿ ಕ್ರೀಡಾ ವಸತಿ ನಿಲಯದ ಉನ್ನತೀಕರಣ ಹಾಗೂ ಕ್ರೀಡಾ ಸೌಕರ್ಯಗಳ ಅಭಿವೃದ್ಧಿಗಾಗಿ ಜಿಲ್ಲಾ ಖನಿಜ ಪ್ರತಿಷ್ಠಾನದ ನಿಧಿಯಿಂದ 10 ಕೋಟಿ ರೂ. ಒದಗಿಸಲಾಗುವುದು.

## ಪ್ರವಾಸೋದ್ಯಮ

371. ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದಲ್ಲಿನ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕರ್ನಾಟಕ ಪ್ರವಾಸೋದ್ಯಮ ನೀತಿಯನ್ನು ಮತ್ತಷ್ಟು ಹೂಡಿಕೆದಾರರ ಹಾಗೂ ಪ್ರವಾಸಿಗರ ಸ್ನೇಹಿಯಾಗಿ ಮಾಡಲು, ಪರಿಷ್ಕೃತ ಪ್ರವಾಸೋದ್ಯಮ ನೀತಿ 2024–29 ಅನ್ನು ಜಾರಿಗೆ ತರಲಾಗುವುದು.

372. ಪೌರಾಣಿಕ ಹಾಗೂ ಐತಿಹಾಸಿಕವಾಗಿ ಪ್ರಖ್ಯಾತಿ ಹೊಂದಿರುವ ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರವಾಸಿ ಸೌಲಭ್ಯ ಅಭಿವೃದ್ಧಿಪಡಿಸಲು 100 ಕೋಟಿ ರೂ.ಗಳನ್ನು ಒದಗಿಸಲಾಗುವುದು.

373. ರಾಜ್ಯದ ಪ್ರಮುಖ ಜಲಾಶಯಗಳಲ್ಲಿನ ಹಿನ್ನೀರಿನಲ್ಲಿ ಮತ್ತು ಕಡಲ ತೀರಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಜಲಕ್ರೀಡೆಗಳು ಮತ್ತು ಜಲಸಾಹಸ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲಾಗುವುದು.

374. ಸಾಹಸ ಪ್ರವಾಸೋದ್ಯವನ್ನು ಉತ್ತೇಜಿಸಲು ರಾಜ್ಯದ ಪ್ರಮುಖ 10 ಪ್ರವಾಸಿ ತಾಣಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೇಬಲ್ ಕಾರ್/ ರೋಪ್ ವೇ ಸೌಲಭ್ಯ ಅಭಿವೃದ್ಧಿಪಡಿಸಲಾಗುವುದು.

375. ಗೋಕಾಕ ಜಲಪಾತವನ್ನು ಪ್ರೇಕ್ಷಣೀಯ ಸ್ಥಳವಾಗಿ ಅಭಿವೃದ್ಧಿ ಪಡಿಸಲಾಗುವುದು.

376. ರಾಜ್ಯದ 530 ಸಂರಕ್ಷಿತ ಸ್ಮಾರಕಗಳನ್ನು 3ಡಿ ಲೇಸರ್ ಸ್ಕ್ಯಾನಿಂಗ್ ಮೂಲಕ ಡಿಜಿಟಲ್ ದಾಖಲೀಕರಣ ಮಾಡಲಾಗಿದೆ. ಈ ಕಾರ್ಯವನ್ನು ದೇಶದಲ್ಲಿಯೇ ಪ್ರಥಮವಾಗಿ ಕೈಗೊಂಡಿರುವ ಶ್ರೇಯಸ್ಸು ನಮ್ಮ ರಾಜ್ಯದ್ದಾಗಿದೆ. ಈ ಡಿಜಿಟಲ್ ಮಾಹಿತಿಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮತ್ತು ಸಂವಾದಾತ್ಮಕವಾಗಿ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುವುದು.

377. ರಾಷ್ಟ್ರಕೂಟರ ಕಾಲದಲ್ಲಿ ಕರ್ನಾಟಕದ ಮೊಟ್ಟ ಮೊದಲ ವಿಶ್ವವಿದ್ಯಾಲಯವನ್ನು ಕಲಬುರಗಿ ಜಿಲ್ಲೆಯ ಚಿತ್ತಾಪೂರ ತಾಲ್ಲೂಕಿನ ನಾಗಾವಿಯಲ್ಲಿ ಸ್ಥಾಪಿಸಲಾಗಿತ್ತು ಎಂಬುದು ಸ್ಥಳೀಯರ ನಂಬಿಕೆ.

ಅಲ್ಲಿನ ಪ್ರಾಚ್ಯಾವಶೇಷಗಳ ಸಂಶೋಧನೆ ಮತ್ತು ಸಂರಕ್ಷಣೆಗಾಗಿ ನೆರವು ನೀಡಲು Archaeological Survey of India (ASI) ಗೆ ಶಿಫಾರಸ್ಸು ಮಾಡಲಾಗುವುದು.

378. ಕೆ.ಎಸ್.ಟಿ.ಡಿ.ಸಿ ವತಿಯಿಂದ ಬಾಗಲಕೋಟೆಯ ಐಹೊಳೆಯಲ್ಲಿ ಸುಸಜ್ಜಿತವಾದ ಹೋಟೆಲ್ ನಿರ್ಮಿಸಲಾಗುವುದು ಹಾಗೂ ರೋರಿಚ್ ಮತ್ತು ದೇವಿಕಾರಾಣಿ ಎಸ್ಟೇಟ್ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು.

379. ಬೀದರ್ ಹಾಗೂ ವಿಜಯಪುರದಲ್ಲಿ ಕರೇಜ್ ಎಂದು ಪ್ರಸಿದ್ಧವಾಗಿರುವ ಪುರಾತನ ನೀರು ಸರಬರಾಜು ವ್ಯವಸ್ಥೆಯನ್ನು ನುರಿತ ಸಂಸ್ಥೆಗಳ ತಾಂತ್ರಿಕ ನೆರವಿನೊಂದಿಗೆ 15 ಕೋಟಿ ರೂ. ವೆಚ್ಚದಲ್ಲಿ ಪುನಶ್ಚೇತನಗೊಳಿಸಲಾಗುವುದು.

380. ರಾಜ್ಯದಲ್ಲಿ ಪರಿಸರ ಪ್ರವಾಸೋದ್ಯಮವನ್ನು ಉತ್ತೇಜಿಸಲು ಬಂಡೀಪುರ, ದಾಂಡೇಲಿ ಮತ್ತು ಕಬಿನಿಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಇಂಟರ್‌ಪ್ರಿಟೇಷನ್ ಸೆಂಟರ್‌ಗಳನ್ನು ಜೆ.ಎಲ್.ಆರ್ ಸಂಸ್ಥೆಯ ಮೂಲಕ ನಿರ್ಮಾಣ ಮಾಡಲಾಗುವುದು.

381. ಗದಗ ಜಿಲ್ಲೆಯ ಕಪ್ಪತ್ತಗುಡ್ಡದಲ್ಲಿ ಪರಿಸರ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಾಗುವುದು.

382. ಶ್ರೀ ಕ್ಷೇತ್ರ ರೇಣುಕಾ ಯಲ್ಲಮ್ಮನ ದೇವಸ್ಥಾನ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಸಂರಕ್ಷಿಸಿ ಅಭಿವೃದ್ಧಿಗೊಳಿಸಲು ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿದೆ.

## ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ

383. ರಾಜ್ಯಾದ್ಯಂತ ಹಸಿರು ಕವಚವನ್ನು ಹೆಚ್ಚಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳಡಿ ಒಟ್ಟು 2.74 ಕೋಟಿ ಸಸಿಗಳನ್ನು ನೆಟ್ಟು 50,225 ಹೆಕ್ಟೇರ್ ನೆಡುತೋಪು ನಿರ್ಮಾಣ ಮಾಡಲಾಗಿದೆ. ಈ ನೆಡುತೋಪುಗಳನ್ನು ಸಿರಿ ಚಂದನವನ, ನಗರ ಪ್ರದೇಶ ಹಸಿರೀಕರಣ, ಹಸಿರು ಆಯವ್ಯಯ, ಔಷಧಿ ಸಸ್ಯಗಳ ನೆಡುತೋಪು, ಟ್ರೀ-ಪಾರ್ಕ್, ರಸ್ತೆ ಬದುವಿನ ನೆಡುತೋಪು, ದೇವರಕಾಡು ಮತ್ತು ಹಸಿರು ಕರ್ನಾಟಕ ಕಾರ್ಯಕ್ರಮಗಳಡಿ ನಿರ್ಮಾಣ ಮಾಡಲಾಗಿದೆ.

384. ಮಾನವ-ವನ್ಯಜೀವಿ ಸಂಘರ್ಷ ರಾಜ್ಯ ಸರ್ಕಾರದ ಮುಂದಿರುವ ಜ್ವಲಂತ ಸವಾಲಾಗಿದೆ. ವನ್ಯಜೀವಿಗಳ ಸಂರಕ್ಷಣೆಯ ಜೊತೆಜೊತೆಗೇ ವನ್ಯಜೀವಿಗಳಿಂದ ಕಾಡಂಚಿನ ಜನರು ಹಾಗೂ ಅಲ್ಲಿನ ಬೆಳೆಗಳ ರಕ್ಷಣೆ ಮಾಡಲು ಈವರೆಗೂ 201 ಕೋಟಿ ರೂ.ಗಳಿಗೂ ಹೆಚ್ಚು ವೆಚ್ಚ ಮಾಡಲಾಗಿದೆ.

385. ರಾಜ್ಯದಲ್ಲಿ ಈಗಾಗಲೇ 07 ಆನೆ ಕಾರ್ಯಪಡೆಗಳು ಹಾಗೂ 02 ಚಿರತೆ ಕಾರ್ಯಪಡೆಗಳನ್ನು ರಚಿಸಲಾಗಿದ್ದು, ಈ ಕಾರ್ಯಪಡೆಗಳನ್ನು ಬಲಪಡಿಸಲು 40 ಕೋಟಿ ರೂ.ಗಳನ್ನು ಒದಗಿಸಲಾಗಿದೆ. ಪ್ರಸಕ್ತ ವರ್ಷ ಬಂಡೀಪುರದಲ್ಲಿ ಒಂದು ಹೊಸ ಕಾರ್ಯಪಡೆಯನ್ನು ರಚಿಸಲಾಗುವುದು ಮತ್ತು ಕಾರ್ಯಪಡೆಗಳಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಹಾಗೂ ಅತ್ಯಾಧುನಿಕ ತಂತ್ರಜ್ಞಾನಗಳೊಂದಿಗೆ ಬಲಪಡಿಸಲು 10 ಕೋಟಿ ರೂ. ಹಂಚಿಕೆ ಮಾಡಲಾಗುವುದು.

386. ಮಾನವ ವನ್ಯ ಜೀವಿ ಸಂಘರ್ಷ ತಡೆಯಲು ಅಗತ್ಯವಾದ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಹಿಂದಿನ ಆಯವ್ಯಯದಲ್ಲಿ 100 ಕೋಟಿ ರೂ. ಒದಗಿಸಲಾಗಿತ್ತು ಮತ್ತು 78 ಕಿ.ಮೀ. ಉದ್ದದ ರೈಲ್ವೆ ಬ್ಯಾರಿಕೇಡ್ ಅನ್ನು ನಿರ್ಮಿಸಲಾಗಿತ್ತು. ಪ್ರಸಕ್ತ ಸಾಲಿನಲ್ಲಿಯೂ ರೈಲ್ವೆ ಬ್ಯಾರಿಕೇಡ್‌ಗಳನ್ನು ನಿರ್ಮಿಸಲು ಪ್ರಾಮುಖ್ಯತೆ ನೀಡಲಾಗುವುದು.

387. ಬೀದರ್ ಜಿಲ್ಲೆಯ ಹೊನ್ನಿಕೇರಿ ಮೀಸಲು ಅರಣ್ಯ ಮತ್ತು ಇತರೆ ಜೀವವೈವಿಧ್ಯ ಪ್ರದೇಶಗಳಲ್ಲಿ ಪರಿಸರ ಪ್ರವಾಸೋದ್ಯಮ ಮತ್ತು ಸಂರಕ್ಷಣಾತ್ಮಕ ಕಾರ್ಯಕ್ರಮಗಳಿಗೆ 15 ಕೋಟಿ ರೂ. ಅನುದಾನ ಒದಗಿಸಲಾಗುವುದು.

388. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಲ, ವಾಯು ಹಾಗೂ ಪರಿಸರ ಸಂರಕ್ಷಣಾ ಕಾಯ್ದೆಗಳನ್ವಯ ನೀಡುವ ಸಮ್ಮತಿ ಪತ್ರಗಳನ್ನು ಒಗ್ಗೂಡಿಸಿ ಸರಳೀಕರಣಗೊಳಿಸುವ ಮೂಲಕ Ease of Doing Business ಅನ್ನು ಉತ್ತೇಜಿಸಲಾಗುವುದು.

389. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕಾರ್ಯವಿಧಾನವನ್ನು ಬಲಪಡಿಸುವ ನಿಟ್ಟಿನಲ್ಲಿ ವಿವಿಧ ಅನುಮತಿಗಳು ಮತ್ತು ಪ್ರಮಾಣ ಪತ್ರಗಳನ್ನು ನೀಡಲು ಏಕಗವಾಕ್ಷಿ ಕಾರ್ಯವಿಧಾನವನ್ನು ಸೃಜಿಸಲಾಗುವುದು.

390. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ 17 ನದಿ ನೀರಿನ ಗುಣಮಟ್ಟ ಮಾಪನ ಕೇಂದ್ರಗಳು ಹಾಗೂ ಎರಡು ಪರಿಸರ ಪ್ರಯೋಗಾಲಯಗಳ ಸ್ಥಾಪನೆ ಮಾಡಲಾಗುವುದು. ಅಲ್ಲದೇ 9 ಪರಿಸರ ಪ್ರಯೋಗಾಲಯಗಳನ್ನು ಉನ್ನತೀಕರಿಸಲಾಗುವುದು.

391. ಬೆಂಗಳೂರಿನ ಖಾಸಗಿ ವಸತಿ ಸಮುಚ್ಛಯಗಳಲ್ಲಿ ಸಂಸ್ಕರಿಸಿದ ನೀರನ್ನು ಮಂಡಳಿಯು ನಿಗದಿಪಡಿಸಿದ ಮಾನದಂಡಗಳ ಪ್ರಕಾರ ಮರುಬಳಕೆ ಮಾಡಲು ಪ್ರೋತ್ಸಾಹಿಸಲಾಗುವುದು.

## ಕಂದಾಯ

392. ಕಂದಾಯ ಇಲಾಖೆಯ ಭೂಮಿ, ಸರ್ವೆ ಮತ್ತು ನೋಂದಣಿ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಗಣಕೀಕರಣಗೊಳಿಸಿ, ಶಿಥಿಲಾವಸ್ಥೆಯಲ್ಲಿರುವ ದಾಖಲೆಗಳನ್ನು ಶಾಶ್ವತವಾಗಿ ಉಳಿಸಿ, ನಕಲಿ ದಾಖಲೆಗಳನ್ನು ಸೃಷ್ಟಿಸಲು ಅವಕಾಶವಿರದಂತೆ ಗಣಕೀಕೃತ ದಾಖಲೆಗಳನ್ನು ನಾಗರಿಕರು, ಸ್ವತಃ ಆನ್‌ಲೈನ್‌ನಲ್ಲಿ ಪಡೆದುಕೊಳ್ಳಲು ಅನುವಾಗುವಂತೆ ಭೂ ಸುರಕ್ಷಾ ಯೋಜನೆಯನ್ನು ಪ್ರಾಯೋಗಿಕವಾಗಿ ಆರಂಭಿಸಲಾಗುವುದು.

393. ಆಕಾರ್‌ಬಂದ್ ಮತ್ತು ಆರ್.ಟಿ.ಸಿ. ಯಲ್ಲಿನ ವಿಸ್ತೀರ್ಣವನ್ನು ಹೊಂದಾಣಿಕೆ ಮಾಡುವ ಮೂಲಕ ಹಿಡುವಳಿದಾರರಿಗೆ ತ್ವರಿತ ಸೇವೆ ಒದಗಿಸಲು ಆಕಾರ್‌ಬಂದ್‌ಗಳ ಗಣಕೀಕರಣ ಕಾರ್ಯವನ್ನು ಕೈಗೊಳ್ಳಲಾಗುವುದು.

394. ನಮ್ಮ ಸರ್ಕಾರದ ಹಿಂದಿನ ಅವಧಿಯಲ್ಲಿ ಬಹು ಮಾಲೀಕತ್ವವುಳ್ಳ ಪಹಣಿಗಳನ್ನು ಅಳತೆಗೆ ಒಳಪಡಿಸುವ ಮೂಲಕ ಪ್ರತಿ ಹಿಡುವಳಿದಾರರಿಗೆ ಪೋಡಿ ಮಾಡಿ ಪ್ರತ್ಯೇಕ ಆರ್.ಟಿ.ಸಿ.ಯನ್ನು ವಿತರಿಸುವ ಅಭಿಯಾನವನ್ನು ಪ್ರಾರಂಭಿಸಲಾಗಿತ್ತು. ಬಾಕಿ ಉಳಿದಿರುವ ಗ್ರಾಮಗಳನ್ನು **ಪೋಡಿ ಅಭಿಯಾನ 2.0** ರಡಿ ಪೋಡಿ ಮುಕ್ತ ಮಾಡಲು ಆದ್ಯತೆ ಮೇರೆಗೆ ಕ್ರಮ ವಹಿಸಲಾಗುವುದು.

395. ದರಖಾಸ್ತು ಪೋಡಿ ಅಭಿಯಾನದಡಿ ರೈತರ ಜಮೀನಿನ ದುರಸ್ತಿ ಪ್ರಕ್ರಿಯೆಯನ್ನು ಸುಗಮಗೊಳಿಸಲು, ಯಾವುದೇ ತಕರಾರು ಇಲ್ಲದೆ ಇರುವ ಜಮೀನುಗಳಿಗೆ ಸರ್ಕಾರದಿಂದ ಸ್ವಯಂ ಪ್ರೇರಿತವಾಗಿ 1 ರಿಂದ 5 ರ ವರೆಗಿನ ದಾಖಲೆಗಳನ್ನು ಸಿದ್ಧಪಡಿಸಲಾಗುವುದು.

396. ರಾಜ್ಯದಲ್ಲಿನ ಸುಮಾರು 30,700 ಗ್ರಾಮ ಠಾಣಾ ಪ್ರದೇಶಗಳನ್ನು ಹಂತ ಹಂತವಾಗಿ ಡ್ರೋನ್ ಮುಖಾಂತರ ಸರ್ವೆ ಮಾಡಿಸಿ ಆಸ್ತಿ ಮತ್ತು ಹಕ್ಕು ದಾಖಲಾತಿಗಳನ್ನು ಭೂ ಮಾಲೀಕರಿಗೆ ವಿತರಿಸುವ ಯೋಜನೆಯನ್ನು ರಾಜ್ಯಾದ್ಯಂತ ವಿಸ್ತರಿಸಲಾಗುವುದು.

397. ಉತ್ತಮ ಆಡಳಿತ ನೀಡುವ ನಿಟ್ಟಿನಲ್ಲಿ ನೋಟೀಸುರಹಿತ ಮ್ಯುಟೇಷನ್‌ಗಳು (ಪೌತಿ ಖಾತೆ ಮತ್ತು ಜೆ-ಸ್ಲಿಪ್ ಮುಖಾಂತರ ಆಗುವ ಮ್ಯುಟೇಷನ್‌ಗಳನ್ನು ಹೊರತುಪಡಿಸಿ) ನಿಗದಿತ ತಂತ್ರಾಂಶದಲ್ಲಿ ಸ್ವಯಂ-ಚಾಲಿತವಾಗಿ ಅನುಮೋದನೆಯಾಗುವಂತೆ ಕ್ರಮವಹಿಸಲಾಗುವುದು.

398. ಆಧುನಿಕ ಉಪಕರಣಗಳ ಮುಖಾಂತರ ಕಡಿಮೆ ಅವಧಿಯಲ್ಲಿ ಭೂಮಾಪನ ಕಾರ್ಯಗಳನ್ನು ಕೈಗೊಂಡು ನಿಖರವಾದ ಡಿಜಿಟಲ್ ದಾಖಲೆಗಳನ್ನು ಸಿದ್ಧಪಡಿಸಿ ಸಾರ್ವಜನಿಕರಿಗೆ ಒದಗಿಸಲಾಗುವುದು ಮತ್ತು ಇದಕ್ಕೆ ಅಗತ್ಯವಾದ ಡ್ರೋನ್ ಮತ್ತಿತರ ಉಪಕರಣಗಳನ್ನು ಎಲ್ಲಾ ಜಿಲ್ಲೆಗಳಲ್ಲಿನ ಭೂಮಾಪನಾ ಕಛೇರಿಗಳಿಗೆ ನೀಡಲಾಗುವುದು.

399. ಡಿಜಿ ಕಂದಾಯ ಯೋಜನೆಯಡಿ ಕಂದಾಯ ಇಲಾಖೆಯು ನೀಡುವ ಎಲ್ಲಾ ಸೇವೆಗಳನ್ನು ಪಾರದರ್ಶಕವಾಗಿ ಮತ್ತು ತ್ವರಿತವಾಗಿ ಡಿಜಿಟಲ್ ಪ್ಲಾಟ್‌ಫಾರಂ ಮೂಲಕ ಸಾರ್ವಜನಿಕರಿಗೆ ಒದಗಿಸಲು ಕ್ರಮ ವಹಿಸಲಾಗುವುದು. ಇ–ಆಫೀಸ್ ವ್ಯವಸ್ಥೆಯನ್ನು, ಇಲಾಖೆಯ ಗ್ರಾಮಮಟ್ಟದವರೆಗೆ ವಿಸ್ತರಿಸಲಾಗುವುದು ಮತ್ತು ಇದಕ್ಕಾಗಿ ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ಕಂದಾಯ ನಿರೀಕ್ಷಕರಿಗೆ ಲ್ಯಾಪ್‌ಟಾಪ್ ನೀಡಲಾಗುವುದು.

400. ಸರ್ಕಾರವು ದಾಖಲೆ ರಹಿತ ಜನವಸತಿ ಪ್ರದೇಶಗಳಾದ ತಾಂಡ, ಹಟ್ಟಿ, ಹಾಡಿ, ದೊಡ್ಡಿ, ಪಾಳ್ಯ, ಮಜರೆ, ಕ್ಯಾಂಪ್, ಕಾಲೋನಿ ಇತ್ಯಾದಿಗಳನ್ನು ಗುರುತಿಸಿ ಹೊಸ ಕಂದಾಯ ಗ್ರಾಮ ಹಾಗೂ ಉಪ ಗ್ರಾಮಗಳೆಂದು ಘೋಷಿಸಿದ್ದು, ಅಲ್ಲಿನ ಸುಮಾರು 2 ಲಕ್ಷ ನಿವಾಸಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲು ಕ್ರಮವಹಿಸಲಾಗುವುದು.

401. ಭೂ ಮಾಪನ ಇಲಾಖೆಗೆ ಸೇರಿದ 240 ಅಭಿಲೇಖಾಲಯ ಕೊಠಡಿಗಳನ್ನು ಆಧುನೀಕರಣಗೊಳಿಸುವ ಮೂಲಕ ಕಂದಾಯ ದಾಖಲೆಗಳನ್ನು ಪಾರದರ್ಶಕ ಹಾಗೂ ಆನ್‌ಲೈನ್ ವ್ಯವಸ್ಥೆ ಮೂಲಕ ಸಾರ್ವಜನಿಕರಿಗೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗುವುದು.

402. ಭೂಮಿ ತಂತ್ರಾಂಶದಲ್ಲಿ ಫ್ಲಾಗ್ ಮಾಡಲಾಗಿರುವ ಸರ್ಕಾರಿ ಜಮೀನಿನ ಪಹಣಿಗಳನ್ನು ಲ್ಯಾಂಡ್ ಬೀಟ್ ಆಪ್ ಬಳಸಿ, ಗ್ರಾಮ ಆಡಳಿತ ಅಧಿಕಾರಿಗಳ ಮುಖಾಂತರ ಸರ್ಕಾರಿ ಜಮೀನಿನ ಒತ್ತುವರಿ ಹಾಗೂ ಸಂರಕ್ಷಣೆ ಕುರಿತು ನಿಗಾ ವಹಿಸಲಾಗುವುದು.

403. ಪ್ರಸಕ್ತ ಸಾಲಿನಲ್ಲಿ 42 ತಾಲ್ಲೂಕಾ ಆಡಳಿತ ಸೌಧದ ಕಾಮಗಾರಿಗಳಿಗೆ 80 ಕೋಟಿ ರೂ. ಹಾಗೂ 14 ಜಿಲ್ಲಾಡಳಿತ ಸೌಧದ ಕಾಮಗಾರಿಗಳಿಗೆ 50 ಕೋಟಿ ರೂ. ಒದಗಿಸಲಾಗಿದೆ. ವಿಜಯಪುರ ಮತ್ತು ಬೀದರ್ ಜಿಲ್ಲೆಗಳಲ್ಲಿ ಹೊಸ ಜಿಲ್ಲಾಡಳಿತ ಕಛೇರಿಗಳು ಹಾಗೂ ಅಗತ್ಯವಿರುವ ತಾಲ್ಲೂಕುಗಳಲ್ಲಿ ತಾಲ್ಲೂಕಾ ಆಡಳಿತ ಕಛೇರಿಗಳನ್ನು ನಿರ್ಮಿಸಲಾಗುವುದು

404. 2023-24 ರಲ್ಲಿ ರಾಜ್ಯದ 223 ತಾಲ್ಲೂಕುಗಳನ್ನು ಬರಗಾಲ ಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದ್ದು, ಸಂಕಷ್ಟಕ್ಕೆ ಸಿಲುಕಿದ ಕರ್ನಾಟಕದ ರೈತರಿಗೆ ತುಸು ನೆಮ್ಮದಿ ನೀಡಲು NDRF ನಿಧಿಯಿಂದ 18,171 ಕೋಟಿ ರೂ.ಗಳ ಬರ ಪರಿಹಾರವನ್ನು ರಾಜ್ಯಕ್ಕೆ ನೀಡಲು ಕೋರಿ ಕೇಂದ್ರ ಸರ್ಕಾರಕ್ಕೆ 3 ಮೆಮೊರಾಂಡಮ್‌ಗಳನ್ನು ಸಲ್ಲಿಸಿದ್ದರೂ ಸಹ ಕೇಂದ್ರ ಸರ್ಕಾರವು ಯಾವುದೇ ರೀತಿಯ ಸ್ಪಂದನೆಯನ್ನು ನೀಡಿರುವುದಿಲ್ಲ. ಆದಾಗ್ಯೂ ಕೇಂದ್ರ ಸರ್ಕಾರದ ಅನುದಾನಕ್ಕೆ

ಕಾಯದೇ ಬರವನ್ನು ಸಮರ್ಥವಾಗಿ ನಿಭಾಯಿಸಲು ರಾಜ್ಯ ಸರ್ಕಾರವು ಹಲವು ಕ್ರಮಗಳನ್ನು ಕೈಗೊಂಡಿದೆ;

- 33.19 ಲಕ್ಷ ರೈತರಿಗೆ ತಲಾ 2,000 ರೂ.ಗಳವರೆಗೆ ಇನ್‌ಪುಟ್ ಸಬ್ಸಿಡಿ 629 ಕೋಟಿ ರೂ. ಅನುದಾನವನ್ನು ರೈತರ ಖಾತೆಗೆ ಜಮೆ ಮಾಡಲಾಗಿದೆ.
- ಬರದ ತೀವ್ರತೆಯನ್ನು ತಗ್ಗಿಸಲು 20 ಕೋಟಿ ರೂ.ಗಳ ವೆಚ್ಚದಲ್ಲಿ ಮಿನಿ ಮೇವಿನ ಕಿಟ್ ವಿತರಿಸಲಾಗುತ್ತಿದೆ.
- ಅಂತರ್ಜಲ ಮಟ್ಟ ವೃದ್ಧಿಸಲು ಕೃಷಿ ಭಾಗ್ಯ ಯೋಜನೆಯಡಿಯಲ್ಲಿ 200 ಕೋಟಿ ರೂ.ಗಳನ್ನು ಒದಗಿಸಲಾಗುತ್ತಿದೆ.
- ಸಣ್ಣ ನೀರಾವರಿ ಇಲಾಖೆಯ ಮೂಲಕ 100 ಕೋಟಿ ರೂ.ಗಳ ವೆಚ್ಚದ ಜಲ ಸಂರಕ್ಷಣೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.
- ಪ್ರಸಕ್ತ ಸಾಲಿನಲ್ಲಿ ರಾಜ್ಯ ವಿಪತ್ತು ಉಪಶಮನ ನಿಧಿಯಿಂದ ಒಟ್ಟು 500 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಬರ ಉಪಶಮನ ಕ್ರಮಗಳನ್ನು ತೆಗೆದುಕೊಳ್ಳಲು ಕ್ರಮವಹಿಸಲಾಗುವುದು.

405. 15ನೇ ಹಣಕಾಸು ಆಯೋಗವು 2011–17ರ ಅವಧಿಯಲ್ಲಿನ ವೆಚ್ಚವನ್ನು ಆಧರಿಸಿ, ಪರಿಹಾರ ಮೊತ್ತ ನಿಗದಿ ಮಾಡಿರುವುದರಿಂದ ರಾಜ್ಯಕ್ಕೆ 2021–26 ರ ಅವಧಿಗೆ ನಿಗದಿಪಡಿಸಿರುವ ಎಸ್.ಡಿ.ಆರ್.ಎಫ್

ಮೊತ್ತ ಹಂಚಿಕೆಯು ಆನೆಯ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆಯಂತೆ ಅತ್ಯಂತ ನಿರಾಶಾದಾಯಕವಾಗಿದೆ. 2018 ರಿಂದ ಪ್ರತಿ ವರ್ಷವೂ ರಾಜ್ಯವು ಅನುಭವಿಸಿದ ತೀವ್ರ ನೈಸರ್ಗಿಕ ವಿಕೋಪಗಳಿಂದ ಅಂದಾಜು 1.21 ಲಕ್ಷ ಕೋಟಿ ರೂ.ಗಳಷ್ಟು ನಷ್ಟ ಉಂಟಾಗಿದೆ. ಕೇಂದ್ರ ಸರ್ಕಾರವು 2018 ರಿಂದ ಇಲ್ಲಿಯವರೆಗೆ ಬಿಡುಗಡೆಗೊಳಿಸಿದ್ದ 9,300 ಕೋಟಿ ರೂ.ಗಳಿಗೆ ಎದುರಾಗಿ ರಾಜ್ಯ ಸರ್ಕಾರವು ತನ್ನ ಬೊಕ್ಕಸದಿಂದ ವಿವಿಧ ಇಲಾಖೆಗಳ ಮೂಲಕ 15,874 ಕೋಟಿ ರೂ.ಗಳನ್ನು ವೆಚ್ಚ ಮಾಡಿದೆ. ರಾಜ್ಯಗಳಿಗೆ ಎನ್.ಡಿ.ಆರ್.ಎಫ್ ಅನುದಾನ ನಿಗದಿಪಡಿಸುವ ಸಂದರ್ಭದಲ್ಲಿ ರಾಜ್ಯ ಸರ್ಕಾರಗಳು ಪ್ರಕೃತಿ ವಿಕೋಪಗಳನ್ನು ನಿಭಾಯಿಸಲು ಎಲ್ಲಾ ಇಲಾಖೆಗಳ ಮೂಲಕ ವೆಚ್ಚ ಮಾಡಿರುವ ಅನುದಾನವನ್ನು ಪರಿಗಣಿಸುವುದರ ಜೊತೆಗೆ ಪ್ರಕೃತಿ ವಿಕೋಪಕ್ಕೆ ತುತ್ತಾಗುವ ಸಾಧ್ಯತೆಗಳನ್ನೂ ಕೂಡ ಪರಿಗಣಿಸಬೇಕೆಂದು ಕೇಂದ್ರ ಸರ್ಕಾರಕ್ಕೆ ಹಾಗೂ 16ನೇ ಹಣಕಾಸು ಆಯೋಗಕ್ಕೆ ಒತ್ತಾಯಿಸಲಾಗುವುದು.

406. ಶಾಲಾ ಮಕ್ಕಳಿಗೆ ಹವಾಮಾನ ಬದಲಾವಣೆಯ ಪರಿಣಾಮದ ದೃಶ್ಯಗಳು ಮತ್ತು ಹವಾಮಾನ ಬದಲಾವಣೆ ಪರಿಹಾರಗಳ ಕುರಿತು ಅರಿವು ಮೂಡಿಸಲು ಹವಾಮಾನ ಬದಲಾವಣೆ ಅನುಭವ ಕೇಂದ್ರವನ್ನು 10 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

407. ನೋಂದಣಿ ಪ್ರಕ್ರಿಯೆಯಲ್ಲಿ ನಾಗರಿಕ ಸ್ನೇಹಿ ಸುಧಾರಣೆಗಳನ್ನು ತರಲು ಈ ಕೆಳಕಂಡ ಉಪಕ್ರಮಗಳನ್ನು ಜಾರಿಗೆ ತರಲು ಉದ್ದೇಶಿಸಲಾಗಿದೆ;

- ಕಡ್ಡಾಯವಾಗಿ ನೋಂದಾಯಿಸಬಹುದಾದ ಆಯ್ದ ದಾಖಲೆಗಳ ಇ–ನೋಂದಣಿಯನ್ನು ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ಎರಡು ಪಕ್ಷಗಳ ಉಪಸ್ಥಿತಿಯಿಲ್ಲದೆ ನೋಂದಣಿ ಮಾಡಲು ಕ್ರಮ.
- Anytime Anywhere Registration ಕಾರ್ಯಕ್ರಮವನ್ನು ಇಡೀ ರಾಜ್ಯಕ್ಕೆ ವಿಸ್ತರಿಸಲು ನೋಂದಣಿ ಮತ್ತು ಮುದ್ರಾಂಕ ಕಾಯ್ದೆಗಳಿಗೆ ತಿದ್ದುಪಡಿ.
- ಸ್ಥಿರಾಸ್ತಿ ನೋಂದಣಿಗೆ ಸಂಬಂಧಿಸಿದ ಎಲ್ಲಾ ತಂತ್ರಾಂಶಗಳ ಏಕೀಕರಣ.
- ನಾಗರಿಕರ ಅನುಕೂಲಕ್ಕಾಗಿ ಭಾನುವಾರ ಸಹ ಆಯ್ದ ಉಪ ನೋಂದಣಾಧಿಕಾರಿ ಕಛೇರಿಯನ್ನು ತೆರೆಯಲಾಗುವುದು.

408. ನಾಗರಿಕರು ದೃಢೀಕೃತ ಪ್ರತಿಗಳನ್ನು ಪಡೆಯುವಲ್ಲಿನ ವಿಳಂಬವನ್ನು ತಗ್ಗಿಸಲು ಕೇಂದ್ರೀಕೃತ ವರ್ಚುವಲ್ ವಿತರಣಾ ವ್ಯವಸ್ಥೆಯ ಮೂಲಕ ದಾಖಲೆಗಳ ವಿತರಣೆಯನ್ನು ಸ್ವಯಂಚಾಲಿತಗೊಳಿಸಲಾಗುವುದು.

409. ಪಾರದರ್ಶಕವಾಗಿ ಯಾವುದೇ ರೀತಿಯ ತೊಂದರೆಗಳಿಲ್ಲದೆ ನೋಂದಣಿ ಕೆಲಸವನ್ನು ಸಾರ್ವಜನಿಕರಿಗೆ ತಲುಪಿಸಲು ನಿಯಮಗಳಿಗೆ ಅಗತ್ಯ ತಿದ್ದುಪಡಿಗಳನ್ನು ತರಲಾಗುವುದು.

## ಧಾರ್ಮಿಕ ದತ್ತಿ

410. ಹೊರ ರಾಜ್ಯಗಳಲ್ಲಿನ ಪವಿತ್ರ ಪುಣ್ಯಕ್ಷೇತ್ರಗಳಾದ ತಿರುಮಲ, ಶ್ರೀಶೈಲ, ವಾರಣಾಸಿ ಮತ್ತು ಗುಡ್ಡಾಪುರಕ್ಕೆ ಭೇಟಿ ನೀಡುವ ಕರ್ನಾಟಕದ ಭಕ್ತಾಧಿಗಳ ಅನುಕೂಲಕ್ಕಾಗಿ ಸುಸಜ್ಜಿತ ವಸತಿ ಸಂಕೀರ್ಣಗಳನ್ನು ನಿರ್ಮಿಸಲಾಗುತ್ತಿದೆ. ತಿರುಮಲದಲ್ಲಿ 200 ಕೋಟಿ ರೂ.ಗಳ ಕಾಮಗಾರಿ ಅಂತಿಮ ಹಂತದಲ್ಲಿದೆ. ಶ್ರೀಶೈಲದಲ್ಲಿ 85 ಕೋಟಿ ರೂ. ವೆಚ್ಚದಲ್ಲಿ ಮತ್ತು ಗುಡ್ಡಾಪುರದಲ್ಲಿ 11 ಕೋಟಿ ರೂ. ವೆಚ್ಚದ ಕಾಮಗಾರಿಗಳು ಪ್ರಗತಿಯಲ್ಲಿವೆ. ಪ್ರಸಕ್ತ ಸಾಲಿನಲ್ಲಿ ವಾರಣಾಸಿಯಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

411. ಮಂತ್ರಾಲಯಕ್ಕೆ ಸಂಪರ್ಕ ಕಲ್ಪಿಸಲು ರಾಯಚೂರಿನ ಚಿಕ್ಕಮಂಚಾಲಿ ಗ್ರಾಮದ ಬಳಿ ಬ್ರಿಡ್ಜ್–ಕಂ–ಬ್ಯಾರೇಜ್ ಅನ್ನು ಲೋಕೋಪಯೋಗಿ ಇಲಾಖೆ ವತಿಯಿಂದ 158 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುವುದು.

412. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಶ್ರೀ ಘಾಟಿ ಸುಬ್ರಹ್ಮಣ್ಯಸ್ವಾಮಿ ದೇವಾಲಯ ಹಾಗೂ ಕೊಪ್ಪಳ ಜಿಲ್ಲೆಯ ಹುಲಿಗೆಮ್ಮ ದೇವಾಲಯದ ಅಭಿವೃದ್ಧಿಗಾಗಿ ಪ್ರತ್ಯೇಕ ಪ್ರಾಧಿಕಾರಗಳನ್ನು ರಚಿಸಲಾಗುವುದು.

413. ಯಾವುದೇ ಆದಾಯವಿಲ್ಲದ 34,165 'ಸಿ' ವರ್ಗದ ಐತಿಹಾಸಿಕ ದೇವಾಲಯಗಳಲ್ಲಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಸಮಾಜದ ಗಣ್ಯರು ಮತ್ತು ಸಂಬಂಧಪಟ್ಟ ಇಲಾಖೆಗಳ ಪ್ರತಿನಿಧಿಗಳನ್ನೊಳಗೊಂಡ Vision Group ರಚಿಸಲಾಗುವುದು.

414. ಇನಾಂ/ಇನಾಂಯೇತರ ಜಮೀನು ಕಳೆದುಕೊಂಡಂತಹ 29,523 'ಸಿ' ವರ್ಗದ ದೇವಾಲಯಗಳ ಅರ್ಚಕರುಗಳಿಗೆ ಇನ್ನು ಮುಂದೆ ತಸ್ತಿಕ್ ಮೊತ್ತವನ್ನು ಅರ್ಚಕರುಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದು.

## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

415. ಆಡಳಿತ ಸುಧಾರಣೆ ಒಂದು ನಿರಂತರ ಪ್ರಕ್ರಿಯೆಯಾಗಿದೆ. ಆಡಳಿತ ಸುಧಾರಣಾ ಆಯೋಗ–2 ರಾಜ್ಯದ ಆಡಳಿತ ವ್ಯವಸ್ಥೆಯಲ್ಲಿ ಕೈಗೊಳ್ಳಬಹುದಾದ ಸುಧಾರಣಾ ಕ್ರಮಗಳ ಬಗ್ಗೆ ಸಲ್ಲಿಸಿರುವ ವರದಿಗಳನ್ನು ಪರಿಶೀಲಿಸಿ, ಅವುಗಳ ಅನುಷ್ಠಾನದ ಕುರಿತು ಪರಿಶೀಲಿಸಲು ಸರ್ಕಾರ ಆಡಳಿತ ಸುಧಾರಣಾ ಆಯೋಗವನ್ನು

ರಚಿಸಿದೆ. ಈ ಆಯೋಗವು ಆಡಳಿತ ಸುಧಾರಣಾ ಕ್ರಮಗಳ ಅನುಷ್ಠಾನದ ಮೇಲ್ವಿಚಾರಣೆ ಮಾಡಲಿದೆ.

416. ರಾಜ್ಯ ಸರ್ಕಾರಿ ನೌಕರರ ವೇತನ ಪರಿಷ್ಕರಣೆಗೆ ಏಳನೇ ವೇತನ ಆಯೋಗವನ್ನು ರಚಿಸಲಾಗಿದ್ದು, ಆಯೋಗದ ವರದಿ ಸ್ವೀಕರಿಸಿದ ನಂತರ ಪರಿಶೀಲಿಸಿ ಕ್ರಮವಹಿಸಲಾಗುವುದು.

417. ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯು ವಿವಿಧ ಕಾನೂನಿನಡಿಯಲ್ಲಿ 7,214 ಸಂಸ್ಥೆಗಳ ಶಾಸನಬದ್ಧ ಲೆಕ್ಕಪರಿಶೋಧಕರಾಗಿರುತ್ತದೆ. ಈ ಸಂಸ್ಥೆಗಳ ಲೆಕ್ಕಪರಿಶೋಧನೆಯಲ್ಲಿ ಏಕರೂಪತೆಯನ್ನು ತರಲು ಲೆಕ್ಕಪರಿಶೋಧನಾ ಕಾಯ್ದೆಯನ್ನು ಜಾರಿಗೆ ತರಲಾಗುವುದು.

418. ಸಾರ್ವಜನಿಕರ ಕುಂದುಕೊರತೆ ಹಾಗೂ ಅಹವಾಲುಗಳಿಗೆ ನೇರ ಪರಿಹಾರ ಒದಗಿಸುವ ದೃಷ್ಟಿಯಿಂದ ಜನಸ್ಪಂದನ ಕಾರ್ಯಕ್ರಮವನ್ನು ರಾಜ್ಯ, ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ನಿಯಮಿತವಾಗಿ ಆಯೋಜಿಸಲಾಗುತ್ತಿದೆ. ಈವರೆಗೆ ರಾಜ್ಯಮಟ್ಟದ ಎರಡು ಜನಸ್ಪಂದನ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಒಟ್ಟಾರೆ 18,000 ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಮೊದಲ ಕಾರ್ಯಕ್ರಮದಲ್ಲಿ ಸ್ವೀಕರಿಸಲಾದ ಅಹವಾಲುಗಳ ಪೈಕಿ ಶೇ.94ರಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಎರಡನೇ ಜನಸ್ಪಂದನ ಕಾರ್ಯಕ್ರಮದಲ್ಲಿ

ಸ್ವೀಕರಿಸಿದ ಅಹವಾಲುಗಳನ್ನೂ ಸಹ ನಿಗದಿತ ಕಾಲಮಿತಿಯಲ್ಲಿ ಬಗೆಹರಿಸಲಾಗುವುದು.

## ಇ–ಆಡಳಿತ

419. ನಮ್ಮ ಸರ್ಕಾರವು ತಂತ್ರಜ್ಞಾನ ಬಳಕೆಯ ಮೂಲಕ ನಾಗರಿಕರಿಗೆ ಸರ್ಕಾರದ ಸೇವೆಗಳನ್ನು ಸುಲಭವಾಗಿ, ಪರಿಣಾಮಕಾರಿಯಾಗಿ ಹಾಗೂ ಪಾರದರ್ಶಕವಾಗಿ ಒದಗಿಸಲು ಮತ್ತು ಅರ್ಹ ಫಲಾನುಭವಿಗಳಿಗೆ ಈ ಸೌಲಭ್ಯಗಳು ಸಕಾಲದಲ್ಲಿ ತಲುಪುವುದನ್ನು ಖಾತರಿಪಡಿಸಲು ಆದ್ಯತೆ ನೀಡುತ್ತದೆ.

420. ಕುಟುಂಬ ದತ್ತಾಂಶದ ಮೂಲಕ ರಾಷ್ಟ್ರದ ಅತಿದೊಡ್ಡ ಜನಕಲ್ಯಾಣ ಕಾರ್ಯಕ್ರಮಗಳಾದ 5 ಗ್ಯಾರಂಟಿ ಯೋಜನೆಗಳನ್ನು ಕೇವಲ 3 ತಿಂಗಳಲ್ಲಿ 5 ಕೋಟಿಗೂ ಹೆಚ್ಚು ಫಲಾನುಭವಿಗಳಿಗೆ ತಲುಪಿಸಲು ಸಾಧ್ಯವಾಗಿದೆ. ಪ್ರಸಕ್ತ ಸಾಲಿನಲ್ಲಿ 36,000 ಕೋಟಿ ರೂ.ಗಳಷ್ಟು ಬೃಹತ್ ಮೊತ್ತವನ್ನು ಅರ್ಹ ಫಲಾನುಭವಿಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಈ ತಂತ್ರಾಂಶವನ್ನು ಇನ್ನಷ್ಟು ಬಲಪಡಿಸಲು ಆದ್ಯತೆ ನೀಡಲಾಗುವುದು.

421. ವಿವಿಧ ಫಲಾನುಭವಿ–ಆಧಾರಿತ ಯೋಜನೆಗಳ ಅಡಿಯಲ್ಲಿ ನಗದು ವರ್ಗಾವಣೆಯನ್ನು ರಾಜ್ಯ ಡಿ.ಬಿ.ಟಿ. ವೇದಿಕೆಯ ಮೂಲಕ

ಜಾರಿಗೊಳಿಸಲಾಗುತ್ತಿದೆ. ಫಲಾನುಭವಿಗಳಿಗೆ ನೀಡುತ್ತಿರುವ ನಗದುರಹಿತ ಪ್ರಯೋಜನಗಳನ್ನೂ ಸಹ ಹಂತ ಹಂತವಾಗಿ ರಾಜ್ಯ ಡಿ.ಬಿ.ಟಿ. ವೇದಿಕೆಯ ಅಡಿಯಲ್ಲಿ ತರಲಾಗುವುದು.

422. ಕಾಮಗಾರಿಗಳ ಆರ್ಥಿಕ ಹಾಗೂ ಭೌತಿಕ ಪ್ರಗತಿಯನ್ನು ಮೇಲ್ವಿಚಾರಣೆ ನಡೆಸಲು ಹಾಗೂ ಪಾರದರ್ಶಕತೆ ಹೆಚ್ಚಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ವೇದಿಕೆ 2.0 ರಲ್ಲಿ ಗುತ್ತಿಗೆ ನಿರ್ವಹಣಾ ಮಾಡ್ಯೂಲ್ ಅನ್ನು (Contract Management Module) ಹಂತ ಹಂತವಾಗಿ ಎಲ್ಲಾ ಇಲಾಖೆಗಳಿಗೆ ವಿಸ್ತರಿಸಲಾಗುವುದು.

423. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು ಮತ್ತು ಉದ್ಯೋಗಾವಕಾಶಗಳನ್ನು ಸಮರ್ಥವಾಗಿ ಒದಗಿಸಿ, ಅವರ ಭವಿಷ್ಯದ ಯಶಸ್ಸನ್ನು ಪ್ರೋತ್ಸಾಹಿಸಲು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ವಿದ್ಯಾವಾರಿಧಿ ಎಂಬ ಸಮಗ್ರ ದತ್ತ–ಸಂಚಯವನ್ನು ನಿರ್ಮಿಸಲಾಗುವುದು.

424. ಆರ್ಟಿಫಿಶಿಯಲ್ ಇಂಟಲಿಜೆನ್ಸ್ / ಮಿಷನ್ ಲರ್ನಿಂಗ್ ಆಧಾರಿತ ತಂತ್ರಾಂಶಗಳನ್ನು ಬಳಸಿಕೊಂಡು ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಒಳಗೊಂಡ ಆರ್ಟಿಫಿಶಿಯಲ್ ಇಂಟಲಿಜೆನ್ಸ್ / ಮಿಷನ್ ಲರ್ನಿಂಗ್ ಆಡಳಿತ ಘಟಕವನ್ನು ಸ್ಥಾಪಿಸಲಾಗುವುದು.

425. ಐ.ಸಿ.ಟಿ ಮೂಲಸೌಕರ್ಯ ಮತ್ತು ದತ್ತ ಸಂಗ್ರಹಣೆಗೆ ಸಂಬಂಧಿಸಿದ ಸೈಬರ್ ದಾಳಿಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಪ್ರಸ್ತುತ ಇರುವ Security Operation Center ಅನ್ನು ಉನ್ನತೀಕರಿಸಲಾಗುವುದು. ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಎಲ್ಲಾ ಸರ್ಕಾರಿ ದತ್ತಾಂಶಗಳನ್ನು ಕಡ್ಡಾಯವಾಗಿ Security Operation Center ಸಂಸ್ಥೆಯ ಮೂಲಕ ನಿರ್ವಹಿಸಲು ಕ್ರಮವಹಿಸಲಾಗುವುದು.

426. ಸಕಾಲದಲ್ಲಿ ಪ್ರಸ್ತುತ ಒಟ್ಟು 922 ನಾಗರಿಕರ ಸೇವೆಗಳಿದ್ದು, ಅವುಗಳ ಪೈಕಿ 493 ಸೇವೆಗಳನ್ನು ಸೇವಾ ಸಿಂಧು ಪೋರ್ಟಲ್‌ಗೆ ಸೇರಿಸಲಾಗಿದೆ. ಉಳಿದ 429 ಸೇವೆಗಳನ್ನು ಸೇವಾ ಸಿಂಧುಗೆ ಹಂತ ಹಂತವಾಗಿ ಸೇರಿಸಲು ಉದ್ದೇಶಿಸಲಾಗಿದೆ.

427. ಆಡಳಿತದಲ್ಲಿ ದಕ್ಷತೆ, ಪಾರದರ್ಶಕತೆ ಮತ್ತು ಜವಾಬ್ದಾರಿ ಹೆಚ್ಚಿಸುವ ನಿಟ್ಟಿನಲ್ಲಿ ಇ–ಕಛೇರಿ ತಂತ್ರಾಂಶದ ಅನುಷ್ಠಾನವನ್ನು ಸರ್ಕಾರದ ಗ್ರಾಮ ಪಂಚಾಯತ್ ಮಟ್ಟದವರೆಗಿನ ಎಲ್ಲಾ ಕಛೇರಿಗಳಿಗೆ ವಿಸ್ತರಿಸಲಾಗುವುದು.

428. ಕನ್ನಡ ಭಾಷೆಯ ಭಾಷಾಂತರದಲ್ಲಿ ಉಂಟಾಗುವ ಅಡೆತಡೆಗಳನ್ನು ನಿವಾರಿಸಲು ಮತ್ತು ಎಲ್ಲಾ ಕನ್ನಡಿಗರಿಗೆ ಹಾಗೂ ಕನ್ನಡೇತರರಿಗೆ

ಸಹಾಯವಾಗುವಂತೆ ಕನ್ನಡ ಕಸ್ತೂರಿ ಎಂಬ ಯಂತ್ರಾನುವಾದ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುವುದು.

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ

429. ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924 ರಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನವು ಈ ವರ್ಷ ಶತಮಾನದ ಮೈಲಿಗಲ್ಲನ್ನು ಪೂರ್ಣಗೊಳಿಸುತ್ತಿದೆ. ಮಹಾತ್ಮಾ ಗಾಂಧೀಜಿಯವರು ಅಧ್ಯಕ್ಷತೆ ವಹಿಸಿದ್ದ ಏಕೈಕ ಅಧಿವೇಶನ ಇದಾಗಿದೆ. ಈ ಅಧಿವೇಶನದ ಕೊಡುಗೆಯನ್ನು ಸ್ಮರಿಸಲು 2 ಕೋಟಿ ರೂ. ವೆಚ್ಚದಲ್ಲಿ ಬೆಳಗಾವಿಯಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗುವುದು. ಅಲ್ಲದೇ ಮಹಾತ್ಮಾ ಗಾಂಧೀಜಿಯವರು ಕರ್ನಾಟಕದಲ್ಲಿ ಭೇಟಿ ನೀಡಿದ ಸ್ಥಳಗಳಲ್ಲಿ ಸ್ಮರಣಾರ್ಥ ಫಲಕಗಳನ್ನು ಅಳವಡಿಸಲಾಗುವುದು.

430. ವಾರ್ತಾ ಇಲಾಖೆಯು ಪ್ರಕಟಿಸುತ್ತಿರುವ ವಾರ್ತಾ ಜನಪದ ಮತ್ತು ಮಾರ್ಚ್ ಆಫ್ ಕರ್ನಾಟಕ ಮಾಸ ಪತ್ರಿಕೆಗಳನ್ನು ಡಿಜಿಟೈಸ್ ಮಾಡುವ ಮೂಲಕ ಇನ್ನೂ ಹೆಚ್ಚಿನ ಜನರಿಗೆ ತಲುಪಿಸಲು ಕ್ರಮವಹಿಸಲಾಗುವುದು.

431. ಗ್ರಾಮೀಣ ಪತ್ರಕರ್ತರಿಗೆ ವೃತ್ತಿ ಸಂಬಂಧಿ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ಸೌಲಭ್ಯವನ್ನು ಪ್ರಾರಂಭಿಸಲಾಗುವುದು.

432. ಸಾಮಾಜಿಕ ನ್ಯಾಯದ ಕ್ಷೇತ್ರಕ್ಕೆ ಕೊಡುಗೆ ನೀಡಿರುವ ಪತ್ರಕರ್ತರಿಗೆ "ವಡ್ಡರ್ಸೆ ರಘುರಾಮ ಶೆಟ್ಟಿ ಪ್ರಶಸ್ತಿ" ಸ್ಥಾಪಿಸಿ, ಪ್ರತಿ ವರ್ಷ ನೀಡಲಾಗುವುದು.

**ಒಳಾಡಳಿತ**

433. ರಾಷ್ಟ್ರಕವಿ ಕುವೆಂಪು ಅವರು ಬಣ್ಣಿಸಿದಂತೆ ಕರ್ನಾಟಕವು ಸರ್ವಜನಾಂಗದ ಶಾಂತಿಯ ತೋಟವಾಗಿದೆ. ನೂರಾರು ವರ್ಷಗಳಿಂದ ನಮ್ಮ ಕನ್ನಡ ನೆಲದಲ್ಲಿ ವಿವಿಧ ಧರ್ಮ, ಭಾಷೆ, ಸಂಸ್ಕೃತಿ, ಸಮುದಾಯಗಳ ಜನರು ಸೌಹಾರ್ದತೆಯಿಂದ ಬಾಳುತ್ತಿದ್ದಾರೆ. ಆದ್ದರಿಂದ ಜಾತಿ, ಧರ್ಮ, ಭಾಷೆಯ ಹೆಸರಿನಲ್ಲಿ ಗಲಭೆಯನ್ನುಂಟು ಮಾಡುವವರ ವಿರುದ್ಧ ಸರ್ಕಾರವು ಕಠಿಣ ಕ್ರಮ ಕೈಗೊಳ್ಳಲಿದೆ.

434. ಸಮಾಜದಲ್ಲಿ ಸುಳ್ಳು ಸುದ್ದಿಗಳನ್ನು ಹರಡಿಸಿ ಸಾರ್ವಜನಿಕರಲ್ಲಿ ಅಭದ್ರತೆ ಮತ್ತು ಭಯವನ್ನು ಉಂಟು ಮಾಡುವವರ ವಿರುದ್ಧ ದಿಟ್ಟ ಕ್ರಮ ಕೈಗೊಳ್ಳಲು ಐ.ಟಿ.ಬಿ.ಟಿ ಇಲಾಖೆಯ ಸಹಯೋಗದಲ್ಲಿ ಸತ್ಯ

ತಪಾಸಣಾ ತಂಡಗಳನ್ನು (Information Disorder Tackling Unit) ರಚಿಸಲಾಗುವುದು ಮತ್ತು ಒಳಾಡಳಿತ ಇಲಾಖೆಯಲ್ಲಿ ಒಂದು ವಿಶೇಷ ಕೋಶವನ್ನು ರಚಿಸಿ ಅದಕ್ಕೆ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲು ಅಧಿಕಾರ ನೀಡಲಾಗುವುದು.

435. ಡೀಪ್ ಫೇಕ್ ಮತ್ತಿತರ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಗ್ಧ ಸಾರ್ವಜನಿಕರನ್ನು ವಂಚಿಸುವ ಕೃತ್ಯ ಎಸಗುವವರ ವಿರುದ್ಧ ತನಿಖೆ ನಡೆಸಿ ಪರಿಣಾಮಕಾರಿ ಕ್ರಮ ತೆಗೆದುಕೊಳ್ಳುವ ಉದ್ದೇಶದಿಂದ ರಾಜ್ಯದಲ್ಲಿ ಸೈಬರ್ ಕ್ರೈಂ ವಿಭಾಗವನ್ನು ಬಲಪಡಿಸಲು ಒಟ್ಟು 43 ಸಿ.ಇ.ಎನ್. (Cyber, Economic and Narcotics) ಪೊಲೀಸ್ ಠಾಣೆಗಳನ್ನು ಉನ್ನತೀಕರಿಸಲಾಗುವುದು.

436. ಪೊಲೀಸ್ ಗೃಹ–2025 ಯೋಜನೆಯಡಿ ಇದುವರೆಗೆ 800 ಕೋಟಿ ರೂ.ಗಳ ವೆಚ್ಚದಲ್ಲಿ 1,128 ವಸತಿಗೃಹಗಳನ್ನು ನಿರ್ಮಾಣ ಮಾಡಿ ಹಂಚಿಕೆ ಮಾಡಲಾಗಿದ್ದು, 2,956 ವಸತಿ ಗೃಹಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಈ ಯೋಜನೆಗೆ 2024–25ನೇ ಸಾಲಿನಲ್ಲಿ 200 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು.

437. ಕಟ್ಟಡ ರಹಿತ ಠಾಣೆ ಮತ್ತು ಪೊಲೀಸ್ ಕಛೇರಿಗಳಿಗೆ 30 ಕೋಟಿ ರೂ.ಗಳ ವೆಚ್ಚದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು.

438. ವಿಧಿ ವಿಜ್ಞಾನ ಪ್ರಯೋಗಾಲಯಗಳ (Forensic Science Lab) ಮೊಬೈಲ್ ಫೋರೆನ್ಸಿಕ್, ಆಡಿಯೋ ಮತ್ತು ವಿಡಿಯೋ ವಿಭಾಗಗಳನ್ನು ಬಲಪಡಿಸಲು 10 ಕೋಟಿ ರೂ.ಗಳ ವೆಚ್ಚದಲ್ಲಿ ಅಗತ್ಯ ಉಪಕರಣಗಳನ್ನು ಮತ್ತು ತಂತ್ರಾಂಶಗಳನ್ನು ಒದಗಿಸಲಾಗುವುದು.

439. ರಾಜ್ಯದ ಎಲ್ಲಾ ಕಾರಾಗೃಹಗಳ ಸುಗಮ ಆಡಳಿತ ಮತ್ತು ಭದ್ರತೆಗಾಗಿ 5 ಕೋಟಿ ರೂ. ವೆಚ್ಚದಲ್ಲಿ ಕೃತಕ ಬುದ್ಧಿಮತ್ತೆ (AI) ತಂತ್ರಾಂಶ, ಬ್ಯಾಗೇಜ್ ಸ್ಕ್ಯಾನರ್ ಮುಂತಾದ ಆಧುನಿಕ ಉಪಕರಣಗಳನ್ನು ಖರೀದಿಸಲಾಗುವುದು.

440. ಶಿವಮೊಗ್ಗ ಜಿಲ್ಲೆಯಲ್ಲಿ 100 ಕೋಟಿ ರೂ.ಗಳ ವೆಚ್ಚದಲ್ಲಿ ಹೊಸ ಹೈ–ಸೆಕ್ಯೂರಿಟಿ ಕಾರಾಗೃಹವನ್ನು ನಿರ್ಮಿಸಲಾಗುವುದು.

441. ಅಗ್ನಿಶಾಮಕ ಇಲಾಖೆಯ ಕಾರ್ಯಕ್ಷಮತೆಯನ್ನು ಹೆಚ್ಚಿಸಲು The Karnataka Fire Force Act, 1964 ರನ್ವಯ ರಾಜ್ಯದಲ್ಲಿ ಹೊಸದಾಗಿ ನಿರ್ಮಾಣವಾಗುವ ಬಹುಮಹಡಿ ಕಟ್ಟಡಗಳ ಆಸ್ತಿ ತೆರಿಗೆಯೊಂದಿಗೆ ಶೇ.1 ರ ದರದಲ್ಲಿ Fire Cess ಅನ್ನು ವಿಧಿಸಲಾಗುವುದು.

442. ಬೆಂಗಳೂರಿನ ಪೊಲೀಸ್ ಸುಲಿವನ್ ಮೈದಾನದಲ್ಲಿ 3 ಕೋಟಿ ರೂ. ವೆಚ್ಚದಲ್ಲಿ ಆಸ್ಟ್ರೋ ಟರ್ಫ್ ಹಾಕಿ ಪ್ರಾಂಗಣವನ್ನು ನಿರ್ಮಿಸಲಾಗುವುದು.

## ಸಾರಿಗೆ

443. ಶಕ್ತಿ ಯೋಜನೆಯು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ತಿಂಗಳೊಳಗಾಗಿ ಜಾರಿಗೊಳಿಸಿದ ಮೊದಲ ಗ್ಯಾರಂಟಿ ಯೋಜನೆಯಾಗಿದೆ. ಈ ಯೋಜನೆಯಡಿ ಮಹಿಳೆಯರು, ವಿದ್ಯಾರ್ಥಿನಿಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ನೀಡಲಾಗುತ್ತಿದೆ. ಶಕ್ತಿ ಯೋಜನೆಯಡಿ ಈವರೆಗೆ 155 ಕೋಟಿಗೂ ಹೆಚ್ಚು ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದು, 3000 ಕೋಟಿ ರೂ. ಒದಗಿಸಲಾಗಿದೆ.

444. ಶಕ್ತಿ ಯೋಜನೆಯ ಕುರಿತು ನಡೆಸಿದ ಸಮೀಕ್ಷೆಯಿಂದ ಯೋಜನೆಗೆ ಸಕಾರಾತ್ಮಕ ಸ್ಪಂದನೆ ದೊರಕಿರುವುದು ಸ್ಪಷ್ಟವಾಗುತ್ತದೆ. ಈ ಯೋಜನೆಯ ಮೂಲಕ ಮಹಿಳಾ ಸಬಲೀಕರಣ ಹಾಗೂ ಸ್ವಾತಂತ್ರ್ಯಕ್ಕೆ ಹೆಚ್ಚಿನ ಒತ್ತು ನೀಡಿದ್ದೇವೆ. ಹೆಣ್ಣು ಮಕ್ಕಳ ಶಿಕ್ಷಣ, ಉತ್ತಮ ಉದ್ಯೋಗಾವಕಾಶ ಪಡೆಯಲು, ಆರ್ಥಿಕ ಚಟುವಟಿಕೆಗಳಲ್ಲಿ ಹೆಚ್ಚು ಹೆಚ್ಚಾಗಿ ಭಾಗವಹಿಸಲು ಹಾಗೂ ಪ್ರವಾಸ ಕೈಗೊಳ್ಳಲು ಮಹಿಳೆಯರು ಈ ಅವಕಾಶದ ಸದ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಈ ಯೋಜನೆಗೆ

ದೊರೆತ ಅಭೂತಪೂರ್ವ ಸ್ಪಂದನೆ ಇದರ ಯಶಸ್ವಿ ಅನುಷ್ಠಾನಕ್ಕೆ ನಿದರ್ಶನವಾಗಿದೆ.

445. ಉಡುಪಿ, ಚಿಕ್ಕಬಳ್ಳಾಪುರ, ನೆಲಮಂಗಲ, ಮಡಿಕೇರಿ, ಮಧುಗಿರಿ ಮತ್ತು ಹುಣಸೂರಿನಲ್ಲಿ ಅಂದಾಜು 36 ಕೋಟಿ ರೂ.ಗಳ ವೆಚ್ಚದಲ್ಲಿ ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥಗಳು ಹಾಗೂ ದೇವನಹಳ್ಳಿ ಮತ್ತು ತುಮಕೂರಿನಲ್ಲಿ ಒಟ್ಟು 10 ಕೋಟಿ ರೂ.ಗಳ ವೆಚ್ಚದಲ್ಲಿ ಸೀಜಿಂಗ್ ಯಾರ್ಡ್‌ಗಳನ್ನು ನಿರ್ಮಿಸಲಾಗುವುದು.

446. ಅರ್ಹತಾ ಪತ್ರ ನವೀಕರಣಕ್ಕೆ ಬರುವಂತಹ ಎಲ್ಲಾ ಸಾರಿಗೆ ವಾಹನಗಳಿಗೆ ಅರ್ಹತಾ ಪರೀಕ್ಷೆ ಕೈಗೊಳ್ಳಲು 32 ಸ್ಥಳಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ವಯಂಚಾಲಿತ ಪರೀಕ್ಷಾ ಕೇಂದ್ರಗಳನ್ನು ಅಭಿವೃದ್ಧಿಪಡಿಸಲಾಗುವುದು.

447. ಸಾರಿಗೆ ಇಲಾಖೆಯಲ್ಲಿ ನೋಂದಣಿಯಾಗಿರುವ ಎಲ್ಲಾ ವಾಹನಗಳ ದಾಖಲಾತಿಗಳ ಡಿಜಿಟಲೀಕರಣಕ್ಕಾಗಿ ಒಂದು ಯೋಜನೆಯನ್ನು ಜಾರಿಗೊಳಿಸಲಾಗುವುದು. 2024-25ನೇ ಸಾಲಿನಲ್ಲಿ ಪ್ರಾಯೋಗಿಕವಾಗಿ ಬೆಂಗಳೂರು ಕೇಂದ್ರ, ಬೆಳಗಾವಿ, ಮಂಗಳೂರು ಹಾಗೂ ಭಾಲ್ಕಿಯ ಕಛೇರಿಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗುವುದು.

## ಕಾನೂನು

448. ರಾಜ್ಯದಲ್ಲಿನ ಕಾನೂನು ನ್ಯಾಯಾಲಯಗಳು ಮತ್ತು ಶಾಸನಬದ್ಧ ನ್ಯಾಯಮಂಡಳಿಗಳ ಮುಂದೆ ಸರ್ಕಾರಿ ವ್ಯಾಜ್ಯಗಳನ್ನು ನಿರ್ವಹಿಸುವ ವಿಷಯದಲ್ಲಿ ಸಮರ್ಥ ಮತ್ತು ಜವಾಬ್ದಾರಿಯುತ ನಡವಳಿಕೆಯನ್ನು ಕಾನೂನಿನ ಮೂಲಕ ಖಚಿತಪಡಿಸಿಕೊಳ್ಳಲು ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ ಅಧಿನಿಯಮ, 2023 ನ್ನು ಜಾರಿಗೆ ತರಲಾಗಿದೆ.

449. ರೈತರು ಮತ್ತು ಆರ್ಥಿಕವಾಗಿ ದುರ್ಬಲ ವ್ಯಕ್ತಿಗಳಿಗೆ ತ್ವರಿತ ನ್ಯಾಯ ಒದಗಿಸಲು ಸಿವಿಲ್ ಪ್ರಕ್ರಿಯೆ ಸಂಹಿತೆ (ಕರ್ನಾಟಕ ತಿದ್ದುಪಡಿ) ಅಧಿನಿಯಮ, 2023 ನ್ನು ಜಾರಿಗೆ ತರಲು ಕ್ರಮವಹಿಸಲಾಗಿದೆ. ರಾಜ್ಯದ ಉಚ್ಛ ನ್ಯಾಯಾಲಯಗಳಲ್ಲಿ ಮತ್ತು ಸಿವಿಲ್ ನ್ಯಾಯಾಲಯಗಳಲ್ಲಿ ಬಾಕಿ ಪ್ರಕರಣಗಳ ಸಂಖ್ಯೆಯನ್ನು ಕಡಿಮೆಗೊಳಿಸಲು ಕರ್ನಾಟಕ ಉಚ್ಚ ನ್ಯಾಯಾಲಯ ಕಾಯ್ದೆ ಮತ್ತು ಕರ್ನಾಟಕ ಸಿವಿಲ್ ನ್ಯಾಯಾಲಯಗಳ ಕಾಯ್ದೆಗೆ ತಿದ್ದುಪಡಿ ತರಲು ಕ್ರಮವಹಿಸಲಾಗಿದೆ.

450. 2023–24ನೇ ಸಾಲಿನಲ್ಲಿ 175 ಕೋಟಿ ರೂ. ವೆಚ್ಚದಲ್ಲಿ ಈಗಾಗಲೇ ರಾಜ್ಯದ ವಿವಿಧ ನ್ಯಾಯಾಲಯ ಕಟ್ಟಡಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು,

2024–25ನೇ ಸಾಲಿನಲ್ಲಿ ಈ ಉದ್ದೇಶಕ್ಕಾಗಿ 175 ಕೋಟಿ ರೂ. ಅನುದಾನ ಒದಗಿಸಲಾಗುವುದು.

451. ರಾಜ್ಯದ ಎಲ್ಲಾ ನ್ಯಾಯಾಲಯಗಳ ಕಲಾಪಗಳ ನೇರ ಪ್ರಸಾರ ಮಾಡಲು ಮತ್ತು ನ್ಯಾಯಾಲಯಗಳ ಆಡಳಿತ ವ್ಯವಸ್ಥೆಯನ್ನು ಆಧುನೀಕರಿಸಲು 94 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಈ ಉದ್ದೇಶಕ್ಕೆ 180 ಕೋಟಿ ರೂ.ಗಳನ್ನು ಒದಗಿಸಲಾಗುವುದು.

452. ವಿರಾಜಪೇಟೆಯಲ್ಲಿ ಹೊಸ ನ್ಯಾಯಾಲಯ ಸಂಕೀರ್ಣವನ್ನು 12 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು. ಅಪೂರ್ಣವಾಗಿರುವ ಮೈಸೂರಿನ ವಕೀಲರ ಭವನವನ್ನು ಈ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

453. ನ್ಯಾಯವಾದಿಗಳ ಮೇಲಿನ ಹಿಂಸೆಯನ್ನು ತಡೆಯಲು ಮತ್ತು ನಿರ್ಭೀತರಾಗಿ ಕರ್ತವ್ಯ ನಿರ್ವಹಿಸಲು ಅನುವಾಗುವಂತೆ ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ, 2023 ಅನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

# ತೆರಿಗೆ ಪ್ರಸ್ತಾವನೆಗಳು

## ವಾಣಿಜ್ಯ ತೆರಿಗೆಗಳು

454. 2023-24ರಲ್ಲಿ ದೇಶದ ಇತರೆ ರಾಜ್ಯಗಳಿಗೆ ಹೋಲಿಸಿದರೆ ಒಟ್ಟು ಜಿ.ಎಸ್.ಟಿ ತೆರಿಗೆ ಸಂಗ್ರಹಣೆಯಲ್ಲಿ ಕರ್ನಾಟಕ ರಾಜ್ಯವು 2ನೇ ಸ್ಥಾನದಲ್ಲಿದೆ. ಜನವರಿ ತಿಂಗಳ ಅಂತ್ಯದವರೆಗು 58,180 ಕೋಟಿ ರೂ.ಗಳ SGST ತೆರಿಗೆ ಸ್ವೀಕೃತವಾಗಿದ್ದು, ಕಳೆದ ಸಾಲಿಗೆ ಹೋಲಿಸಿದರೆ ಶೇ.14 ರಷ್ಟು ಬೆಳವಣಿಗೆಯಾಗಿರುತ್ತದೆ.

455. ಪ್ರಸಕ್ತ ವರ್ಷದಲ್ಲಿ ಜಿ.ಎಸ್.ಟಿ ಮೇಲ್ಮನವಿ ನ್ಯಾಯಮಂಡಳಿಯ ಎರಡು ರಾಜ್ಯ ಪೀಠಗಳನ್ನು ರಚಿಸಲಾಗುವುದು ಮತ್ತು ಕಾರ್ಯಗತಗೊಳಿಸಲಾಗುವುದು. ಇದು ತೆರಿಗೆ ವಿವಾದಗಳನ್ನು ಸ್ಥಳೀಯವಾಗಿ ಬಗೆಹರಿಸಲು ಸಹಾಯವಾಗುತ್ತದೆ.

456. ಇಲಾಖೆಯು, ಗ್ರಾಹಕ ಸಂವೇದಿ ಜಿ.ಎಸ್.ಟಿ ಡೇಟಾಬೇಸ್ ಮ್ಯಾನೇಜ್‌ಮೆಂಟ್ ಮತ್ತು ಕೃತಕ ಬುದ್ಧಿಮತ್ತೆ ಚಾಲಿತ ವಿಶ್ಲೇಷಣಾತ್ಮಕ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುತ್ತಿದೆ. ಮಾಹಿತಿಯ ನಿಖರತೆ ಮತ್ತು ಮುನ್ಸೂಚಕ ವಿಶ್ಲೇಷಣೆಯು ರಾಜಸ್ವ ಕ್ರೋಢೀಕರಣಕ್ಕೆ ಸಹಕಾರಿಯಾಗಲಿದೆ.

457. ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳಿಗೆ ತೆರಿಗೆ ಕಾನೂನು ಮತ್ತು ತಾಂತ್ರಿಕ ಪರಿಣಿತಿಯನ್ನು ಹೊಂದಲು ಹಾಗೂ ಅವರಲ್ಲಿ ವಿಶ್ಲೇಷಣಾತ್ಮಕ ದೃಷ್ಟಿಕೋನವನ್ನು ಅಭಿವೃದ್ಧಿಪಡಿಸಲು ಇ–ತರಬೇತಿ ನೀಡಲಾಗುವುದು. ಇದು ತೆರಿಗೆ ರಾಜಸ್ವ ಸೃಜನೆಗೆ ಹೊಸ ಮಾರ್ಗಗಳನ್ನು ಅನ್ವೇಷಿಸಲು ಮತ್ತು ಮೋಸದ ನೋಂದಣಿಗಳನ್ನು ಪತ್ತೆಹಚ್ಚಲು ಸಹಕಾರಿಯಾಗಲಿದೆ.

458. 2024–25ನೇ ಸಾಲಿಗೆ ವಾಣಿಜ್ಯ ತೆರಿಗೆ ಇಲಾಖೆಯ ರಾಜಸ್ವ ಸಂಗ್ರಹಣೆಯ ಗುರಿಯನ್ನು 1,10,000 ಕೋಟಿ ರೂ.ಗಳಿಗೆ ನಿಗದಿಪಡಿಸಲಾಗಿದೆ.

## ನೋಂದಣಿ ಮತ್ತು ಮುದ್ರಾಂಕ

459. ಸ್ಥಿರಾಸ್ತಿಗಳ ಮಾರ್ಗಸೂಚಿ ದರಗಳನ್ನು ನಮ್ಮ ಸರ್ಕಾರವು 2023–24ರಲ್ಲಿ ಪರಿಷ್ಕರಣೆ ಮಾಡಿದ್ದು, ಪ್ರಸಕ್ತ ಆರ್ಥಿಕ ವರ್ಷದ ಜನವರಿ ತಿಂಗಳ ಅಂತ್ಯದವರೆಗೆ 15,692 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆಯಾಗಿದ್ದು, ಶೇ.10ರಷ್ಟು ಬೆಳವಣಿಗೆ ಹೊಂದಿದೆ.

460. 2024–25ನೇ ಸಾಲಿಗೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 26,000 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

## ಅಬಕಾರಿ

461. ಮದ್ಯದ ಘೋಷಿತ ಸ್ಲಾಬ್‌ಗಳನ್ನು ತರ್ಕಬದ್ಧಗೊಳಿಸುವ ಮೂಲಕ ನೆರೆ ರಾಜ್ಯಗಳ ಮದ್ಯದ ಬೆಲೆಗಳಿಗೆ ಅನುಗುಣವಾಗಿ IML ಹಾಗೂ ಬಿಯರ್‌ನ ಸ್ಲಾಬ್‌ಗಳನ್ನು ಪರಿಷ್ಕರಿಸಲಾಗುವುದು.

462. ಅಬಕಾರಿ ಇಲಾಖೆಯ ಎಲ್ಲಾ ಸೇವೆಗಳನ್ನು ಡಿಜಿಟಲೀಕರಣಗೊಳಿಸಲಾಗುವುದು. ಇಲಾಖೆಯು ಒದಗಿಸುವ ವಿವಿಧ ಸೇವೆಗಳಿಗೆ ಸಮಯದ ಮಿತಿಯನ್ನು ನಿಗದಿಪಡಿಸಲಾಗುವುದು ಹಾಗೂ ಸ್ವಯಂಚಾಲಿತ ಅನುಮೋದನೆಗೂ ಅವಕಾಶ ಕಲ್ಪಿಸಲಾಗುವುದು.

463. 2023–24ನೇ ಸಾಲಿನ ಜನವರಿ ತಿಂಗಳ ಅಂತ್ಯದವರೆಗೆ, ಅಬಕಾರಿ ತೆರಿಗೆಯಿಂದ 28,181 ಕೋಟಿ ರೂ.ಗಳು ಸ್ವೀಕೃತವಾಗಿರುತ್ತದೆ. 2024–25ನೇ ಸಾಲಿಗೆ 38,525 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

## ಸಾರಿಗೆ

464. ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆಯನ್ನು ತಿದ್ದುಪಡಿಗೊಳಿಸಿ ವಿವಿಧ ವಾಹನದ ವರ್ಗಗಳಿಗೆ ವಿಧಿಸುವ ತೆರಿಗೆಯನ್ನು ನಮ್ಮ ಸರ್ಕಾರವು ಪರಿಷ್ಕರಣೆ ಮಾಡಿತು. ಪ್ರಸಕ್ತ ಆರ್ಥಿಕ

ವರ್ಷದ ಜನವರಿ ತಿಂಗಳವರೆಗೆ 9,333 ಕೋಟಿ ರೂ.ಗಳು ಸ್ವೀಕೃತವಾಗಿರುತ್ತದೆ ಹಾಗು ಕಳೆದ ಸಾಲಿನ ಇದೇ ಅವಧಿಗೆ ಹೋಲಿಸಿದರೆ ಶೇ.19ರಷ್ಟು ಬೆಳವಣಿಗೆಯಾಗಿರುತ್ತದೆ.

465. 2024–25ನೇ ಸಾಲಿಗೆ ಸಾರಿಗೆ ಇಲಾಖೆಗೆ ಒಟ್ಟು 13,000 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

## ಗಣಿ ಮತ್ತು ಭೂವಿಜ್ಞಾನ

466. 2023–24 ನೇ ಆರ್ಥಿಕ ವರ್ಷದಲ್ಲಿ ಜನವರಿ ತಿಂಗಳ ಅಂತ್ಯದವರೆಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ 5,658 ಕೋಟಿ ರೂ.ಗಳು ಸ್ವೀಕೃತವಾಗಿರುತ್ತದೆ. ಕಳೆದ ಸಾಲಿಗೆ ಹೋಲಿಸಿದರೆ, ಗಣಿಗಾರಿಕೆಯಿಂದ ಸ್ವೀಕೃತವಾದ ರಾಜಸ್ವದಲ್ಲಿ ಶೇ.22ರಷ್ಟು ಏರಿಕೆಯಾಗಿದೆ.

467. 2024–25ನೇ ಸಾಲಿಗೆ, ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ 9,000 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

## ಪರಿಷ್ಕೃತ ಅಂದಾಜು 2023–24

468. 2023–24ರ ಪರಿಷ್ಕೃತ ಅಂದಾಜಿನಲ್ಲಿ ರಾಜ್ಯದ ಒಟ್ಟು ಜಮೆಗಳು 3,12,708 ಕೋಟಿ ರೂ.ಗಳಾಗಿದೆ. ರಾಜ್ಯದ ರಾಜಸ್ವ ಸ್ವೀಕೃತಿಯು 2,26,780 ಕೋಟಿ ರೂ.ಗಳಾಗಿದ್ದು, ಇದರಲ್ಲಿ ರಾಜ್ಯದ ಸ್ವಂತ ತೆರಿಗೆ

ರಾಜಸ್ವವು 1,60,303 ಕೋಟಿ ರೂ.ಗಳು, ತೆರಿಗೆಯೇತರ ಸ್ವೀಕೃತಿ 12,000 ಕೋಟಿ ರೂ.ಗಳು ಹಾಗು ಕೇಂದ್ರ ಸರ್ಕಾರದಿಂದ 54,477 ಕೋಟಿ ರೂ.ಗಳ ಸ್ವೀಕೃತಿಯನ್ನು ಒಳಗೊಂಡಿದೆ.

469. 2023–24ರ ಪರಿಷ್ಕೃತ ಅಂದಾಜಿನಲ್ಲಿ ಒಟ್ಟು ವೆಚ್ಚ 3,17,836 ಕೋಟಿ ರೂ.ಗಳೆಂದು ಅಂದಾಜಿಸಲಾಗಿದೆ. ಇದರಲ್ಲಿ ರಾಜಸ್ವ ವೆಚ್ಚ 2,40,731 ಕೋಟಿ ರೂ.ಗಳು ಮತ್ತು ಬಂಡವಾಳ ವೆಚ್ಚ ಹಾಗೂ ಸಾಲ ಮರುಪಾವತಿ ಸೇರಿ 77,105 ಕೋಟಿ ರೂ.ಗಳನ್ನು ಅಂದಾಜು ಮಾಡಲಾಗಿದೆ.

## ಆಯವ್ಯಯ ಅಂದಾಜು 2024–25

470. 2024–25ನೇ ಸಾಲಿಗೆ 2,63,178 ಕೋಟಿ ರೂ.ಗಳ ರಾಜಸ್ವ ಜಮೆಯನ್ನು ಅಂದಾಜು ಮಾಡಲಾಗಿದೆ. ಇದರಲ್ಲಿ ರಾಜ್ಯದ ಸ್ವಂತ ತೆರಿಗೆಯಿಂದ 1,89,893 ಕೋಟಿ ರೂ.ಗಳ ಸಂಗ್ರಹಣೆಯನ್ನು ಅಂದಾಜು ಮಾಡಲಾಗಿದೆ. ತೆರಿಗೆಯೇತರ ರಾಜಸ್ವಗಳಿಂದ 13,500 ಕೋಟಿ ರೂ.ಗಳು ಸಂಗ್ರಹಿಸಬಹುದೆಂದು ನಿರೀಕ್ಷಿಸಲಾಗಿದೆ. ಕೇಂದ್ರ ಸರ್ಕಾರದಿಂದ 44,485 ಕೋಟಿ ರೂ.ಗಳ ತೆರಿಗೆ ಪಾಲು ಹಾಗೂ 15,300 ಕೋಟಿ ರೂ.ಗಳ ಸಹಾಯಾನುದಾನ ಸ್ವೀಕೃತಿಯಾಗಲಿದೆ ಎಂದು ಅಂದಾಜಿಸಲಾಗಿದೆ. ಈ ರಾಜಸ್ವ ಜಮೆಗಳಿಗೆ ಪೂರಕವಾಗಿ 1,05,246 ಕೋಟಿ ರೂ.ಗಳ ಸಾಲ,

38 ಕೋಟಿ ರೂ.ಗಳ ಋಣೇತರ ಸ್ವೀಕೃತಿ ಮತ್ತು 213 ಕೋಟಿ ರೂ.ಗಳ ಸಾಲ ವಸೂಲು ಮೊತ್ತವನ್ನು ಅಂದಾಜಿಸಲಾಗಿದೆ. 2024–25ರ ಆಯವ್ಯಯದಲ್ಲಿ ಒಟ್ಟು 3,68,674 ಕೋಟಿ ರೂ.ಗಳ ಸ್ವೀಕೃತಿಯನ್ನು ಅಂದಾಜು ಮಾಡಲಾಗಿದೆ.

471. 2024–25ನೇ ಸಾಲಿನಲ್ಲಿ ಒಟ್ಟು 2,90,531 ಕೋಟಿ ರೂ.ಗಳ ರಾಜಸ್ವ ವೆಚ್ಚ, 55,877 ಕೋಟಿ ರೂ.ಗಳ ಬಂಡವಾಳ ವೆಚ್ಚ ಹಾಗೂ ಸಾಲದ ಮರುಪಾವತಿ 24,974 ಕೋಟಿ ರೂ.ಗಳ ವೆಚ್ಚವನ್ನು ಒಳಗೊಂಡು, ಒಟ್ಟು ವೆಚ್ಚವು 3,71,383 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ.

472. 2024–25ರಲ್ಲಿ ರಾಜಸ್ವ ಕೊರತೆ 27,354 ಕೋಟಿ ರೂ.ಗಳೆಂದು ಅಂದಾಜು ಮಾಡಲಾಗಿದೆ. ವಿತ್ತೀಯ ಕೊರತೆ 82,981 ಕೋಟಿ ರೂ.ಗಳೆಂದು ಅಂದಾಜು ಮಾಡಲಾಗಿದ್ದು, ರಾಜ್ಯದ ಜಿ.ಎಸ್.ಡಿ.ಪಿಯ ಶೇ.2.95ರಷ್ಟಿದೆ. ರಾಜ್ಯದ ಒಟ್ಟು ಹೊಣೆಗಾರಿಕೆಯು 2024–25ರ ಅಂತ್ಯಕ್ಕೆ 6,65,095 ಕೋಟಿ ರೂ.ಗಳು ಎಂದು ಅಂದಾಜಿಸಲಾಗಿದ್ದು, ಜಿ.ಎಸ್.ಡಿ.ಪಿಯ ಶೇ.23.68ರಷ್ಟು ತಲುಪಲಿದೆ ಎಂದು ಅಂದಾಜಿಸಲಾಗಿದೆ. 2024–25ರಲ್ಲಿ ರಾಜ್ಯದ ವಿತ್ತೀಯ ಕೊರತೆ ಹಾಗು ಒಟ್ಟು ಹೊಣೆಗಾರಿಕೆಯನ್ನು ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮ, 2002ರಲ್ಲಿ ನಿಗದಿಪಡಿಸಿರುವ

ಮಿತಿಯೊಳಗೆ ಅಂದಾಜು ಮಾಡುವ ಮೂಲಕ ವಿತ್ತೀಯ ಶಿಸ್ತನ್ನು ಪಾಲನೆ ಮಾಡಲಾಗಿರುತ್ತದೆ.

## ಸನ್ಮಾನ್ಯ ಸಭಾಧ್ಯಕ್ಷರೇ,

473. ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಡಲಿದೆ ಎಂದು ನುಡಿದ ನಮ್ಮ ವಿರೋಧಿಗಳ ಭವಿಷ್ಯವಾಣಿಗಳನ್ನು ನಾವು ಸುಳ್ಳು ಮಾಡಿದ್ದೇವೆ ಮತ್ತು 5 ಖಾತರಿ ಯೋಜನೆಗಳಿಗೆ ಮಾತ್ರವಲ್ಲದೇ ಹಲವಾರು ಹೊಸ ಕಲ್ಯಾಣ ಯೋಜನೆಗಳಿಗೆ ಮತ್ತು ಮೂಲಸೌಕರ್ಯ ಕಾರ್ಯಕ್ರಮಗಳಿಗೆ ಅಗತ್ಯವಿರುವ ಆಯವ್ಯಯ ಹಂಚಿಕೆಯನ್ನು ಒದಗಿಸಿದ್ದೇವೆ.

> **ಪ್ರತಿಯೊಬ್ಬರ ಕಣ್ಣೀರನ್ನು ಒರೆಸುವುದು ಮಹಾತ್ಮಾ ಗಾಂಧೀಜಿಯವರ ಆಶಯವಾಗಿದೆ. ಇದು ನಮ್ಮ ಇತಿಮಿತಿಯನ್ನು ಮೀರಿದ್ದಾಗಿರಬಹುದು. ಆದರೆ, ಕಣ್ಣೀರು ಮತ್ತು ಬವಣೆಗಳು ಇರುವವರೆಗೆ ನಮ್ಮ ಕಾರ್ಯ ಪೂರ್ಣಗೊಳ್ಳುವುದಿಲ್ಲ.**

**– ಜವಾಹರ್ ಲಾಲ್ ನೆಹರು**

474. ನಮ್ಮ ದೇಶದ ಮೊದಲ ಪ್ರಧಾನಿ ನೆಹರೂರವರ ಆಶಯದಂತೆ ಹಣದುಬ್ಬರ, ಹೆಚ್ಚುತ್ತಿರುವ ಅಸಮಾನತೆ ಹಾಗೂ ನಿರುದ್ಯೋಗದಿಂದ ಜರ್ಜರಿತವಾಗಿರುವ ಜನಸಾಮಾನ್ಯರು, ಮಹಿಳೆಯರು, ರೈತರು,

ಯುವಜನತೆ ಮತ್ತು ಸಮಾಜದ ಕಟ್ಟಕಡೆಯ ವರ್ಗಗಳಿಗೆ ಅಗತ್ಯವಿರುವ ಬೆಂಬಲವನ್ನು ಒದಗಿಸಲು ಹಾಗೂ ಸಮಗ್ರ ಮತ್ತು ಸಮೃದ್ಧ ಕರ್ನಾಟಕವನ್ನು ಕಲ್ಪಿಸುವ ದೃಷ್ಟಿಕೋನದೊಂದಿಗೆ ಕಲ್ಯಾಣ–ಆಧಾರಿತ ಬಜೆಟ್ ಅನ್ನು ನಾನು ಮಂಡಿಸಿದ್ದೇನೆ.

475. ಮುಖ್ಯವಾಗಿ, ನಾನು ವಿತ್ತೀಯ ಕೊರತೆಯನ್ನು ಜಿ.ಎಸ್.ಡಿ.ಪಿಯ ಶೇ.3 ರೊಳಗೆ ಮತ್ತು ಒಟ್ಟು ಹೊಣೆಗಾರಿಕೆಗಳನ್ನು ಜಿ.ಎಸ್.ಡಿ.ಪಿಯ ಶೇ.25 ರೊಳಗೆ ಕಾಯ್ದುಕೊಳ್ಳುವ ಮೂಲಕ ವಿತ್ತೀಯ ಶಿಸ್ತನ್ನು ಪಾಲಿಸಿರುತ್ತೇನೆ. ಮಧ್ಯಮಾವಧಿ ವಿತ್ತೀಯ ಯೋಜನೆಯಲ್ಲಿ ಅಂದಾಜಿಸಿರುವಂತೆ ಇನ್ನೆರೆಡು ವರ್ಷಗಳ ನಂತರದಲ್ಲಿ ರಾಜಸ್ವ ಹೆಚ್ಚುವರಿಯನ್ನು ಸಾಧಿಸುವ ವಿಶ್ವಾಸ ನನಗಿದೆ.

476. ಆಯವ್ಯಯದಲ್ಲಿ ಘೋಷಿಸಿರುವ ಸರ್ಕಾರದ ಎಲ್ಲಾ ಕಾರ್ಯಕ್ರಮಗಳನ್ನು ಜಾರಿಗೆ ತರಲು ಸದನದ ಎಲ್ಲಾ ಸದಸ್ಯರ ಸಂಪೂರ್ಣ ಸಹಕಾರವನ್ನು ಕೋರುತ್ತೇನೆ. ನಿಮ್ಮೆಲ್ಲರ ಸಹಕಾರದಿಂದ ರಾಜ್ಯವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನೆಡೆಸುವ ವಿಶ್ವಾಸ ನನಗಿದೆ.

477. ನಾನು ಈಗ ಆಯವ್ಯಯವನ್ನು ಗೌರವಾನ್ವಿತ ಸದನದ ಪರಿಗಣನೆಗಾಗಿ ಮಂಡಿಸುತ್ತಿದ್ದೇನೆ ಹಾಗೂ ಆಯವ್ಯಯ ಅಂದಾಜಿನನ್ವಯ 2024–25ನೇ ಸಾಲಿನ 31ನೇ ಮಾರ್ಚ್ 2025ರ ವರೆಗಿನ ವೆಚ್ಚವನ್ನು

ನಿರ್ವಹಿಸಲು ಪೂರ್ಣ ಆಯವ್ಯಯವನ್ನು ಅಂಗೀಕರಿಸಲು ಕೋರುತ್ತಿದ್ದೇನೆ.

**ಜೈ ಹಿಂದ್**

**ಜೈ ಕರ್ನಾಟಕ**

## ಆಯವ್ಯಯ ವಿಹಂಗಮ ನೋಟ


₹ ಕೋಟಿಗಳಲ್ಲಿ

| | ಆಯವ್ಯಯ ಅಂದಾಜು 2023-24 | ಪರಿಷ್ಕೃತ ಅಂದಾಜು 2023-24 | ಆಯವ್ಯಯ ಅಂದಾಜು 2024-25 |
|---|---|---|---|
| **ಪ್ರಾರಂಭ ಶಿಲ್ಕು** | **-4197.98** | **2788.22** | **-3006.55** |
| **ಎ. ರಾಜಸ್ವ ಲೆಕ್ಕ** | | | |
| **1. ಜಮೆ** | | | |
| ರಾಜ್ಯ ತೆರಿಗೆ | 175652.60 | 161494.01 | 189893.03 |
| ಕೇಂದ್ರ ತೆರಿಗೆಯಲ್ಲಿ ಪಾಲು | 37252.21 | 40280.89 | 44485.49 |
| ಕೇಂದ್ರ ಸರ್ಕಾರದ ಅನುದಾನಗಳು | 13005.00 | 13005.00 | 15299.70 |
| ತೆರಿಗೆಯೇತರ ರಾಜಸ್ವ | 12500.00 | 12000.00 | 13499.60 |
| **ಒಟ್ಟು–ಎ (1)** | **238409.81** | **226779.90** | **263177.82** |
| **11. ವೆಚ್ಚ** | | | |
| ಸಾಮಾಜಿಕ ಸೇವೆ | 96730.58 | 94026.73 | 116639.83 |
| ಆರ್ಥಿಕ ಸೇವೆ | 67014.87 | 63319.77 | 71199.07 |
| ಸಾಮಾನ್ಯ ಸೇವೆ | 80371.30 | 76568.19 | 95858.92 |
| ಸಹಾಯಾನುದಾನ ಮತ್ತು ಅಂಶದಾನ | 6815.75 | 6816.36 | 6833.54 |
| **ಒಟ್ಟು–ಎ (11)** | **250932.50** | **240731.04** | **290531.35** |
| **ಎ. ರಾಜಸ್ವ ಲೆಕ್ಕ ಹೆಚ್ಚುವರಿ** | **-12522.69** | **-13951.15** | **-27353.54** |


## ಆಯವ್ಯಯ ವಿಹಂಗಮ ನೋಟ


₹ ಕೋಟಿಗಳಲ್ಲಿ


| | ಆಯವ್ಯಯ ಅಂದಾಜು 2023-24 | ಪರಿಷ್ಕೃತ ಅಂದಾಜು 2023-24 | ಆಯವ್ಯಯ ಅಂದಾಜು 2024-25 |
|---|---|---|---|
| **ಬಿ. ಬಂಡವಾಳ ಲೆಕ್ಕ** | | | |
| **1. ಜಮೆ:** | | | |
| ಕೇಂದ್ರ ಸರ್ಕಾರದಿಂದ ಸಾಲ | 6254.00 | 6254.00 | 6855.00 |
| ಬಹಿರಂಗ ಮಾರುಕಟ್ಟೆ ಸಾಲ | 78363.00 | 77063.00 | 96840.00 |
| ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಗಳಿಂದ ಸಾಲ | 1201.00 | 2501.00 | 1551.00 |
| ವಿವಿಧ ಬಂಡವಾಳ ಜಮೆಗಳು | 22.50 | 22.50 | 37.50 |
| ಸಾಲಗಳು ಮತ್ತು ಮುಂಗಡಗಳ ವಸೂಲಿ | 227.50 | 87.50 | 212.55 |
| **ಒಟ್ಟು–ಬಿ (1)** | **86068.00** | **85928.00** | **105496.05** |
| **11. ಬಟವಾಡೆ:** | | | |
| ಬಂಡವಾಳ ವೆಚ್ಚ | 50988.84 | 51231.29 | 52902.96 |
| ಕೇಂದ್ರ ಸರ್ಕಾರದ ಸಾಲಗಳ ಮರುಸಂದಾಯ | 1666.05 | 1666.05 | 1639.33 |
| ಮಾರುಕಟ್ಟೆ ಸಾಲಗಳ ಮರುಪಾವತಿ | 17997.33 | 17997.33 | 20500.03 |
| ಎಲ್‌ಐಸಿ, ಜಿಐಸಿ. ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಸಾಲಗಳ ಮರುಸಂದಾಯ | 2777.22 | 2777.22 | 2834.94 |
| ಸಾಲಗಳ ಮತ್ತು ಮುಂಗಡಗಳ ಬಟವಾಡೆ | 3384.69 | 3432.66 | 2974.19 |
| **ಒಟ್ಟು–ಬಿ (11)** | **76814.12** | **77104.54** | **80851.44** |
| **ಸಂಚಿತ ನಿಧಿ** | **327746.62** | **317835.58** | **371382.80** |
| **ಡಿ. ಮುಕ್ತಾಯ ಶಿಲ್ಕು** | **-8133.87** | **-3006.55** | **3849.86** |


ಜಮೆ-ರೂಪಾಯಿ ಎಷ್ಟು ಭಾಗ ಯಾವುದರಿಂದ (2024-25 ಆಯವ್ಯಯ ಅಂದಾಜು) (ಪೈಸೆ)
ರಾಜ್ಯ ತೆರಿಗೆ ಆದಾಯದಿಂದ, 52
ರಾಜ್ಯ ತೆರಿಗೆಯೇತರ ರಾಜಸ್ವದಿಂದ, 4
ಕೇಂದ್ರ ಸರ್ಕಾರದ ಸಹಾಯಾನುದಾನ, 4
ಕೇಂದ್ರ ತೆರಿಗೆ ಪಾಲಿನಿಂದ, 12
ಸಾಲದಿಂದ, 28

ಚಿತ್ರ 2024-25 ಆಯವ್ಯಯ ಅಂದಾಜು-ರೂಪಾಯಿ ಯಾವ ಭಾಗ ಎಷ್ಟೆಷ್ಟು (ಪೈಸೆಗಳಲ್ಲಿ)




ರಾಜ್ಯದ ಸ್ವಂತ ತೆರಿಗೆಗಳ ವಿವರಗಳು 2024-25 ಆಯವ್ಯಯ ಅಂದಾಜುಗಳು
(ರೂ.ಕೋಟಿಗಳಲ್ಲಿ)
ಇತರೆ , 2368, 1%
ಮೋಟಾರು ವಾಹನ ತೆರಿಗೆ, 13000, 7%
ನೋಂದಣಿ ಮತ್ತು ಮುದ್ರಾಂಕ, 26000, 14%
ರಾಜ್ಯ ಅಬಕಾರಿ , 38525, 20%
ವಾಣಿಜ್ಯ ತೆರಿಗೆಗಳು , 110000, 58%


ಒಟ್ಟಾರೆ ಹಂಚಿಕೆ(ಒಟ್ಟು ಅಭಿಯಾಚನೆ) 2024–25 (ರೂ.ಕೋಟಿಗಳಲ್ಲಿ) (ಒಟ್ಟಾರೆ ಹಂಚಿಕೆಯ ಶೇಕಡವಾರು)
ಶಿಕ್ಷಣ, 44422, 12%
ಮಹಿಳಾ ಮತ್ತು ಮಕ್ಕಳ ಕಲ್ಯಾಣ, 34406, 9%
ಇಂಧನ, 23159, 6%
ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್, 21160, 5%
ಒಳಾಡಳಿತ ಮತ್ತು ಸಾರಿಗೆ, 19777, 5%
ನೀರಾವರಿ, 19179, 5%
ನಗರಾಭಿವೃದ್ಧಿ & ವಸತಿ, 18155, 5%
ಕಂದಾಯ, 16170, 4%
ಆರೋಗ್ಯ & ಕುಟುಂಬ ಕಲ್ಯಾಣ, 15145, 4%
ಸಮಾಜ ಕಲ್ಯಾಣ, 13334, 3%
ಲೋಕೋಪಯೋಗಿ, 10424, 3%
ಆಹಾರ ಮತ್ತು ನಾಗರೀಕ ಸರಬರಾಜು, 9963, 3%
ಕೃಷಿ ಮತ್ತು ತೋಟಗಾರಿಕೆ, 6688, 2%
ಪಶುಸಂಗೋಪನೆ ಮತ್ತು ಮೀನುಗಾರಿಕೆ, 3307, 1%
ಇತರೆ, 124593, 33%